# ಪೂರ್ವಕಾಲದ ಇತಿಹಾಸ

## (ಪೂರ್ವಕಾಲದ ವೃತ್ತಾಂತ)

### ಪ್ರಥಮ ಭಾಗ

### ಮುನ್ನುಡಿ

"ಸಮುವೇಲ" ಹಾಗೂ "ಅರಸುಗಳು" ಎಂಬ ಹಿಂದಿನ ಗ್ರಂಥಗಳಂತೆ ಈ "ಪೂರ್ವಕಾಲದ ಇತಿಹಾಸ"ವೂ ಚಾರಿತ್ರಿಕ ವಿವರಗಳಿಂದ ಕೂಡಿದೆ; ಅದು ಮಾತ್ರವಲ್ಲ, ಅದೇ ಚಾರಿತ್ರಿಕ ಘಟನೆಗಳನ್ನು ಮತ್ತೆ ವರ್ಣಿಸುತ್ತದೆ. ಆದರೆ ದೃಷ್ಟಿಕೋನಗಳು ಬೇರೆ; ಗುರಿ ಧ್ಯೇಯಗಳೂ ಬೇರೆ.

1. ಇಸ್ರಯೇಲ್ ಸಾಮ್ರಾಜ್ಯ ಎರಡು ರಾಜ್ಯಗಳಾಗಿ ಸೀಳಿಹೋಗಿ ನಾನಾ ಆಪತ್ತು-ವಿಪತ್ತುಗಳಿಗೆ ಒಳಗಾಗಬೇಕಾಯಿತಾದರೂ ಸರ್ವೇಶ್ವರ ಆ ರಾಷ್ಟ್ರಕ್ಕೆ ಮಾಡಿದ ವಾಗ್ದಾನಗಳನ್ನು ತಪ್ಪದೆ ನೆರವೇರಿಸುತ್ತಾ ಬರುತ್ತಾರೆಂದು ಓದುಗರಿಗೆ ಮನಮುಟ್ಟಿಸುವುದು; ಈ ಭರವಸೆಗೆ ತಳಹದಿ ಎಂದರೆ ಅರಸ ದಾವೀದನ ಹಾಗು ಸೊಲೊಮೋನನ ಸಾಧನೆಗಳು; ಯೆಹೋಷಾಫಾಟ, ಹಿಜ್ಕೀಯ ಹಾಗೂ ಯೋಷಿಯ ಇವರುಗಳು ಮಾಡಿದ ಸುಧಾರಣೆಗಳು.

2. ಜೆರುಸಲೇಮಿನ ಮಹಾದೇವಾಲಯವನ್ನು ಕಟ್ಟಿಸಿದವನು ಅರಸ ಸೊಲೊಮೋನನಾದರೂ ಅಲ್ಲಿನ ದೇವಾರಾಧನೆಯ ಕ್ರಮ, ಯಾಜಕರ ಹಾಗೂ ಲೇವಿಯರ ವ್ಯವಸ್ಥಾಪನೆ ಇತ್ಯಾದಿಗಳಿಗೆ ದಾವೀದರಸನೇ ಮೂಲಪುರುಷನೆಂದು ಒತ್ತಿ ಹೇಳುವುದು ಈ ಗ್ರಂಥಕರ್ತನ ಇನ್ನೊಂದು ಉದ್ದೇಶ.

### ಪರಿವಿಡಿ

| | | | | |
|---|---|---|---|---|
| ವಂಶಾವಳಿಗಳು ಹಾಗೂ ಪಟ್ಟಿಗಳು | – | 1:1 | – | 9:44 |
| ಸೌಲನ ಮರಣ | – | 10:1 | – | 10:14 |
| ದಾವೀದನ ಆಳ್ವಿಕೆ | – | 11:1 | – | 29:30 |
| ಅ) ಅಡ್ಡಿ-ಆತಂಕಗಳು ಹಾಗೂ ಸಾಧನೆಗಳು | – | 11:1 | – | 22:1 |
| ಅ) ದೇವಾಲಯ ಕಟ್ಟಲು ಸಿದ್ಧತೆ | – | 22:2 | – | 29:30 |

### ಆದಾಮನಿಂದ ಅಬ್ರಹಾಮನವರೆಗೆ

(ಆದಿ. 5.1-32; 10.1-32; 11.10-26)

**1** ಆದಾಮನ ಮಗ ಶೇತ್, ಶೇತನ ಮಗ ಎನೋಷ್, ಎನೋಷನ ಮಗ ಕೇನಾನ್, 2ಕೇನಾನನ ಮಗ
ಮಹಲಲೀಲ್, ಮಹಲಲೀಲನ ಮಗ ಯೆರೆದ್, 3ಯೆರೆದನ ಮಗ ಹನೋಕ್, ಹನೋಕನ ಮಗ
ಮೆತೂಷೆಲಹ, ಮೆತೂಷೆಲಹನ ಮಗ ಲೆಮೆಕ್, 4ಲೆಮೆಕನ ಮಗ ನೋಹ, ನೋಹನಿಗೆ ಶೇಮ್, ಹಾಮ್,
ಯೆಫೆತ್ ಎಂಬ ಮೂರು ಜನ ಮಕ್ಕಳು ಇದ್ದರು.
5 ಗೋಮೆರ್, ಮಾಗೋಗ್, ಮಾದಯ್, ಯಾವಾನ್, ತೂಬಲ್, ಮೆಷೆಕ್ ಮತ್ತು ತೀರಾಸ್
ಎಂಬವರು ಯೆಫೆತನ ಮಕ್ಕಳು. ಇವರ ಹೆಸರುಗಳಿರುವ ಜನಾಂಗಗಳಿಗೆ ಇವರೇ ಮೂಲ ಪುರುಷರು.

6ಅಷ್ಕೆನೆಜ್, ರೀಫತ್, ತೋಗರ್ಮ – ಇವರು ಗೋಮೆರನ ಮಕ್ಕಳು. 7ಎಲೀಷ, ಸ್ಪೇನ್, ಸೈಪ್ರೆಸ್, ದೋದಾನೀಮ್ ಎಂಬ ಸ್ಥಳಗಳವರು ಯಾವಾನನ ಮಕ್ಕಳು.

8 ಕೂಷ್, ಈಜಿಪ್ಟ್ (ಮಿಚ್ರಯಿಮ್), ಲಿಬ್ಯ (ಪೂಟ್), ಕಾನಾನ್‌ಗಳಲ್ಲಿರುವವರು ಹಾಮನ ವಂಶಜರು. ಇವೇ ಈ ಜನಾಂಗಗಳ ಮೂಲಪಿತೃಗಳ ಹೆಸರುಗಳು. 9ಸೆಬ, ಹವೀಲ, ಸಬ್ತ, ರಮ್ಮ ಸಬ್ತೆಕಾಗಳ ಜನರು ಕೂಷನ ಸಂತತಿಯವರು. ಶೆಬ ಮತ್ತು ದೆದಾನ್‌ನವರು ರಮ್ಮ ಸಂತಾನದವರು. (10ಕೂಷನ ಮಗ ನಿಮ್ರೋದ; ಇವನು ಪರಾಕ್ರಮದಿಂದ ಮೊದಲನೆಯ ಭೂರಾಜನಾದನು.) 11ಈಜಿಪ್ಟಿನ ಜನಾಂಗದಿಂದ ಲೂದ್ಯರೂ, ಅನಾಮ್ಯರೂ ಲೆಹಾಬ್ಯರೂ ನಫ್ತುಹ್ಯರೂ 12ಪತ್ರುಸ್ಯರೂ ಕಸ್ಲುಹ್ಯರೂ ಕಫ್ತೋರ್ಯರೂ ಜನಿಸಿದರು. (ಫಿಲಿಷ್ಟಿಯರು ಕಸ್ಲುಹ್ಯರಿಂದ ಬಂದವರು.) 13ಕಾನಾನ್ ವಂಶದಲ್ಲಿ ಮೊದಲು ಹುಟ್ಟಿದವನು ಸೀದೋನ್; ಹೇತ್ ಎರಡನೆಯವನು. ಈ ಹೆಸರಿನ ಜನಾಂಗದವರಿಗೆ ಇವರೇ ಮೂಲ ಪುರುಷರು. 14ಯೆಬೂಸಿಯ, ಅಮೋರಿಯ, ಗಿರ್ಗಾಷಿಯ, 15ಹಿವ್ವಿಯ, ಅರ್ಕಿಯ, ಸೀನಿಯ, 16ಅರ್ವಾದಿಯ, ಚೆಮಾರಿಯ ಮತ್ತು ಹಮಾತಿಯ ಜನರ ಮೂಲಪಿತೃ ಕಾನಾನನು.

17 ಶೇಮನ ಮಕ್ಕಳು – ಏಲಾಮ್, ಅಶ್ಶೂರ್, ಅರ್ಪಕ್ಷದ್, ಲೂದ್, ಅರಾಮ್, ಊಚ್, ಹೂಲ್, ಗೆತೆರ್, ಮೆಷೆಕ್ ಎಂಬವರು. ಈ ಹೆಸರಿನ ಜನಾಂಗಗಳಿಗೆ ಇವರೇ ಮೂಲ ಪುರುಷರು. 18ಅರ್ಪಕ್ಷದ್, ಶೆಲಹನ ತಂದೆ, ಶೆಲಹ, ಏಬೆರನ ತಂದೆ. 19ಏಬೆರನಿಗೆ ಇಬ್ಬರು ಮಕ್ಕಳು – ಪೆಲೆಗ್ ಎಂಬವನು ಒಬ್ಬ. ಅವನ ಕಾಲದಲ್ಲಿ ಲೋಕದಲ್ಲಿಯ ಜನರು ವಿಭಾಗವಾದದ್ದರಿಂದ ಈ ಹೆಸರು ಅವನಿಗೆ ಬಂದಿತು. ಯೊಕ್ತಾನ್ ಎಂಬವನು ಇನ್ನೊಬ್ಬ. 20ಅಲ್ಮೋದಾದ್, ಶೆಲೆಫ್, ಹಚರ್ಮಾವೆತ್, ಯೆರಹ, 21ಹದೋರಾಮ್, ಊಜಾಲ್, ದಿಕ್ಲ, 22ಏಬಾಲ್, ಅಬೀಮಾಯೇಲ್, ಶೆಬಾ, 23ಓಫೀರ್, ಹವೀಲಾ, ಯೋಬಾಬ್ ಎಂಬ ಸ್ಥಳಗಳವರು ಯೋಕ್ತಾನನ ಸಂತಾನದವರು.

24 ಶೇಮನಿಂದ ಅಬ್ರಾಮನವರೆಗಿನ ಸಂತತಿಯವರು ಇವರು: ಅರ್ಪಕ್ಷದ್, ಶೆಲಹ, 25ಏಬೆರ್, ಪೆಲೆಗ, ರೆಯೂ, 26ಸೆರೂಗ್, ನಾಹೋರ್, ತೆರಹ; 27ಅಬ್ರಾಮ್ (ಇವನು ಅಬ್ರಹಾಮ ಎಂದೂ ಹೆಸರು ಹೊಂದಿದವನು)

## ಇಷ್ಮಾಯೇಲನ ವಂಶಜರು

(ಆದಿ. 25.12–16)

28 ಅಬ್ರಹಾಮನಿಗೆ ಇಬ್ಬರು ಮಕ್ಕಳು – ಇಸಾಕ್ ಮತ್ತು ಇಷ್ಮಾಯೇಲ್. 29ಇಷ್ಮಯೇಲನ ಮಕ್ಕಳು ಹನ್ನೆರಡು ಗೋತ್ರಗಳ ಮುಖ್ಯಸ್ಥರಾದರು. ಅವರು –ನೆಬಾಯೋತ್, (ಇಷ್ಮಾಯೇಲನ ಹಿರೀಮಗನಿಂದ ಈ ಹೆಸರಿನ ಉತ್ಪತ್ತಿ), ಕೇದಾರ್, ಅದ್ಬೆಯೇಲ್, ಮಿಬ್ಸಾಮ್, 30ಮಿಷ್ಮಾ, ದೂಮಾ, ಮಸ್ಸ, ಹದದ್, ತೇಮ, 31ಯೆಟೂರ್, ನಾಫೀಷ್, ಕೇದೆಮ ಎಂಬವರು.

32 ಅಬ್ರಹಾಮನಿಗೆ ಕೆಟೂರಳೆಂಬ ಉಪಪತ್ನಿ ಇದ್ದಳು. ಅವಳಿಂದ ಜಿಮ್ರಾನ್, ಯೊಕ್ಷಾನ್, ಮೆದಾನ್, ಮಿದ್ಯಾನ್, ಇಷ್ಬಾಕ್, ಶೂಹ ಎಂಬ ಆರು ಜನ ಮಕ್ಕಳು ಜನಿಸಿದರು. ಯೊಕ್ಷಾನ್‌ನಿಗೆ ಶೆಬಾ ಮತ್ತು ದೆದಾನ್ ಎಂಬಿಬ್ಬರು ಮಕ್ಕಳು ಹುಟ್ಟಿದರು. 33ಮಿದ್ಯಾನ್‌ಗೆ ಏಫಾ, ಏಫೆರ್, ಹನೋಕ್, ಅಬೀದ, ಎಲ್ದಾಯ ಎಂಬ ಐದು ಜನ ಮಕ್ಕಳು ಹುಟ್ಟಿದರು.

## ಏಸಾವನ ವಂಶಜರು

(ಆದಿ. 36.1–19)

34 ಅಬ್ರಹಾಮನ ಮಗ ಇಸಾಕನಿಗೆ ಇಬ್ಬರು ಮಕ್ಕಳು – ಏಸಾವ ಮತ್ತು ಯಕೋಬ. 35ಏಸಾವನ ಮಕ್ಕಳು – ಎಲೀಫಜ್, ರೆಯೂವೇಲ್, ಯೆಯೂಷ್, ಯಳಾಮ್, ಹಾಗೂ ಕೋರಹ ಎಂಬವರು. 36ಎಲೀಫಜ್‌ನ ಮಕ್ಕಳು ತೇಮಾನ್, ಓಮಾರ್, ಜೆಫೀ, ಗತಾಮ್, ಕೆನಜ್ ಹಾಗೂ ತಿಮ್ನ ಎಂಬುವಳಿಂದ ಜನಿಸಿದ ಅಮಾಲೇಕ್ ಎಂಬವರು. 37ರೆಯೂವೇಲನ ಮಕ್ಕಳು – ನಹತ್, ಜೆರಹ, ಶಮ್ಮ ಮತ್ತು ಮಿಜ್ಜ ಎಂಬವರು.

## ಎದೋಮಿನ ಮೂಲನಿವಾಸಿಗಳು

(ಆದಿ. 36.20–30)

38 ಈ ಕೆಳಗೆ ನಮೂದಿಸಿದ ಎದೋಮಿನ ಮೂಲನಿವಾಸಿಗಳು ಸೇಯೀರನಿಂದ ಹುಟ್ಟಿದವರು: ಲೋಟಾನ್, ಶೋಬಾಲ್, ಚಿಬ್ಯೋನ್, ಅನಾಹ, ದೀಶೋನ್, ಏಚೆರ್, ದೀಶಾನ್.

39 ಹೋರೀ ಮತ್ತು ಹೋಮಾಮ್ ಕುಲಗಳ ಮೂಲ ಪುರುಷ ಲೋಟಾನ್. ಲೋಟಾನನಿಗೆ ತಿಮ್ನ ಎಂಬ ಒಬ್ಬ ತಂಗಿಯಿದ್ದಳು.

40 ಶೋಬಾಲ್ – ಇವನು ಅಲ್ಯಾನ್, ಮಾನಹತ್, ಏಬಾಲ್, ಶೆಫೀ, ಓನಾಮ್ ಎಂಬವರ ಕುಲಗಳ ಪೂರ್ವಜ.

41 ಅನಾಹನು ದೀಶೋನನ ತಂದೆ. ದೀಶೋನನು ಹಮ್ರಾನ್, ಎಷ್ಬಾನ್, ಇತ್ರಾನ್, ಕೆರಾನ್ ಗೋತ್ರಗಳ ಪೂರ್ವಜ.

42 ಏಚೆರ್ : ಇವನು ಬಿಲ್ಹಾನ್, ಜಾವಾನ್, ಯಾಕಾನ್ ಎಂಬ ಕುಲಗಳ ಮೂಲಪುರುಷ.

ದೀಶಾನನು, ಊಚ್ ಹಾಗೂ ಅರಾನ್ ಕುಲಗಳ ಪೂರ್ವಜ.

## ಎದೋಮಿನ ಅರಸರು

(ಆದಿ. 36.31–43)

43 ಇಸ್ರಯೇಲರಲ್ಲಿ ಅರಸರೇ ಇರಲಿಲ್ಲದ ಕಾಲದಲ್ಲಿ ಎದೋಮ್ ದೇಶವನ್ನು ಆಳಿದ ಅರಸರು.

ಬೆಯೋರನ ಮಗ ಬೆಳನು; ದಿನ್ಹಾಬಾ ಇವನ ರಾಜಧಾನಿ.

44 ಬೆಳನು ಮರಣಹೊಂದಿದ ತರುವಾಯ ಬೊಚ್ರದ ಜೆರಹನ ಮಗ ಯೋಬಾಬ ಅವನ ಉತ್ತರಾಧಿಕಾರಿಯಾದನು.

45 ಯೋಬಾಬ ಮೃತನಾದ ಮೇಲೆ ತೇಮಾನೀಯರ ನಾಡಿನ ಹುಷಾನು ಅರಸನಾದ.

46 ಹುಷಾಮ ಮೃತನಾದ ಮೇಲೆ ಅವೀತದ ಬೆದದನ ಮಗ ಹದದ ಅರಸನಾದ.

ಇವನು ಮೋವಾಬ್ ದೇಶದಲ್ಲಿ ನಡೆದ ಯುದ್ಧದಲ್ಲಿ ಮಿದ್ಯಾನರನ್ನು ಸೋಲಿಸಿದ; ಅವನ ರಾಜಧಾನಿಯ ಹೆಸರು ಅವೀತ್.

47 ಹದದ ಮೃತನಾದ ಮೇಲೆ ಮಸ್ರೇಕದ ಸಮ್ಲಾಹ ಅರಸನಾದ.

48 ಸಮ್ಲಾಹ ಮೃತನಾದ ಮೇಲೆ ಯುಫ್ರಟಿಸ್ ನದೀತೀರದಲ್ಲಿರುವ ರೆಹೋಬೋತ್ ಊರಿನ ಸೌಲನು ಅರಸನಾದ.

49 ಸೌಲನು ಮೃತನಾದ ಮೇಲೆ ಅಕ್ಬೋರನ ಮಗ ಬಾಳ್ಹಾನಾನ ಅರಸನಾದ.

50 ಬಾಳ್ಹಾನಾನ್ ಮೃತನಾದ ಮೇಲೆ ಪಾಗೀಯ ಹದದನು ಅರಸನಾದ. ಇವನ ಹೆಂಡತಿ ಮೆಹೇಟಬೇಲ್; ಈಕೆ ಮಟ್ರೇದಳ ಮಗಳು, ಮೇಜಾಹಾಬನ ಮೊಮ್ಮಗಳು.

51–52ಹದದನು ಮೃತನಾದ ತರುವಾಯ ಆಳಿದ ಎದೋಮ್ಯರು; ತಿಮ್ನ, ಅಲ್ಯ, ಯೆತೇತ್, ಒಹೋಲಿಬಾಮ, ಏಲ, ಪೀನೋನ್, ಕೆನಜ್, ತೇಮಾನ್, ಮಿಬ್ಚಾರ್, ಮಗ್ದೀಯೇಲ್ ಮತ್ತು ಗೀರಾಮ್ ಎಂಬ ಕುಲನಾಯಕರು.

## ಯೆಹೂದನ ವಂಶಾವಳಿ

**2** ಯಕೋಬನ ಹನ್ನೆರಡು ಜನ ಮಕ್ಕಳು ಇವರು: ರೂಬೇನ್, ಸಿಮೆಯೋನ್, ಲೇವಿ ಯೆಹೂದ, ಇಸ್ಸಾಕಾರ್, ಜೆಬೂಲೂನ್, 2ದಾನ್, ಜೋಸೆಫ್, ಬಿನ್ಯಾಮೀನ್, ನಫ್ತಾಲಿ, ಗಾದ್ ಮತ್ತು ಆಶೇರ್.

3 ಯೆಹೂದನ ಹೆಂಡತಿ ಶೂನನ ಮಗಳಾದ ಕಾನಾನಳು. ಅವಳಿಂದ ಏರ್, ಓನಾನ್, ಶೇಲಹ ಎಂಬ ಮೂರು ಮಕ್ಕಳು ಜನಿಸಿದರು. ಅವನ ಹಿರಿಯ ಮಗ ಏರನು ಬಹಳ ದುಷ್ಟ. ಆದುದರಿಂದ

ಸರ್ವೇಶ್ವರ ಅವನನ್ನು ಕೊಂದು ಹಾಕಿದರು. 4ಯೆಹೂದನಿಗೆ ಅವನ ಸೊಸೆ ತಾಮಾರಳಿಂದ ಪೆರೆಜ್ ಹಾಗೂ ಜೆರಹ ಎಂಬ ಮಕ್ಕಳು ಜನಿಸಿದರು. ಯೆಹೂದನ ಮಕ್ಕಳು ಒಟ್ಟು ಐದು ಮಂದಿ.

5 ಪೆರೆಚನಿಗೆ ಹೆಚ್ರೋನ್, ಹಾಮುಲ್ ಎಂಬಿಬ್ಬರು ಮಕ್ಕಳು. 6ಅವನ ಸಹೋದರ ಜೆರಹನಿಗೆ ಐದು ಜನ ಮಕ್ಕಳು: ಜಿಮ್ರಿ, ಏತಾನ್, ಹೇಮಾನ್, ಕಲ್ಕೋಲ್, ಮತ್ತು ದಾರ. 7ಜೆರಹನ ಸಂತತಿಯಲ್ಲಿ ಕರ್ಮಿಯ ಮಗ ಆಕಾರನು ಸರ್ವೇಶ್ವರನಿಗೆ ಮೀಸಲಾಗಿಟ್ಟಿದ್ದ ವಸ್ತುಗಳನ್ನು ಕದ್ದುಕೊಂಡದ್ದರಿಂದ ಇಸ್ರಯೇಲರಿಗೆ ಆಪತ್ತನ್ನು ತಂದಿದ್ದನು.

8 ಏತಾನನಿಗೆ ಅಜರ್ಯನೆಂಬ ಒಬ್ಬ ಮಗನಿದ್ದನು.

## ಅರಸ ದಾವೀದನ ವಂಶಾವಳಿ

9 ಹೆಚ್ರೋನನಿಗೆ ಮೂರು ಜನ ಮಕ್ಕಳು ಇದ್ದರು. ಅವರು – ಯೆರಹ್ಮೇಲ್, ರಾಮ್ ಮತ್ತು ಕೆಲೂಬಾಯ್ ಎಂಬವರು.

10 ರಾಮನಿಂದ ಜೆಸ್ಸೆವರೆಗಿನ ವಂಶಜರು: ಅಮ್ಮಿನಾದಾಬ್, ಯೆಹೂದ ಗೋತ್ರದ ಪ್ರಮುಖ ವ್ಯಕ್ತಿಯಾದ ನಹಶೋನ, 11ಸಲ್ಮನ, ಬೋವಜ, 12ಓಬೇದ ಹಾಗೂ ಜೆಸ್ಸೆ.

13 ಜೆಸ್ಸೆಯ ಏಳುಜನ ಮಕ್ಕಳು: ಎಲೀಯಾಬ್, ಅಬೀನಾದಾಬ್, ಶಿಮ್ಮ, 14ನೆತನೇಲ್, ರದ್ದೈ, 15ಓಚೆಮ್ ಮತ್ತು ದಾವೀದ್. 16ಅವನ ಇಬ್ಬರು ಹೆಣ್ಣು ಮಕ್ಕಳು: ಚೆರೂಯ ಹಾಗೂ ಅಬೀಗೈಲ ಎಂಬವರು.

ಜೆಸ್ಸೆಯ ಮಗಳು ಚೆರೂಯಳಿಗೆ ಅಬ್ಶೈ, ಯೋವಾಬ್, ಅಸಾಹೇಲ್ ಎಂಬ ಮೂರು ಜನ ಮಕ್ಕಳಿದ್ದರು. 17ಅವನ ಇನ್ನೊಬ್ಬ ಮಗಳು ಅಬೀಗೈಲಳು ಇಷ್ಮಾಯೇಲನ ವಂಶಜ ಯೆತೆರ್ ಎಂಬವನನ್ನು ವಿವಾಹವಾಗಿ ಅಮಾಸ ಎಂಬ ಮಗನನ್ನು ಪಡೆದಳು.

## ಹೆಚ್ರೋನನ ವಂಶಜರು

18 ಹೆಚ್ರೋನನ ಮಗ ಕಾಲೇಬ, ಅಜೂಬಳನ್ನು ಮದುವೆಯಾಗಿ ಯೆರ್ಯೋತ್ ಎಂಬ ಮಗಳನ್ನು ಪಡೆದನು. ಆಕೆಯ ಮೂರು ಜನ ಗಂಡುಮಕ್ಕಳು: ಯೇಷೆರ್, ಶೋಬಾಬ್, ಅರ್ದೋನ್ ಎಂಬವರು. 19ಅಜೂಬಳ ಮರಣದ ನಂತರ ಕಾಲೇಬನು ಎಫ್ರಾತಳನ್ನು ಮದುವೆ ಆಗಿ ಹೂರ್ ಎಂಬ ಮಗನನ್ನು ಪಡೆದನು. 20ಹೂರನಿಗೆ ಊರಿಯ ಎಂಬ ಮಗ ಮತ್ತು ಬೆಚಲೇಲ ಎಂಬ ಮೊಮ್ಮಗ ಇದ್ದರು.

21 ಹೆಚ್ರೋನ ಅರುವತ್ತು ವರ್ಷದವನಾದಾಗ ಗಿಲ್ಯಾದನ ಸೋದರಿಯಾದ ಮಾಕೀರನ ಮಗಳನ್ನು ಮದುವೆಯಾದನು. ಅವರಿಗೆ ಸೆಗೂಬ ಎಂಬ ಮಗ ಜನಿಸಿದ. 22ಸೆಗೂಬನಿಗೆ ಯಾಯೀರ ಎಂಬ ಮಗ ಜನಿಸಿದ. ಯಾಯೀರ ಗಿಲ್ಯಾದನ ಇಪ್ಪತ್ಮೂರು ಪಟ್ಟಣಗಳ ಮೇಲೆ ಆಡಳಿತ ಮಾಡಿದನು. 23ಆದರೆ ಗೆಷೂರ್ಯರ ಮತ್ತು ಅರಾಮ್ಯರ ರಾಜ್ಯಗಳವರು ಯಾಯೀರನ ಹಾಗು ಕೆನತ್ ಪ್ರಾಂತ್ಯದ ಗ್ರಾಮಗಳನ್ನೂ ಅವುಗಳ ಸಮೀಪದ ಪಟ್ಟಣಗಳನ್ನೂ ಸೇರಿ ಒಟ್ಟು ಅರುವತ್ತು ಪಟ್ಟಣಗಳನ್ನು ಗೆದ್ದುಕೊಂಡರು. ಅಲ್ಲಿ ವಾಸಿಸಿದ್ದ ಎಲ್ಲಾ ಜನರೂ ಗಿಲ್ಯಾದನ ತಂದೆ ಮಾಕೀರನ ವಂಶಜರೇ ಆಗಿದ್ದರು. 24ಹೆಚ್ರೋನನು ಮರಣ ಹೊಂದಿದ ನಂತರ ಅವನ ಮಗ ಕಾಲೇಬ್ ತನ್ನ ತಂದೆಯ ವಿಧವೆ ಎಫ್ರಾತಳನ್ನು ಮದುವೆಯಾದನು. ಅವರಿಗೆ ಅಷ್ಹೂರ ಎಂಗ ಮಗ ಜನಿಸಿದ. ತೆಕೋವ ಪಟ್ಟಣವನ್ನು ಕಟ್ಟಿದವನು ಇವನೇ.

## ಯೆರಹ್ಮೇಲನ ವಂಶಜರು

25 ಹೆಚ್ರೋನನ ಚೊಚ್ಚಲ ಮಗ ಯೆರಹ್ಮೇಲನಿಗೆ ಐದು ಜನ ಮಕ್ಕಳು ಇದ್ದರು. ಅವರು – ಹಿರಿಯವನಾದ ರಾಮ್ ಮತ್ತು ಬೂನ, ಓರೆನ್, ಓಚೆಮ್, ಹಾಗೂ ಅಹೀಯ ಎಂಬವರು. 26–27ರಾಮನಿಗೆ ಮಾಚ್, ಯಾಮೀನ್, ಏಕೆರ್ ಎಂಬ ಮೂರು ಮಕ್ಕಳಿದ್ದರು. ಯೆರೆಹ್ಮೇಲನಿಗೆ ಅಟಾರ ಎಂಬ ಇನ್ನೊಬ್ಬ ಹೆಂಡತಿಯಿದ್ದಳು. ಅವಳಿಂದ ಓನಾಮ ಎಂಬ ಮಗ ಜನಿಸಿದ. 28ಓನಾಮನಿಗೆ ಶಮ್ಮೈ, ಮತ್ತು ಯಾದ ಎಂಬ ಇಬ್ಬರು ಮಕ್ಕಳಿದ್ದರು. ಶಮ್ಮೈ ಮಕ್ಕಳು: ನಾದಾಬ್ ಹಾಗೂ ಅಬೀಷೂರ್.

29 ಅಬೀಷೂರ ಅಬೀಹೈಲ್ ಎಂಬವಳೊಂದಿಗೆ ವಿವಾಹವಾಗಿ ಅಹ್ಬಾನ್, ಮೋಲೀದ್ ಎಂಬಿಬ್ಬರು ಮಕ್ಕಳನ್ನು ಪಡೆದನು. 30ಅಬೀಷೂರನ ಸಹೋದರ ನಾದಾಬನಿಗೆ ಸೆಲೆದ್, ಅಪ್ಪಯಿಮ್ ಎಂಬಿಬ್ಬರು ಮಕ್ಕಳಿದ್ದರು. ಆದರೆ ಸೆಲೆದನು ಮಕ್ಕಳಿಲ್ಲದೇ ಮರಣ ಹೊಂದಿದನು. 31ಅಪ್ಪಯಿಮ್ ಇಷ್ಷೀಯ ತಂದೆ. ಇಷ್ಷೋಶೇಷಾನ್‌ನ ತಂದೆ, ಶೇಷಾನನು ಅಹ್ಲ್ಯೋ ತಂದೆ.

32 ಶಮ್ಮೆಯ ತಮ್ಮನಾದ ಯಾದಾನಿಗೆ ಯೆತೆರ್ ಮತ್ತು ಯೋನಾತಾನ್ ಎಂಬ ಮಕ್ಕಳು ಇದ್ದರು. ಯೆತೆರ್ ಮಕ್ಕಳಿಲ್ಲದೇ ಮಡಿದನು. 33ಯೋನಾತಾನನಿಗೆ ಪೆಲಿತ್, ಜಾಜ ಎಂಬ ಮಕ್ಕಳಿದ್ದರು. ಇವರೆಲ್ಲರೂ ಯೆರಹ್ಮೇಲನ ವಂಶಜರು.

34 ಶೇಷಾನನಿಗೆ ಗಂಡುಮಕ್ಕಳಿರಲಿಲ್ಲ; ಹೆಣ್ಣು ಮಕ್ಕಳೇ ಇದ್ದರು. ಅವನಿಗೆ ಯರ್ಹ ಎಂಬ ಸೇವಕನಿದ್ದನು. 35ಅವನಿಗೆ ತನ್ನ ಹೆಣ್ಣು ಮಕ್ಕಳಲ್ಲಿ ಒಬ್ಬಳನ್ನು ಮದುವೆಮಾಡಿಕೊಟ್ಟನು. ಅವರಿಗೆ ಜನಿಸಿದ ಮಗನ ಹೆಸರು ಅತ್ತೈ ಎಂದು. 36ಅತ್ತೈನಿಂದ ಎಲೀಮಾನವರೆಗಿನ ವಂಶಜರ ಹೆಸರುಗಳು: ಅತ್ತೈ, ನಾತಾನ್, ಜಾಬಾದ, 37ಎಫ್ಲಾಲ, ಓಬೇದ್, 38ಯೇಹೂವು, ಅಜರ್ಯ, 39ಹೆಲೆಚ, ಎಲ್ಲಾಸ, 40ಸಿಸ್ಮೈ, ಶಲ್ಲೂಮ, 41ಯೆಕಮ್ಯಾಹ ಮತ್ತು ಎಲೀಷಾಮ.

## ಕಾಲೇಬನ ವಂಶಜರು

42 ಕಾಲೇಬನ ಚೊಚ್ಚಲು ಮಗನಿಗೆ ಅಂದರೆ ಯೆರಹ್ಮೇಲನ ಸಹೋದರನಿಗೆ ಮೇಷ ಎಂದು ಹೆಸರಿಡಲಾಗಿತ್ತು. ಮೇಷನು ಜೀಫ್ಯನ ತಂದೆ, ಇವನು ಮಾರೇಷನ ತಂದೆ, ಇವನು ಹೆಬ್ರೋನನ ತಂದೆ, 43ಹೆಬ್ರೋನನಿಗೆ ಕೋರಹ, ತಪ್ಪೂಹ, ರೆಕೆಮ್ ಮತ್ತು ಶೆವು ಎಂಬ ನಾಲ್ವರು ಮಕ್ಕಳು ಇದ್ದರು. 44ಶೆಮ ರಹಮನ ತಂದೆ, ಯೊರ್ಕೆಯಾಮ್ಮನ ಅಜ್ಜ, ಶೆಮನ ಸಹೋದರ ರೆಕೆಮ ಶಮ್ಮೈಯನ ತಂದೆ, 45ಇವನು ಮಾವೋನ್ಯನ ತಂದೆ, ಇವನು ಬೇತ್ಸೂರನ ತಂದೆ.

46 ಕಾಲೇಬನಿಗೆ ಏಫಾ ಎಂಬ ಉಪಪತ್ನಿ ಇದ್ದಳು. ಅವಳಿಂದ ಅವನಿಗೆ ಹಾರಾನ್, ಮೋಚ, ಗಾಜೇಜ್ ಹುಟ್ಟಿದರು. ಹಾರಾನನಿಗೆ ಗಾಜೇಜ ಎಂಬ ಹೆಸರಿನ ಮಗನಿದ್ದನು.

47 ಯಾದೈ ಎಂಬವನಿಗೆ ಆರು ಜನ ಮಕ್ಕಳು: ರೆಗೆಮ್, ಯೋತಾಮ್, ಗೇಷಾನ್, ಪೆಲೆಟ್, ಏಫ, ಶಾಫ್ ಎಂಬವರು.

48 ಕಾಲೇಬನ ಇನ್ನೊಬ್ಬ ಉಪಪತ್ನಿ – ಮಾಕಾ. ಅವಳಿಂದ ಶೆಬೆರ್, ತಿರ್ಹನ ಎಂಬಿಬ್ಬರು ಮಕ್ಕಳು ಜನಿಸಿದರು. 49ಅನಂತರ ಅವಳಿಗೆ ಮತ್ತೆ ಇಬ್ಬರು ಮಕ್ಕಳು ಜನಿಸಿದರು: ಮದ್ಮನ್ನ ಪಟ್ಟಣವನ್ನು ಕಟ್ಟಿಸಿದ ಶಾಫ್ ಒಬ್ಬನು. ಮಕ್‌ಬೇನ ಮತ್ತು ಗಿಬ್ಯ ಪಟ್ಟಣಗಳನ್ನು ಕಟ್ಟಿಸಿದ ಶೆವ ಇನ್ನೊಬ್ಬನು. ಇವರಲ್ಲದೆ ಕಾಲೇಬನಿಗೆ ಅಕ್ಸಾಹ ಎಂಬ ಹೆಣ್ಣು ಮಗಳು ಇದ್ದಳು.

50 ಇನ್ನುಳಿದ ಕಾಲೇಬನ ವಂಶಜರು: ಕಾಲೇಬನಿಗೆ ಅವನ ಹೆಂಡತಿ ಎಫ್ರಾತಳಿಂದ ಜನಿಸಿದ ಚೊಚ್ಚಲ ಮಗನ ಹೆಸರು ಹೂರ ಎಂದು. ಹೂರನ ಮಗ ಶೋಬಾಲ್ – ಕಿರ್ಯತ್ಯಾರೀಮ್ ಪಟ್ಟಣವನ್ನೂ ಅವನ ಮೂರನೆಯ ಮಗ ಹಾರೇಫ್, ಬೇತ್ಲಗ್ಗಾದೇರ್ ಪಟ್ಟಣವನ್ನೂ ಕಟ್ಟಿಸಿದರು.

52 ಕಿರ್ಯತ್ಯಾರೀಮ್ ಪಟ್ಟಣದ ಸ್ಥಾಪಕ ಶೋಬಾಲನು ಹರೋಯೆ ಜನರ, ಮಾನಹತಿಯರ ಅರ್ಧದಷ್ಟು ಜನರ, 53ಹಾಗೂ ಕಿರ್ಯತ್ಯಾರೀಮ್‌ನಲ್ಲಿ ವಾಸಿಸುವ ಯೆತೆರಿನವರ, ಪೂತ್ಯರ, ಶುಮಾತ್ಯರ ಹಾಗೂ ಮಿಷ್ರಾಗ್ಯರ ಪೂರ್ವಜನಾಗಿದ್ದನು. ಚೊರ್ರಾತ್ಯರು ಹಾಗು ಎಷ್ಟಾವೋಲ್ಯರು ಈ ಗೋತ್ರಗಳಿಗೆ ಸೇರಿದವರು.

54 ನೆಟೋಫಾ, ಅಟರೋತ್, ಬೇತ್ಯೋವಾಬ್ ಹಾಗೂ ಮಾನಹತಿಯರ ಎರಡು ಗೋತ್ರಗಳಲ್ಲಿ ಒಂದಾದ ಜೊರ್ಗದ ನಿವಾಸಿಗಳಿಗೆ ಬೆತ್ಲೆಹೇಮ್ ಪಟ್ಟಣದ ಸ್ಥಾಪಕ ಸಲ್ಮನು ಮೂಲಪುರುಷ ಆಗಿದ್ದನು.

55 ಬರವಣಿಗೆಯಲ್ಲಿ ಮತ್ತು ದಾಖಲೆಗಳನ್ನು ನಕಲು ಮಾಡುವುದರಲ್ಲಿ ಪ್ರವೀಣರಾದ ತಿರಾತ್ಯರು, ಶಿಮ್ಯಾಗ್ಯರು, ಸುಕಾತ್ಯರು ಯಾಬೇಚಿನಲ್ಲಿ ವಾಸಿಸಿದ್ದರು. ರೇಕಾಬ್ಯರೊಂದಿಗೆ ಅಂತರ್ ವಿವಾಹ ಮಾಡಿಕೊಂಡ ಕೇನ್ಯರು ಇವರೇ.

## ಅರಸ ದಾವೀದನ ಮಕ್ಕಳು

**3** ದಾವೀದನು ಹೆಬ್ರೋನಿನಲ್ಲಿದ್ದಾಗ ಅವನಿಗೆ ಹುಟ್ಟಿದ ಗಂಡುಮಕ್ಕಳ ಹೆಸರುಗಳು ಇವು:

ಅಮ್ನೋನ – ಜೆಸ್ರೀಲಿನ ಅಹೀನೋಮ ಇವನ ತಾಯಿ. ದಾನಿಯೇಲ – ಕರ್ಮೇಲಿನ ಅಬೀಗೈಲಳು ಇವನ ತಾಯಿ. 2ಅಬ್ಷಾಲೋಮ – ಗೆಷೂರಿನ ಅರಸ ತಲ್ಮೈಯ ಮಗಳು ಮಾಕ ಇವನ ತಾಯಿ. ಅದೋನಿಯ –ಹಗ್ಗೀತ್ ಇವನ ತಾಯಿ. 3ಶೆಫಟ್ಯ – ಅಬೀಟಲಳು ಇವನ ತಾಯಿ. ಇತ್ರಾಮ – ಎಗ್ಲಳು ಇವನ ತಾಯಿ.

4 ದಾವೀದನು ಹೆಬ್ರೋನಿನಲ್ಲಿ ಆಳ್ವಿಕೆ ಮಾಡಿದ ಏಳೂವರೆ ವರ್ಷಗಳಲ್ಲಿ ಈ ಆರೂ ಜನ ಮಕ್ಕಳು ಅಲ್ಲಿಯೇ ಹುಟ್ಟಿದರು.

ಜೆರುಸಲೇಮಿನಲ್ಲಿ ಅವನು ಅರಸನಾಗಿ ಮೂವತ್ಮೂರು ವರ್ಷ ಆಡಳಿತ ಮಾಡಿದನು. 5ಅಲ್ಲಿ ಅವನಿಗೆ ಅನೇಕ ಗಂಡುಮಕ್ಕಳು ಹುಟ್ಟಿದರು.

ಚಾವೀದನ ಹೆಂಡತಿ ಬತ್ಷೂವ ಅಮ್ಮೀಯೇಲನ ಮಗಳು. ಆಕೆ – ಶಿಮ್ಮ, ಶೋಬಾಬ್, ನಾತಾನ್, ಸೊಲೊಮೋನ್ ಎಂಬ ನಾಲ್ಕು ಜನ ಗಂಡುಮಕ್ಕಳಿಗೆ ಜನ್ಮವಿತ್ತಳು.

6 ಅವನಿಗೆ ಇನ್ನೂ ಒಂಬತ್ತು ಜನ ಗಂಡು ಮಕ್ಕಳಿದ್ದರು: ಇಬ್ಹಾರ್, ಎಲೀಷಾಮ, ಎಲೀಫೆಲೆಟ್, 7ನೊಗ, ನೆಫೆಗ್, ಯಾಫೀಯ 8ಎಲೀಷಾಮ, ಎಲ್ಯಾದ, ಎಲೀಫೆಲೆಟ್ ಎಂಬವರೇ. 9ಇವರಲ್ಲದೆ ದಾವೀದನಿಗೆ ಅವನ ಉಪಪತ್ನಿಯರಿಂದ ಗಂಡುಮಕ್ಕಳಿದ್ದರು; ತಾಮಾರ್ ಎಂಬ ಹೆಣ್ಣುಮಗಳೂ ಇದ್ದಳು.

## ಅರಸ ಸೊಲೊಮೋನನ ವಂಶಜರು

10 ಸೊಲೊಮೋನನ ವಂಶದಲ್ಲಿ ಜನಿಸಿದವರ ಹೆಸರುಗಳು ಇಂತಿವೆ: ಸೊಲೊಮೋನ, ರೆಹಬ್ಬಾಮ, ಅಬೀಯ, ಆಸ, ಯೆಹೋಷಾಫಾಟ್, 11ಯೆಹೋರಾಮ್, ಅಹಜ್ಯ, ಯೆಹೋವಾಷ್, 12ಅಮಚ್ಯ, ಅಜರ್ಯ, ಯೋತಾಮ್, 13ಅಹಾಜ್, ಹಿಜ್ಕೀಯ, ಮನಸ್ಸೆ, 14ಅಮೋನ್ ಹಾಗು ಯೋಷೀಯ 15ಯೋಷೀಯನಿಗೆ ನಾಲ್ಕು ಜನಮಕ್ಕಳು: ಯೋಹಾನಾನ್, ಯೆಹೋಯಾಕೀಮ್, ಚಿದ್ಕೀಯ ಮತ್ತು ಶಲ್ಲೂಮ್. 16ಯೆಹೋಯಾಕೀಮನಿಗೆ ಯೆಕೊನ್ಯ ಮತ್ತು ಚಿದ್ಕೀಯ ಎಂಬಿಬ್ಬರು ಮಕ್ಕಳಿದ್ದರು.

## ಅರಸ ಯೆಹೊಯಾಕೀಮನ ವಂಶಜರು

17 ಬಾಬಿಲೋನಿಯರಿಂದ ಸೆರೆಯಾಳಾಗಿ ಒಯ್ಯಲ್ಪಟ್ಟ ಅರಸ ಯೆಕೊನ್ಯನ ವಂಶಜರು ಇವರು: ಯೆಕೊನ್ಯನಿಗೆ ಏಳುಜನ ಗಂಡು ಮಕ್ಕಳು: ಶೆಯಲ್ತೀಯೇಲ್, 18ಮಲ್ಕೀರಾಮ್, ಪೆದಾಯ, ಶೆನಚ್ಚರ್, ಯೆಕಮ್ಯ, ಹೋಷಾಮ, ನೆಬದ್ಯ ಎಂಬವರು. 19ಪೆದಾಯನಿಗೆ ಜೆರುಬ್ಬಾ ಬೆಲ್ ಮತ್ತು ಶಿಮ್ಮೀ ಎಂಬಿಬ್ಬರು ಮಕ್ಕಳಿದ್ದರು. ಜೆರುಬ್ಬಾಬೆಲನಿಗೆ ಮೆಷುಲ್ಲಾಮ್, ಹನನ್ಯ ಎಂಬ ಇಬ್ಬರು ಗಂಡುಮಕ್ಕಳು ಹಾಗೂ ಶೆಲೋಮೀತ್ ಎಂಬ ಮಗಳೂ ಇದ್ದಳು. 20ಇವರಲ್ಲದೆ ಹಷುಬ, ಓಹೆಲ್, ಬೆರೆಕ್ಯ, ಹಸದ್ಯ, ಯೂಷಬ್ಹೆಸೆದ್ ಎಂಬ ಐವರು ಗಂಡು ಮಕ್ಕಳು ಅವನಿಗಿದ್ದರು.

21 ಹನನ್ಯನ ಇಬ್ಬರು ಮಕ್ಕಳು: ಪೆಲಟ್ಯ ಮತ್ತು ಯೆಶಾಯ ಎಂಬವರು. ಯೆಶಾಯ ರೆಫಾಯನ ತಂದೆ, ಇವನು ಅರ್ನಾನನ ತಂದೆ, ಇವನು ಓಬದ್ಯನ ತಂದೆ, ಇವನು ಶೆಕನ್ಯನ ತಂದೆ. 22ಶೆಕನ್ಯನಿಗೆ ಶೆಮಾಯ ಎಂಗ ಮಗನೂ ಹಟ್ಟೂಷ್, ಇಗಾಲ್, ಬಾರೀಹ, ನೆಯರ್ಯ, ಶಾಷಾಟ್ ಎಂಬ ಐದು ಜನ ಮೊಮ್ಮಕ್ಕಳೂ ಇದ್ದರು. 23ನೆಯರ್ಯನಿಗೆ ಎಲ್ಯೋಗೇನೈ, ಹಿಜ್ಕೀಯ, ಅಜ್ರೀಕಾಮ್ ಎಂಬ ಮೂವರು ಮಕ್ಕಳಿದ್ದರು. 24ಎಲ್ಯೋಗೇನೈಯ ಏಳು ಜನ ಮಕ್ಕಳು: ಹೋದವ್ಯ, ಎಲ್ಯಾಷೀಬ್, ಪೆಲಾಯ, ಅಕ್ಕೂಬ್, ಯೋಹಾನಾನ್, ದೆಲಾಯ, ಅನಾನೀ ಎಂಬವರು.

## ಯೆಹೂದನ ವಂಶಜರು

**4** ಯೆಹೂದನ ವಂಶಜರು: ಪೆರೆಚ್, ಹೆಚ್ರೋನ್, ಕರ್ಮೀ, ಹೂರ್ ಮತ್ತು ಶೋಬಾಲ್. 2ಶೋಬಾಲ್ ರೆವಾಯನ ತಂದೆ, ಇವನು ಯಹತನ ತಂದೆ. ಇವನು ಚೊರ್ರದಲ್ಲಿ ವಾಸಿಸದ ಜನಾಂಗದ ಮೂಲಪಿತೃಗಳಾದ ಅಹೂಮೈ ಹಾಗು ಲಹದ್ ಎಂಬವರ ತಂದೆ.

3–4ಕಾಲೇಬನಿಗೆ ಅವನ ಹೆಂಡತಿ ಎಫ್ರಾತಹಳಿಂದ ಜನಿಸಿದ ಚೊಚ್ಚಲು ಮಗ ಹೂರನು. ಅವನ ವಂಶಜರು ಬೆತ್ಲೆಹೇಮ್ ಪಟ್ಟಣವನ್ನು ಕಟ್ಟಿಸಿದರು. ಹೂರನಿಗೆ ಏತಾಮ, ಪೆನುವೇಲ, ಏಜಾರ್ ಎಂಬ ಮೂವರು ಮಕ್ಕಳಿದ್ದರು. ಏತಾಮನಿಗೆ ಇಜ್ರೆಯೇಲ್, ಇಷ್ಮ, ಇಬ್ಬಾಷ್ ಎಂಬ ಮೂರು ಜನ ಗಂಡುಮಕ್ಕಳೂ ಹಚೆಲೆಲ್ ಪೋನೀ ಎಂಬ ಮಗಳೂ ಇದ್ದರು. ಪೆನೂವೇಲ್, ಗೆದೋರ್ ಪಟ್ಟಣವನ್ನೂ ಏಜೆರ್, ಹುಷಾ ಪಟ್ಟಣವನ್ನೂ ಸ್ಥಾಪಿಸಿದರು.

5 ತೆಕೋವ ಪಟ್ಟಣವನ್ನು ಸ್ಥಾಪಿಸಿದ ಅಷ್ಹೂರನಿಗೆ ಹೆಲಾಹ, ನಾರಾ ಎಂಬ ಪತ್ನಿಯರು ಇದ್ದರು. 6ನಾರಾಳಿಂದ ಅಹ್ಜ್ಜಾಮ್, ಹೇಫರ್, ತೇಮಾನಿ, ಅಹಷ್ಟಾರ್ಯ ಎಂಬ ನಾಲ್ವರು ಮಕ್ಕಳು ಜನಿಸಿದರು. 7ಅಷ್ಹೂರನಿಗೆ ಹೆಲಾಹ ಎಂಬವಳಿಂದ ಚೆರೆತ್, ಇಚ್ಹಾರ್, ಎತ್ನಾನ್ ಎಂಬ ಗಂಡುಮಕ್ಕಳು ಜನಿಸಿದರು.

8 ಅನೂಬ್, ಚೋಬೇಬ ಎಂಬವರ ತಂದೆ ಕೋಚ. ಇವನು ಹಾರುಮನ ಮಗ ಅಹರ್ಹೇಲನ ವಂಶಜರ ಮೂಲ ಪುರುಷ.

9 ಯಾಬೇಚ್ ಎಂಬವನು ಒಬ್ಬನಿದ್ದನು. ಅವನು ತನ್ನ ಕುಟುಂಬದಲ್ಲಿ ಬಹಳ ಗೌರವಾನ್ವಿತ ವ್ಯಕ್ತಿ. ಅವನು ಹುಟ್ಟುವಾಗ ಪ್ರಸವವೇದನೆ ಅಧಿಕವಾತದ್ದರಿಂದ ಅವನ ತಾಯಿ, ಯಾಬೇಚ ಎಂಬ ಹೆಸರನ್ನು ಅವನಿಗೆ ಕೊಟ್ಟಳು. 10ಆದರೆ ಯಾಬೇಚ, "ಸರ್ವೇಶ್ವರಾ, ನನ್ನನ್ನು ಆಶೀರ್ವದಿಸಿರಿ, ನನ್ನ ಭೂಮಿಯನ್ನು ವಿಸ್ತರಿಸಿರಿ. ನನ್ನೊಡನೆ ಇದ್ದು ನನಗೆ ನೋವನ್ನುಂಟುಮಾಡುವ ಎಲ್ಲಾ ದುಷ್ಟಶಕ್ತಿಗಳಿಂದ ನನ್ನನ್ನು ಕಾಪಾಡಿ," ಎಂದು ಸರ್ವೇಶ್ವರನಿಗೆ ಪ್ರಾರ್ಥಿಸಿದನು. ಸರ್ವೇಶ್ವರ ಅವನ ಪ್ರಾರ್ಥನೆಯನ್ನು ಆಲಿಸಿ, ಕೇಳಿದ್ದನ್ನು ದಯಪಾಲಿಸಿದರು.

## ಇತರ ಕುಟುಂಬಗಳ ಪಟ್ಟಿಗಳು

11 ಶೂಹನ ಸಹೋದರ ಕೆಲೂಬನಿಗೆ ಮೆಹೀರ ಎಂಬ ಮಗನಿದ್ದನು. ಮೆಹೀರನು ಎಷ್ಟೋನನ ತಂದೆ; 12ಇವನಿಗೆ ಬೇತ್ರಾಫ, ಪಾಸೇಹ, ತೆಹಿನ್ನ ಎಂಬ ಮೂವರು ಮಕ್ಕಳು ಇದ್ದರು. ತೆಹಿನ್ನ ನಾಹಷ್ ಪಟ್ಟಣದ ಸ್ಥಾಪಕ. ಈ ಜನರ ವಂಶಜರು ರೇಕಾ ಎಂಬಲ್ಲಿ ವಾಸಿಸಿದ್ದರು.

13 ಕೆನಜನ ಮಕ್ಕಳು – ಒತ್ನೀಯೇಲ್, ಸೆರಾಯ ಎಂಬವರು. ಒತ್ನೀಯೇಲನಿಗೆ ಹತತ್, ಮೆಯೋನೋತೈ ಎಂಬಿಬ್ಬರು ಮಕ್ಕಳಿದ್ದರು. 14ಮೆಯೋನೋತೈ, ಒಫ್ರಾಹನ ತಂದೆ.

ಸೆರಾಯ, ಯೋವಾಬನ ತಂದೆ. ಎಲ್ಲಾ ಕುಶಲ ಕೆಲಸಗಾರರು ವಾಸಿಸಿದ ಶಿಲ್ಪಿಗಳ ಕಣಿವೆಯ ಸ್ಥಾಪಕನು ಇವನೇ.

15 ಯೆಫುನ್ನೆಯ ಮಗ ಕಾಲೇಬನಿಗೆ ಈರು, ಏಲ, ನಾಮ್ ಎಂಬ ಮೂರುಜನ ಮಕ್ಕಳಿದ್ದರು. ಏಲನು ಕೆನಜ್‍ನ ತಂದೆ.

16 ಯೆಬಲ್ಲೆಲೇಲನ ಮಕ್ಕಳು – ಜೀಫ್, ಜೀಫಾ, ತೀರ್ಯ, ಅಸರೇಲ್ ಎಂಬವರು.

17–18ಎಜ್ರನಿಗೆ ಯೆತೆರ್, ಮೆರೆದ್, ಏಫೇರ್, ಯಾಲೋನ್ ಎಂಬ ನಾಳ್ವರು ಮಕ್ಕಳಿದ್ದರು. ಮೆರೆದನು ಈಜಿಪ್ಟಿನ ಅರಸನ ಮಗಳು ಬಿತ್ಯ ಎಂಬವಳನ್ನು ಮದುವೆಯಾಗಿ ಮಿರ್ಯಾಮ್ ಎಂಬ ಮಗಳನ್ನೂ ಶಮ್ಮೈ, ಎಷ್ಟೆಮೋವ ಎಂಬ ಇಬ್ಬರು ಗಂಡುಮಕ್ಕಳನ್ನೂ ಪಡೆದನು. ಇಷ್ಬಹನ ಎಷ್ಟಮೊವ್ ಪಟ್ಟಣವನ್ನು ಕಟ್ಟಿಸಿದನು. ಮೆರೆದನು ಸಹ ಯಾದ್ ಕುಲದ ಸ್ತ್ರಿಯೊಬ್ಬಳನ್ನು ಮದುವೆಯಾಗಿ ಅವಳಿಂದ ಮೂರು ಜನ ಮಕ್ಕಳನ್ನು ಪಡೆದನು: ಗೆದೋರ್ಯ ಪಟ್ಟಣ ಕಟ್ಟಿಸಿದ ಯೆರೆದ್, ಸೋಕೋವಿ ಪಟ್ಟಣದ ಸ್ಥಾಪಕ ಯೆಕೂತಿಯೇಲ್ ಎಂಬವರೇ ಆ ಮೂರು ಮಂದಿ.

19 ಹೋದೀಯನು ನಹಮನ ತಂಗಿಯನ್ನು ಮದುವೆಯಾದನು. ಇವರ ಸಂತತಿಯವರು ಕೆಯೀಲದಲ್ಲಿ ವಾಸಿಸಿದ ಗರ್ಮ್ಯ ಗೋತ್ರದ ಮತ್ತು ಎಷ್ಟೆಮೋವಾದಲ್ಲಿ ವಾಸಿಸಿದ ಮಾಕಾತ್ ಗೋತ್ರದ ಪೂರ್ವಜರು.

20 ಶೀಮೋನನ ಮಕ್ಕಳು – ಅಮ್ನೋನ್, ರಿನ್ನ, ಬಿನ್ಹಾನಾನ್, ತೀಲೋನ್ ಎಂಬವರು. ಇಷ್ಷೀಯ ಮಕ್ಕಳು – ಜೋಹೇತ್, ಬೆನ್ ಜೋಹೇತ್ ಎಂಬವರು.

**ಶೇಲನ ವಂಶಜರು**

21 ಶೇಲನು ಯೆಹೂದನ ಮಕ್ಕಳಲ್ಲಿ ಒಬ್ಬನು. ಅವನ ವಂಶೀಯರಲ್ಲಿ ಕೆಲವರ ಹೆಸರುಗಳು ಇಂತಿವೆ: ಲೇಕಾಹ್ಯರ ಪಟ್ಟಣದ ಸ್ಥಾಪಕ ಏರ್; ಮರೇಷತ್‌ನ ಸ್ಥಾಪಕ ಲದ್ದ; ಬೇತೆಷ್ಬೇಯ ಪಟ್ಟಣದಲ್ಲಿ ವಾಸಿಸಿದ ನೇಕಾರರ ಕುಟುಂಬಗಳು; 22ಯೋಕೀಮನು ಹಾಗು ಕೋಜೇಬ ಪಟ್ಟಣಗಳ ನಿವಾಸಿಗಳು; ಮೋವಾಬ್ಯರ ಸ್ತ್ರೀಯರನ್ನು ಮದುವೆಯಾಗಿ ಬೆತ್ಲೆಹೇಮಿನಲ್ಲಿ ನೆಲೆಸಿದ ಯೋವಾಷ ಹಾಗು ಸಾರಾಫ. (ಈ ಸಂಪ್ರದಾಯಗಳು ಬಹಳ ಪುರಾತನವಾದವು). 23ಅವರು ಅರಸನ ಸೇವೆಯಲ್ಲಿ ಕುಂಬಾರರಾಗಿದ್ದು ನೆಟಾಯಿಮ್ ಮತ್ತು ಗೆದೇರ ಪಟ್ಟಣಗಳಲ್ಲಿ ವಾಸಿಸಿದ್ದರು.

**ಸಿಮೆಯೋನನ ವಂಶಜರು**

24 ಸಿಮೆಯೋನನಿಗೆ ನೆಮೂವೇಲ್, ಯಾಮೀನ್, ಯಾರೀದ್, ಜೆರಹ, ಸೌಲ ಎಂಬ ಐವರು ಮಕ್ಕಳಿದ್ದರು. 25ಸೌಲನ ಮಗ ಶಲ್ಲುಮ್, ಮಿಬ್ಸಾಮ್ ಅವನ ಮೊಮ್ಮಗ, ಮಿಷ್ಮ ಅವನ ಮರಿಮಗ. 26ಅನಂತರ ಮಿಷ್ಮಾನನಿಂದ ಹಮ್ಮೂವೇಲ್, ಜಕ್ಕೂರ್, ಶಿಮ್ಮೀ ಎಂಬವರ ಮುಖಾಂತರ ಈ ವಂಶಾವಳಿ ಮುಂದುವರಿಯಿತು. 27ಶಿಮ್ಮಿಗೆ ಹದಿನಾರು ಜನ ಗಂಡು ಮಕ್ಕಳೂ ಆರುಜನ ಹೆಣ್ಣುಮಕ್ಕಳೂ ಇದ್ದರು. ಆದರೆ ಅವನ ಸಹೋದರರಿಗೆ ಕಡಿಮೆ ಸಂಖ್ಯೆಯಲ್ಲಿ ಮಕ್ಕಳಿದ್ದುದರಿಂದ ಯೆಹೂದ ಕುಲದಷ್ಟು ಸಿಮೆಯೋನನ ಕುಲ ಬೆಳೆಯಲಿಲ್ಲ.

28 ಅರಸ ದಾವೀದನ ಕಾಲದವರೆಗೆ ಸಿಮೆಯೋನನ ವಂಶಜರು ವಾಸಿಸಿದ ಪಟ್ಟಣಗಳು ಇವು: ಬೇರ್ಷೆಬ, ಮೋಲಾದ, ಹಚರ್ ಷೂವಾಲ್, 29ಬಿಲ್ಹ, ಎಚೆಮ್, ತೋಲಾದ್, 30ಬೆತೂವೇಲ್, ಹೊರ್ಮ, ಚಿಕ್ಲಗ್, 31ಬೇತ್‌ಮರ್ಕಾಬೋತ್, ಹಚರ್‌ಸೂಸೀಮ್, ಬೇತ್‌ಬಿರೀ, ಶಾರಯಿಮ್. 32ಅವರು ಇನ್ನೂ ಬೇರೆ ಐದು ಸ್ಥಳಗಳಲ್ಲಿ ಅಂದರೆ ಏಟಾಮ್, ಅಯಿನ್, ರಿಮ್ಮೋನ್, ತೋಕೆನ್, ಆಷಾನ್ ಹಾಗು 33ಅವುಗಳ ಸುತ್ತಲಿನ ಗ್ರಾಮಗಳಲ್ಲಿ ಬಾಲ್ ಪಟ್ಟಣದವರೆಗೆ ವಾಸಿಸಿದರು. ಇವು, ಅವರು ತಮ್ಮ ಕುಟುಂಬಗಳ ಮತ್ತು ತಾವು ವಾಸಿಸಿದ ಸ್ಥಳಗಳ ಬಗ್ಗೆ ಇಟ್ಟ ದಾಖಲೆಗಳಾಗಿವೆ.

34 ತಮ್ಮ ತಮ್ಮ ಗೋತ್ರಗಳಲ್ಲಿ ಇವರು ಪ್ರಮುಖರಾಗಿದ್ದರು: ಮೆಷೋಬಾಬ್, ಯಮ್ಲೇಕ್, ಅಮಚ್ಯನ ಮಗ ಯೋಷ, 35ಯೋವೇಲ್, ಯೊಷಿಬ್ಯನ ಮಗನೂ ಸೆರಾಯನ ಮೊಮ್ಮಗನೂ ಅಸಿಯೇಲನ ಮರಿಮಗನೂ ಆದ ಯೇಹೂ, 36ಎಲ್ಯೋವೇನೈ, ಯಾಕೋಬ, ಯೆಷೋಹಾಯ, ಅಸಾಯ, ಅದೀಯೇಲ್, ಯೆಸೀಮಿಯೇಲ್, ಬೆನಾಯ, 37ಶಮಾಯನ ಮಗ ಶಿಮ್ರಿಯಿಂದ ಹುಟ್ಟಿದ ಯೆದಾಯನ ಮರಿಮಗನೂ ಅಲ್ಲೋನನ ಮೊಮ್ಮಗನೂ ಶಿಫ್ಚಿಯ ಮಗನೂ ಆದ ಜೀಜ.

38 ಅವರ ಕುಟುಂಬಗಳು ಬೆಳೆಯುತ್ತಾ ಹೋದವು. 39ಆದುದರಿಂದ ಅವರು ಪಶ್ಚಿಮ ದಿಕ್ಕಿನ ಕಡೆಗೆ ಗೆದೋರ್‌ವರೆಗೆ ಪಸರಿಸಿದರು. ಆ ಪಟ್ಟಣದ ಪೂರ್ವದಿಕ್ಕಿನಲ್ಲಿರುವ ಸ್ಥಳಗಳಲ್ಲಿ ತಮ್ಮ ಕುರಿಗಳನ್ನು ಮೇಯಿಸುತ್ತಿದ್ದರು. 40ಅಲ್ಲಿಯ ವಿಶಾಲ ಪ್ರದೇಶದಲ್ಲಿ ಸುಖಸಮೃದ್ಧಿಯುಳ್ಳ ಫಲವತ್ತಾದ ಹಸಿರುಗಾವಲು ಭೂಮಿ ಅವರಿಗೆ ದೊರೆಯಿತು. ಇವರಿಗಿಂತ ಮೊದಲು ಅಲ್ಲಿ ಹಾಮ್ಯರ್ ಜನಾಂಗದವರು ನೆಲೆಸಿದ್ದರು.

41 ಯೆಹೂದದ ಅರಸ ಹಿಜ್ಕೀಯನ ಕಾಲದಲ್ಲಿ ಮೇಲೆ ನಮೂದಿಸಿದ ಪುರುಷರು ಅಲ್ಲಿ ವಾಸಿಸುತ್ತಿದ್ದ ಹಾಮ್ಯರನ್ನೂ ಮೆಗೂನ್ಯರನ್ನೂ ಜಯಿಸಿ ಎಲ್ಲರನ್ನೂ ನಿರ್ನಾಮಮಾಡಿದರು. ತಮ್ಮ ಆಡುಕುರಿಗಳಿಗಾಗಿ ಧಾರಾಳವಾಗಿ ಹುಲ್ಲುಗಾವಲುಗಳಿದ್ದುದರಿಂದ ಅಲ್ಲಿಯೇ ಸ್ಥಿರವಾಗಿ ನೆಲೆಸಿದರು. 42ಸಿಮೆಯೋನನ ಕುಲದ ಇತರ ಐದುನೂರು ಜನ ಸದಸ್ಯರು ಸೇಯೀರ್ ಬೆಟ್ಟ ಪ್ರದೇಶದ ಮೇಲೆ

ದಾಳಿಮಾಡಿದರು. ಇಷ್ಷೀಯ ಮಕ್ಕಳಾದ ಪೆಲಟ್ಯ, ನೆಗರ್ಯ, ರೆಫಾಯ, ಉಜ್ಜೀಯೇಲ್ ಎಂಬವರು ಅವರ ಮುಖ್ಯಸ್ಥರು. 43ಅಲ್ಲಿ ಅವರು, ಅಳಿದುಳಿದಿದ್ದ ಅಮಾಲೇಕ್ಯರನ್ನು ಸಂಹರಿಸಿ ತಾವೇ ಅಲ್ಲಿ ನೆಲೆಸಿದರು.

## ರೂಬೇನನ ವಂಶಜರು

**5** ಯಕೋಬನ ಮಕ್ಕಳಲ್ಲಿ ಹಿರಿಯವನಾದ ರೂಬೇನನ ವಂಶಜರು ಇವರು: (ರೂಬೇನ್ ತನ್ನ ತಂದೆಯ ಉಪಪತ್ನಿಯೊಂದಿಗೆ ಅಕ್ರಮ ಸಂಬಂಧ ಬೆಳೆಸಿದ್ದರಿಂದ ಚೊಚ್ಚಲು ಮಗನ ಹಕ್ಕುಬಾಧ್ಯತೆಗಳನ್ನು ಕಳೆದುಕೊಂಡನು. ಆ ಹಕ್ಕುಗಳು ಜೋಸೆಫನಿಗೆ ಕೊಡಲ್ಪಟ್ಟವು; 2ಯೆಹೂದನ ಕುಲ ಅತಿ ಬಲಶಾಲಿಯಾಗಿ ಎಲ್ಲಾ ಕುಲಗಳಿಗೆ ನಾಯಕನೊಬ್ಬನನ್ನು ಒದಗಿಸಿಕೊಟ್ಟಿತು.) 3ಯಕೋಬನ ಮಕ್ಕಳಲ್ಲಿ ಹಿರಿಯವನಾದ ರೋಬೇನನಿಗೆ ಮಕ್ಕಳಲ್ಲಿ ಹಿರಿಯವನಾದ ರೂಬೇನನಿಗೆ ಹನೋಕ್, ಫಲ್ಲೂ, ಹೆಚ್ರೋನ್, ಕರ್ಮೀ ಎಂಬ ನಾಲ್ಕು ಜನ ಮಕ್ಕಳಿದ್ದರು.

4–6ಯೋವೇಲನ ವಂಶಜರು: ಶೆಮಾಯ, ಗೋಗ್, ಶಿಮ್ಮೀ, ಮೀಕ, ರೆವಾಯ, ಬಾಳ್ ಮತ್ತು ಬೇರ ಎಂಬವರು. ಕುಲನಾಯಕ ಬೇರನನ್ನು ಅಸ್ಸೀರಿಯದ ಅರಸ ತಿಲ್ಗತ್ಪಿಲ್ನೆಸರನು ಸೆರೆಹಿಡಿದು ಗಡೀಪಾರು ಮಾಡಿದನು.

7 ಕುಟುಂಬ ದಾಖಲೆಗಳು ರೂಬೇನನ ಗೋತ್ರದಲ್ಲಿ ಪಟ್ಟಿಮಾಡಿದ ಕುಲನಾಯಕರ ಹೆಸರುಗಳು: ಯೆಗೀಯೇಲ್, ಜೆಕರ್ಯ, 8ಅಜಾಜನ ಮಗನೂ ಶೆಮಾಯನ ಮೊಮ್ಮಗನೂ ಆದ ಬೆಳ. ಈ ಗೋತ್ರದವರು ಅರೋಯೇರದಲ್ಲಿಯೂ ಅಲ್ಲಿಂದ ನೆಬೋ ಹಾಗೂ ಬಾಳ್ಮೆಯೋನ್ ಸ್ಥಳಗಳವರೆಗಿನ ಪ್ರದೇಶಗಳಲ್ಲಿ ವಾಸಿಸಿದರು. 9ಅವರಿಗೆ ಗಿಲ್ಯಾದಿನ ಪ್ರದೇಶದಲ್ಲಿ ಅನೇಕ ಕುರಿಮಂದೆಗಳು ಇದ್ದವು. ಆದುದರಿಂದ ಯುಫ್ರೆಟಿಸ್ ನದಿಯವರೆಗೆ ಹಬ್ಬಿಕೊಂಡಿದ್ದ ಪರ್ವತದಲ್ಲಿನ ಕಾಡಿನವರೆಗೆ ಎಲ್ಲಾ ಪ್ರದೇಶವನ್ನು ವಶಪಡಿಸಿಕೊಂಡಿದ್ದರು.

10 ಅರಸ ಸೌಲನ ಕಾಲದಲ್ಲಿ ರೂಬೇನ್ ಗೋತ್ರದವರು ಹಗ್ರೀಯರ ಮೇಲೆ ದಾಳಿಮಾಡಿ, ಯುದ್ಧದಲ್ಲಿ ಅವರೆಲ್ಲರನ್ನೂ ಸಂಹರಿಸಿ, ಗಿಲ್ಯಾದಿನ ಪೂರ್ವಭಾಗದ ಪ್ರದೇಶವನ್ನು ಆಕ್ರಮಿಸಿಕೊಂಡರು.

## ಗಾದನ ವಂಶಜರು

11 ರೂಬೇನನ ಗೋತ್ರದವರು ವಾಸಿಸಿದ್ದ ಸ್ಥಳದ ಉತ್ತರಕ್ಕೆ ಬಾಷಾನಿನ ಪ್ರದೇಶದಲ್ಲಿ ಪೂರ್ವದಲ್ಲಿರುವ ಸಲ್ಕದವರೆಗೆ ಗಾದ್‌ಕುಲದವರು ವಾಸಿಸಿದರು. 12ಈ ಗೋತ್ರದಲ್ಲಿ ಯೋವೇಲ ಪ್ರಮುಖನು. ಶಾಫಾಮ್ ದ್ವಿತೀಯನು. ಯನ್ಯೈ ಮತ್ತು ಶಾಫಾಟ್ ಅವರು ಬಾಷಾನಿನಲ್ಲಿದ್ದ ಇವರ ಗೋತ್ರಗಳ ಸಂಸ್ಥಾಪಕರು. 13ಗೋತ್ರದ ಇತರ ಸದಸ್ಯರು ಸೇರಿದ ಏಳು ಕುಲಗಳವರು: ಮೀಕಾಯೇಲ್, ಮೆಷುಲ್ಲಾಮ್, ಶೆಬ, ಯೋರೈ, ಯಕ್ಕಾನ್, ಜೀಯ ಮತ್ತು ಏಬೆರ್ ಎಂಬವರು. 14ಹ್ರರೀಯ ಮಗ ಅಬೀಹೈಲನ ವಂಶಜರು: ಅಬೀಹೈಲ, ಹ್ರರೀಯ, ಯಾರೋಹ, ಗಿಲ್ಯಾದ, ಮೀಕಾಯೇಲ, ಯೆಷೀಷೈಯ, ಯಹ್ದೋವಿ, ಅಹೀಬೂಜ ಎಂಬವರು. 15ಅಬ್ದೀಯೇಲನ ಮಗನೂ ಗೂನೀಯ ಮೊಮ್ಮಗನೂ ಆದ ಅಹೀಯು ಈ ಗೋತ್ರಗಲ ಮುಖ್ಯಸ್ಥನಾಗಿದ್ದನು. 16ಅವರು ಬಾಷಾನ್ ಮತ್ತು ಗಿಲ್ಯಾದ್ ಪ್ರದೇಶಗಳಲ್ಲಿಯ ಪಟ್ಟಣಗಳಲ್ಲಿಯೂ ಶಾರೋನಿನ ಹಸಿರುಗಾವಲುಗಳ ಪ್ರದೇಶಗಳಲ್ಲಿಯೂ ನೆಲೆಸಿದರು. 17ಈ ದಾಖಲೆಗಳನ್ನು ಯೆಹೂದ ಅರಸ ಯೋತಾಮನ ಹಾಗು ಇಸ್ರಯೇಲ ಅರಸ ಯಾರೊಬ್ಬಾಮನ ಆಳ್ವಿಕೆಯ ದಿನಗಳಲ್ಲಿ ಸಂಗ್ರಹಿಸಲಾಯಿತು.

## ಪೂರ್ವದಲ್ಲಿಯ ಗೋತ್ರಗಳ ಸೈನಿಕ ದಳಗಳು

18 ರೂಬೇನ್, ಗಾದ್ ಮತ್ತು ಪೂರ್ವದಲ್ಲಿಯ ಮನಸ್ಸೆ ಕುಲಗಳಲ್ಲಿ ನಲವತ್ತನಾಲ್ಕು ಸಾವಿರದ ಏಳುನೂರ ಅರವತ್ತು ಮಂದಿ ಸೈನಿಕರು ಇದ್ದರು. ಅವರು ಗುರಾಣಿಗಳನ್ನೂ ಖಡ್ಗಗಳನ್ನೂ ಬಿಲ್ಲುಬಾಣಗಳನ್ನೂ ಉಪಯೋಗಿಸುವುದರಲ್ಲಿ ಉತ್ತಮ ತರಬೇತಿ ಹೊಂದಿದ್ದರು. 19ಅವರು ಯೆಟೂರ್,

ನಾಫೀಷ್, ನೋದಾಬ್‌ಗಳಲ್ಲಿಯ ಹಗ್ರೀಯರ ವಿರುದ್ಧ ಯುದ್ಧಮಾಡಿದರು. 20ಅವರು ದೇವರಲ್ಲಿ ನಂಬಿಕೆಯನ್ನಿಟ್ಟು ಸಹಾಯಕ್ಕಾಗಿ ಪ್ರಾರ್ಥಿಸಿದರು. ದೇವರು ಅವರ ಪ್ರಾರ್ಥನೆಯನ್ನು ಆಲಿಸಿ ಹಗ್ರೀಯರನ್ನೂ ಅವರೊಂದಿಗೆ ಒಪ್ಪಂದ ಮಾಡಿಕೊಂಡವರನ್ನೂ ಸೋಲಿಸಿ ಅವರ ಮೇಲೆ ಜಯಹೊಂದುವಂತೆ ಸಹಾಯ ಮಾಡಿದರು. 21ಅವರು ವೈರಿಗಳಿಂದ ಐವತ್ತು ಸಾವಿರ ಒಂಟೆಗಳನ್ನೂ ಎರಡು ಲಕ್ಷ ಐವತ್ತು ಸಾವಿರ ಕುರಿಗಳನ್ನೂ ಎರಡು ಸಾವಿರ ಕತ್ತೆಗಳನ್ನೂ ವಶಪಡಿಸಿ ಕೊಂಡರಲ್ಲದೆ, ಒಂದು ಲಕ್ಷ ಜನರನ್ನು ಯುದ್ಧಕೈದಿಗಳನ್ನಾಗಿ ಸೆರೆಹಿಡಿದರು. 22ಯುದ್ಧವು ದೇವರ ಚಿತ್ತಾನುಸಾರವಾದದ್ದರಿಂದ ಅವರು ಅನೇಕ ವೈರಿಗಳನ್ನು ಸಂಹರಿಸಿದರು ಮತ್ತು ತಾವು ಸೆರೆಯಾಗಿ ಹೋಗುವ ಕಾಲದವರೆಗೆ ಅಲ್ಲಿಯೇ ನೆಲೆಸಿದರು.

### ಪೂರ್ವದ ಮನಸ್ಸೆಯ ಜನಾಂಗ

23 ಪೂರ್ವದಲ್ಲಿದ್ದ ಮನಸ್ಸೆ ಜನಾಂಗದವರು ಬಾಳ್ ಹೆರ್ಮೋನ್, ಸೆನೀರ್, ಹೆರ್ಮೋನ್ ಪರ್ವತದವರೆಗಿನ ಬಾಷಾನಿನ ಪ್ರದೇಶದಲ್ಲಿ ನೆಲೆಸಿದರು. ಅವರ ಜನಸಂಖ್ಯೆ ಹೆಚ್ಚು ವೃದ್ಧಿಗೊಂಡಿತು. 24ಅವರ ಗೋತ್ರಗಳ ಮುಖ್ಯಸ್ಥರು: ಏಫೆರ್, ಇಷೀ, ಎಲೀಯೆಲ್, ಅಜ್ರೀಯೇಲ್, ಯೆರೆಮೀಯ, ಹೋದವ್ಯ, ಯೆಹ್ದೀಯೇಲ್ ಎಂಬವರು. ಇವರೆಲ್ಲರೂ ಪ್ರಖ್ಯಾತ ಸೈನಿಕರೂ ತಮ್ಮ ಗೋತ್ರಗಳ ನಾಯಕರೂ ಆಗಿದ್ದರು.

### ಪೂರ್ವದ ಗೋತ್ರಗಳ ಗಡೀಪಾರು

25 ಆದರೆ ಜನರು ತಮ್ಮ ಪಿತೃಗಳ ದೇವರಿಗೆ ಅವಿಧೇಯರಾದರು. ಆ ಪ್ರದೇಶದಿಂದ ದೇವರೇ ಹೊರದೂಡಿದ ಬೇರೆ ಜನಾಂಗಗಳ ದೇವತೆಗಳನ್ನು ಪೂಜಿಸಿದರು. 26ಆದುದರಿಂದ ಅಸ್ಸೀರಿಯದ ರಾಜಪೂಲ್ (ಇವನಿಗೆ ತಿಲ್ಗತ್ಪಿಲೆಸರ್ ಎಂಬ ಹೆಸರೂ ಇದೆ) ಅವರ ಮೇಲೆ ದಾಳಿ ಮಾಡುವಂತೆ ಇಸ್ರಯೇಲ್ ದೇವರು ಪ್ರೇರಿಸಿದರು. ಅವನು ರೂಬೇನ್, ಗಾದ್ ಮತ್ತು ಪೂರ್ವದಲ್ಲಿಯ ಮನಸ್ಸೆ ಗೋತ್ರ ಗೋತ್ರಗಳವರನ್ನು ಗಡೀಪಾರು ಮಾಡಿ ಅವರನ್ನು ಹಲಹ, ಹಾಬೋರ್, ಹಾರ ಎಂಬ ಪ್ರಾಂತ್ಯಗಳಿಗೂ ಗೋಜಾನ್ ನದಿಯ ಪ್ರದೇಶಗಳಿಗೂ ಸೆರೆ ಒಯ್ದನು. ಅವರು ಅಲ್ಲಿಯೇ ನೆಲೆಸುವಂತೆ ಮಾಡಿದನು.

### ಲೇವಿಯರ ಕುಟುಂಬಗಳು

**6** ಲೇವಿಯ ಮೂವರು ಮಕ್ಕಳು: ಗೇರ್ಷೋನ್, ಕೆಹಾತ್, ಮೆರಾರೀ.

2 ಕೆಹಾತ್‌ನಿಗೆ ನಾಲ್ವರು ಪುತ್ರರು ಇದ್ದರು. ಅವರು ಅಮ್ರಾಮ್, ಇಚ್ಹಾರ್, ಹೆಬ್ರೋನ್, ಉಜ್ಜೀಯೇಲ್ ಎಂಬವರು.

3 ಅಮ್ರಾಮನಿಗೆ ಆರೋನ್, ಮೋಶೆ ಎಂಬ ಗಂಡುಮಕ್ಕಳೂ ಮಿರ್ಯಾಮ್ ಎಂಬ ಹೆಣ್ಣು ಮಗಳೂ ಇದ್ದರು.

4 ಆರೋನನಿಗೆ ನಾದಾಬ್, ಅಬೀಹೂ, ಎಲ್ಲಾಜಾರ್, ಈತಾಮಾರ್ ಎಂಬ ನಾಲ್ಕು ಜನ ಮಕ್ಕಳಿದ್ದರು.

5 ಎಲ್ಲಾಜಾರ್‌ನ ಸಂತತಿಯವರು ಇವರು: ಫೀನೆಹಾಸ, ಅಬೀಷೂವ, ಬುಕ್ಕೀಯ, ಉಜ್ಜೀಯ, 6ಜೆರಹ್ಯ, ಮೆರಾಯೋತ, 7ಅಮರ್ಯ, ಅಹೀಟೂಬ, 8ಚಾದೋಕ, ಅಹೀಮಾಚ, 9ಅಜರ್ಯ, ಯೋಹಾನಾನ. 10ಜೆರುಸಲೇಮಿನಲ್ಲಿ ಅರಸ ಸೊಲೊಮೋನನು ಕಟ್ಟಿಸಿದ ದೇವಾಲಯದಲ್ಲಿ ಸೇವೆ ಮಾಡಿದವರು: ಅಜರ್ಯ, 11ಅಮರ್ಯ, ಅಹೀಟೂಬ, 12ಚಾದೋಕ, ಶಲ್ಲೂಮ, 13ಹಿಲ್ಕೀಯ, ಅಜರ್ಯ, 14ಸೆರಾಯ, ಯೆಹೋಚಾದಾಕ ಎಂಬವರು. 15ಸರ್ವೇಶ್ವರ ಸೆರೆಗೆ ಕಳುಹಿಸಿದ ಜುದೇಯದ ಮತ್ತು ಜೆರುಸಲೇಮಿನ ಇತರ ಜನರೊಂದಿಗೆ ಅರಸ ನೆಬೂಕದ್ನೆಚ್ಚರನು ಯೆಹೋಚಾದಾಕನನ್ನು ಗಡೀಪಾರು ಮಾಡಿದನು.

## ಲೇವಿಯ ಇತರ ವಂಶಜರು

16 ಲೇವಿಗೆ ಗೇರ್ಷೋೕಮ್, ಕೆಹಾತ್, ಮೆರಾರಿ ಎಂಬ ಮೂರು ಮಂದಿ ಮಕ್ಕಳಿದ್ದರು. 17ಅವರಿಗೂ ಮಕ್ಕಳಿದ್ದರು. ಗೇರ್ಷೋಮನು ಲಿಬ್ನೀ ಮತ್ತು ಶಿಮ್ಮೀ ಎಂಬವರ ತಂದೆ. 18ಕೆಹಾತನು ಅಮ್ರಾಮ್, ಇಚ್ಹಾರ್, ಹೆಬ್ರೋನ, ಉಜ್ಜೀಯೇಲ್ ಎಂಬವರ ತಂದೆ. 19ಮೆರಾರಿಯು ಮಹ್ಲೀ, ಮುಷೀ ಎಂಬವರ ತಂದೆ.

20 ಗೇರ್ಷೋಮನ ಸಂತತಿಯವರು: ಲಿಬ್ನೀ, ಯಹತ್, ಜಿಮ್ಮ, 21ಯೋವಾಹ, ಇದ್ದೋ, ಜೆರಹ ಮತ್ತು ಯೆವತ್ರೈ.

22 ಕೆಹಾತನ ಸಂತತಿಯವರು: ಅಮ್ಮೀನಾದಾಬ್, ಕೋರಹ, ಅಸ್ಸೀರ್, 23ಎಲ್ಕಾನಾ, ಎಬ್ಯಾಸಾಫ್, ಅಸ್ಸೀರ್, 24ತಹತ್, ಊರೀಯೇಲ್, ಉಜ್ಜೀಯ ಮತ್ತು ಸೌಲ್.

25 ಎಲ್ಕಾನನಿಗೆ ಇಬ್ಬರು ಮಕ್ಕಳಿದ್ದರು: ಅಮಾಸೈ, ಅಹೀಮೋತ್ ಎಂಬವರು. 26–27ಅಹೀಮೋತ್‌ನ ವಂಶಜರು: ಎಲ್ಕಾನ, ಚೋಫೈ, ನಹತ್, ಎಲೀಯಾಬ್, ಯೆರೋಹಾಮ್, ಎಲ್ಕಾನ ಹಾಗು ಸಮುವೇಲ.

28 ಸಮುವೇಲನಿಗೆ ಇಬ್ಬರು ಮಕ್ಕಳಿದ್ದರು: ಯೋವೇಲ್ ಹಿರಿಯನು, ಅಬೀಯ ಕಿರಿಯವನು.

29 ಮೆರಾರೀ ಸಂತತಿಯವರು: ಮಹ್ಲೀ, ಲಿಬ್ನೀ, ಶಿಮ್ಮೀ, ಉಜ್ಜಾ, 30ಶಿಮ್ಮಾ, ಹಗ್ಗೀಯ ಮತ್ತು ಅಸಾಯ ಎಂಬವರು.

## ದೇವಾಲಯದ ಸಂಗೀತಮಂಡಲಿ

31 ಮಂಜೂಷವನ್ನು ಜೆರುಸಲೇಮಿಗೆ ತಂದ ತರುವಾಯ ಆರಾಧನಾವಿಧಿಗಾಗಿ ಅರಸ ದಾವೀದನು ಸಂಗೀತಮಂಡಲಿಯನ್ನು ನೇಮಿಸಿದನು. 32ಅರಸ ಸೊಲೊಮೋನ ದೇವಾಲಯವನ್ನು ಕಟ್ಟಿಸುವುದಕ್ಕಿಂತ ಪೂರ್ವದಲ್ಲಿ ಅವರು ಸರ್ವೇಶ್ವರನ ದರ್ಶನದ ಡೇರೆಯ ಬಳಿಯಲ್ಲಿ ಕ್ರಮ ಪ್ರಕಾರ ಅನುದಿನವೂ ಕಾರ್ಯ ನಿರ್ವಹಿಸಿದರು. 33ಹೀಗೆ ಕಾರ್ಯ ನಿರ್ವಹಿಸಿದವರ ಕುಟುಂಬಗಳ ಸರಣಿಯು ಇಂತಿದೆ:

ಕೇಹತನ ಗೋತ್ರದವರು: ಪ್ರಥಮ ಸಂಗೀತ ಮಂಡಲಿಯ ನಾಯಕ ಯೋವೇಲನ ಮಗ ಹೇಮಾನ. ಇವನ ಹಿಂದಿನ ವಂಶಾವಳಿ ಯಕೋಬನವರೆಗೆ ಹೀಗಿದೆ: ಹೇಮಾನ, ಯೋವೇಲ, ಸಮುವೇಲ, 34ಎಲ್ಕಾನ, ಯೆರೋಹಾಮ, ಎಲೀಯೇಲ, ತೋಹ, 35ಚೂಫ, ಎಲ್ಕಾನ, ಮಹತ, ಅಮಾಸೈ, 36ಎಲ್ಕಾನ, ಯೋವೇಲ, ಅಜರ್ಯ, ಚೆಫನ್ಯ, 37ತಹತ, ಅಸೀರ, ಎಬ್ಯಾಸಾಫ, ಕೋರಹ, 38ಇಚ್ಹಾರ, ಕೆಹಾತ ಲೇವಿ, ಯಕೋಬ (ಇಸ್ರಯೇಲ).

39 ಆಸಾಫನು ದ್ವಿತೀಯ ಸಂಗೀತಮಂಡಳಿಯ ನಾಯಕ. ಅವನ ಪೂರ್ವಜರ ವಂಶಾವಳಿ ಲೇವಿಯವರೆಗೆ ಹೀಗಿದೆ: ಆಸಾಫ, ಬೆರಕ್ಯ, ಶಿಮ್ಮ, 40ಮಿಕಾಯೇಲ, ಬಾಸೇಯ, ಮಲ್ಕೀಯ, 41ಎತ್ನಿ, ಜೆರಹ, ಅದಾಯ, 42ಏತಾನ, ಜಿಮ್ಮ, ಶಿಮ್ಮೀ, 43ಯಹತ, ಗೇರ್ಷೋಮ, ಲೇವಿ.

44 ಮೆರಾರೀ ಕುಟುಂಬದ ಏತಾನ ತೃತೀಯ ಸಂಗೀತಮಂಡಳಿಯ ನಾಯಕ. ಅವನ ಪೂರ್ವಜರ ವಂಶಾವಳಿ ಲೇವಿಯವರೆಗೆ ಹೀಗಿದೆ: ಏತಾನ, ಕೀಷೀ, ಅಬ್ದೀಯ, ಮಲ್ಲೂಕ, 45ಹಷಬ್ಯ, ಅಮಚ್ಯ, ಹಿಲ್ಕೀಯ, 46ಅಮ್ಚೀ, ಬಾನೀ, ಶೆಮೆರ, 47ಮಹ್ಲೀ, ಮೂಷೀ, ಮೆರಾರಿ ಹಾಗು ಲೇವಿ.

48 ಅವರ ಸಹೋದರರಾದ ಇತರ ಲೆವಿಯರು ಆರಾಧನೆಯ ಸ್ಥಳದಲ್ಲಿ ಬೇರೆ ಕೆಲಸಗಳಿಗೆ ನೇಮಕವಾಗಿದ್ದರು.

## ಆರೋನನ ವಂಶಜರು

49 ಆರೋನನೂ ಅವನ ವಂಶಜರೂ ಸುಗಂಧ ಕಾಣಿಕೆಗಳನ್ನು ಅರ್ಪಿಸುತ್ತಿದ್ದರು. ಬಲಿಪೀಠದ ಮೇಲೆ ಸಮರ್ಪಿಸುವ ಬಲಿಗಳನ್ನು ಅರ್ಪಣೆಮಾಡುತ್ತಿದ್ದರು. ಅತೀ ಪರಿಶುದ್ಧ ಸ್ಥಳದ ಎಲ್ಲ ಆರಾಧನೆಗೂ ಇಸ್ರಯೇಲರ ಕ್ಷಮಾಪಣೆಗಾಗಿ ಸರ್ವೇಶ್ವರ ನೇಮಿಸಿದ ಬಲಿಯರ್ಪಣೆಗಳಿಗೂ ಧೂಪಾರತಿಗೂ ಅವರೇ ಜವಾಬ್ದಾರರು ಆಗಿದ್ದರು. ದೇವರ ಸೇವಕ ಮೋಶೆ ಕೊಟ್ಟ ನಿಯಮಗಳಿಗೆ ಅನುಸಾರವಾಗಿ ಇದೆಲ್ಲವನ್ನೂ

ಅವರು ಮಾಡುತ್ತಿದ್ದರು. 50ಆರೋನನ ವಂಶಜರು: ಎಲ್ಲಾಜಾರ್, ಫೀನೆಹಾಸ್, ಅಬೀಷೂವ, 51ಬುಕ್ಕೀ, ಉಜ್ಜೀ, ಜೆರಹ್ಯಾಹ, 52ಮೆರಾಯೋತ್, ಅಮರ್ಯ, ಅಹೀಟೂಬ್, 53ಚಾದೋಕ್ ಮತ್ತು ಅಹಿಮಾಚ್.

### ಲೇವಿಯರ ನಿವಾಸಗಳು

54 ಕೆಹಾತನ ಗೋತ್ರದ ಆರೋನನ ವಂಶಜರಿಗೆ ನೇಮಕವಾದ ಪ್ರಾಂತ್ಯ ಇದು: ಲೇವಿ ಯರಿಗೆಂದು ಪ್ರತ್ಯೇಕಿಸಿದ ಪ್ರದೇಶದ ಪ್ರಥಮ ಪಾಲನ್ನು ಅವರು ಪಡೆದುಕೊಂಡರು. 55ಇದು ಯೆಹೂದ ಸೀಮೆಯ ಹೆಬ್ರೋನನ್ನೂ ಅದರ ಸುತ್ತಲಿನ ಪ್ರದೇಶಗಳನ್ನೂ ಒಳಗೊಂಡಿತ್ತು. 56ಪಟ್ಟಣಕ್ಕೆ ಒಳಪಟ್ಟ ಗದ್ದೆಗಳೂ ಗ್ರಾಮಗಳೂ ಯೆಫುನ್ನೆಯ ಮಗ ಕಾಲೇಬನಿಗೆ ಕೊಡಲಾಗಿದ್ದವು. 57–58ಆರೋನನ ಸಂತತಿಯವರಿಗೆ ಕೊಡಲಾದ ಪಟ್ಟಣಗಳು: ಆಶ್ರಯ ನಗರವಾದ ಹೆಬ್ರೋನ್, ಯತ್ತೀರ್ ಹಾಗು ಲಿಬ್ನದ ಪಟ್ಟಣಗಳು, ಎಷ್ಟೆಮೋವ, ಹೀಲೇನ್, ದೆಬೀರ್, ಆಷಾನ್, ಬೇತ್ಷೆಮೆಷ್ ಮತ್ತು ಅವುಗಳ ಫಲವತ್ತಾದ ಪ್ರದೇಶಗಳು. 60ಬೆನ್ಯಾಮೀನ್ಯರ ಪ್ರದೇಶದಲ್ಲಿ ಫಲವತ್ತಾದ ಪ್ರದೇಶಗಳನ್ನು ಒಳಗೊಂಡ ಪಟ್ಟಣಗಳು ಅಂದರೆ ಗೆಬ, ಅಲೆಮೆತ್, ಅನಾತೋತ್ ಈ ಪಟ್ಟಣಗಳನ್ನು ಅವರಿಗೆ ಕೊಡಲಾಗಿತ್ತು. ಅವರೆಲ್ಲರ ಕುಟುಂಬಗಳ ವಾಸಕ್ಕಾಗಿ ಒಟ್ಟು ಹದಿಮೂರು ಪಟ್ಟಣಗಳು ದೊರೆತವು. 61ಪಶ್ಚಿಮದಲ್ಲಿ ಮನಸ್ಸೆ ಪ್ರದೇಶದಲ್ಲಿದ್ದ ಹತ್ತು ಪಟ್ಟಣಗಳು ಕೇಹಾತನ ಗೋತ್ರದಲ್ಲಿದ್ದ ಉಳಿದವರಿಗೆ ಕುಟುಂಬ ಕುಟುಂಬವಾಗಿ ಚೀಟು ಹಾಕಿ ಕೊಡಲಾಯಿತು.

62 ಇಸ್ಸಾಕಾರ್, ಆಶೇರ್, ನಫ್ತಾಲಿ ಹಾಗು ಬಾಷಾನಿನ ಪೂರ್ವಮನಸ್ಸೆ ಈ ಪ್ರದೇಶಗಳಲ್ಲಿ ಇದ್ದ ಹದಿಮೂರು ನಗರಗಳನ್ನು ಕುಟುಂಬಗಳಿಗೆ ಅನುಗುಣವಾಗಿ ಗೇರ್ಷೋಮನ ಗೋತ್ರಕ್ಕೆ ಕೊಡಲಾಯಿತು. 63ಇದೇ ರೀತಿಯಲ್ಲಿ ರೂಬೇನ್, ಗಾದ್, ಜೆಬುಲೂನರ ಪ್ರದೇಶಗಳಲ್ಲಿದ್ದ ಹನ್ನೆರಡು ಪಟ್ಟಣಗಳನ್ನು ಕುಟುಂಬಗಳಿಗನುಸಾರವಾಗಿ ಮೆರಾರಿಯ ಗೋತ್ರಕ್ಕೆ ಮಂಜೂರು ಮಾಡಲಾಯಿತು. 64ಹೀಗೆಯೇ ಇಸ್ರಯೇಲರು ಲೇವಿಯರ ವಾಸಕ್ಕಾಗಿ ಪಟ್ಟಣಗಳನ್ನೂ ಅವುಗಳ ಸುತ್ತಮುತ್ತಲಿನ ಫಲವತ್ತಾದ ಭೂಮಿಗಳನ್ನೂ ಕೊಟ್ಟರು. 65ಮೇಲೆ ನಮೂದಿಸಿದ ಯೆಹೂದ, ಸಿಮೆಯೋನ್, ಬೆನ್ಯಾಮೀನ್ಯರ ಪ್ರದೇಶಗಳಲ್ಲಿದ್ದ ಪಟ್ಟಣಗಳನ್ನೂ ಸಹ ಚೀಟು ಹಾಕುವುದರ ಮೂಲಕ ಹಂಚಲಾಯಿತು.

66 ಕೇಹಾತನ ಗೋತ್ರದ ಕೆಲವು ಕುಟುಂಬಗಳಿಗೆ ಎಫ್ರಯಿಮ್ ಪ್ರದೇಶದಲ್ಲಿದ್ದ ಪಟ್ಟಣಗಳನ್ನು ಕೊಡಲಾಯಿತು. 67ಎಫ್ರಯಿಮ್ ಬೆಟ್ಟದಲ್ಲಿಯ ಆಶ್ರಯ ನಗರವಾದ ಶೆಕೆಮ್, 68ಗೆಜೆರ್, ಯೊಕ್ಮೆಯಾಮ್, 69ಬೇತ್ ಹೋರೋನ್, ಅಯ್ಯಾಲೋನ್, ಗತ್ರಿಮ್ಮೋನ್ 70ಪೂರ್ವದ ಮನಸ್ಸೆ ಪ್ರದೇಶದ ಆನೇರ್, ಬಿಳ್ಳಾಮ್ ಪಟ್ಟಣಗಳು ಅವುಗಳ ಸುತ್ತಲಿನ ಫಲವತ್ತಾದ ಪ್ರದೇಶಗಳನ್ನು ಅವರಿಗಾಗಿ ಪ್ರತ್ಯೇಕಿಸಲಾಯಿತು.

71ಗೇರ್ಷೋಮ ಗೋತ್ರದ ಕುಟುಂಬಗಳಿಗೆ ಫಲವತ್ತಾದ ಪ್ರದೇಶಗಳೊಂದಿಗೆ ಕೊಡಲಾದ ಪಟ್ಟಣಗಳು: ಪಶ್ಚಿಮ ಮನಸ್ಸೆ ಪ್ರದೇಶದಲ್ಲಿದ್ದ ಬಾಷಾನಿನ ಗೋಲಾನ್ ಮತ್ತು ಅಷ್ಟಾರೋಟ್; 72ಇಸ್ಸಾಕಾರನ ಪ್ರದೇಶದಲ್ಲಿದ್ದ ಕೆದೆಷ್, ದಾಬೆರತ್, ರಾಮೋತ್, 73ಆನೇಮ್, 74ಆಶೇರನ ಪ್ರದೇಶದಲ್ಲಿದ್ದ ಮಾಷಾಲ್, ಅಬ್ದೋನ್, 75ಹುಕೋಕ್, ರೆಹೋಬ್, 76ನಫ್ತಾಲಿ ಪ್ರದೇಶದಲ್ಲಿದ್ದ ಗಲಿಲಾಯದ ಕೆದೆಷ್, ಹಮ್ಮೋನ್ ಮತ್ತು ಕಿರ್ಯಾತಯಿಮ್.

77 ಮೆರಾರಿ ಗೋತ್ರದ ಮಿಕ್ಕ ಕುಟುಂಬಗಳಿಗೆ ಫಲವತ್ತಾದ ಹೊಲಗದ್ದೆಗಳೊಂದಿಗೆ ಒದಗಿಸಲಾದ ನಗರಗಳು: ಜೆಬುಲೂನ್ ಪ್ರದೇಶದ ರಿಮ್ಮೋನೋ, ಹಾಗು ತಾಬೋರ್. 78ರೂಬೇನ್ ಪ್ರದೇಶದಲ್ಲಿದ್ದ ಜೋರ್ಡನ್ ನದಿಯ ಪೂರ್ವದಲ್ಲಿ ಜೆರಿಕೋವನ್ನು ದಾಟಿ, ತಪ್ಪಲು ಪ್ರದೇಶದಲ್ಲಿಯ ಬೆಚೆರ್, ಯಹಚ, 79ಕೆದೇಮೋತ್ ಮತ್ತು ಮೇಫಾತ್. 80ಗಾದನ ಪ್ರದೇಶದಲ್ಲಿ ಗಿಲ್ಯಾದಿನ, ರಾಮೋತ್, ಮಹನಯಿಮ್, 81ಹೆಷ್ಬೋನ್ ಹಾಗು ಯಗ್ಜೇರ್.

### ಇಸ್ಸಾಕಾರನ ವಂಶಜರು

**7** ಇಸ್ಸಾಕಾರನಿಗೆ ತೋಲ, ಪೂವ, ಯಾಶೂಬ್, ಶಿಮ್ರೋನ್ ಎಂಬ ನಾಲ್ವರು ಮಕ್ಕಳಿದ್ದರು. 2ತೋಲನಿಗೆ ಉಜ್ಜೀ, ರೆಫಾಯ ಯೆರೀಯೇಲ್, ಯಹ್ಮೈ, ಇಬ್ಸಾಮ್, ಸಮುವೇಲ್ ಎಂಬ ಆರು ಜನ ಮಕ್ಕಳಿದ್ದರು.

ಇವರು ತೋಲ ಗೋತ್ರದ ಕುಟುಂಬಗಳ ಮುಖ್ಯಸ್ಥರೂ ಪ್ರಸಿದ್ದ ವೀರರೂ ಆಗಿದ್ದರು. ಅರಸ ದಾವೀದನ ಕಾಲದಲ್ಲಿ ಅವರ ವಂಶಜರ ಸಂಖ್ಯೆ – 22,600.

3 ಉಜ್ಜೀ ಎಂಬವನಿಗೆ ಇಜ್ರ್ಯಹ್ಯಾಹ ಎಂಬ ಮಗನಿದ್ದನು. ಇವನೂ ಇವನ ನಾಲ್ವರು ಮಕ್ಕಳಾದ ಮೀಕಾಯೇಲ್, ಓಬದ್ಯ, ಯೋವೇಲ್, ಇಷ್ಷೀಯ ಎಂಬವರು ಕುಟುಂಬಗಳ ಮುಖ್ಯಸ್ಥ ರಾಗಿದ್ದರು. 4ಇವರಿಗೆ ಅನೇಕ ಪತ್ನಿಯರೂ ಮಕ್ಕಳೂ ಇದ್ದು ಅವರ ವಂಶಜರಲ್ಲಿ – 36,000 ಪುರುಷರನ್ನು ಸೈನ್ಯದಲ್ಲಿ ಸೇವೆಮಾಡಲು ಒದಗಿಸಿಕೊಟ್ಟರು.

5 ಇಸ್ಸಾಕಾರನ ಗೋತ್ರದ ಎಲ್ಲಾ ಕುಟುಂಬಗಳ ಅಧಿಕೃತ ದಾಖಲೆಗಳು – 87,000 ಪುರುಷರು ಸೈನ್ಯದಲ್ಲಿರಲು ಯೋಗ್ಯರಾಗಿದ್ದರೆಂದು ಪಟ್ಟಿ ಮಾಡಿರುತ್ತವೆ.

**ಬೆನ್ಯಾಮೀನ್ ಹಾಗು ದಾನ್ ವಂಶಜರು**

6 ಬೆನ್ಯಾಮೀನನಿಗೆ ಮೂವರು ಮಕ್ಕಳು: ಬೆಳ, ಬೆಕೆರ್, ಯದೀಯಯೇಲ್ ಎಂಬವರು. 7ಬೆಳನಿಗೆ ಐದು ಜನ ಮಕ್ಕಳು: ಎಚ್ಬೋನ್, ಉಜ್ಜೀ, ಉಜ್ಜೀಯೇಲ್, ಯೆರೀಮೋತ್ ಮತ್ತು ಈರೀ ಎಂಬವರು. ಇವರು ಗೋತ್ರದ ಕುಟುಂಬಗಳ ಮುಖ್ಯಸ್ಥರೂ ಪ್ರಸಿದ್ಧ ಯುದ್ಧವೀರರೂ ಆಗಿದ್ದರು. ಇವರ ವಂಶಜರಲ್ಲಿ 22,034 ಜನರು ಸೈನ್ಯದಲ್ಲಿ ಕೆಲಸಮಾಡಲು ಯೋಗ್ಯರಾಗಿದ್ದರು.

8 ಬೆಕೆರನಿಗೆ ಒಂಬತ್ತು ಜನ ಮಕ್ಕಳು: ಜೆಮೀರ, ಯೋವಾಷ್, ಎಲೀಯೆಜೆರ್, ಎಲ್ಯೋ ವೇನೈ, ಒಮ್ರಿ, ಯೆರೀಮೋತ್, ಅಬೀಯ, ಅನಾತೋತ್, ಆಲಿಮೆತ್ ಎಂಬವರೇ. 9ಕುಟುಂಬ ಗಳಿಗನುಗುಣವಾದ ಅಧಿಕೃತ ದಾಖಲೆ – 20,200 ಪುರುಷರು ಅವರ ವಂಶಜರಲ್ಲಿ ಸೈನ್ಯ ಸೇರಲು ಅರ್ಹರಾಗಿದ್ದರೆಂದು ಪಟ್ಟಿಮಾಡಿದೆ.

10 ಯದೀಯಯೇಲನಿಗೆ ಬಿಲ್ಹಾನ್ ಎಂಬ ಮಗನಿದ್ದ. ಬಿಲ್ಹಾನ್‌ಗೆ ಏಳುಜನ ಮಕ್ಕಳು: ಯೆಯೂಷ್, ಬೆನ್ಯಾಮೀನ್, ಏಹೂದ್, ಕೆನಾನ, ಜೇತಾನ್, ತಾರ್ಷೀಷ್, ಅಹೀಷೆಹರ್ ಎಂಬವರು. 11ಅವರೆಲ್ಲರೂ ತಮ್ಮ ಗೋತ್ರದ ಕುಟುಂಬಗಳ ಮುಖ್ಯಸ್ಥರೂ ಪ್ರಸಿದ್ಧ ಯುದ್ಧವೀರರೂ ಆಗಿದ್ದರು. ಅವರ ವಂಶಜರಲ್ಲಿ 17,200 ಜನರು ಸೈನ್ಯದಲ್ಲಿರಲು ಅರ್ಹತೆ ಪಡೆದಿದ್ದರು. 12ಶುಪ್ಪೀಮ್ ಮತ್ತು ಹುಪ್ಪೀಮ್ ಎಂಬವರೂ ಸಹ ಇದೇ ಗೋತ್ರಕ್ಕೆ ಸೇರಿದವರು. ದಾನ್‌ಗೆ ಹುಶೀಮ ಎಂಬ ಮಗನಿದ್ದನು.

**ನಫ್ತಾಲಿಯ ವಂಶಜರು**

13 ನಫ್ತಾಲಿಗೆ ನಾಲ್ಕುಜನ ಮಕ್ಕಳು: ಯಹಚಿಯೇಲ್, ಗೂನೀ, ಯೆಚೇರ್, ಶಲ್ಲೂಮ್ ಎಂಬವರು. ಇವರು ಬಿಲ್ಹಳ ಸಂತಾನದವರು.

**ಮನಸ್ಸೆಯ ವಂಶಜರು**

14 ಅರಾಮ್ಯ ಉಪಪತ್ನಿಯಿಂದ ಮನಸ್ಸೆಗೆ ಅಸ್ರಿಯೇಲ್, ಮಾಕೀರ, ಎಂಬಿಬ್ಬರು ಮಕ್ಕಳಿದ್ದರು. ಮಾಕೀರ ಗಿಲ್ಯಾದನ ತಂದೆ. 15ಮಾಕೀರನು ಹುಪ್ಪೀಮ್ ಮತ್ತು ಶುಪ್ಪೀಮರ ಸೋದರಿಯಾದ ಮಾಕಳನ್ನು ಮದುವೆಯಾದನು. ಚೆಲೋಫಾದ್ ಮಾಕೀರನ ದ್ವಿತೀಯ ಪುತ್ರ. ಅವನಿಗೆ ಕೇವಲ ಹೆಣ್ಣುಮಕ್ಕಳೇ ಇದ್ದರು.

16 ಮಾಕೀರನ ಹೆಂಡತಿ ಮಾಕ ಇಬ್ಬರು ಮಕ್ಕಳಿಗೆ ಜನ್ಮವಿತ್ತಳು. ಅವರಿಗೆ ಪೆರೆಷ್ ಮತ್ತು ಶೆರೆಷ್ ಎಂದು ಹೆಸರಿಟ್ಟನು. ಪೆರೆಷನಿಗೆ ಊಲಾಮ್, ರೆಕೆಮ್ ಎಂಬಿಬ್ಬರು ಮಕ್ಕಳು. 17ಉಲಾಮ್‌ಗೆ ಬಿದಾನ್ ಎಂಬ ಒಬ್ಬ ಮಗನಿದ್ದ. ಇವರೆಲ್ಲರೂ ಮಾಕೀರನ ಮಗನೂ ಮನಸ್ಸೆಯ ಮೊಮ್ಮಗನೂ ಆದ ಗಿಲ್ಯಾದನ ವಂಶಜರು.

18 ಗಿಲ್ಯಾದನ ತಂಗಿ ಹಮ್ಮೋಲೆಕೆತಳು ಈಷ್ಹೋದ್, ಅಬೀಯೆಜೆರ್, ಮಹ್ಲ ಎಂಬ ಮೂರು ಮಕ್ಕಳಿಗೆ ಜನ್ಮವಿತ್ತಳು. 19ಶೆಮೀದನ ಮಕ್ಕಳು: ಅಹ್ಯಾನ್, ಶೆಕೆಮ್, ಲಿಕ್ಹೀ, ಅನೀಯಾಮ್ ಎಂಬವರು.

**ಎಫ್ರಯಿಮನ ವಂಶಜರು**

20 ಎಫ್ರಯಿಮನ ಸಂತಾನದವರು: ಶೂತೆಲಹ, ಬೆರೆದ್, ತಹತ್, ಎಲ್ಲಾದ, ತಹತ್, 21ಜಾಬಾದ್, ಶೂತೆಲಹ ಎಂಬವರು. ಶೂತೆಲಹನಲ್ಲದೆ ಎಫ್ರಯಿಮನಿಗೆ ಎಜೆರ್, ಎಲ್ಲಾದ್ ಎಂಬಿಬ್ಬರು ಮಕ್ಕಳಿದ್ದರು. ಇವರು ಗತ್‌ನ ಮೂಲನಿವಾಸಿಗಳ ದನಗಳನ್ನು ಕದಿಯಲು ಪ್ರಯತ್ನಿಸಿದಾಗ ಕೊಲೆಗೀಡಾದರು. 22ಇವರ ತಂದೆ ಎಫ್ರಯಿಮ್ ಅನೇಕ ದಿನಗಳವರೆಗೆ ಇವರಿಗಾಗಿ ಶೋಕಿಸಿದನು. ಅವನ ಸಹೋದರರು ಬಂದು ಅವನಿಗೆ ಸಂತಾಪ ಸೂಚಿಸಿದರು. 23ಅನಂತರ ಅವನು ತನ್ನ ಹೆಂಡತಿಯನ್ನು ಸಂಗಮಿಸಲು ಆಕೆ ಗರ್ಭಧರಿಸಿ ಗಂಡು ಮಗುವಿಗೆ ಜನ್ಮವಿತ್ತಳು. ತಮ್ಮ ಕುಟುಂಬಕ್ಕೆ ಬಂದಿದ್ದ ಕಂಟಕದ ಜ್ಞಾಪಕಾರ್ಥವಾಗಿ ಅವನಿಗೆ ಬೆರೀಯ ಎಂದು ಹೆಸರಿಟ್ಟರು.

24 ಎಫ್ರಯಿಮನಿಗೆ ಶೇರ ಎಂಬ ಮಗಳು ಇದ್ದಳು. ಈಕೆ ಮೇಲಿನ ಹಾಗು ಕೆಳಗಿನ ಬೇತ್ ಹೋರೋನ್ ಪಟ್ಟಣಗಳನ್ನೂ ಉಜ್ಜೇನ್ ಶೇರ ಎಂಬ ಪಟ್ಟಣವನ್ನೂ ಕಟ್ಟಿಸಿದಳು.

25 ಎಫ್ರಯಿಮನಿಗೆ ರೆಫಹ ಎಂಬ ಇನ್ನೊಬ್ಬ ಮಗನಿದ್ದನು. ಅವನ ವಂಶಜರು: ರೆಷೆಫ್, ತೆಲಹ, ತಹನ್, ಲದ್ದಾನ್, 26ಅಮ್ಮೀಹೂದ್, ಎಲೀಷಾಮ, 27ನೋನ್, ಯೆಹೋಷುವ ಎಂಬವರೇ.

28 ಅವರು ವಶಪಡಿಸಿಕೊಂಡು ವಾಸಿಸಿದ ಪ್ರದೇಶ ಬೇತೇಲ್ ಹಾಗು ಅದರ ಸುತ್ತಮುತ್ತಲಿನ ಪ್ರದೇಶಗಳನ್ನೂ ಪೂರ್ವದಲ್ಲಿ ನಾರಾನ್‌ವರೆಗೆ ಪಶ್ಚಿಮದಲ್ಲಿ ಗೆಜೆರದವರೆಗೆ ಮತ್ತು ಅವುಗಳ ಸುತ್ತಮುತ್ತಲಿನ ಪಟ್ಟಣಗಳನ್ನೂ ಒಳಗೊಂಡಿತ್ತು. ಶೆಕೆಮ್, ಅಯ್ಯಾ ಪಟ್ಟಣಗಳೂ ಅವುಗಳ ಗ್ರಾಮಗಳೂ ಅದರಲ್ಲಿ ಸೇರಿದ್ದವು. 29ಮನಸ್ಸೆಯ ಸಂತಾನದವರು ಬೇತ್ಷಾನ್, ತಾನಾಕ್, ಮೆಗಿದ್ದೋ, ದೋರ್ ಎಂಬ ಪಟ್ಟಣಗಳನ್ನೂ ಅವುಗಳ ಸುತ್ತ ಮುತ್ತಲಿನ ಗ್ರಾಮಗಳನ್ನೂ ತಮ್ಮ ವಶದಲ್ಲಿಟ್ಟು ಕೊಂಡಿದ್ದರು. ಯಕೋಬನ ಮಗ ಜೋಸೆಫನ ಸಂತತಿಯವರು ಈ ಎಲ್ಲಾ ಪ್ರದೇಶಗಳಲ್ಲಿ ವಾಸಿಸಿದರು.

**ಆಶೇರನ ವಂಶಜರು**

30 ಆಶೇರನ ಸಂತಾನದವರು: ಇಮ್ನ, ಇಷ್ವ, ಇಷ್ವೀ, ಬೆರೀಯ ಎಂಬವರು. ಇವರ ತಂಗಿ ಸೆರಹ. 31ಬೆರೀಯನ ಮಕ್ಕಳು – ಹೆಬೆರ್, ಬಿರ್ಜೈತ್ ಊರಿನ ಸ್ಥಾಪಕನಾದ ಮಲ್ಕೀಯೇಲ್ ಎಂಬವರು. 32ಹೆಬೆರ್‌ನ ಮಕ್ಕಳು – ಯಫ್ಲೇಟ್, ಶೋಮೇರ್, ಹೋತಾಮ್ ಹಾಗು ಇವರ ತಂಗಿ ಶೂವ, 33ಯಫ್ಲೇಟ್‌ನ ಮಕ್ಕಳು – ಪಾಸಕ್, ಬಿಮ್ಹಾಲ್, ಅಶ್ವಾತ್ ಎಂಬವರು. 34ಶೆಮೆರನ ಮಕ್ಕಳು – ಅಹೀರೊಹ್ಗ, ಹುಬ್ಬ ಮತ್ತು ಅರಾಮ್. 35ಇವನ ತಮ್ಮ ಹೆಲೆಮನ ಮಕ್ಕಳು – ಜೋಫಹ, ಇಮ್ನ, ಶೇಲೆಷ್ ಮತ್ತು ಅಮಾಲ್. 36ಜೋಫಹನ ಮಕ್ಕಳು – ಸೂಹ, ಹರ್ನೆಫೆರ್, ಶೂಗಾಲ್, ಬೇರೀ, 37ಇಮ್ರ, ಬೆಚೆರ್, ಹೋದ್, ಶಮ್ಮ, ಶಿಲ್ಷ, ಇತ್ರಾನ್ ಹಾಗೂ ಬೇರ. 38ಯೆತೆರನ ಮಕ್ಕಳು – ಯೆಫುನ್ನೆ, ಪಿಸ್ಪ ಹಾಗೂ ಅರಾ. 39ಉಲ್ಲನ ಮಕ್ಕಳು – ಆರಹ, ಹನ್ನೀಯೇಲ್, ರಿಚ್ಯ ಎಂಬವರು. 40ಇವರೆಲ್ಲರೂ ಆಶೇರನ ವಂಶಜರು. ಇವರು ಕುಟುಂಬಗಳ ಮುಖ್ಯಸ್ಥರೂ ಯುದ್ಧವೀರರೂ ಶ್ರೇಷ್ಠನಾಯಕರೂ ಆಗಿದ್ದರು. ಆಶೇರನ ವಂಶಜರಲ್ಲಿ – 26,000 ಪುರುಷರು ಸೈನ್ಯದಲ್ಲಿ ಇರಲು ಅರ್ಹತೆ ಪಡೆದಿದ್ದರು.

**ಬೆನ್ಯಾಮೀನ್ ವಂಶಜರು**

**8** ಬೆನ್ಯಾಮೀನನಿಗೆ ಐದು ಜನ ಮಕ್ಕಳಿದ್ದರು. ವಯಸ್ಸಿಗನುಗುಣವಾಗಿ ಅವರು ಹೆಸರುಗಳು ಇಂತಿವೆ – ಬೆಳ, ಅಷ್ಬೇಲ್, ಅಹ್ರಹ, 2ನೋಹ ಮತ್ತು ರಾಫ.

3 ಬೆಳನ ಮಕ್ಕಳು – ಅದ್ದಾರ್, ಗೇರ, ಅಬೀಹೂದ್, 4ಅಬೀಷೂವ, ನಾಮಾನ್, ಅಹೋಹ, 5ಗೇರ, ಶೆಪೂಫಾನ್, ಹೂರಾಮ್ ಎಂಬವರು.

6–7ಏಹೂದನ ಸಂತಾನದವರು–ನಾಮಾನ್, ಅಹೀಯ, ಗೇರ ಎಂಬವರು. ಅವರು ಗೇಬದಲ್ಲಿ ವಾಸಿಸಿದ ಕುಟುಂಬಗಳ ಮುಖ್ಯಸ್ಥರು. ಆದರೆ ಅವರು ಹೊರಗೆ ಹೋಗುವಂತೆ ಒತ್ತಾಯಿಸಲ್ಪಟ್ಟಾಗ

ಮಾನಹತಿಯಲ್ಲಿ ವಾಸಿಸಲು ಹೋದರು. ಹೀಗೆ ಹೊರಡುವಾಗ ಉಜ್ಜ ಮತ್ತು ಅಹೀಹೂದ್‍ನ ತಂದೆ ಗೇರ ಮುಂದಾಳಾಗಿದ್ದರು.

8–9ಶಹರಯಿಮನು ತನ್ನ ಇಬ್ಬರು ಪತ್ನಿಯರಾದ ಹೂಷೀಮ್ ಮತ್ತು ಬಾರ ಎಂಬವರಿಂದ ವಿವಾಹ ವಿಚ್ಛೇದನ ಮಾಡಿಕೊಂಡನು. ಅನಂತರ ಮೋವಾಬ್ ದೇಶದಲ್ಲಿ ವಾಸಿಸಿದನು. ಅಲ್ಲಿ ಹೋದೆಷ್ ಎಂಬಾಕೆಯನ್ನು ವಿವಾಹವಾಗಿ ಏಳು ಜನ ಮಕ್ಕಳನ್ನು ಪಡೆದನು – ಯೋವಾಬ್, ಚಿಬ್ಯ, ಮೇಷ, ಮಲ್ಕಾಮ್, ಯೆಯೂಚ್, ಸಾಕ್ಯ, ಮಿರ್ಮ ಎಂದು ಅವರ ಹೆಸರು. 10ಅವನ ಎಲ್ಲಾ ಮಕ್ಕಳು ಗೋತ್ರಪ್ರಧಾನರು.

11 ಹುಷೀಮ್ ಎಂಬುವಳಿಂದ ಅವನಿಗೆ ಅಬೀಟೂಬ್, ಎಲ್ಪಾಲ ಎಂಬಿಬ್ಬರು ಮಕ್ಕಳು ಜನಿಸಿದರು. 12ಎಲ್ಪಾಲನಿಗೆ ಮೂರು ಜನ ಮಕ್ಕಳು – ಏಬೆರ್, ಮಿಷ್ಷಾಮ್, ಶೆಮೆದ್ ಎಂಬವರು. ಓನೋ, ಲೋದ್ ಎಂಬ ಪಟ್ಟಣಗಳನ್ನು ಅವುಗಳ ಸುತ್ತುಮುತ್ತಲಿನ ಗ್ರಾಮಗಳನ್ನೂ ಕಟ್ಟಿಸಿದವನು ಶೆಮೆದ್.

13 ಗತ್ ಪಟ್ಟಣದ ಜನರನ್ನು ಹೊಡೆದೋಡಿಸಿ ಅಲ್ಲಿ ನೆಲೆಸಿದ ಹಾಗು ಅಯ್ಯಾಲೋನ್ ಪಟ್ಟಣದಲ್ಲಿ ವಾಸಿಸಿದ ಕುಟುಂಬಗಳ ಮುಖ್ಯಸ್ಥರು – ಬೆರೀಯ, ಮತ್ತು ಶಮ ಎಂಬವರು. 14ಬೆರೀಯನ ವಂಶಜರಲ್ಲಿ ಅಹ್ಯೋ, ಶಾಷಕ್, ಯೆರೇಮೋತ್, 15ಜೆಬದ್ಯ, ಅರಾದ್, ಎದೆರ್, 16ಮಿಕಾಯೇಲ್, ಇಷ್ಪ, ಯೋಹ ಎಂಬವರೂ ಸೇರಿದ್ದರು.

## ಜೆರುಸಲೇಮಿನಲ್ಲಿ ನೆಲೆಸಿದ ಬೆನ್ಯಾಮೀನರು

17 ಎಲ್ಪಾಲನ ಮಕ್ಕಳು – ಜೆಬದ್ಯ, ಮೆಷುಲ್ಲಾಮ್, ಹಿಜ್ಕೀ, ಹೆಬೆರ್, 18ಇಷ್ಮೆರೈ, ಇಜ್ಲೀಯ, ಹಾಗೂ ಯೋಬಾಬ್ ಎಂಬವರು.

19 ಶಿಮ್ಮೀಯ ಮಕ್ಕಳು – ಯಾಕೀಮ್, ಜಿಕ್ರೀ, ಜಬ್ದೀ, 20ಎಲೀಗೇನೈ, ಚಿಲ್ಲೆತೈ, ಎಲೀಯೇಲ್, 21ಅದಾಯ, ಬೆರಾಯ ಮತ್ತು ಶಿಮ್ರಾತ್ ಎಂಬವರು.

22 ಶಾಷಕನ ಮಕ್ಕಳು – ಇಷ್ಪಾನ್, ಏಬೆರ್, ಎಲೀಯೇಲ್, 23ಅಬ್ದೋನ್, ಜಿಕ್ರಿ, ಹನಾನ್, 24ಹನನ್ಯ, ಏಲಾಮ್, ಅನೆತೋತೀಯ, 25ಇಫ್ದೆಯಾಹ, ಪೆನೂವೇಲ್ ಎಂಬವರು.

26 ಯೆರೋಹಾಮನ ಮಕ್ಕಳು – ಶಂಷೆರೈ, ಶೆಹರ್ಯ, ಅತಲ್ಯ, 27ಯಾರೆಷ್ಯ, ಏಲೀಯ ಹಾಗೂ ಜಿಕ್ರೀ ಎಂಬವರು.

28 ಇವರು ಜೆರುಸಲೇಮಿನಲ್ಲಿ ನೆಲೆಸಿದ ಪುರಾತನ ಕುಟುಂಬಗಳ ಮುಖ್ಯಸ್ಥರೂ ಅವರ ಪ್ರಮುಖ ವಂಶಜರೂ ಆಗಿದ್ದಾರೆ.

## ಗಿಬೆಯೋನ್, ಜೆರುಸಲೇಮಗಳಲ್ಲಿಯ ಬೆನ್ಯಾಮೀನರು

29 ಯೆಗೂವೇಲ, ಗಿಬ್ಯೋನ ಪಟ್ಟಣವನ್ನು ಕಟ್ಟಿಸಿ ಅಲ್ಲಿ ನೆಲೆಸಿದನು. ಅವನ ಹೆಂಡತಿ ಮಾಕ ಎಂಬುವಳು. 30ಅಬ್ದೋನ ಅವನ ಹಿರಿಯ ಮಗ. ಚೂರ್, ಕೀಷ್, ಬಾಳ್, ನಾದಾಬ್, 31ಗೆದೋರ್, ಅಹ್ಯೋ, ಜೆಕೆರ್, 32ಮತ್ತು ಶಿಮ್ಮೀಯ ತಂದೆ ಮಿಕ್ಲೋತ್ ಎಂಬವರು ಅವನ ಇತರ ಮಕ್ಕಳು. ಅವರ ವಂಶಜರು ಜೆರುಸಲೇಮಿನಲ್ಲಿ ತಮ್ಮ ಗೋತ್ರದ ಇತರ ಕುಟುಂಬಗಳ ಹತ್ತಿರ ವಾಸಿಸಿದರು.

## ಅರಸ ಸೌಲನ ಕುಟುಂಬ

33 ಕೀಷನ ತಂದೆ ನೇರ. ಕೀಷ ಅರಸ ಸೌಲನ ತಂದೆ. ಯೋನಾತಾನ್, ಮಲ್ಕೀಷೂವ, ಅಬೀನಾದಾಬ್, ಎಷ್ಬಾಳ ಎಂಬವರು ಸೌಲನ ಮಕ್ಕಳು. 34ಯೋನಾತಾನ್ ಮೆರೀಬ್ಬಾಳನ ತಂದೆ. ಇವನು ಮೀಕನ ತಂದೆ.

35 ಮೀಕನಿಗೆ ನಾಲ್ವರು ಮಕ್ಕಳು – ಪೀತೋನ್, ಮೆಲಿಕ್, ತರೇಯ, ಆಹಾಜ್ ಎಂಬವರು. 36ಆಹಾಜ ಯೆಹೋವಾದ್ದಾಹನ ತಂದೆ. ಇವನಿಗೆ ಮೂರು ಜನ ಮಕ್ಕಳು – ಅಲೆಮೆತ್, ಅಜ್ಮಾವೆತ್,

ಜಿಮ್ರೀ ಎಂಬವರು. ಜಿಮ್ರೀ ಮೋಚನ ತಂದೆ. 37ಮೋಚನು ಬಿನ್ನನಿಗೆ, ಬಿನ್ನನು ರಾಫನಿಗೆ, ರಾಫನು ಎಲ್ಲಾಸನಿಗೆ, ಎಲ್ಲಾಸ ಅಚೇಲನಿಗೆ ತಂದೆಯಾಗಿದ್ದರು.

38 ಅಚೇಲನಿಗೆ ಆರು ಜನ ಮಕ್ಕಳಿದ್ದರು: ಅಜ್ರೀಕಾಮ್, ಓಕೆರೂ, ಇಷ್ಮಾಯೇಲ್, ಶೆಚುರ್ಯ, ಓಬದ್ಯ, ಹಾನಾನ್ ಎಂಬವರು. 39ಅಚೇಲನ ತಮ್ಮನಾದ ಏಷೆಕನ ಮಕ್ಕಳು – ಮೊದಲನೆಯವನು ಊಲಾಮ್, ಎರಡನೆಯವನು ಯೆಯೂಷ್, ಮೂರನೆಯವನು ಎಲೀಫೆಲೆಟ್ ಎಂಬವರು. 40ಊಲಾಮನ ಮಕ್ಕಳು ಶೂರ ಸೈನಿಕರೂ ಬಿಲ್ಲುವಿದ್ಯೆಯಲ್ಲಿ ಪರಿಣಿತರೂ ಆಗಿದ್ದರು. ಅವನಿಗೆ ಒಟ್ಟು ಒಂದುನೂರ ಐವತ್ತು ಮಂದಿ ಮಕ್ಕಳು ಮೊಮ್ಮಕ್ಕಳೂ ಇದ್ದರು. ಇವರೆಲ್ಲರೂ ಬೆನ್ಯಾಮೀನ್ ಗೋತ್ರದವರು.

### ಸೆರೆಯಿಂದ ಹಿಂದಿರುಗಿದವರು

**9** ಇಸ್ರಯೇಲಿನ ಎಲ್ಲಾ ಜನರನ್ನು ಅವರ ಕುಟುಂಬಗಳಿಗೆ ಅನುಗುಣವಾಗಿ ಪಟ್ಟಿ ಮಾಡಲಾಗಿದೆ. ಈ ಮಾಹಿತಿ 'ಇಸ್ರಯೇಲಿನ ಅರಸ ಪುಸ್ತಕ'ದಲ್ಲಿ ದಾಖಲಾಗಿದೆ.

ಯೆಹೂದ್ಯರು ತಮ್ಮ ಪಾಪಕ್ಕೆ ಶಿಕ್ಷೆಯಾಗಿ ಬಾಬಿಲೋನಿಗೆ ಸೆರೆಯಾಳುಗಳಾಗಿ ಹೋಗಬೇಕಾಯಿತು. 2ಪಟ್ಟಣಗಳಲ್ಲಿದ್ದ ತಮ್ಮ ಸೊತ್ತುಗಳಿಗೆ ಹಿಂದಿರುಗಿ ಬಂದವರಲ್ಲಿ ಇಸ್ರಯೇಲಿನ ಜನಸಾಮಾನ್ಯರೂ ಯಾಜಕರೂ ಲೇವಿಯರೂ ದೇವಾಲಯದ ಕೆಲಸದವರೂ ಸೇರಿದ್ದರು. 3ಯೆಹೂದ, ಬೆನ್ಯಾಮೀನ್, ಎಫ್ರಯಿಮ್ ಮತ್ತು ಮನಸ್ಸೆ ಗೋತ್ರಗಳವರು ಜೆರುಸಲೇಮಿನಲ್ಲಿ ವಾಸಮಾಡಲು ಹೋದರು.

4–6ಜೆರುಸಲೇಮಿನಲ್ಲಿ ಯೆಹೂದನ ಗೋತ್ರದ ಆರುನೂರ ತೊಂಬತ್ತು ಕುಟುಂಬಗಳು ನೆಲದವು. ಯೆಹೂದನ ಮಗ ಪೆರೆಚನ ಸಂತತಿಯವರಿಗೆ ಅಮ್ಮೀಹೂದನ ಮಗನೂ ಒಮ್ರಿಯ ಮೊಮ್ಮಗನೂ ಆದ ಊತ್ರೈ ನಾಯಕನಾಗಿದ್ದನು. ಇಮ್ರಿ ಮತ್ತು ಬಾನಿ ಎಂಬವರು ಅವನ ಪೂರ್ವಜರಲ್ಲಿ ಇಬ್ಬರು. ಯೆಹೂದನ ಮಗ ಶೇಲಾಹನ ಸಂತಾನದವರಿಗೆ ಅಸಾಯನು ನಾಯಕ ಹಾಗೂ ಗೋತ್ರದ ಮುಖ್ಯಸ್ಥನಾಗಿದ್ದನು.

ಯೆಹೂದನ ಮಗ ಜೆರಹನ ಸಂತತಿಯವರಿಗೆ ಯೆಯೂವೇಲ್ ನಾಯಕನಾಗಿದ್ದನು. 7–8ಜೆರುಸಲೇಮಿನಲ್ಲಿ ನೆಲೆಸಿದ ಬೆನ್ಯಾಮೀನನ ಗೋತ್ರದವರು: ಸಲ್ಲೂ – ಇವನು ಮೆಷುಲ್ಲಾಮನ ಮಗ ಹೋದವ್ಯನ ಮೊಮ್ಮಗ ಹಾಗೂ ಹಸ್ಸೆನುವಾಹನ ಮರಿಮಗ. ಇಬ್ನಿಯಾಹ – ಇವನು ಯೆರೋಹಾಮನ ಮಗ. ಏಲಾ – ಇವನು ಶೆಫಟ್ಯನ ಮಗ ರೆಯೂವೇಲನ ಮೊಮ್ಮಗ, ಇಬ್ನೀಯಾಹನ ಮರಿಮಗ.

9 ಈ ಗೋತ್ರದ ಒಂಬೈನೂರ ಐವತ್ತಾರು ಕುಟುಂಬಗಳು ಅಲ್ಲಿ ನೆಲೆಸಿದ್ದವು. ಮೇಲೆ ಹೇಳಿದವರು ಆಯಾ ಗೋತ್ರಗಳ ಪ್ರಧಾನ ಪುರುಷರಾಗಿದ್ದರು.

### ಜೆರುಸಲೇಮಿನಲ್ಲಿ ನೆಲೆಸಿದ ಯಾಜಕರು

10–12ಜೆರುಸಲೇಮಿನಲ್ಲಿ ನೆಲೆಸಿದ ಯಾಜಕರು: ಯೆದಾಯ, ಯೆಹೋಯಾರೀಬ್, ಯಾಕೀನ್, ಹಿಲ್ಕೀಯನ ಮಗ ಅಜರ್ಯ – ಇವನು ದೇವಾಲಯದ ಪ್ರಮುಖ ಅಧಿಕಾರಿ. ಇವನ ಪೂರ್ವಜರಲ್ಲಿ ಮೆಷುಲ್ಲಾಮ, ಚಾದೋಕ್, ಮೆರಾಯೋತ್ ಮತ್ತು ಅಹೀಚೂಬ ಎಂಬವರು ಇದ್ದರು. ಯೆಹೋರಾಮನ ಮಗ ಅದಾಯ: ಇವನ ಪೂರ್ವಜರಲ್ಲಿ ಪಶ್ಹೂರ, ಮಲ್ಕೀಯ ಎಂಬವರಿದ್ದರು. ಅದೀಯೋಲನ ಮಗ ಮಾಸ್ಕೆ: ಇವನ ಪೂರ್ವಜರಲ್ಲಿ ಯಹ್ಜೇರ, ಮೆಷುಲ್ಲಾಮ, ಮೆಷಿಲ್ಲೇಮೋತ, ಇಮ್ಮೇರ ಎಂಬವರಿದ್ದರು.

13 ಗೋತ್ರಗಳ ಮುಖ್ಯಸ್ಥರಾದ ಯಾಜಕರ ಒಟ್ಟು ಸಂಖ್ಯೆ ಒಂದು ಸಾವಿರದ ಏಳನೂರ ಅರವತ್ತು ಮಂದಿ. ದೇವಾಲಯದ ಎಲ್ಲಾ ಕೆಲಸಗಳಲ್ಲಿ ಅವರು ನಿಪುಣರಾಗಿದ್ದರು.

### ಜೆರುಸಲೇಮಿನಲ್ಲಿ ನೆಲಸಿದ ಲೇವಿಯರು

14–16ಜೆರುಸಲೇಮಿನಲ್ಲಿ ನೆಲೆಸಿದ ಲೇವಿಯರು: ಹಷಬ್ಯನ ಮಗ ಶೆಮಾಯ; ಇವನ ಪೂರ್ವಜರಲ್ಲಿ ಅಜ್ರೀಕಾಮ, ಹಷಬ್ಯ ಹಾಗು ಮೆರಾರೀ ಗೋತ್ರದ ಬಕ್ಬಕ್ಕರ್, ಹೆರೆಷ್, ಗಾಲಾಲ್ ಎಂಬವರಿದ್ದರು. ಶೆಮಾಯನ ಮಗ ಓಬದ್ಯ: ಇವನ ಪೂರ್ವಜರಲ್ಲಿ ಗಾಲಾಲ, ಯದೂತೂನ ಎಂಬವರಿದ್ದರು.

ಮೀಕನ ಮಗ ಮತ್ತನ್ಯ : ಇವನ ಪೂರ್ವಜರಲ್ಲಿ ಜಿಕ್ರೀ, ಆಸಾಫ ಎಂಬವರಿದ್ದರು.

ಆಸನ ಮಗನೂ ಎಲ್ಕಾನನ ಮೊಮ್ಮಗನೂ ಆದ ಬೆರೆಕ್ಯ; ನಟೋಫಾತ್ಯರ ಗ್ರಾಮಗಳಲ್ಲಿ ಇವನು ನೆಲೆಸಿದ್ದನು.

**ಜೆರುಸಲೇಮಿನಲ್ಲಿ ನೆಲೆಸಿದ ದೇವಾಲಯದ ದ್ವಾರಪಾಲಕರು**

17 ಜೆರುಸಲೇಮಿನಲ್ಲಿ ನೆಲೆಸಿದ ದೇವಾಲಯದ ದ್ವಾರಪಾಲಕರು: ಶಲ್ಲೂಮ್, ಅಕ್ಕೂಬ್, ಟಲ್ಮೋನ್, ಅಹೀಮಾನ್ ಎಂಬವರು. ಶಲ್ಲೂಮ್ ಅವರ ಮುಖ್ಯಸ್ಥನಾಗಿದ್ದನು. 18ಇದುವರೆಗೂ ಶಲ್ಲೂಮನ ಕುಟುಂಬಸ್ಥರು ಪೂರ್ವದಿಕ್ಕಿನಲ್ಲಿರುವ ಅರಸನ ಬಾಗಿಲನ್ನು ಕಾಯುತ್ತಿದ್ದಾರೆ. ಇದಕ್ಕೆ ಮೊದಲು ಅವರು ಲೇವಿಯರ ಪಾಳೆಯಗಳ ಕಾವಲುಗಾರರಾಗಿ ಇದ್ದರು.

19 ಕೋರೇಯನ ಮಗನೂ ಎಬ್ಯಾಸಾಫನ ಮೊಮ್ಮಗನೂ ಕೋರಹನ ಮರಿಮಗನೂ ಆದ ಶಲ್ಲೂಮನು ಹಾಗೂ ಕೋರಹನ ಗೋತ್ರದ ಸದಸ್ಯರು, ದೇವದರ್ಶನದ ಗುಡಾರದ ದ್ವಾರವನ್ನು ಕಾಯುವ ಜವಾಬ್ದಾರಿ ವಹಿಸಿಕೊಂಡು ಇದ್ದರು. ಅವರ ಪೂರ್ವಜರು ಸಹ ಸರ್ವೇಶ್ವರನ ಗುಡಾರವನ್ನು ಕಾಯುವವರಾಗಿದ್ದರು. 20ಎಲ್ಲಾಜಾರನ ಮಗ ಫೀನೆಹಾಸ ದ್ವಾರಪಾಲಕರ ಮೇಲ್ವಿಚಾರಕನಾಗಿದ್ದನು. ಸರ್ವೇಶ್ವರನ ಆಶೀರ್ವಾದ ಅವನ ಮೇಲಿತ್ತು.

21 ಮೆಷೆಲೆಮ್ಯನ ಮಗ ಜೆಕರ್ಯನು ದೇವದರ್ಶನದ ಗುಡಾರದ ದ್ವಾರಪಾಲಕನಾಗಿದ್ದನು.

22 ಒಟ್ಟು ಇನ್ನೂರ ಹನ್ನೆರಡು ಮಂದಿ, ದ್ವಾರಪಾಲಕರಾಗಿ ನೇಮಕಗೊಂಡಿದ್ದರು. ಅವರು ನೆಲೆಸಿದ್ದ ಗ್ರಾಮಗಳಲ್ಲಿ ಅವರ ಹೆಸರುಗಳು ದಾಖಲಾಗಿದ್ದವು. ಈ ಜವಾಬ್ದಾರಿಯ ಸ್ಥಾನಗಳಿಗೆ ಅವರ ಪೂರ್ವಜರನ್ನು ನೇಮಿಸಿದವರು ಅರಸ ದಾವೀದನು ಮತ್ತು ಪ್ರವಾದಿ ಸಮುವೇಲನು. 23ಅವರ ವಂಶಜರು ದೇವಾಲಯದ ದ್ವಾರಪಾಲಕರಾಗಿ ಸೇವೆ ಮುಂದುವರೆಸಿಕೊಂಡು ಬಂದರು. 24ಉತ್ತರ, ದಕ್ಷಿಣ, ಪೂರ್ವ, ಪಶ್ಚಿಮ ದಿಕ್ಕುಗಳಲ್ಲಿ ಒಂದೊಂದು ದ್ವಾರ ಇದ್ದು ಪ್ರತಿಯೊಂದಕ್ಕೂ ಒಬ್ಬೊಬ್ಬ ಪ್ರಮುಖ ದ್ವಾರಪಾಲಕನಿದ್ದನು. 25ಈ ಪ್ರಮುಖ ದ್ವಾರಪಾಲಕರಿಗೆ ಗ್ರಾಮಗಳಲ್ಲಿ ನೆಲೆಸಿದ್ದ ಅವರ ಬಂಧುಗಳು ಸಹಾಯಕರಾಗಿದ್ದರು. ಅವರು ಸರದಿಯ ಮೇಲೆ ಏಳೇಳು ದಿವಸ ಬಂದು ಸಹಾಯ ಮಾಡಬೇಕಾಗಿತ್ತು. 26ನಾಲ್ಕು ಜನ ಮುಖ್ಯ ದ್ವಾರಪಾಲಕರು ಲೇವಿಯರಾಗಿದ್ದು ಅವರಿಗೆ ಅಂತಿಮ ಜವಾಬ್ದಾರಿ ಕೊಡಲಾಗಿತ್ತು. ದೇವಾಲಯದ ಕೋಣೆಗಳನ್ನು ಹಾಗೂ ಭಂಡಾರಗಳನ್ನು ಅವರು ನೋಡಿಕೊಳ್ಳಬೇಕಾಗಿತ್ತು. 27ದೇವಾಲಯವನ್ನು ಕಾಯುವುದೂ ಪ್ರತಿದಿನ ಬೆಳಿಗ್ಗೆ ಬಾಗಿಲುಗಳನ್ನು ತೆರೆಯುವುದೂ ಅವರ ಕರ್ತವ್ಯವಾಗಿತ್ತು. ಆದುದರಿಂದ ಅವರು ದೇವಾಲಯದ ಹತ್ತಿರವೇ ಇರುತ್ತಿದ್ದರು.

**ಇತರ ಲೇವಿಯರು**

28 ಪೂಜಾಸಾಮಗ್ರಿಗಳನ್ನು ನೋಡಿಕೊಳ್ಳುವ ಜವಾಬ್ದಾರಿ ಇತರ ಲೇವಿಯರದಾಗಿತ್ತು. ಅವುಗಳನ್ನು ಕೊಡುವಾಗಲೂ ಮರಳಿ ತೆಗೆದುಕೊಳ್ಳುವಾಗಲೂ ಲೆಕ್ಕಿಸುತ್ತಿದ್ದರು. 29ಇತರರು ಬೇರೆ ಪವಿತ್ರ ಸಲಕರಣೆಗಳಾದ ಗೋದಿಹಿಟ್ಟು, ದ್ರಾಕ್ಷಾರಸ, ಎಣ್ಣೆ, ಧೂಪ ಹಾಗೂ ಪರಿಮಳ ದ್ರವ್ಯಗಳ ಸರಬರಾಜು ಮಾಡುವ ಜವಾಬ್ದಾರಿಕೆ ಹೊಂದಿದ್ದರು. 30ಆದರೆ ಪರಿಮಳ ದ್ರವ್ಯಗಳನ್ನು ಮಿಶ್ರ ಮಾಡುವ ಜವಾಬ್ದಾರಿ ಯಾಜಕರದಾಗಿತ್ತು.

31 ಕೋರಹಿಯ ಗೋತ್ರದ ಶಲ್ಲೂಮನ ಚೊಚ್ಚಲು ಮಗ ಮತ್ತಿತ್ಯ ಎಂಬ ಲೇವಿಯನು ರೊಟ್ಟಿ ಸುಡುವ ಕೆಲಸದ ಮೇಲ್ವಿಚಾರಕನಾಗಿದ್ದನು. 32ಕೇಹಾತ್ಯ ಗೋತ್ರದ ಮಿಕ್ಕ ಸದಸ್ಯರು ಪ್ರತೀ ಸಬ್ಬತ್ ದಿನ ದೇವಾಲಯದಲ್ಲಿ ಸಮರ್ಪಿಸಲಾಗುತ್ತಿದ್ದ ನೈವೇದ್ಯದ ರೊಟ್ಟಿಗಳನ್ನು ತಯಾರಿಸುವ ಜವಾಬ್ದಾರಿ ಹೊಂದಿದ್ದರು.

33 ಇನ್ನು ಕೆಲವು ಲೇವಿಯ ಕುಟುಂಬಗಳ ಮೇಲೆ ದೇವಾಲಯದ ಸಂಗೀತದ ಹೊಣೆಯಿತ್ತು. ಈ ಕುಟುಂಬಗಳ ಮುಖ್ಯಸ್ಥರು ದೇವಾಲಯದ ಕಟ್ಟಡಗಳಲ್ಲಿ ವಾಸಿಸುತ್ತಾ, ಹಗಲಿರುಳೂ ಕೆಲಸ

ಮಾಡಬೇಕಾಗಿದ್ದರಿಂದ ಬೇರೆ ಕೆಲಸಗಳ ಜವಾಬ್ದಾರಿ ಅವರಿಗಿರಲಿಲ್ಲ. 34ಇವರೆಲ್ಲರೂ ತಮ್ಮ ಪೂರ್ವಜರ
ಸಾಲಿಗೆ ಸ್ಥಿರಿದಂತೆ ಲೇವಿಗೋತ್ರಗಳ ಮುಖ್ಯಸ್ಥರಾಗಿದ್ದು ಜೆರುಸಲೇಮಿನಲ್ಲೇ ನೆಲೆಸಿದ್ದರು.

### ಅರಸ ಸೌಲನ ಪೂರ್ವಜರು ಹಾಗೂ ವಂಶಜರು

(1 ಪೂರ್ವ. 8.29–38)

35 ಯೆಯೂವೇಲನು ಗಿಬ್ಯೋನ ಪಟ್ಟಣವನ್ನು ಕಟ್ಟಿ ಅಲ್ಲಿ ನೆಲೆಸಿದನು. ಅವನ ಹೆಂಡತಿ ಮಾಕಳು.
36ಅವನ ಚೊಚ್ಚಲು ಮಗ ಅಬ್ದೋನ. ಇತರ ಮಕ್ಕಳ ಹೆಸರು – ಚೂರ್, ಕೀಷ್, ಬಾಳ್, ನೇರ್, ನಾದಾಬ್,
37ಗೆದೋರ್, 38ಮಿಕ್ಲೋತ್ ಶಿಮಾಮ್‌ನ ತಂದೆ. ಇವರ ವಂಶಜರು ಜೆರುಸಲೇಮಿನಲ್ಲಿ ತಮ್ಮ ಗೋತ್ರದ
ಇತರ ಕುಟುಂಬಗಳ ಸಮೀಪದಲ್ಲಿ ನೆಲೆಸಿದ್ದರು.

39 ನೇರನು ಕೀಷನ ತಂದೆ. ಕೀಷ ಸೌಲನ ತಂದೆ. ಸೌಲನಿಗೆ ನಾಲ್ವರು ಮಕ್ಕಳು: ಯೋನಾತಾನ್,
ಮಲ್ಕೀಷೂವ, ಅಬೀನಾದಾಬ್, ಎಷ್ಬಾಳ್ ಎಂಬವರು. 40ಯೋನಾತಾನ್ ಮೆರೀಬ್ಬಾಳನ ತಂದೆ. ಇವನು
ಮೀಕನ ತಂದೆ. 41ಮೀಕನಿಗೆ ನಾಲ್ವರು ಮಕ್ಕಳು – ಪೀತೋನ್, ಮೆಲೆಕ್, ತಹ್ರೇಯ ಹಾಗೂ ಅಹಾಜ್
ಎಂಬವರು. 42ಅಹಾಜ್ ಯಗ್ರಾಹನ ತಂದೆ. ಇವನು ಅಲೆಮೆತ್, ಅಜ್ಮಾವೆತ್, ಜಿಮ್ರಿ ಎಂಬವರ ತಂದೆ.
ಜಿಮ್ರಿ ಮೋಚನ ತಂದೆ. 43ಬಿನ್ನ ಮೋಚನ ಮಗ, ಬಿನ್ನನ ಮಗ ರೆಫಾಯ; ಇವನ ಮಗ ಎಲ್ಲಾಸ; ಇವನ
ಮಗ ಆಚೇಲ್.

44 ಆಚೇಲನಿಗೆ ಆರು ಜನ ಮಕ್ಕಳು – ಅಜ್ರೀಕಾಮ್, ಬೋಕೆರೂ, ಇಷ್ಮಾಯೇಲ್, ಶೆಯರ,
ಓಬದ್ಯ ಹಾಗು ಹಾನಾನ್ ಎಂಬವರು.

### ಅರಸ ಸೌಲನ ಮರಣ

(1 ಸಮು. 31.1–13)

**10** ಗಿಲ್ಬೋವ ಬೆಟ್ಟದಲ್ಲಿ ಇಸ್ರಯೇಲ್ ಅವರಿಗೂ ಫಿಲಿಷ್ಟಿಯರಿಗೂ ಘೋರ ಯುದ್ಧ ನಡೆಯಿತು. ಅನೇಕ
ಜನ ಇಸ್ರಯೇಲರು ಯುದ್ಧದಲ್ಲಿ ಹತರಾದರು. ಅರಸ ಸೌಲನೂ ಅವನ ಮಕ್ಕಳೂ ಇನ್ನುಳಿದವರೂ
ತಪ್ಪಿಸಿಕೊಂಡು ಓಡಿಹೋಗಲು ಪ್ರಯತ್ನಿಸಿದರು. 2ಆದರೆ ಫಿಲಿಷ್ಟಿಯರು ಅವರನ್ನು ಬೆನ್ನಟ್ಟಿ ಸೌಲನ
ಮಕ್ಕಳಾದ ಯೋನಾತಾನ, ಅಬೀನಾದಾಬ, ಮಲ್ಕೀಷೂವರನ್ನು ಕೊಂದುಹಾಕಿದರು. 3ಘೋರ ಯುದ್ಧದ
ಮಧ್ಯದಲ್ಲಿ ಸೌಲನು ತಪ್ಪಿಸಿಕೊಂಡು ಹೋಗಲು ಸಾಧ್ಯವಾಗಲಿಲ್ಲ. ವೈರಿಬಾಣವು ಅವನಿಗೆ ತಾಕಲು ಅವನು
ತೀವ್ರ ಗಾಯಗೊಂಡನು. 4ಆಗ ಅವನು ತನ್ನ ಆಯುಧವಾಹಕ ಯುವಕನನ್ನು ಕರೆದು, 'ದೇವರಲ್ಲಿ ನಂಬಿಕೆ
ಇಲ್ಲದ ಈ ಫಿಲಿಷ್ಟಿಯರ ಹಸ್ತಗಳಿಂದ ನಾನು ಸಾಯಬಾರದು. ನಿನ್ನ ಖಡ್ಗವನ್ನು ಹಿಡಿದು ನನ್ನನ್ನು
ಕೊಂದುಬಿಡು', ಎಂದನು. ಆದರೆ ಆ ಯುವಕನು ಭಯಗೊಂಡು ಹಿಂಜರಿದನು. ಸೌಲನು ತನ್ನ ಖಡ್ಗವನ್ನೇ
ಎತ್ತಿಟ್ಟು ಅದರ ಮೇಲೆ ಹಾರಿಬಿದ್ದು ಸತ್ತುಹೋದನು. 5ಸೌಲನು ಮೃತನಾದದ್ದನ್ನು ನೋಡಿ ಆ ಯುವಕನು
ಸಹ ತನ್ನ ಖಡ್ಗದ ಮೇಲೆ ಬಿದ್ದು ಸತ್ತುಹೋದನು. 6ಹೀಗೆ ಸೌಲನೂ ಅವನ ಮೂರು ಮಂದಿ
ಗಂಡುಮಕ್ಕಳೂ ಅದೇ ದಿವಸ ಮೃತರಾದರು. ಸೌಲನ ಮನೆಯವರಲ್ಲಿ ರಾಜ್ಯ ಆಳಲು ಯಾರೂ
ಉಳಿಯಲಿಲ್ಲ. 7ತಗ್ಗಿನಲ್ಲಿ ನೆಲೆಸಿದ್ದ ಇಸ್ರಯೇಲರು ತಮ್ಮ ಸೈನ್ಯವು ಪಲಾಯನಗೈಯಿತು ಮತ್ತು ಸೌಲನೂ
ಅವನ ಮಕ್ಕಳೂ ಮರಣ ಹೊಂದಿದರು ಎಂಬ ವಾರ್ತೆಯನ್ನು ಕೇಳಿ ಅವರೂ ತಮ್ಮ ಪಟ್ಟಣಗಳನ್ನು ಬಿಟ್ಟು
ಓಡಿಹೋದರು. ಅನಂತರ ಫಿಲಿಷ್ಟಿಯರು ಬಂದು ಅವುಗಳನ್ನು ವಶಪಡಿಸಿಕೊಂಡರು.

8 ಕಾಳಗದ ಮರುದಿನ ಫಿಲಿಷ್ಟಿಯರು ಸತ್ತವರ ಒಡವೆವಸ್ತುಗಳನ್ನು ಸುಲಿಗೆಮಾಡಲು ಹೋದಾಗ,
ಗಿಲ್ಬಾವ ಬೆಟ್ಟದಲ್ಲಿ ಸೌಲ ಹಾಗೂ ಅವನ ಮಕ್ಕಳು ಸತ್ತುಬಿದ್ದಿರುವುದನ್ನು ಕಂಡರು. 9ಸೌಲನ ತಲೆಯನ್ನು
ಕಡಿದು ದೇಹದಿಂದ ಬೇರ್ಪಡಿಸಿದರು. ಅವನ ಆಯುಧಗಳನ್ನು ಬಿಚ್ಚಿಕೊಂಡರು. ಅವುಗಳೊಂದಿಗೆ
ಸುದ್ದಿವಾಹಕರನ್ನು ತಮ್ಮ ನಾಡಿನ ಎಲ್ಲೆಡೆಗೂ ಕಳುಹಿಸಿ, ಈ ಜಯವಾರ್ತೆಯನ್ನು ತಮ್ಮ ದೇವತೆಗಳಿಗೂ
ಜನರಿಗೂ ಮುಟ್ಟಿಸಿದರು. 10ಸೌಲನ ಆಯುಧಗಳನ್ನು ತೆಗೆದುಕೊಂಡು ಹೋಗಿ ತಮ್ಮ ಒಂದು

ಗುಡಿಯಲ್ಲಿಟ್ಟರು. ಸೌಲನ ತಲೆಯನ್ನು ತಮ್ಮ ದೇವರಾದ ದಾಗೋನನ ಗುಡಿಯಲ್ಲಿ ನೇತು ಹಾಕಿದರು.
11ಸೌಲನಿಗೆ ಫಿಲಿಷ್ಟಿಯರು ಮಾಡಿದ್ದು ಎಲ್ಲವನ್ನೂ ಯಾಬೇಷ್ ಗಿಲ್ಯಾದಿನ ಜನರು ಕೇಳಿದರು. 12ಅವರಲ್ಲಿ
ಅತೀ ಶೂರರಾದವರು ಹೋಗಿ ಸೌಲನ ಮತ್ತು ಅವನ ಮಕ್ಕಳ ಶವಗಳನ್ನು ತೆಗೆದುಕೊಂಡು ಯಾಬೇಷಿಗೆ
ಬಂದರು. ಅಲ್ಲಿ ಅವುಗಳನ್ನು ಏಲಾ ಮರದ ಕೆಳಗೆ ಸಮಾಧಿಮಾಡಿ ಏಳು ದಿನ ಉಪವಾಸ ಆಚರಿಸಿದರು.
13 ಸೌಲನು ಸರ್ವೇಶ್ವರನಿಗೆ ಅವಿಧೇಯನಾದ್ದರಿಂದ ಮರಣ ಹೊಂದಿದನು. ಅವನು ಸರ್ವೇಶ್ವರನ
ಆಜ್ಞೆಗಳನ್ನು ಮೀರಿದನು; ಸರ್ವೇಶ್ವರನನ್ನು ವಿಚಾರಿಸದೆ ಭೂತಪ್ರೇತಗಳನ್ನು ವಿಚಾರಿಸಿದನು. 14ಆದುದರಿಂದ
ಸರ್ವೇಶ್ವರ ಅವನನ್ನು ಕೊಲ್ಲಿಸಿ ಜೆಸ್ಸೆಯ ಮಗ ದಾವೀದನಿಗೆ ರಾಜ್ಯವನ್ನೊಪ್ಪಿಸಿದರು.

## ದಾವೀದನು ಇಸ್ರಯೇಲರ ಮತ್ತು ಯೆಹೂದ್ಯರ ಅರಸ

(2 ಸಮು. 5.1–10)

**11** ಇಸ್ರಯೇಲಿನ ಜನರೆಲ್ಲರೂ ಹೆಬ್ರೋನಿನಲ್ಲಿದ್ದ ದಾವೀದನ ಬಳಿಗೆ ಬಂದರು. “ನೀವು ನಮ್ಮ
ರಕ್ತಸಂಬಂಧಿ. 2ಅರಸ ಸೌಲ ನಮ್ಮನ್ನು ಆಳುತ್ತಿದ್ದಾಗ ನೀವು ಇಸ್ರಯೇಲರ ದಳಪತಿಯಾಗಿ ಯುದ್ಧ
ನಡೆಸಿದಿರಿ. ನಮ್ಮ ದೇವರಾದ ಸರ್ವೇಶ್ವರ, ‘ನೀನು ನನ್ನ ಪ್ರಜೆಗಳಾದ ಇಸ್ರಯೇಲರ ನಾಯಕನೂ
ಪಾಲಕನೂ ಆಗುವೆ,’ ಎಂದು ವಾಗ್ದಾನ ಮಾಡಿದ್ದು ನಿಮ್ಮನ್ನು ಕುರಿತೇ” ಎಂದು ಹೇಳಿ ವಂದಿಸಿದರು.
3ಹೀಗೆ ಇಸ್ರಯೇಲಿನ ನಾಯಕರೆಲ್ಲರೂ ಹೆಬ್ರೋನಿನಲ್ಲಿ ಅರಸ ದಾವೀದನ ಬಳಿಗೆ ಬಂದು ಬಿನ್ನವಿಸಿದರು.
ದಾವೀದನು ಅವರೊಂದಿಗೆ ಸರ್ವೇಶ್ವರನ ಸನ್ನಿಧಿಯಲ್ಲಿ ಒಂದು ಒಪ್ಪಂದ ಮಾಡಿಕೊಂಡನು. ಅವರು
ಅವನನ್ನು ಅಭಿಷೇಕಿಸಿದರು. ಹೀಗೆ ಸರ್ವೇಶ್ವರ ಸಮುವೇಲನ ಮುಖಾಂತರ ಮಾಡಿದ ವಾಗ್ದಾನ
ನೆರವೇರಿತು; ದಾವೀದನು ಇಸ್ರಯೇಲರ ಅರಸನಾದನು.
4 ಆ ಕಾಲದಲ್ಲಿ ಜೆರುಸಲೇಮ್ ಪಟ್ಟಣವನ್ನು ‘ಯೆಬೂಸ’ ಎಂದು ಕರೆಯಲಾಗುತ್ತಿತ್ತು. ಅಲ್ಲಿಯ
ಮೂಲನಿವಾಸಿಗಳಾದ ಯೆಬೂಸಿಯರು ಆ ಪ್ರದೇಶದಲ್ಲಿ ಇನ್ನೂ ವಾಸಿಸುತ್ತಿದ್ದರು. ಅರಸ ದಾವೀದನೂ
ಎಲ್ಲಾ ಇಸ್ರಯೇಲರೂ ಜೆರುಸಲೇಮ್ ಪಟ್ಟಣಕ್ಕೆ ಮುತ್ತಿಗೆ ಹಾಕಿದರು. 5ದಾವೀದನು ಪಟ್ಟಣದೊಳಗೆ
ಪ್ರವೇಶಿಸಲು ಎಂದಿಗೂ ಸಾಧ್ಯವಿಲ್ಲವೆಂದು ಯೆಬೂಸಿಯರು ಹೇಳಿದ್ದರು. ಆದರೂ ದಾವೀದನು
ಪಟ್ಟಣವನ್ನು ಪ್ರವೇಶಿಸಿ ಸಿಯೋನ್ ಕೋಟೆಯನ್ನು ವಶಪಡಿಸಿಕೊಂಡನು. ಅದು ‘ದಾವೀದ್ ನಗರ’ ಎಂದು
ಹೆಸರು ಪಡೆಯಿತು. 6‘ಯೆಬೂಸಿಯರಲ್ಲಿ ಒಬ್ಬನನ್ನು ಯಾರು ಮೊದಲು ಕೊಲ್ಲುವನೋ ಅವನು ನನ್ನ
ದಳಪತಿಯಾಗುವನು’ ಎಂದು ದಾವೀದ ಪ್ರಕಟಿಸಿದ್ದನು. ಜೆರೂಯಳ ಮಗ ಯೋವಾಬನು ಯುದ್ಧದಲ್ಲಿ
ಮುಂದೆ ಹೋಗಿ ಸೇನಾಪತಿಯಾದನು. 7ಆ ಕೋಟೆಯನ್ನು ದಾವೀದನು ತನ್ನ ವಾಸಸ್ಥಾನವನ್ನಾಗಿ
ಮಾಡಿಕೊಂಡದ್ದರಿಂದ ಅದಕ್ಕೆ ‘ದಾವೀದ್ ನಗರ’ ಎಂದು ಹೆಸರಾಯಿತು. 8ಗುಡ್ಡದ ಪೂರ್ವದಿಕ್ಕಿನ
ಸ್ಥಳವನ್ನು ಮಟ್ಟಮಾಡಿ ಪಟ್ಟಣವನ್ನು ಪುನಃ ಕಟ್ಟಿದನು. ಯೋವಾಬನು ಪಟ್ಟಣದ ಉಳಿದ ಭಾಗವನ್ನು
ಜೀರ್ಣೋದ್ಧಾರ ಮಾಡಿದನು. 9ಸರ್ವಶಕ್ತ ಸರ್ವೇಶ್ವರಸ್ವಾಮಿ ದಾವೀದನೊಂದಿಗೆ ಇದ್ದುದರಿಂದ ಅವನು
ದಿನದಿಂದ ದಿನಕ್ಕೆ ಅಭಿವೃದ್ಧಿ ಹೊಂದಿದನು.

## ದಾವೀದನ ರಣವೀರರು

(2 ಸಮು. 23.8–39)

10 ದಾವೀದನ ಸುಪ್ರಸಿದ್ಧ ರಣವೀರರ ಪಟ್ಟಿ ಇದು: ಸರ್ವೇಶ್ವರ ಮಾಡಿದ ವಾಗ್ದಾನಕ್ಕೆ
ಅನುಗುಣವಾಗಿ ದಾವೀದನು ಅರಸನಾಗಲು ಇತರ ಇಸ್ರಯೇಲರೊಂದಿಗೆ ಸಹಾಯ ಮಾಡಿದವರು ಹಾಗೂ
ಅವನ ರಾಜ್ಯ ಶಕ್ತಿಯುತವಾಗಿರುವಂತೆ ಮಾಡಿದವರು ಇವರು:
11 ಹಕ್ಮೋನ ಗೋತ್ರದ ಯಾಷೋಬ್ಬಾಮ ಮೊದಲನೆಯವರು. ಇವನು ‘ಮೂವರು ಪ್ರಮುಖ
ವೀರರು’ ಎಂಬ ಪಡೆಯ ನಾಯಕ. ಇವನು ತನ್ನ ಈಟಿಯಿಂದ ಮುನ್ನೂರು ಜನರ ಮೇಲೆ ಹೋರಾಡಿ
ಅವರೆಲ್ಲರನ್ನೂ ಒಂದೇ ಕಾಳಗದಲ್ಲಿ ಕೊಂದುಹಾಕಿದನು. 12ಪ್ರಸಿದ್ಧರಾದ ‘ಮೂವರು ಪ್ರಮುಖರು’ ಎಂಬ

ಪಡೆಯಲ್ಲಿ ಎರಡನೆಯವನು ಅಹೋಹ್ಯ ಗೋತ್ರದ ದೋದೋ ಎಂಬವನ ಮಗ ಎಲ್ಲಾಜಾರನು. 13ಈತ
ಪಸ್ದಮ್ಮೀಮಿ ಎಂಬಲ್ಲಿ ಫಿಲಿಷ್ಟಿಯರಿಗೆ ವಿರುದ್ಧ ಹೂಡಿದ ಕಾಳಗದಲ್ಲಿ ದಾವೀದನ ಪರವಾಗಿ ಹೋರಾಡಿದನು.
ಇಸ್ರಯೇಲರು ಹಿಂಜರಿದು ಓಡಿ ಹೋಗುತ್ತಿದ್ದಾಗ ಇವನು ಜವೆಗೋದಿಯ ಹೊಲದಲ್ಲಿ ಇದ್ದನು. 14ಆಗ
ಅವನೂ ಅವನ ಸಂಗಡಿಗರೂ ಹೊಲದ ಮಧ್ಯದಲ್ಲಿ ನಿಂತುಕೊಂಡು ಫಿಲಿಷ್ಟಿಯರಿಗೆ ವಿರೋಧವಾಗಿ
ಕಾದಾಡಿದರು. ಸರ್ವೇಶ್ವರ ಅವನಿಗೆ ಮಹಾಜಯವನ್ನು ದಯಪಾಲಿಸಿದರು.

15 ಅದುಲ್ಲಾಮ್ ಗವಿಯ ಹತ್ತಿರ ದಾವೀದನು ವಾಸಿಸುತ್ತಿದ್ದಾಗ, ಮೂವತ್ತು ಪ್ರಮುಖ ರಣವೀರರಲ್ಲಿ
ಮೂವರು ಒಂದು ದಿನ ಒಂದು ಬಂಡೆಯ ಬಳಿಗೆ ಹೋದರು. ಅಲ್ಲಿ ಫಿಲಿಷ್ಟಿಯರ ಸೈನ್ಯವು ರೆಫಾಯಿಮ್
ಕೊಳ್ಳದಲ್ಲಿ ಬೀಡು ಬಿಟ್ಟದ್ದನ್ನು ಕಂಡರು. 16ಆ ಸಮಯದಲ್ಲಿ ದಾವೀದನು ಭದ್ರವಾದ ದಿಣ್ಣೆಯ ಮೇಲಿದ್ದನು.
ಫಿಲಿಷ್ಟಿಯರು ಬೆತ್ಲೆಹೇಮನ್ನು ವಶಪಡಿಸಿಕೊಂಡಿದ್ದರು. 17ದಾವೀದನು ತನ್ನೂರನ್ನು ಜ್ಞಾಪಿಸಿಕೊಂಡು
ಅಸ್ವಸ್ಥನಾಗಿ 'ಬೆತ್ಲೆಹೇಮಿನ ದ್ವಾರದ ಬಳಿಯಿರುವ ಬಾವಿಯಿಂದ ನನಗೆ ಕುಡಿಯಲು ಯಾರಾದರೂ ನೀರನ್ನು
ತಂದುಕೊಡಬಲ್ಲಿರೋ!' ಎಂದು ತನ್ನ ಅಪೇಕ್ಷೆಯನ್ನು ವ್ಯಕ್ತಪಡಿಸಿದನು. 18ಪ್ರಸಿದ್ಧರಾದ ಮೂವರು
ರಣವೀರರು ಫಿಲಿಷ್ಟಿಯರ ಪಾಳೆಯವನ್ನು ಹಾದು ಹೋಗಿ ಬಾವಿಯಿಂದ ನೀರನ್ನು ಸೇದಿಕೊಂಡು
ದಾವೀದನಿಗೆ ತಂದುಕೊಟ್ಟರು. "ನಾನು ಈ ನೀರನ್ನು ಎಂದೆಂದಿಗೂ ಕುಡಿಯಬಾರದು. ಇದನ್ನು ಕುಡಿದರೆ,
ತಮ್ಮ ಪ್ರಾಣಗಳನ್ನೇ ಪಣವಾಗಿಟ್ಟ ಈ ಮೂವರ ರಕ್ತವನ್ನು ಕುಡಿದಂತಾಗುವುದು," ಎಂದು ಹೇಳಿ,
19ದಾವೀದನು ಆ ನೀರನ್ನು ಕುಡಿಯದೇ ಸರ್ವೇಶ್ವರನಿಗೆ ಸಮರ್ಪಿಸುವಂತೆ ನೆಲದ ಮೇಲೆ ಸುರಿದನು. ಈ
ಮೂರು ಮಂದಿ ರಣವೀರರು ಸಾಧಿಸಿದ ಪರಾಕ್ರಮವಿದು.

20 ಯೋವಾಬನ ಸಹೋದರ ಅಬ್ಷೈ 'ಮೂವತ್ತು ಪ್ರಮುಖ ವೀರರು', ಎಂಬ ಪಡೆಯ
ನಾಯಕನಾಗಿದ್ದನು. ಅವನು ತನ್ನ ಈಟಿಯಿಂದ ಮುನ್ನೂರು ಜನರಿಗೆ ವಿರೋಧವಾಗಿ ಹೋರಾಡಿ ಅವರನ್ನು
ಕೊಂದು ಹಾಕಿ 'ಮೂವತ್ತು ಪ್ರಮುಖ ವೀರರು' ಎಂಬ ಪಡೆಯಲ್ಲಿ ಪ್ರಖ್ಯಾತನಾದನು. 21ಅವನು ಈ
'ಮೂವತ್ತು ಪ್ರಮುಖ ವೀರರ' ಪಡೆಯಲ್ಲಿ ಪ್ರಸಿದ್ಧನಾದುದಲ್ಲದೇ ಅದರ ನಾಯಕನೂ ಆದನು. ಆದರೆ
'ಮೂವರು ಪ್ರಮುಖ ವೀರರು' ಎಂಬ ಪಡೆಯವರಷ್ಟು ಪ್ರಸಿದ್ಧನಾಗಲಿಲ್ಲ.

22 ಕಬ್ಜಯೇಲಿನ ಯೆಹೋಯಾದನ ಮಗ ಬೆನಾಯನು ಪ್ರಖ್ಯಾತಿ ಪಡೆದ ಸೈನಿಕನಾಗಿದ್ದನು.
ಅವನು ಅನೇಕ ಶೂರಕೃತ್ಯಗಳನ್ನೆಸಗಿದನು: ಮೋವಾಬ್ಯರ ಇಬ್ಬರು ಬಲಶಾಲಿ ಯುದ್ಧ ವೀರರನ್ನು
ಕೊಂದದ್ದೂ ಈ ಕೃತ್ಯಗಳಲ್ಲಿ ಒಂದಾಗಿದೆ. ಒಮ್ಮೆ ಚಳಿಗಾಲದಲ್ಲಿ ತಗ್ಗು ಪ್ರದೇಶದಲ್ಲಿ ಹೋಗಿ ಒಂದು
ಸಿಂಹವನ್ನು ಕೊಂದನು. 23ಇನ್ನೊಮ್ಮೆ ಏಳುವರೆ ಅಡಿ ಎತ್ತರದ, ಅತೀ ಬಲವಾದ ಈಟಿಯನ್ನು ಹೊಂದಿದ್ದ,
ಬಲಾಢ್ಯನಾದ ಈಜಿಪ್ಟನೊಬ್ಬನನ್ನು ಸೋಲಿಸಿದನು. ಆ ಈಜಿಪ್ಟಿನವನ ಕೈಯಲ್ಲಿ ಬಲವಾದ ಈಟಿ ಇತ್ತು.
ಇವನಾದರೋ ಒಂದು ಕೋಲನ್ನು ಮಾತ್ರ ಹಿಡಿದು ಕೊಂಡು ಹೋಗಿ, ಅವನ ಕೈಯಲ್ಲಿದ್ದ ಈಟಿಯನ್ನು
ಕಿತ್ತುಕೊಂಡು ಅದರಿಂದಲೇ ಅವನನ್ನು ಸಂಹರಿಸಿದನು. 24'ಮೂವತ್ತು ಪ್ರಮುಖ ವೀರರು' ಪಡೆಯ
ಒಬ್ಬನಾದ ಬೆನಾಯ ಮಾಡಿದ ಶೂರ ಕೃತ್ಯ ಇದು. 25ಇವನು 'ಮೂವತ್ತು ಪ್ರಮುಖ ವೀರರ' ಪಡೆಯಲ್ಲಿ
ಪ್ರಸಿದ್ಧನಾಗಿದ್ದನೇ ಹೊರತು, 'ಮೂವರು ಪ್ರಮುಖ ವೀರರ' ಪಡೆಯವರಷ್ಟು ಪ್ರಖ್ಯಾತನಾಗಲಿಲ್ಲ. ಅವನನ್ನು
ದಾವೀದನು ತನ್ನ ಕಾವಲುಗಾರರಲ್ಲಿ ಮುಖ್ಯಸ್ಥನನ್ನಾಗಿ ಇಟ್ಟುಕೊಂಡಿದ್ದನು.

26 ಪ್ರಖ್ಯಾತರಾದ ಇನ್ನಿತರ ಸೈನಿಕರು:
ಯೋವಾಬನ ತಮ್ಮ ಅಸಾಹೇಲ,
ಬೆತ್ಲೆಹೇಮಿನ ದೋದೋವಿನ ಮಗ
ಎಲ್ಹಾನಾನ್,
27 ಹರೋರಿನ ಶಮ್ಮೋತ್,
ಪೆಲೋನ್ಯನಾದ ಹೆಲೆಚ್,
28 ತೆಕೋವದ ಇಕ್ಕೇಷನ ಮಗ ಈರ,
ಅನತೋತಿನ ಅಬೀಯೆಜೆರ್,
29 ಹುಷ ಊರಿನ ಸಿಬ್ಕೈ,

ಅಹೋಹಿನ ಈಲೈ,
30 ನೆಟೋಫದ ಮಹರೈ,
ನೆಟೋಫದ ಬಾಣನ ಮಗ ಹೇಲೆದ್,
31 ಬೆನ್ಯಾಮೀನ್ ದೇಶದ ಗಿಬೆಯ ಊರಿನ
ರೀಬೈನ ಮಗ ಈತೈ,
ಪಿರಾತೋನ್ಯದ ಬೆನಾಯ,
32 ನಹಲೇಗಾಷಿನ ಹೂರೈ,
ಅರಾಮಾ ತಗ್ಗಿನ ಅಬೀಯೇಲ್,
33 ಬಹರೂಮ್ಯದ ಅಜ್ಮಾವೆತ್,
ಶಾಲ್ಬೋನ್ಯದ ಎಲೆಯಖ್ಬ,
34 ಗೀಜೋನಿನ ಹಾಷೇಮನ ಮಕ್ಕಳು,
ಹರಾರ್ಯದ ಶಾಗೇಯನ ಮಗ
ಯೋನಾತಾನ,
35 ಹರಾರ್ಯದ ಶಾಕಾರನ ಮಗ
ಅಹೀಯಾಮ್,
ಊರನ ಮಗ ಎಲೀಫಲ್,
36 ಮೆಕೆರಾತ್ಯದ ಹೇಫೆರ್,
ಪೆಲೋನ್ಯದ ಅಹೀಯ,
37 ಕರ್ಮೆಲ್ಯದ ಹೆಚ್ರೋ,
ಎಜ್ಬೈಯ ಮಗ ನಾರೈ,
38 ನಾತಾನನ ತಮ್ಮ ಯೋವೇಲ,
ಹಗ್ರೀಯನ ಮಗ ಮಿಬ್ಹಾರ್,
39 ಅಮ್ಮೋನಿನ ಚೆಲೆಕ್,
ಬೇರೋತ್ಯನೂ ಚೆರೂಯಳ ಮಗ
ಯೋವಾಬನ ಆಯುಧವಾಹಕನೂ
ಆಗಿದ್ದ ನಹರೈ,
40 ಇತ್ರೀಯರಾದ ಈರ ಮತ್ತು ಗೆರೇಬ,
41 ಹಿತ್ತೀಯನಾದ ಊರೀಯ,
ಅಹ್ಲೈಯ ಮಗ ಜಾಬಾದ್,
42 ಶೀಜನ ಮಗ ಅದೀನ,
(ಈತ ರೂಬೇನ್
ಗೋತ್ರದ ಪ್ರಮುಖ ಸದಸ್ಯ, ಮೂವತ್ತು
ಸೈನಿಕರ ಒಂದು ಗುಂಪೂ ಅವನಿಗಿತ್ತು),
43 ಮಾಕನ ಮಗ ಹಾನಾನ್,
ಮೆತೆನ ಊರಿನ ಯೋಷಾಫಾಟ್,
44 ಅಷ್ಟೆರಾತ್ಯದ ಉಜ್ಜೀಯ,
ಅರೋಯೇರಿನ ಹೋತಾಮನ
ಮಕ್ಕಳಾದ ಶಾಮಾ, ಯೆಗೀಯೇಲರು,
45 ಶಿಮ್ರಿಯ ಮಗ ಎದೀಗಯೇಲ್,
ಎದೀಗಯೇಲನ ತಮ್ಮನೂ

ತೀಜೀಯನೂ ಆದ ಯೋಹ,
46 ಮಹವೀಯದ ಎಲೀಯೇಲ್,
ಎಲ್ನಾಮನ ಮಕ್ಕಳಾದ ಯೆರೀಬೈ
ಮತ್ತು ಯೋಷವ್ಯ,
ಮೋವಬ್ಯನಾದ ಇತ್ಮ,
ಎಲೀಯೇಲ್, ಓಬೆದ್,
47 ಮೆಚೋಬಾಯದ ಯಾಸೀಯೇಲ.

### ದಾವೀದನನ್ನು ಮೊದಲು ಹಿಂಬಾಲಿಸಿದ ಬೆನ್ಯಾಮೀನ್ ಗೋತ್ರದವರು

**12** ದಾವೀದನು ಅರಸ ಸೌಲನಿಂದ ತಪ್ಪಿಸಿಕೊಂಡು ಚಿಕ್ಲಗ್ ಎಂಬಲ್ಲಿಗೆ ಹೋಗಿ ವಾಸಿಸಿದ್ದನು. ಅಲ್ಲಿ ಬೆನ್ಯಾಮೀನ್ ಗೋತ್ರದ ಅನೇಕ ಅನುಭವಶಾಲಿಗಳೂ ನಂಬಿಗಸ್ಥರೂ ಆದ ಸೈನಿಕರು ಬಂದು ಅವನನ್ನು ಸೇರಿಕೊಂಡರು. 2ಸೌಲನೂ ಬೆನ್ಯಾಮೀನ್ ಗೋತ್ರಕ್ಕೆ ಸೇರಿದವನೇ. ದಾವೀದನನ್ನು ಹಿಂಬಾಲಿಸಿದವರು ಎಡಗೈಯಿಂದಾಗಲೀ ಬಲಗೈಯಿಂದಾಗಲೀ ಬಾಣಗಳನ್ನೆಸೆಯುವವರೂ ಕವಣೆಗಳಲ್ಲಿ ಕಲ್ಲುಗಳನ್ನಿಟ್ಟು ಎಸೆಯಲು ಶಕ್ತರೂ ಆಗಿದ್ದರು. 3–7ಅವರು ಗಿಬೇಯದ ಶೇಮಾನ ಮಕ್ಕಳಾದ ಅಹೀಯೆಜೆರ್ ಮತ್ತು ಯೋವಾಷ ಎಂಬವರ ನೇತೃತ್ವದಲ್ಲಿ ಇದ್ದರು. ಆ ಸೈನಿಕರ ಹೆಸರುಗಳು:–
ಯೇಜೀಯೇಲ್ ಮತ್ತು ಪೆಲೆಟ – ಅಜ್ಮಾವೆತನ ಮಕ್ಕಳು.
ಯೇಹು ಮತ್ತು ಬೆರಾಕ–ಅನತೋತ ಊರಿನವರು. ಇಷ್ಮಾಯ – ಗಿಬ್ಯೋನಿನವನು; ಪ್ರಸಿದ್ಧನಾದ ಸೈನಿಕ, 'ಮೂವತ್ತು ಪ್ರಮುಖರ' ಪಟಾಲಮಿನಲ್ಲಿ ಒಬ್ಬ. ಯೆರೆಮೀಯ, ಯಹಜೀಯೇಲ್, ಯೋಹಾನಾನ್ ಯೋಜಾಬಾದ್ – ಗೆದೇರಾ ಊರಿನವರು. ಎಲ್ಲೂಜೈ, ಯೆರೀಮೋತ್, ಬೆಯಲ್ಯ, ಶೆಮರ್ಯ, ಶೆಫಟ್ಯ – ಇವರು ಹರೀಫ್ಯದವರು.
ಎಲ್ಕಾನ, ಇಷೀಯ, ಅಜರೇಲ್, ಯೋವೆಜೆರ್ ಮತ್ತು ಯಾಷೊಬ್ಬಮ – ಇವರು ಕೋರಹನ ಗೋತ್ರದವರು.
ಯೋವೇಲ ಮತ್ತು ಜೆಬದ್ಯ – ಗೆದೋರಿನ ಯೆರೋಹಾಮನ ಮಕ್ಕಳು.

### ದಾವೀದನ ಅನುಯಾಯಿಗಳಾಗಿ ಬಂದ ಗಾದ್‌ನ ಗೋತ್ರದವರು

8 ದಾವೀದನು ಮರುಭೂಮಿಯ ಕೋಟೆಯಲ್ಲಿದ್ದಾಗ ಅವನ ಪಡೆಗಳಲ್ಲಿ ಬಂದು ಸೇರಿದ ಗಾದ್ ಗೋತ್ರದ ಪ್ರಸಿದ್ಧರೂ ಅನುಭವಶಾಲಿಗಳೂ ಆದ ಯುದ್ಧವೀರರ ಹೆಸರುಗಳು: ಇವರು ನೋಡಲು ಸಿಂಹಗಳಂತೆ ಭೀಕರರೂ ಪರ್ವತದ ಜಿಂಕೆಗಳಂತೆ ಚುರುಕಾದವರೂ ಗುರಾಣಿ, ಈಟಿಗಳನ್ನು ಉಪಯೋಗಿಸುವುದರಲ್ಲಿ ನಿಪುಣರೂ ಆಗಿದ್ದರು. 9–13ಸೈನಿಕ ಪಂಕ್ತಿಯಲ್ಲಿದ್ದ ಕ್ರಮಕ್ಕೆ ಅನುಸಾರವಾಗಿ ಅವರ ಹೆಸರುಗಳು ಇಂತಿವೆ: ಏಜೆರ್, ಓಬದ್ಯ, ಎಲೀಯಾಬ್, ಮಷ್ಮನ್ನ, ಯೆರೆಮೀಯ, ಅತ್ತೈ, ಎಲೀಯೇಲ್, ಯೋಹಾನಾನ್, ಎಲ್ಜಾಬಾದ್, ಯೆರೆಮೀಯ, ಮಕ್ಬನ್ನೈ ಎಂಬವರು.
14 ಗಾದ್ ಗೋತ್ರದ ಈ ಕೆಲವು ಪುರುಷರು ಹಿರಿಯ ಸಹಸ್ರಾಧಿಪತಿಗಳೂ ಕಿರಿಯ ಶತಾಧಿಪತಿಗಳೂ ಆಗಿದ್ದರು. 15ಜೋರ್ಡನ್ ನದಿಯು ಪ್ರಥಮ ಮಾಸದಲ್ಲಿ ದಡತುಂಬಿ ಹರಿಯುತ್ತ ಇದ್ದಾಗ ಅದನ್ನು ದಾಟಿ ನದಿಯ ತಗ್ಗಿನ ಪೂರ್ವ ಪಶ್ಚಿಮ ಪ್ರದೇಶದಲ್ಲಿದ್ದವರೆಲ್ಲರನ್ನು ಓಡಿಸಿ ಬಿಟ್ಟವರು ಇವರೇ.

### ಬೆನ್ಯಾಮೀನ ಮತ್ತು ಯೂದ ಗೋತ್ರಗಳಿಂದ ಬಂದವರು

16 ಒಮ್ಮೆ ಬೆನ್ಯಾಮೀನ್ ಹಾಗು ಯೂದ ಗೋತ್ರದ ಜನರ ಒಂದು ಗುಂಪು ದಾವೀದನು ವಾಸವಾಗಿದ್ದ ಕೋಟೆಯ ಬಳಿಗೆ ಹೋಯಿತು. 17ದಾವೀದನು ಅವರನ್ನು ಎದುರುಗೊಂಡು "ಸ್ನೇಹಿತರಂತೆ ನನಗೆ ಸಹಾಯ ಮಾಡಲು ಬಂದಿದ್ದರೆ ನಿಮಗೆ ಇಲ್ಲಿ ಸ್ವಾಗತ. ನಮ್ಮೊಂದಿಗೆ ಸೇರಿಕೊಳ್ಳಿ, ನಾನು ನಿಮಗೆ

ಯಾವ ತೊಂದರೆಯನ್ನು ಕೊಟ್ಟಿಲ್ಲ. ಆದರೆ ನೀವು ನನ್ನನ್ನು ನನ್ನ ವೈರಿಗಳಿಗೆ ಹಿಡಿದುಕೊಡಲು ಬಂದಿದ್ದರೆ ನಮ್ಮ ಪಿತೃಗಳ ದೇವರು ಅದನ್ನು ಬಲ್ಲವರಾಗಿದ್ದು ನಿಮ್ಮನ್ನು ದಂಡಿಸುವರು," ಎಂದು ಹೇಳಿದನು. 18ಆಗ 'ಮೂವತ್ತು ಪ್ರಮುಖ'ರ ಪಡೆಯಲ್ಲಿ ಮುಖ್ಯಸ್ಥನಾದ ಅಮಾಸೈ ಆತ್ಮವೇಶವುಳ್ಳವನಾಗಿ ಹೀಗೆ ಕೂಗಿ ಹೇಳಿದನು:

"ಜೆಸ್ಸೆಯ ಮಗ ದಾವೀದನಿಗೆ
ಶುಭವಾಗಲಿ !
ನಾವೆಲ್ಲರು ನಿಮ್ಮವರು;
ನಿಮಗೂ ನಿಮ್ಮ ಸಹಾಯಕರಿಗೂ
ಶುಭವಾಗಲಿ !
ದೇವರು ನಿಮಗೆ ಜಯಪ್ರದರಾಗಿದ್ದಾರೆ." ದಾವೀದ ಅವರನ್ನು ಸ್ವಾಗತಿಸಿ ತನ್ನ ಸೈನ್ಯದಲ್ಲಿ ಮುಖ್ಯಾಧಿಕಾರಿಗಳನ್ನಾಗಿ ನೇಮಿಸಿದನು.

### ಮನಸ್ಸೆ ಗೋತ್ರದಿಂದ ಬಂದ ಬೆಂಬಲಿಗರು

19 ಅರಸ ಸೌಲನಿಗೆ ವಿರುದ್ಧ ಯುದ್ಧ ಮಾಡಲು ಫಿಲಿಷ್ಟಿಯರೊಂದಿಗೆ ಹೋಗುತ್ತಿದ್ದಾಗ ಮನಸ್ಸೆ ಗೋತ್ರದ ಕೆಲವು ಜನ ಸೈನಿಕರು ಬಂದು ದಾವೀದನ ಪಕ್ಷದಲ್ಲಿ ಸೇರಿಕೊಂಡರು. ದಾವೀದನು ನಿಜವಾಗಿಯೂ ಫಿಲಿಷ್ಟಿಯರಿಗೆ ಸಹಾಯಮಾಡಲಿಲ್ಲ. ತನ್ನ ಮೊದಲಿನ ಯಜಮಾನ ಸೌಲನಿಗೆ ತಮ್ಮನ್ನು ಹಿಡಿದುಕೊಡಬಹುದೆಂಬ ಭಯ ಫಿಲಿಷ್ಟಿಯ ರಾಜರುಗಳಿಗೆ ಇದ್ದುದರಿಂದ ಅವರು ಅವನನ್ನು ಚಿಕ್ಲಗಿಗೆ ಹಿಂದಕ್ಕೆ ಕಳುಹಿಸಿದರು. 20ಹೀಗೆ ಅವನು ಹಿಂದಿರುಗುತ್ತಿದ್ದಾಗ ಅವನನ್ನು ಸೇರಿಕೊಂಡ ಮನಸ್ಸೆಗೋತ್ರದ ಸೈನಿಕರ ಹೆಸರುಗಳು ಇಂತಿವೆ: ಆದ್ನ, ಯೋಜಾಬಾದ್, ಎದೀಗಯೇಲ್, ಮೀಕಾಯೇಲ್, ಯೋಜಾಬಾದ್, ಎಲೀಹೂ ಹಾಗೂ ಚಿಲ್ಲೆತೈ, ಇವರೆಲ್ಲರೂ ಮನಸ್ಸೆ ಗೋತ್ರದಲ್ಲಿ ಸಹಸ್ರಾಧಿಪತಿಗಳಾಗಿದ್ದರು. 21ಇವರು ಪ್ರಖ್ಯಾತ ಯುದ್ಧವೀರರಾಗಿದ್ದು ದಾವೀದನ ಸೇನಾಪಡೆಗಳ ಮುಖ್ಯಸ್ಥರಾಗಿ ಸೇವೆಸಲ್ಲಿಸಿದರು. ಅನಂತರ ಇಸ್ರಯೇಲಿನ ಸೇನೆಯಲ್ಲಿಯೂ ಮುಖ್ಯಸ್ಥ ರಾಗಿದ್ದರು. 22ದಾವೀದನ ಸೈನ್ಯಕ್ಕೆ ಪ್ರತಿದಿನವೂ ಹೊಸಬರು ಬಂದು ಸೇರುತ್ತಾ ಇದ್ದುದರಿಂದ ಅವನ ಸೈನ್ಯವು ಸಂಖ್ಯೆಯಲ್ಲಿ ಅಧಿಕಾಧಿಕವಾಗಿ ಬೆಳೆಯಿತು.

### ದಾವೀದನ ಸೇನಾಪಡೆಗಳ ಪಟ್ಟಿ

23 ಸರ್ವೇಶ್ವರಸ್ವಾಮಿ ವಾಗ್ದಾನ ಮಾಡಿದಂತೆ ಸೌಲನಿಗೆ ಬದಲಾಗಿ ದಾವೀದನನ್ನು ಅರಸನನ್ನಾಗಿ ಮಾಡಲು, ಅನೇಕ ಸಿದ್ಧಸೈನಿಕರು ಹೆಬ್ರೋನಿಗೆ ಬಂದು ದಾವೀದನ ಸೈನ್ಯದಲ್ಲಿ ಸೇರಿದರು. ಅವರ ಸಂಖ್ಯೆಗಳು ಈ ಕೆಳಕಂಡಂತಿವೆ:

24 ಯೆಹೂದ: ಗುರಾಣಿ ಹಾಗೂ ಈಟಿಗಳನ್ನು ಹೊಂದಿದ 6,800 ಶಸ್ತ್ರಧಾರಿಗಳು;

25 ಸಿಮೆಯೋನ: ಚೆನ್ನಾಗಿ ತರಬೇತಿ ಹೊಂದಿದ 7,100 ರಣವೀರರು;

26 ಲೇವಿ: 4,600 ಸೈನಿಕರು;

27 ಯೆಹೋಯಾದಾವನೂ ಅವನ ಹಿಂಬಾಲಕರೂ ಆದ ಆರೋನನ ವಂಶಜರು – 3,700 ಸೈನಿಕರು;

28 ಪರಾಕ್ರಮಶಾಲಿಯಾದ ಯುವಕ ಚಾದೋಕ ಮತ್ತು ಅವನ ಬಂಧುಗಳಾದ 22 ಮಂದಿ ಅಧಿಪತಿಗಳು;

29 ಸೌಲನ ಸಂಬಂಧಿಕರಾದ ಬೆನ್ಯಾಮೀನ್ ಗೋತ್ರದಿಂದ: 3,000 ಸೈನಿಕರು;

30 ಎಫ್ರಯಿಮ್ ಗೋತ್ರದಿಂದ : 20,800 ಮಹಾ ರಣವೀರರು;

31 ಪಶ್ಚಿಮದಲ್ಲಿಯ ಮನಸ್ಸೆ ಕುಲದಿಂದ 18,000 ಮಂದಿ ದಾವೀದನ ಪಟ್ಟಾಭಿಷೇಕದಲ್ಲಿ ಭಾಗಿಗಳಾಗಲು ಆಯ್ಕೆಯಾದವರು;

32 ಇಸ್ಸಾಕಾರ ಗೋತ್ರದಿಂದ: 200 ಜನ ನಾಯಕರು ಹಾಗೂ ಅವರೊಂದಿಗಿದ್ದ ಸೈನಿಕರು; (ಇಸ್ರಯೇಲರು ಏನು ಮಾಡಬೇಕು, ಅದನ್ನು ಮಾಡಲು ಯಾವುದು ಉತ್ತಮ ಸಮಯ ಎಂಬುದನ್ನು ಈ ನಾಯಕರು ತಿಳಿದಿದ್ದರು);

33 ಜೆಬೂಲನ್ಯರಿಂದ: ನಿಷ್ಠೆಯುಳ್ಳ, ನಂಬಿಗಸ್ಥ, ಯುದ್ಧಮಾಡಲು ಸಿದ್ಧರಾದ, ಎಲ್ಲಾ ರೀತಿಯ ಆಯುಧಗಳನ್ನು ಉಪಯೋಗಿಸಲು ತರಬೇತಿ ಹೊಂದಿದ 50,000 ವೀರರು;

34 ನಫ್ತಾಲಿಯವರಿಂದ: 1,000 ಮಂದಿ ನಾಯಕರು ಮತ್ತು ಅವರೊಂದಿಗೆ ಗುರಾಣಿ, ಈಟಿಗಳೊಂದಿಗೆ ಸಶಸ್ತ್ರರಾದ 37,000 ಸೈನಿಕರು;

35 ದಾನ್ಯರಿಂದ : 28,600 ಯುದ್ಧ ನಿಪುಣರು;

36 ಅಶೇರ್ಯದಿಂದ : 40,000 ಯುದ್ಧ ಸನ್ನದ್ಧರಾದ ವೀರರು;

37 ಜೋರ್ಡನ್ ಪೂರ್ವದಲ್ಲಿದ್ದ ಗೋತ್ರಗಳು – ರೂಬೆನ್, ಗಾದ್ ಮತ್ತು ಪೂರ್ವ ಮನಸ್ಸೆ: ಎಲ್ಲಾ ರೀತಿಯ ಆಯುಧಗಳನ್ನು ಪ್ರಯೋಗಿಸಲು ತರಬೇತಿ ಹೊಂದಿದ 120,000 ಪುರುಷರು.

38 ಯುದ್ಧಸನ್ನದ್ಧರಾದ ಈ ಎಲ್ಲಾ ಸೈನಿಕರು ಸಮಸ್ತ ಇಸ್ರಯೇಲರ ಮೇಲೆ ದಾವೀದನನ್ನು
ಅರಸನನ್ನಾಗಿ ಮಾಡಲು ದೃಢನಿರ್ಧಾರ ಮಾಡಿಕೊಂಡು ಹೆಬ್ರೋನಿಗೆ ಹೋದರು. ಇಸ್ರಯೇಲರಲ್ಲಿ
ಉಳಿದವರೆಲ್ಲರೂ ಇದೇ ಉದ್ದೇಶದಿಂದ ಒಂದಾಗಿದ್ದರು. 39ಅವರು ದಾವೀದನೊಂದಿಗೆ, ತಮ್ಮ
ಸಹಬಾಂಧವರು ಸಿದ್ಧಪಡಿಸಿದ ಆಹಾರ ಪಾನೀಯಗಳನ್ನು ಸೇವಿಸುತ್ತಾ, ಮೂರು ದಿನಗಳನ್ನು ಕಳೆದರು.
40ದೂರದ ಉತ್ತರದಲ್ಲಿದ್ದ ಇಸ್ಸಾಕಾರ್, ಜೆಬುಲೂನ್, ನಫ್ತಾಲಿ ಗೋತ್ರಗಳ ಜನರು ತಮ್ಮ ಎತ್ತು, ಕತ್ತೆ,
ಹೇಸರಗತ್ತೆ, ಒಂಟೆ ಇವುಗಳ ಮೇಲೆ ರೊಟ್ಟಿ, ಅಂಜೂರ, ಒಣದ್ರಾಕ್ಷಿ, ದ್ರಾಕ್ಷಾರಸ, ಎಣ್ಣೆಗಳನ್ನು ಹೊತ್ತು
ತಂದರು. ಭೋಜನಕ್ಕೆ ಕುರಿದನಗಳನ್ನು ಸಹ ತೆಗೆದುಕೊಂಡು ಬಂದರು. ನಾಡಿನಲ್ಲೆಲ್ಲಾ ಸಂತೋಷ
ಸಂಭ್ರಮವಿತ್ತು.

### ಕಿರ್ಯತ್ಯಾರೀಮಿನಿಂದ ಮಂಜೂಷದ ಸ್ಥಳಾಂತರ

(2 ಸಮು. 6.1–11)

**13** ಅರಸ ದಾವೀದನು ಸರ್ವ ಸಹಸ್ರಾಧಿಪತಿಗಳೊಂದಿಗೂ ಶತಾಧಿಪತಿಗಳೊಂದಿಗೂ ಸಮಾಲೋಚನೆ
ನಡೆಸಿದನು. 2“ನೀವು ಎಲ್ಲರು ಸಮ್ಮತಿಸಿದರೆ, ಇದು ನಮ್ಮ ದೇವರಾದ ಸರ್ವೇಶ್ವರಸ್ವಾಮಿಯ ಚಿತ್ತವಾಗಿದ್ದರೆ,
ಇಲ್ಲಿ ನಮ್ಮೊಂದಿಗೆ ಶೀಘ್ರವಾಗಿ ಬಂದು ಸೇರಬೇಕೆಂದು ಉಳಿದ ಎಲ್ಲಾ ನಮ್ಮ ದೇಶಬಾಂಧವರಿಗೆ, ಯಾಜಕ–
ಲೇವಿಯರಿಗೆ ಹಾಗು ಅವರ ಪಟ್ಟಣಗಳಿಗೆ ಸಂದೇಶವನ್ನು ಕಳುಹಿಸೋಣ. 3ಅನಂತರ ನಾವು ಹೋಗಿ
ಅರಸ ಸೌಲ ನಿರ್ಲಕ್ಷಿಸಿದ್ದ ದೇವಮಂಜೂಷವನ್ನು ತೆಗೆದುಕೊಂಡು ಬರೋಣ,” ಎಂದು ಜನರೆಲ್ಲರಿಗೆ ಸಲಹೆ
ಮಾಡಿದನು. 4ಈ ಸಲಹೆಯನ್ನು ಸರ್ವರೂ ಮೆಚ್ಚಿ ಅನುಮೋದಿಸಿದರು.

5 ಹೀಗೆ ಅರಸ ದಾವೀದನು ಕಿರ್ಯತ್ಯಾರೀಮಿನಿಂದ ಜೆರುಸಲೇಮಿಗೆ ದೇವಮಂಜೂಷವನ್ನು
ತರಲು ದೇಶದ ಎಲ್ಲಾ ಕಡೆಗಳಿಂದಲೂ, ದಕ್ಷಿಣದ ಈಜಿಪ್ಟ್ ಗಡಿಯಿಂದ ಉತ್ತರದ ಹಾಮಾತ್
ಕಣಿವೆಯವರೆಗಿನ ಜನರನ್ನು ಒಂದುಗೂಡಿಸಿದನು. 6ದಾವೀದನೂ ಜನರೂ ಜುದೇಯದಲ್ಲಿ ‘ಬಾಳಾ’
ಎಂದು ಹೆಸರುಗೊಂಡಿದ್ದ ಕಿರ್ಯತ್ಯಾರೀಮ ಪಟ್ಟಣಕ್ಕೆ ಮಂಜೂಷವನ್ನು ತರಲು ಹೋದರು. ಆ
ಮಂಜೂಷವು ಕೆರೂಬಿಯರ ನಡುವೆ ಆಸೀನರಾಗಿರುವ ಸರ್ವೇಶ ದೇವರ ನಾಮದಿಂದ ಸುಪ್ರಸಿದ್ಧ ವಾಗಿತ್ತು.
7ಅಬೀನಾದಾಬಿನ ಮನೆಯಿಂದ ಆ ದೇವಮಂಜೂಷವನ್ನು ಹೊರಗೆ ತಂದು, ಒಂದು ಹೊಸ ಎತ್ತಿನ
ಬಂಡಿಯ ಮೇಲಿಟ್ಟರು. ಉಜ್ಜನೂ ಅಹಿಯೋವನೂ ಬಂಡಿಯನ್ನು ನಡೆಸುತ್ತಿದ್ದರು. 8ದಾವೀದನೂ ಎಲ್ಲಾ
ಜನರೂ ಕಿನ್ನರಿ, ಸ್ವರಮಂಡಲ, ತಮಟೆ, ತಾಳ, ತುತೂರಿ ಮುಂತಾದ ವಾದ್ಯಗಳನ್ನು ಬಾರಿಸುತ್ತಾ
ಪೂರ್ಣಶಕ್ತಿಯಿಂದ ಹಾಡುತ್ತಾ ದೇವರ ಮುಂದೆ ನರ್ತಿಸುತ್ತಾ ನಡೆದರು.

9 ಕೀದೋನ್ ಎಂಬಲ್ಲಿ ಕಾಳುತೂರುವ ಕಣಕ್ಕೆ ಬಂದಾಗ ಎತ್ತುಗಳು ಎಡವಿದವು. ಆಗ ಉಜ್ಜನು
ತನ್ನ ಕೈಗಳನ್ನು ಚಾಚಿ ದೇವಮಂಜೂಷವನ್ನು ಹಿಡಿದುಕೊಂಡನು. 10ಮಂಜೂಷವನ್ನು ಮುಟ್ಟಿದ್ದಕ್ಕಾಗಿ

ಕೂಡಲೇ ಸರ್ವೇಶ್ವರ ಉಜ್ಜನ ಮೇಲೆ ಉಗ್ರಕೋಪತಾಳಿ ಅವನನ್ನು ಕೊಂದುಹಾಕಿದರು. ದೇವರ ಸನ್ನಿಧಿಯಲ್ಲಿಯೇ ಅವನು ಮರಣ ಹೊಂದಿದನು. 11ಆ ಸ್ಥಳಕ್ಕೆ ಅಂದಿನಿಂದ 'ಪೆರೆಚ್ ಉಜ್ಜ' ಎಂಬ ಹೆಸರು ಬಂತು. ಸರ್ವೇಶ್ವರ ಕೋಪದಿಂದ ಉಜ್ಜನನ್ನು ಶಿಕ್ಷಿಸಿದ್ದಕ್ಕಾಗಿ ದಾವೀದನು ಭಯದಿಂದ ಕಂಗೆಟ್ಟನು.

12 ಸರ್ವೇಶ್ವರನ ಭಯದಿಂದ ದಾವೀದನು, "ದೇವರ ಮಂಜೂಷವನ್ನು ನಾನಿರುವಲ್ಲಿಗೆ ಈಗ ಹೇಗೆ ತಾನೆ ತೆಗೆದುಕೊಂಡು ಹೋಗಲಿ?" ಎಂದು ಕಳವಳಪಟ್ಟನು. 13ಅದನ್ನು ಜೆರುಸಲೇಮಿಗೆ ತನ್ನೊಂದಿಗೆ ತೆಗೆದುಕೊಂಡು ಹೋಗಲಿಲ್ಲ. ಗತ್ ಊರಿನ ನಿವಾಸಿ ಓಬೇದೆದೋಮನ ಮನೆಯಲ್ಲಿ ಅದನ್ನು ಇರಿಸಿದನು. 14ಅದು ಅಲ್ಲಿ ಮೂರು ತಿಂಗಳು ಇತ್ತು. ಸರ್ವೇಶ್ವರ ಆ ಅವಧಿಯಲ್ಲಿ ಓಬೇದೆದೋಮನ ಕುಟುಂಬವನ್ನೂ ಅವನಿಗೆ ಇದ್ದುದೆಲ್ಲವನ್ನೂ ಆಶೀರ್ವದಿಸಿದರು.

### ಜೆರುಸಲೇಮಿನಲ್ಲಿ ದಾವೀದನ ಚಟುವಟಿಕೆಗಳು

(2 ಸಮು. 5.11–16)

**14** ಟೈರಿನ ಅರಸ ಹೀರಾಮನು ದಾವೀದನ ಬಳಿಗೆ ತನ್ನ ವಾಣಿಜ್ಯ ನಿಯೋಗವನ್ನು ಕಳುಹಿಸಿದನು. ಅರಮನೆಯನ್ನು ಕಟ್ಟಲು ಅವನಿಗೆ ದೇವದಾರು ಮರದ ದಿಮ್ಮಿಗಳನ್ನು, ಶಿಲ್ಪಿಗಳನ್ನು ಹಾಗು ಬಡಗಿಯವರನ್ನು ಕಳುಹಿಸಿಕೊಟ್ಟನು. 2ಹೀಗೆ ದಾವೀದನು ದೇವಪ್ರಜೆಗಳಾದ ಇಸ್ರಯೇಲರ ನಿಮಿತ್ತ ತನ್ನ ರಾಜ್ಯವನ್ನು ಉನ್ನತ ಸ್ಥಾನಕ್ಕೇರಿಸಿ ತನ್ನನ್ನು ಇಸ್ರಯೇಲ್ ರಾಜನನ್ನಾಗಿ ಸ್ಥಿರಪಡಿಸುವರೆಂದು ತಿಳಿದುಕೊಂಡನು.

3 ಜೆರುಸಲೇಮಿನಲ್ಲೂ ದಾವೀದನು ಹಲವು ಮಹಿಳೆಯರನ್ನು ವಿವಾಹವಾಗಿ ಇನ್ನೂ ಕೆಲವು ಮಂದಿ ಗಂಡು ಮಕ್ಕಳನ್ನೂ ಹೆಣ್ಣು ಮಕ್ಕಳನ್ನೂ ಪಡೆದನು. 4ಜೆರುಸಲೇಮಿನಲ್ಲಿ ಅವನಿಗೆ ಹುಟ್ಟಿದ ಗಂಡು ಮಕ್ಕಳು: ಶಮ್ಮೂವ, ಶೋಬಾಬ್, ನಾತಾನ್, ಸೊಲೊಮೋನ್, 5ಇಬ್ಹಾರ್, ಎಲೀಷೂವ, ಎಲ್ಪೆಲೆಟ್, 6ನೋಗಹ, ನೆಫೆಗ್, ಯಾಫೀಯ, 7ಎಲೀಷಾಮ, ಬೇಲ್ಯಾದ ಹಾಗು ಎಲೀಫೆಲೆಟ್ ಎಂಬವರು.

### ಫಿಲಿಷ್ಟಿಯರ ಮೇಲೆ ವಿಜಯ

(2 ಸಮು. 5:17–25)

8 ದಾವೀದನು ಇಸ್ರಯೇಲರೆಲ್ಲರ ಇಡೀ ನಾಡಿಗೆ ಅರಸನಾಗಿ ಅಭಿಷಿಕ್ತನಾಗಿದ್ದಾನೆಂಬ ವರ್ತಮಾನವನ್ನು ಫಿಲಿಷ್ಟಿಯರು ಕೇಳಿದರು. ಅವನನ್ನು ಸೆರೆಹಿಡಿಯಲು ತಮ್ಮ ಸೈನ್ಯವನ್ನು ಕಳುಹಿಸಿದರು. ದಾವೀದನು ಅವರನ್ನು ಎದುರಿಸಲು ಸಿದ್ಧನಾದರು. 9ಫಿಲಿಷ್ಟಿಯರು ರೆಫಾಯಿಮ್ ಕಣಿವೆಯನ್ನು ತಲುಪಿ ಸುಲಿಗೆಮಾಡಲು ಪ್ರಾರಂಭಿಸಿದರು. 10"ಫಿಲಿಷ್ಟಿಯರ ಮೇಲೆ ನಾನು ದಾಳಿ ಮಾಡಬಹುದೊ? ನೀವು ನನಗೆ ಜಯವನ್ನು ಕೊಡುವಿರೋ?" ಎಂದು ದಾವೀದನು ದೇವರಾದ ಸರ್ವೇಶ್ವರನನ್ನು ಪ್ರಾರ್ಥಿಸಿದನು.

"ಹೌದು, ಅವರನ್ನು ಎದುರಿಸು. ನಾನು ನಿನಗೆ ಜಯವನ್ನು ಕೊಡುವೆನು," ಎಂದು ಸರ್ವೇಶ್ವರ ಉತ್ತರಕೊಟ್ಟರು.

11 ಹೀಗೆ ದಾವೀದ ಬಾಳ್ ಪೆರಾಚೀಮ್ ಎಂಬಲ್ಲಿ ಅವರ ಮೇಲೆ ದಾಳಿಮಾಡಿ ಅವರನ್ನು ಸೋಲಿಸಿದನು. "ಕಟ್ಟೆಯೊಡೆದ ಪ್ರವಾಹದಂತೆ ನುಗ್ಗಿ ವೈರಿಸೈನ್ಯವನ್ನು ನಾಶಮಾಡಲು ಸರ್ವೇಶ್ವರ ನನ್ನನ್ನು ಉಪಯೋಗಿಸಿದ್ದಾರೆ," ಎಂದು ಹೇಳಿದನು. ಈ ಕಾರಣ ಆ ಸ್ಥಳಕ್ಕೆ 'ಬಾಳ್ ಪೆರಾಚೀಮ್' ಎಂಬ ಹೆಸರು ಬಂದಿತು. 12ಫಿಲಿಷ್ಟಿಯರು ತಲೆ ತಪ್ಪಿಸಿಕೊಂಡು ಓಡಿಹೋಗುವಾಗ ತಮ್ಮ ವಿಗ್ರಹಗಳನ್ನು ಅಲ್ಲೇ ಬಿಟ್ಟು ಹೋದರು. ಅವೆಲ್ಲವನ್ನು ಸುಟ್ಟುಹಾಕಬೇಕೆಂದು ದಾವೀದನು ಅಪ್ಪಣೆ ಮಾಡಿದನು.

13 ಸ್ವಲ್ಪವೇ ಸಮಯದ ನಂತರ ಫಿಲಿಷ್ಟಿಯರು ಪುನಃ ಬಂದು ಕಣಿವೆಯಲ್ಲಿ ಕೊಳ್ಳೆ ಹೊಡೆಯಲು ಪ್ರಾರಂಭಿಸಿದರು. 14ದಾವೀದನು ಮತ್ತೊಮ್ಮೆ ಸರ್ವೇಶ್ವರನ ಸನ್ನಿಧಿಯಲ್ಲಿ ವಿಚಾರಿಸಿದನು. "ನೀನು ಅವರನ್ನು ಬೆನ್ನಟ್ಟಬೇಡ. ಸುತ್ತಿಕೊಂಡು ಹೋಗಿ ಬಾಕಾಮರಗಳಿರುವ ಆಚೆಕಡೆಯಿಂದ ಅವರ ಮೇಲೆ ದಾಳಿಮಾಡು. 15ಆ ಮರಗಳ ತುದಿಯಲ್ಲಿ ಹೆಜ್ಜೆಗಳ ಸಪ್ಪಳ ಕೇಳುವಾಗ, ದೇವರು ಫಿಲಿಷ್ಟಿಯರ ಸೈನ್ಯವನ್ನು ಸೋಲಿಸುವುದಕ್ಕಾಗಿ ನನಗೆ ಮುಂದಾಗಿ ಹೊರಟಿದ್ದಾರೆಂದು ತಿಳಿದುಕೊಂಡು ಅವರ ಮೇಲೆ ದಾಳಿಮಾಡು,"

ಎಂದು ಸರ್ವೇಶ್ವರ ಉತ್ತರಕೊಟ್ಟರು. 16ಸರ್ವೇಶ್ವರ ಹೇಳಿದಂತೆಯೇ ದಾವೀದನು ಮಾಡಿದನು.
ಫಿಲಿಷ್ಟಿಯರನ್ನು ಗಿಬ್ಯೋನಿನಿಂದ ಗೆಜೆರಿನವರೆಗೂ ಹಿಮ್ಮೆಟ್ಟಿದನು. 17ದಾವೀದನ ಹೆಸರು ಎಲ್ಲಾ ಕಡೆಗಳಲ್ಲಿ
ಪ್ರಖ್ಯಾತಿಗೆ ಬಂದಿತು; ಎಲ್ಲಾ ದೇಶಗಳವರೂ ದಾವೀದನಿಗೆ ಭಯಪಡುವಂತೆ ಸರ್ವೇಶ್ವರ ಮಾಡಿದರು.

### ದೇವಮಂಜೂಷದ ಸ್ಥಳಾಂತರಕ್ಕೆ ಸಿದ್ಧತೆ

**15** ದಾವೀದ ನಗರದಲ್ಲಿ ದಾವೀದನು ತನ್ನ ವೈಯಕ್ತಿಕ ಉಪಯೋಗಕ್ಕಾಗಿ ಮನೆಗಳನ್ನು ಕಟ್ಟಿಸಿಕೊಂಡನು.
ದೇವಮಂಜೂಷಕ್ಕೂ ಒಂದು ಸ್ಥಳವನ್ನು ಸಿದ್ಧಪಡಿಸಿ ಅದಕ್ಕೆ ಒಂದು ಗುಡಾರವನ್ನು ಹಾಕಿಸಿದನು.
2‘ಲೇವಿಯರು ಮಾತ್ರವೇ ದೇವಮಂಜೂಷವನ್ನು ಹೊರಬೇಕು. ಏಕೆಂದರೆ ಸದಾಕಾಲ ತಮ್ಮ ಸೇವೆ
ಮಾಡುವುದಕ್ಕೂ ಮಂಜೂಷವನ್ನು ಹೊರುವುದಕ್ಕೂ ಸರ್ವೇಶ್ವರನಿಂದ ಆಯ್ಕೆಯಾದವರು ಅವರೇ’ ಎಂದು
ನಿಶ್ಚಯಿಸಿಕೊಂಡನು. 3ತಾನು ಸಿದ್ಧಪಡಿಸಿದ ಸ್ಥಳಕ್ಕೆ ಸರ್ವೇಶ್ವರನ ಮಂಜೂಷವನ್ನು ತರುವುದಕ್ಕಾಗಿ ಎಲ್ಲಾ
ಇಸ್ರಯೇಲರನ್ನು ಜೆರುಸಲೇಮಿಗೆ ಬರಮಾಡಿಕೊಂಡನು. 4ಅನಂತರ ಆರೋನನ ಸಂತತಿಯವರನ್ನೂ
ಲೇವಿಯರನ್ನೂ ಕರೆಯಿಸಿದನು. 5ಅಂತೆಯೇ, ಲೇವಿಯರಲ್ಲಿ ಕೆಹತನ ಊರಿಯೇಲನೆಂಬ ಮೇಲ್ವಿಚಾರಕನು
ತನ್ನ ಕುಲದ ನೂರಿಪ್ಪತ್ತು ಸದಸ್ಯರೊಂದಿಗೆ ಬಂದನು. 6ಮೆರಾರೀ ಗೋತ್ರದಿಂದ ಮೇಲ್ವಿಚಾರಕ ಅಸಾಯನು
ಇನ್ನೂರ ಇಪ್ಪತ್ತು ಜನರೊಂದಿಗೆ ಬಂದನು; 7ಗೇರ್ಷೋನ್ ಗೋತ್ರದಿಂದ ಮೇಲ್ವಿಚಾರಕ ಯೋವೇಲ ನೂರ
ಮೂವತ್ತು ಜನರೊಂದಿಗೆ ಬಂದನು; 8ಎಲೀಚಾಫನ್ಯ ಗೋತ್ರದಿಂದ ಮೇಲ್ವಿಚಾರಕ ಶೆಮಾಯ ಇನ್ನೂರು
ಜನರೊಂದಿಗೆ ಬಂದನು; 9ಹೆಬ್ರೋನ್ ಗೋತ್ರದಿಂದ ಮೇಲ್ವಿಚಾರಕ ಎಲೀಯೋಲನು ಎಂಬತ್ತು
ಜನರೊಂದಿಗೆ ಬಂದನು. 10ಉಜ್ಜೀಯೇಲನ ಗೋತ್ರದಿಂದ ಮೇಲ್ವಿಚಾರಕ ಅಮ್ಮೀನಾದಾಬ ನೂರ ಹನ್ನೆರಡು
ಜನರೊಂದಿಗೆ ಬಂದನು.
11 ದಾವೀದನು ಯಾಜಕರಾದ ಚಾದೋಕ್ ಹಾಗು ಎಬ್ಯಾತಾರರೆಂಬುವರನ್ನು ಕರೆಯಿಸಿದನು;
ಅಂತೆಯೇ ಲೇವಿಯರಾದ ಊರಿಯೇಲ್, ಅಸಾಯ, ಯೋವೇಲ್, ಶೆಮಾಯ, ಎಲೀಯೋಲ್ ಮತ್ತು
ಅಮ್ಮೀನಾದಾಬ್ ಎಂಬವರನ್ನೂ ಕರೆಯಿಸಿದನು. 12“ನೀವು ಲೇವಿಯರ ಗೋತ್ರಗಳ ನಾಯಕರು; ನಾನು
ಸಿದ್ಧಪಡಿಸಿದ ಸ್ಥಳಕ್ಕೆ ಇಸ್ರಯೇಲರ ದೇವರಾದ ಸರ್ವೇಶ್ವರನ ಮಂಜೂಷವನ್ನು ತರುವುದಕ್ಕಾಗಿ ನೀವು ಹಾಗು
ನಿಮ್ಮ ಜೊತೆಯಲ್ಲಿ ಲೇವಿಯರೂ ನಿಮ್ಮನ್ನೇ ಶುದ್ಧಪಡಿಸಿಕೊಳ್ಳಿರಿ. 13ಮೊದಲೊಂದು ಸಾರಿ, ಅದನ್ನು ತರಲು
ನೀವು ಇಲ್ಲದೇ ಹೋದುದರಿಂದ ಹಾಗು ನಾವು ತಕ್ಕ ರೀತಿಯಲ್ಲಿ ಅವರನ್ನು ಆರಾಧಿಸದೇ ಹೋದುದಕ್ಕಾಗಿ
ನಮ್ಮ ದೇವರಾದ ಸರ್ವೇಶ್ವರ ನಮ್ಮನ್ನು ಶಿಕ್ಷಿಸಿದರು,” ಎಂದು ಅವರನ್ನು ಎಚ್ಚರಿಸಿದನು.
14 ಆಗ ಯಾಜಕರೂ ಲೇವಿಯರೂ ಇಸ್ರಯೇಲರ ದೇವರಾದ ಸರ್ವೇಶ್ವರನ ಮಂಜೂಷವನ್ನು
ತರುವುದಕ್ಕಾಗಿ ತಮ್ಮನ್ನೇ ಶುದ್ಧೀಕರಿಸಿಕೊಂಡರು. 15ಲೇವಿಯರು ಅದನ್ನು ಗುದಿಗೆಗಳ ಮೇಲಿಟ್ಟು, ಸರ್ವೇಶ್ವರ
ಮೋಶೆಗೆ ಆಜ್ಞಾಪಿಸಿದಂತೆ, ತಮ್ಮ ಹೆಗಲಮೇಲೆ ಹೊತ್ತುಕೊಂಡು ನಡೆದರು.
16 ಸ್ವರಮಂಡಲ, ಕಿನ್ನರಿ, ತಾಳಗಳೊಂದಿಗೆ ಸಂಭ್ರಮದಿಂದ ವಾದ್ಯಗಳನ್ನು ಬಾರಿಸುವುದಕ್ಕೂ
ಹಾಡುವುದಕ್ಕೂ ವಿವಿಧ ಲೇವಿಯರನ್ನು ನೇಮಿಸಬೇಕೆಂದು ದಾವೀದನು ಲೇವಿಯರ ನಾಯಕನಿಗೆ
ಆಜ್ಞಾಪಿಸಿದನು. 17–21ಗಾಯಕರ ಮಂಡಳಿಯಿಂದ ಕಂಚಿನ ತಾಳಗಳನ್ನು ಬಾರಿಸಲು ಆಯ್ಕೆಹೊಂದಿ
ದವರು: ಯೋವೇಲನ ಮಗ ಹೇಮಾನ್, ಅವನ ಬಂಧು ಬೆರೆಕ್ಯನ ಮಗ ಆಸಾಫ್, ಮೆರಾರೀ ಕುಟುಂಬಕ್ಕೆ
ಸೇರಿದ ಕೂಷಾಯನ ಮಗ ಏತಾನ್ ಎಂಬವರು. ತಮಗೆ ಸಹಾಯ ಮಾಡಲು ತಾರಸ್ಥಾಯಿಯ
ತಂತಿವಾದ್ಯಗಳನ್ನು ಬಾರಿಸಲು ಜೆಕರ್ಯ, ಬೇನ್, ಯಾಜೀಯೇಲ್, ಶಮೀರಾ ಮೋತ್, ಯೆಹೀಯೇಲ್,
ಉನ್ನೀ, ಎಲೀಯಾಬ್ ಬೆನಾಯ ಹಾಗು ಮಸೇಯ ಎಂಬವರನ್ನು ಆರಿಸಿಕೊಂಡರು. ಮಂದ್ರಸ್ಥಾಯಿಯ
ಕಿನ್ನರಿಗಳನ್ನು ಬಾರಿಸಲು ಮತಿತ್ಯ, ಎಲೀಫೆಲೇಹು, ಮಿಕ್ನೇಯ, ದೇವಾಲಯದ ದ್ವಾರಪಾಲಕರಾದ
ಓಬೇದೆದೋಮ್ ಮತ್ತು ಯೆಗೀಯೇಲರನ್ನೂ ನೇಮಿಸಿಕೊಂಡರು.
22 ಸಂಗೀತದಲ್ಲಿ ಪರಿಣತನಾದ ಕೆನನ್ಯ, ಲೇವಿಯರ ವಾದ್ಯವೃಂದಕ್ಕೆ ಮುಖ್ಯಸ್ಥನಾಗಿ
ನೇಮಕಗೊಂಡನು.

23–24ಬೆರಕ್ಕೆ ಹಾಗು ಎಲ್ಕಾನ ಎಂಬವರು ಓಬೇದೆದೋಮ್ ಮತ್ತು ಯೆಹೀಯರೊಂದಿಗೆ ಮಂಜೂಷದ ಕಾವಲುಗಾರರಾಗಿ ನೇಮಕವಾದರು. ಯಾಜಕರಾದ ಶೆಬನ್ಯ, ಯೋಷಾಫಾಟ್, ನೆತನೇಲ್, ಅಮಾಸೈ, ಜೆಕರ್ಯ, ಬೆನಾಯ ಹಾಗು ಎಲೀಯೆಜೆರ್ ಎಂಬವರು ಮಂಜೂಷದ ಮುಂದೆ ತುತ್ತೂರಿಗಳನ್ನು ಊದಲು ಆಯ್ಕೆಯಾದರು.

### ಜೆರುಸಲೇಮಿಗೆ ಮಂಜೂಷದ ಸ್ಥಳಾಂತರ

(2 ಸಮು. 6.12–22)

25 ಹೀಗೆ ಅರಸ ದಾವೀದನು, ಇಸ್ರಯೇಲಿನ ನಾಯಕರು ಹಾಗು ಸೈನ್ಯದ ಅಧಿಕಾರಿಗಳು ನಿಬಂಧನ ಮಂಜೂಷವನ್ನು ತರಲು ಓಬೇದೆದೋಮನ ಮನೆಗೆ ಹೋದರು. ಇದನ್ನು ಒಂದು ದೊಡ್ಡ ಜಾತ್ರೆಯಂತೆಯೇ ಆಚರಿಸಲಾಯಿತು.
26ಮಂಜೂಷವನ್ನು ಹೊತ್ತುಕೊಂಡು ಬರುತ್ತಿದ್ದ ಲೇವಿಯರಿಗೆ ದೇವರ ಸಹಾಯ ದೊರೆತುದರಿಂದ ಅವರು ಏಳು ಹೋರಿಗಳನ್ನೂ ಏಳು ಕುರಿಗಳನ್ನೂ ಬಲಿದಾನ ಮಾಡಿದರು.
27ದಾವೀದನು, ಮಂಜೂಷ ಹೊತ್ತವರು, ವಾದ್ಯ ಬಾರಿಸುವವರು ಹಾಗು ಅವರ ನಾಯಕ ಕೆನನ್ಯನು ಅತ್ಯುತ್ತಮ ನೂಲಿನಿಂದ ತಯಾರಿಸಿದ ನಿಲುವಂಗಿಗಳನ್ನು ಧರಿಸಿದ್ದರು. ದಾವೀದನು ಏಫೋದನ್ನು ಕೂಡ ಧರಿಸಿಕೊಂಡಿದ್ದನು.
28ಹೀಗೆ ಎಲ್ಲಾ ಇಸ್ರಯೇಲರು ಜೆರುಸಲೇಮಿನವರೆಗೆ ಆನಂದ ಘೋಷಣೆಗಳಿಂದಲೂ ತುತೂರಿ, ಕೊಂಬು, ತಾಳ, ತಂತಿ, ವಾದ್ಯಗಳ ಸಂಗೀತದಿಂದಲೂ ಸರ್ವೇಶ್ವರನ ನಿಬಂಧನಾ ಮಂಜೂಷವನ್ನು ಹೊತ್ತು ತಂದರು.

29 ಆ ಮಂಜೂಷ ಪಟ್ಟಣದೊಳಗೆ ಬರುತ್ತಿದ್ದಂತೆ ಸೌಲನ ಮಗಳಾದ ಮೀಕಲಳು ಕಿಟಕಿಯಿಂದ ಇಣಿಕಿ ನೋಡಿದಳು. ದಾವೀದನು ಸಂತೋಷದಿಂದ ಕುಣಿಯುತ್ತಾ ನರ್ತಿಸುತ್ತಾ ಇದ್ದುದನ್ನು ಕಂಡಳು. ಅದನ್ನು ನೋಡಿ ಅವನ ಬಗ್ಗೆ ಅವಳಲ್ಲಿ ತಿರಸ್ಕಾರ ಭಾವ ಮೂಡಿತು.

**16** ಅವರು ದೇವಮಂಜೂಷವನ್ನು ತಂದು ದಾವೀದನು ಅದಕ್ಕಾಗಿ ಸಿದ್ಧಪಡಿಸಿದ್ದ ಗುಡಾರದೊಳಗೆ ಒಯ್ದು, ಅಲ್ಲಿ ಅದನ್ನು ಸ್ಥಾಪಿಸಿದರು. ದೇವರಿಗೆ ದಹನಬಲಿಗಳನ್ನೂ, ಶಾಂತಿಸಮಾಧಾನದ ಬಲಿಗಳನ್ನೂ ಸಮರ್ಪಿಸಿದರು.
2ಬಲಿಹೋಮಗಳ ಅರ್ಪಣೆ ಮುಗಿದ ತರುವಾಯ ದಾವೀದನು ಸರ್ವೇಶ್ವರನ ಹೆಸರಿನಲ್ಲಿ ಜನರನ್ನು ಆಶೀರ್ವದಿಸಿದನು. ಅವರೆಲ್ಲರಿಗೂ ಪ್ರಸಾದವನ್ನು ಹಂಚಿದನು:
3ಇಸ್ರಯೇಲಿನ ಪ್ರತಿ ಒಬ್ಬ ಪುರುಷನಿಗೂ ಸ್ತ್ರೀಗೂ ಒಂದೊಂದು ರೊಟ್ಟಿಯನ್ನೂ ಬೇಯಿಸಿದ ಒಂದು ತುಂಡುಮಾಂಸವನ್ನೂ ಒಣಗಿದ ದ್ರಾಕ್ಷೆಗಳನ್ನೂ ಹಂಚಿದನು.

4 ಸರ್ವೇಶ್ವರನ ಮಂಜೂಷದ ಮುಂದೆ ದೇವರ ಆರಾಧನೆ ಮಾಡುವುದಕ್ಕಾಗಿ ದಾವೀದನು ಕೆಲವು ಮಂದಿ ಲೇವಿಯರನ್ನು ನೇಮಿಸಿದನು.
5ಅವರಲ್ಲಿ ಆಸಾಫನು ಮುಖ್ಯಸ್ಥನಾಗಿಯೂ ಜೆಕರ್ಯ ಅವನ ಸಹಾಯಕನಾಗಿಯೂ ನೇಮಕಗೊಂಡರು. ಯೇಗೀಯೇಲ್, ಶೆಮೀರಾಮೋತ್, ಯೆಹೀಯೇಲ್, ಮತ್ತಿತ್ಯ, ಎಲೀಯಾಬ್, ಬೆನಾಯ, ಓಬೇದೆದೋಮ್ ಹಾಗು ಯೆಗೀಯೇಲ್ ಸ್ವರಮಂಡಲಗಳನ್ನು ಬಾರಿಸಲು ನೇಮಕವಾದರು. ಆಸಾಫನು ತಾಳಗಳನ್ನು ಬಾರಿಸಬೇಕಾಗಿತ್ತು.
6ಬೆನಾಯ ಹಾಗೂ ಯಹಜೀಯೇಲ್ ಎಂಬ ಯಾಜಕರು ನಿಬಂಧನಾ ಮಂಜೂಷದ ಮುಂದೆ ಕ್ರಮವಾಗಿ ತುತೂರಿಗಳನ್ನು ಊದಬೇಕಾಗಿತ್ತು.
7ಆಸಾಫನಿಗೂ ಅವನ ಜೊತೆ ಲೇವಿಯರಿಗೂ ಸರ್ವೇಶ್ವರನ ಸ್ತೋತ್ರ ಗೀತೆ ಹಾಡಲು ದಾವೀದನು ಪ್ರಥಮವಾಗಿ ಆ ದಿನದಲ್ಲೇ ನೇಮಿಸಿದನು.

### ಸ್ತುತಿಗೀತೆ

ಅವರು ಹೀಗೆಂದು ಹಾಡಿದರು:

8 ಸಲ್ಲಿಸಿ ಸರ್ವೇಶ್ವರನಿಗೆ
ಕೃತಜ್ಞತಾಸ್ತೋತ್ರವನು!

ಮಾಡಿರಿ ಆತನ ನಾಮಸ್ಮರಣೆಯನು!
ಸಾರಿರಿ ಜಗಕೆ ಆತನ ಸತ್ಕಾರ್ಯಗಳನು!!
9 ಹಾಡಿ ಪಾಡಿ ಹೊಗಳಿರಿ ಆತನನು !
ಧ್ಯಾನಿಸಿ ಆತನ ಪವಾಡಗಳನು !!
10 ಹೆಮ್ಮೆಪಡಿ, ನೆನೆದು ಆತನ ಶ್ರೀನಾಮವನು !
ಹಿಗ್ಗಲಿ ಹೃದಯ, ಕೋರಿ ಆತನ
ದರ್ಶನವನು !!
11 ಆಶ್ರಯಿಸಿರಿ ಸರ್ವೇಶ್ವನನೂ ಆತನ
ಶಕ್ತಿಯನೂ !
ಅಪೇಕ್ಷಿಸಿ ನಿತ್ಯವೂ ಆತನ ದರ್ಶನವನು !!
12 ಆತನ ದಾಸ ಇಸ್ರಯೇಲನ ಸಂತತಿಯವರೇ !
ಆತನಾರಿಸಿಕೊಂಡ ಯಕೋಬನ
ವಂಶದವರೇ !!
13 ನೆನೆಯಿರಿ ಆತನ ಅದ್ಭುತಗಳನು,
ಮಹತ್ಕಾರ್ಯಗಳನು !
ಆತನ ವದನ ವಿಧಿಸಿದ ನ್ಯಾಯ
ನಿರ್ಣಯಗಳನು !!
14 ಸರ್ವೇಶ ನಮ್ಮ ದೇವನೆಂಬುದು ಪ್ರಕಟಿತ !
ಆತನಿತ್ತ ತೀರ್ಪು ವಿಶ್ವವ್ಯಾಪ್ತ !!
15 ನೆನಪಿನಲ್ಲಿಡುವನು ಪ್ರಭು ತನ್ನ
ವಾಗ್ದಾನವನು !
ಸಾವಿರಾರು ತಲೆಗಳವರೆಗೂ
ತನ್ನೊಪ್ಪಂದವನು !!
16 ಅಬ್ರಹಾಮನೊಡನೆ ಮಾಡಿಕೊಂಡ
ಒಡಂಬಡಿಕೆಯನು !
ಇಸಾಕನಿಗೆ ಆಣೆಯಿಟ್ಟು ಆತನು
ಹೇಳಿದುದನು !!
17 ಯಕೋಬನಿಗೆ ರಾಜಶಾಸನವಾಗಿ
ಕೊಟ್ಟಿದ್ದನು !
ಇಸ್ರಯೇಲಿಗೆ ಶಾಶ್ವತವಾಗಿತ್ತ ಈ
ಮಾತನು:!!
18 "ನಾ ಕೊಡುವೆನು ಕಾನಾನ್ ನಾಡನು ನಿಮಗೆ!
ಸ್ವಾಸ್ತ್ಯವಾಗುವುದಿದು ನಿಮ್ಮ ಸಂತತಿಗೆ"!!
10-20 ಅಲ್ಪಸಂಖ್ಯಾತರೂ ಆಗಂತುಕರೂ
ಅವರಾಗಿರಲು !
ನಾಡಿಂದ ನಾಡಿಗೆ ರಾಜ್ಯದಿಂದ ರಾಜ್ಯಕ್ಕೆ
ಅಲೆಯುತ್ತಿರಲು !!
21 ಅವರಿಗಾರಿಂದಲೂ
ಅನ್ಯಾಯವಾಗಗೊಡಿಸಲಿಲ್ಲ !
ಅವರಿಗಾಗಿ ಅರಸರನ್ನಾತ

ಗದರಿಸದೆ ಬಿಡಲಿಲ್ಲ !!
22 "ನಾನು ಅಭಿಷೇಕಿಸಿದವರನು ಇಗೋ,
ಮುಟ್ಟಬೇಡಿ !
ನನ್ನ ಪ್ರವಾದಿಗಳಿಗೆ ಕೇಡು ಮಾಡಬೇಡಿ" !!
23 ಸರ್ವ ಭೂನಿವಾಸಿಗಳೇ, ಸರ್ವೇಶ್ವರನಿಗೆ
ಹಾಡಿರಿ!
ಆತನ ಮುಕ್ತಿಮಾರ್ಗವನು ಪ್ರತಿನಿತ್ಯವೂ
ಸಾರಿರಿ!!
24 ಪ್ರಸಿದ್ಧಪಡಿಸಿರಿ ಆತನ ಘನತೆಯನು
ರಾಷ್ಟ್ರಗಳಿಗೆ !
ಆತನದ್ಭುತ ಕಾರ್ಯಗಳನು
ಸಕಲ ಜನಾಂಗಗಳಿಗೆ !!
25 ಏಕೆನೆ, ಮಹಾತ್ಮನು ಸರ್ವೇಶ್ವರ ಅತಿ
ಸ್ತುತ್ಯರ್ಹನು !
ಸಕಲ ದೇವರುಗಳಿಗಿಂತಲೂ
ಘನಗಂಭೀರವನು !!
26 ಶೂನ್ಯ ಪ್ರತಿಮೆಗಳು ಅನ್ಯರಾಷ್ಟ್ರಗಳು
ದೇವರುಗಳೆಲ್ಲ !
ಸರ್ವೇಶನಿಂದಲೇ ಉಂಟಾಯಿತು
ಆಕಾಶ ಮಂಡಲವೆಲ್ಲ !!
27 ಇವೆ ಮಹಿಮೆ, ಮಹತ್ವ, ಆತನ ಸನ್ನಿಧಿಯಲಿ !
ಶಕ್ತಿ, ಸಂತೋಷ ಆತನ ಗರ್ಭಗುಡಿಯಲಿ !!
28 ಶಕ್ತಿಸಾಮರ್ಥ್ಯ ಸರ್ವೇಶ್ವರನವೇ ಎಂದು !
ಜಗದ ರಾಷ್ಟ್ರಗಳು ಘನಪಡಿಸಲಿ ಆತನನು
ಎಂದೆಂದೂ !!
29 ಆತನ ನಾಮಕೆ ಘನತೆಗೌರವವನು ತನ್ನಿ !
ಕಾಣಿಕೆಯೊಂದಿಗೆ ಆತನ ಮಂದಿರಕೆ ಬನ್ನಿ !!
30 ಸರ್ವೇಶನಿಗೆ ಮಣಿಯಿರಿ ಪವಿತ್ರ
ವಸ್ತ್ರಧಾರಿಗಳಂತೆ !
ಅಂಜಿಕೆಯಿಂದ ನಡುಗಲಿ ಜಗವಿಡೀ
ಆತನ ಮುಂದೆ !
ಕದಲದ ಸ್ಥಿರತೆಯನು ಇತ್ತಿಹನೀ ಧರೆಗೆ !!
31–32 "ಹರ್ಷಿಸಲಿ ಆಕಾಶ, ಸಂತೋಷಿಸಲಿ
ಭೂಲೋಕ !
ಗರ್ಜಿಸಲಿ ಸಮುದ್ರ ಮತ್ತು
ಅದರೊಳಿರುವುದೆಲ್ಲ !
ಸಾರಲಿ ರಾಷ್ಟ್ರಗಳಿಗೆ ಸರ್ವೇಶ್ವರ
ರಾಜನೆಂದು !
ಧರೆಗೆ ನ್ಯಾಯತೀರಿಸಲು
ಖಂಡಿತ ಬರುವನೆಂದು !!

22 ಉಲ್ಲಾಸಿಸಲಿ ಹೊಲಗದ್ದೆಗಳು,
ಪೈರುಪಚ್ಚೆಗಳು !
ಹರ್ಷಧ್ವನಿಗೈಯಲಿ ಕಾಡಿನ ಫಲವೃಕ್ಷಗಳು !!
34 ಪ್ರಭು ದಯಾಪೂರಿತ, ಆತನ ಪ್ರೀತಿ
ಶಾಶ್ವತ !
ತೋರಿ ಆತನಿಗೆ ನಿಮ್ಮ ಸ್ತೋತ್ರ ಕೃತಜ್ಞತಾ !!
35 ಹೇ ದೇವಾ, ನಮ್ಮ ಸಹಾಯಕ, ನಮ್ಮನ್ನು
ಉದ್ಧರಿಸು !
ನಾಡು ನಾಡುಗಳಿಂದ ನಮ್ಮನ್ನು
ಒಂದುಗೂಡಿಸು !
ನಿನ್ನ ಪವಿತ್ರ ನಾಮವನು ಭಜಿಸುವೆವು ನಾವು !
ನಿನ್ನ ಸ್ತುತಿಸ್ತೋತ್ರಗಳಲ್ಲಿ ಹೆಚ್ಚಳಪಡುವೆವು !!
36 ಇಸ್ರಯೇಲಿನ ದೇವನಾದ ಸರ್ವೇಶಗೆ
ಸ್ತೋತ್ರ !
ಅನಾದಿಯಿಂದ ಯುಗಯುಗಾಂತರಕು
ಸ್ತೋತ್ರ !
ಜನರೆಲ್ಲರು ಹೇಳಲಿ 'ಆಮೆನ್,' ಸರ್ವೇಶ್ವರ
ನಿಗೆ ಸ್ತೋತ್ರ !!

**ಜೆರುಸಲೇಮ್ ಮತ್ತು ಗಿಬ್ಯೋನಿನಲ್ಲಿ ಆರಾಧನೆ**

37 ನಿಬಂಧನಾ ಮಂಜೂಷದ ಮುಂದೆ ಪ್ರತಿ ದಿನವೂ ಆರಾಧನೆ ನಡೆಸುವ ಜವಾಬ್ದಾರಿಯನ್ನು
ಆಸಾಫ ಮತ್ತು ಅವನ ಜೊತೆ ಲೇವಿಯರಿಗೆ ಅರಸ ದಾವೀದ ಶಾಶ್ವತವಾಗಿ ವಹಿಸಿಕೊಟ್ಟನು. ಅಲ್ಲಿ ಅವರು
ತಮ್ಮ ಕರ್ತವ್ಯವನ್ನು ದಿನನಿತ್ಯವೂ ನೆರವೇರಿಸಬೇಕಾಗಿತ್ತು.
38ಯೆದುತೂನನ ಮಗ ಓಬೇದೆದೋಮನೂ
ಅವನ ಗೋತ್ರದ ಅರವತ್ತ ಎಂಟು ಜನರೂ ಅವರಿಗೆ ಸಹಾಯಕರು ಆಗಿದ್ದರು. ಹೋಸ ಮತ್ತು
ಓಬೇದೆದೋಮರು ದ್ವಾರ ಪಾಲಕರ ಮೇಲ್ವಿಚಾರಕರಾಗಿದ್ದರು.

39 ಯಾಜಕ ಚಾದೋಕ ಮತ್ತು ಅವನ ಜೊತೆ ಯಾಜಕರು ಗಿಬ್ಯೋನಿನಲ್ಲಿದ್ದ ಸರ್ವೇಶ್ವರನ
ಗುಡಾರದಲ್ಲಿ ಆರಾಧನೆಯನ್ನು ನಡೆಸಲು ನೇಮಕರಾಗಿದ್ದರು.
40ಸರ್ವೇಶ್ವರ ಇಸ್ರಯೇಲರಿಗೆ ಕೊಟ್ಟ
ಧರ್ಮಶಾಸ್ತ್ರದಲ್ಲಿ ಬರೆದಿರುವ ಪ್ರಕಾರ ಬಲಿಪೀಠದ ಮೇಲೆ ಪ್ರತೀ ದಿನ ಮುಂಜಾನೆ ಹಾಗು ಸಂಜೆ
ದಹನಬಲಿಯರ್ಪಿಸಬೇಕಾಗಿ ಇತ್ತು.
41ಅಲ್ಲಿ ಅವರೊಂದಿಗೆ ಸರ್ವೇಶ್ವರನ ನಿತ್ಯಪ್ರೀತಿಗಾಗಿ ಅವರನ್ನು ಸ್ತುತಿಸಿ,
ಸಂಗೀತ ಹಾಡಲು ಹೇಮಾನ್, ಯೆದುತೂನ ಹಾಗು ಇನ್ನಿತರರು ನಿರ್ದಿಷ್ಟವಾಗಿ ನೇಮಕರಾಗಿದ್ದರು.
42ಸ್ತುತಿಗೀತೆಗಳನ್ನು ಹಾಡುವಾಗ ತುತೂರಿ, ತಾಳ, ಮತ್ತಿತರ ವಾದ್ಯಗಳನ್ನು ಬಾರಿಸುವವರ
ಮೇಲ್ವಿಚಾರಣೆಯೂ ಹೇಮಾನ್ ಮತ್ತು ಯೆದುತೂನರದಾಗಿತ್ತು. ಯೆದುತೂನನ ಮಕ್ಕಳಿಗೆ ದ್ವಾರಗಳನ್ನು
ಕಾಯುವ ಹೊಣೆಯೂ ಇತ್ತು.

43 ಅನಂತರ ಜನರೆಲ್ಲರೂ ತಮ್ಮ ತಮ್ಮ ಮನೆಗಳಿಗೆ ತೆರಳಿದರು. ತನ್ನ ಕುಟುಂಬದವರನ್ನು
ಆಶೀರ್ವದಿಸಲು ದಾವೀದನೂ ತನ್ನ ಮನೆಗೆ ಹೋದನು.

## ದಾವೀದನ ರಾಜ್ಯ ಶಾಶ್ವತ
(2 ಸಮು. 7.1–17)

**17** ಆಗ ಅರಸ ದಾವೀದನು ತನ್ನ ಅರಮನೆಯಲ್ಲಿ ವಾಸಿಸುತ್ತಿದ್ದನು. 2ಒಂದು ದಿನ ಅವನು ಪ್ರವಾದಿ
ನಾತಾನನನ್ನು ಬರಮಾಡಿ, "ನೋಡು, ನಾನು ವಾಸಮಾಡುತ್ತಾ ಇರುವುದು ದೇವದಾರು ಮರದಿಂದ
ಮಾಡಿದ ಅರಮನೆಯಲ್ಲಿ; ಆದರೆ ಸರ್ವೇಶ್ವರನ ನಿಬಂಧನ ಮಂಜೂಷವಿರುವುದು ಬಟ್ಟೆಯಿಂದ ಮಾಡಿದ
ಗುಡಾರದಲ್ಲಿ!" ಎಂದನು. 3ಅದಕ್ಕೆ ನಾತಾನನು ಸಮ್ಮತಿಸಿ, "ನಿಮಗೆ ಮನಸ್ಸಿದ್ದಂತೆ ಮಾಡಿ; ಸರ್ವೇಶ್ವರ
ನಿಮ್ಮೊಡನೆ ಇದ್ದಾರೆ," ಎಂದನು.
4 ಆದರೆ ಅದೇ ರಾತ್ರಿ ಸರ್ವೇಶ್ವರ ನಾತಾನನಿಗೆ ಹೀಗೆಂದು ಆಜ್ಞಾಪಿಸಿದರು: 5"ನೀನು ಹೋಗಿ
ನನ್ನ ದಾಸ ದಾವೀದನಿಗೆ ತಿಳಿಸಬೇಕಾದುದು ಇದು: 'ನೀನು ನನಗೊಂದು ದೇವಾಲಯವನ್ನು ಕಟ್ಟಬಾರದು.
6ನಾನು ಇಸ್ರಯೇಲರನ್ನು ಈಜಿಪ್ಟ್ ದೇಶದಿಂದ ಬರಮಾಡಿದಂದಿ ನಿಂದ ಇಂದಿನವರೆಗೆ ದೇವಾಲಯದಲ್ಲಿ
ವಾಸಮಾಡಲಿಲ್ಲ; ಗುಡಾರದಲ್ಲೇ ವಾಸಿಸುತ್ತಿದ್ದೆನು. ಹೀಗೆ ಇಸ್ರಯೇಲರ ಮಧ್ಯೆ ಸಂಚರಿಸುತ್ತಿದ್ದಾಗಲೆಲ್ಲಾ ನನ್ನ
ಜನರಾದ ಅವರನ್ನು ಪಾಲಿಸುವುದಕ್ಕೆ ನ್ಯಾಯ ಸ್ಥಾಪಕರನ್ನು ನೇಮಿಸಿದೆ. ಅವರಾರಿಂದಲೂ 'ನೀವೇಕೆ ನನಗೆ
ದೇವದಾರು ಮರದಿಂದ ದೇವಾಲಯವನ್ನು ಕಟ್ಟಿಸಲಿಲ್ಲ?' ಎಂದು ಕೇಳಿದ್ದಿಲ್ಲ'."
7 "ಇದಲ್ಲದೆ, ನೀನು ನನ್ನ ದಾಸ ದಾವೀದನಿಗೆ, ಸರ್ವಶಕ್ತ ಸರ್ವೇಶ್ವರನಾದ ನಾನೇ ಹೇಳಿದೆನೆಂದು
ಹೀಗೆ ತಿಳಿಸು: 'ಕುರಿಗಳ ಹಿಂದೆ ತಿರುಗಾಡುತ್ತಿದ್ದ ನಿನ್ನನ್ನು ಅಡವಿಯಿಂದ ಆಯ್ದುಕೊಂಡು ನನ್ನ ಪ್ರಜೆ
ಇಸ್ರಯೇಲರ ಮೇಲೆ ನಾಯಕನನ್ನಾಗಿ ನೇಮಿಸಿದೆ. 8ನೀನು ಹೋದ ಕಡೆಯೆಲ್ಲಾ ನಿನ್ನ ಸಂಗಡ ಇದ್ದೆ. ನಿನ್ನ
ಶತ್ರುಗಳನ್ನೆಲ್ಲ ನಿನ್ನ ಕಣ್ಮುಂದೆಯೆ ಸದೆಬಡಿದೆ. ಆಗದ ಮಹಾತ್ಮರ ಹೆಸರಿನಂತೆ ನಿನ್ನ ಹೆಸರನ್ನು
ಪ್ರಸಿದ್ಧಗೊಳಿಸುವೆನು. 9ನನ್ನ ಪ್ರಜೆ ಇಸ್ರಯೇಲರಿಗೆ ಒಂದು ಸ್ಥಳವನ್ನು ಕೊಟ್ಟು, ಅದರಲ್ಲಿ ಅವರನ್ನು
ನೆಲೆಗೊಳಿಸುವೆನು. ಇನ್ನು ಮೇಲೆ ಅವರು ಯಾವ ಭಯವೂ ಇಲ್ಲದೆ ಅಲ್ಲೇ ವಾಸಿಸುವರು.
10ಪೂರ್ವಕಾಲದಲ್ಲಿ ನಾನು ನನ್ನ ಜನರಿಗೆ ನ್ಯಾಯ ಸ್ಥಾಪಕರನ್ನು ನೇಮಿಸಿದೆ. ಅಲ್ಲಿಂದೀಚೆಗೆ ಇಸ್ರಯೇಲರು
ಶೋಷಣೆಗೆ ಗುರಿಯಾದಂತೆ ಇನ್ನು ಗುರಿಯಾಗರು. ನಿನ್ನ ಶತ್ರುಗಳನ್ನೆಲ್ಲ ನಿನಗೆ ಅಧೀನಮಾಡುವೆನು. ಅದು
ಮಾತ್ರವಲ್ಲ, ಸರ್ವೇಶ್ವರನಾದ ನಾನು ನಿನಗಾಗಿ ಒಂದು ಮನೆತನವನ್ನು ಕಟ್ಟುವೆನೆಂದು ಮಾತುಕೊಡುತ್ತೇನೆ.
11ನಿನ್ನ ಆಯುಷ್ಕಾಲ ಮುಗಿದು ನೀನು ನಿನ್ನ ಪೂರ್ವಜರನ್ನು ಸೇರಿ ವಿಶ್ರಮಿಸುವಾಗ ನಿನ್ನ ಮಕ್ಕಳಲ್ಲಿ
ಒಬ್ಬನನ್ನು ನಿನಗೆ ಉತ್ತರಾಧಿಕಾರಿಯನ್ನಾಗಿ ನೇಮಿಸಿ ಅವನ ರಾಜ್ಯವನ್ನು ಸ್ಥಿರಪಡಿಸುವೆನು. 12ನನಗಾಗಿ
ಒಂದು ದೇವಾಲಯವನ್ನು ಕಟ್ಟುವವನು ಅವನೇ. ನಾನು ಅವನ ಸಿಂಹಾಸನವನ್ನು ಸ್ಥಿರಪಡಿಸುವೆನು.
13ನಾನು ಅವನಿಗೆ ತಂದೆಯಾಗಿರುವೆನು, ಅವನು ನನಗೆ ಮಗನಾಗಿರುವನು. ನಿನಗಿಂತ ಮುಂಚೆ
ಇದ್ದವನನ್ನು ನನ್ನ ಕೃಪೆ ಬಿಟ್ಟು ಹೋದಹಾಗೆ ಅವನನ್ನು ಬಿಟ್ಟು ಹೋಗುವುದಿಲ್ಲ. 14ಅವನನ್ನು ನನ್ನ
ಮನೆಯಲ್ಲೂ ನನ್ನ ರಾಜ್ಯದಲ್ಲೂ ಸದಾ ಸ್ಥಿರಗೊಳಿಸುವೆನು. ಅವನ ಸಿಂಹಾಸನ ಶಾಶ್ವತವಾಗಿರುವುದು'."
15ನಾತಾನನು ತನಗಾದ ದರ್ಶನದ ಈ ಮಾತುಗಳನ್ನೆಲ್ಲ ದಾವೀದನಿಗೆ ಹೇಳಿದನು.

## ದಾವೀದನು ಮಾಡಿದ ಕೃತಜ್ಞತಾ ಪ್ರಾರ್ಥನೆ
(2 ಸಮು. 7:18–29)

16 ಬಳಿಕ ಅರಸ ದಾವೀದನು ಸರ್ವೇಶ್ವರನ ಸನ್ನಿಧಿಗೆ ಹೋಗಿ ಅಲ್ಲಿ ಕುಳಿತುಕೊಂಡು, "ದೇವರೇ,
ಸರ್ವೇಶ್ವರಾ, ನನ್ನಂಥವನಿಗೆ ತಾವು ಈ ಪದವಿಯನ್ನು ಅನುಗ್ರಹಿಸಿದ್ದೀರಿ; ತಾವು ನನ್ನನ್ನು ಇಷ್ಟು ಮುಂದಕ್ಕೆ
ತರಲು ನಾನೆಷ್ಟರವನು! ನನ್ನ ಕುಟುಂಬ ಎಷ್ಟರದು! 17ದೇವರೇ, ಇದೂ ಸಾಲದೆಂದೆಣಿಸಿ, ನಿಮ್ಮ ದಾಸನ
ಬಹುದೂರ ಸಂತಾನದ ವಿಷಯದಲ್ಲೂ ತಾವು ವಾಗ್ದಾನ ಮಾಡಿರುವಿರಿ. ದೇವರೇ, ಸರ್ವೇಶ್ವರಾ, ನೀವು
ನನ್ನನ್ನು ಒಬ್ಬ ಮಹಾನ್ ವ್ಯಕ್ತಿಯನ್ನೋ ಎಂಬಂತೆ ಭಾವಿಸಿದಿರಿ; ತಾವು ಹೀಗೆ ವರ್ತಿಸುವುದು
ನರಮಾನವರಿಗೆ ಎಂಥಾ ಭಾಗ್ಯ! 18ನೀವು ನಿಮ್ಮ ದಾಸ ದಾವೀದನನ್ನು ಚೆನ್ನಾಗಿ ಬಲ್ಲಿರಿ; ನಾನು ನನ್ನ
ಘನತೆಯನ್ನು ಕುರಿತು ಇನ್ನೇನು ಹೇಳಲಿ? 19ಸರ್ವೇಶ್ವರಾ, ನಿಮ್ಮ ದಾಸನಾದ ನನ್ನ ಹಿತಕ್ಕಾಗಿಯೂ ತಮ್ಮ

ಚಿತ್ತಾನುಸಾರವಾಗಿಯೂ ಈ ಮಹತ್ಕಾರ್ಯಗಳನ್ನೆಲ್ಲಾ ನಡೆಸಿ ನಿಮ್ಮ ಸರ್ವ ಮಹತ್ವವನ್ನು
ತೋರ್ಪಡಿಸಿದ್ದೀರಿ. 20ಸರ್ವೇಶ್ವರಾ, ತಮಗೆ ಸಮಾನರು ಯಾರೂ ಇಲ್ಲ. ನಾವು ಕೇಳಿದಂಥವುಗಳನ್ನೆಲ್ಲಾ
ಆಲೋಚಿಸಿ ನೋಡಿದರೆ ತಮ್ಮ ಹೊರತು, ಬೇರಾವ ದೇವರೂ ಇಲ್ಲ ಎಂಬುದು ನಿಶ್ಚಯ. 21ತಮ್ಮ
ಇಸ್ರಯೇಲ್ ಪ್ರಜೆಗೆ ಸಮನಾದ ಜನಾಂಗ ಲೋಕದಲ್ಲಿ ಬೇರೆ ಯಾವುದಿದೆ? ದೇವರಾದ ತಾವೇ ಬಂದು
ಅದನ್ನು ವಿಮೋಚಿಸಿ ಸ್ವಪ್ರಜೆಯನ್ನಾಗಿಸಿಕೊಂಡಿರಿ; ಆಶ್ಚರ್ಯಕರವಾದ ಅದ್ಭುತಕಾರ್ಯಗಳಿಂದ ನಿಮ್ಮ ನಾಮವನ್ನು
ಪ್ರಸಿದ್ಧಿ ಪಡಿಸಿದ್ದೀರಿ. ಈಜಿಪ್ಟರ ಕೈಯಿಂದ ತಮ್ಮ ಪ್ರಜೆಯನ್ನು ತಪ್ಪಿಸಿ, ರಕ್ಷಿಸಿದಿರಿ. ಅನ್ಯಜನಾಂಗಗಳನ್ನು
ಅವರ ನಾಡಿನಿಂದ ಹೊರಡಿಸಿ ಬಿಟ್ಟಿರಿ. 22ಇಸ್ರಯೇಲರು ಸದಾಕಾಲ ನಿಮ್ಮ ಪ್ರಜೆಗಳಾಗಿರಬೇಕೆಂದು
ನಿರ್ಣಯಿಸಿದಿರಿ; 23ಸರ್ವೇಶ್ವರಾ, ನೀವು ಅವರಿಗೆ ದೇವರಾದಿರಿ. ಸರ್ವೇಶ್ವರಾ, ತಮ್ಮ ದಾಸನನ್ನೂ ಅವನ
ಕುಟುಂಬವನ್ನೂ ಕುರಿತು ನೀವು ಮಾಡಿದ ವಾಗ್ದಾನವನ್ನು ಶಾಶ್ವತಪಡಿಸಿ, ನೆರವೇರಿಸಿರಿ. ಅದು ಸದಾ
ಸ್ಥಿರವಾಗಿರಲಿ. 24 'ಸರ್ವಶಕ್ತರಾದ ಸರ್ವೇಶ್ವರ, ಇಸ್ರಯೇಲರ ದೇವರು; ತಮ್ಮ ದಾಸ ದಾವೀದನ
ಮನೆತನವನ್ನು ತಮ್ಮ ಸನ್ನಿಧಿಯಲ್ಲಿ ಸ್ಥಿರವಾಗಿಟ್ಟಿದ್ದಾರೆ' ಎಂದು ಜನರು ನಿಮ್ಮ ನಾಮವನ್ನು ಕೊಂಡಾಡಲಿ.
25ನನ್ನ ದೇವರೇ, ತಾವು ತಮ್ಮ ದಾಸನಿಗೆ, 'ನಾನು ನಿನಗೊಂದು ಮನೆತನವನ್ನು ಕಟ್ಟುವೆನು' ಎಂದು
ವಾಗ್ದಾನ ಮಾಡಿದ್ದೀರಿ. ಆದುದರಿಂದಲೇ ಈ ಪ್ರಕಾರ ನಿಮ್ಮನ್ನು ಪ್ರಾರ್ಥಿಸುವುದಕ್ಕೆ ಧೈರ್ಯಗೊಂಡೆ.
26ಸರ್ವೇಶ್ವರಾ, ತಮ್ಮ ದಾಸನಾದ ನನಗೆ ಇಂಥ ಶ್ರೇಷ್ಠ ವಾಗ್ದಾನ ಮಾಡಿದ ನೀವು ದೇವರಾಗಿದ್ದೀರಿ.
27ಈಗ ನಿಮ್ಮ ದಾಸನ ಮನೆತನವನ್ನು ಆಶೀರ್ವದಿಸಿರಿ; ಅದನ್ನು ಸದಾಕಾಲ ನಿಮ್ಮ ಆಶ್ರಯದಲ್ಲಿ
ಇಟ್ಟುಕೊಳ್ಳಬೇಕೆಂದು ಮನಸ್ಸು ಮಾಡಿದ್ದೀರಿ; ಸರ್ವೇಶ್ವರಾ, ನೀವು ಅದನ್ನು ಆಶೀರ್ವದಿಸಿದ್ದೀರಿ; ಅದು
ನಿತ್ಯವು ಸೌಭಾಗ್ಯದಿಂದ ಇರುವುದು," ಎಂದು ಪ್ರಾರ್ಥಿಸಿದನು.

### ದಾವೀದನ ವಿಜಯಗಳು

(2 ಸಮು. 8.1–18)

**18** ಅನಂತರ ದಾವೀದನು ಹೋಗಿ ಅವರನ್ನು ಸೋಲಿಸಿದನು. ಅವರಿಂದ ಗತ್ ಪಟ್ಟಣವನ್ನೂ ಅದರ
ಗ್ರಾಮಗಳನ್ನೂ ವಶಪಡಿಸಿಕೊಂಡನು. 2ಆಮೇಲೆ ಮೋವಾಬ್ಯರನ್ನು ಸೋಲಿಸಿದನು. ಅವರು ದಾವೀದನಿಗೆ
ಅಧೀನರಾಗಿ ಅವನಿಗೆ ಕಪ್ಪಕೊಡಬೇಕಾಯಿತು.

3 ಯೂಫ್ರೆಟಿಸ್ ನದಿಯ ಸುತ್ತಣ ಪ್ರದೇಶದಲ್ಲಿ ತನ್ನ ರಾಜ್ಯಾಧಿಕಾರವನ್ನು ಸ್ಥಾಪಿಸುವುದಕ್ಕೆ
ಹೋಗುತ್ತಿದ್ದ ಚೋಬದ ಅರಸನಾದ ಹದರೆಜೆರನನ್ನು ದಾವೀದನು ಹಮಾತಿನ ಬಳಿಯಲ್ಲಿ ಪರಾಭವ
ಗೊಳಿಸಿದನು. 4ಸಾವಿರದ ಏಳುನೂರು ಮಂದಿ ರಾಹುತರನ್ನೂ ಇಪ್ಪತ್ತು ಸಾವಿರ ಮಂದಿ ಕಾಲಾಳುಗಳನ್ನೂ
ಸೆರೆಹಿಡಿದನು; ನೂರು ಕುದುರೆಗಳನ್ನಿಟ್ಟುಕೊಂಡು ಮಿಕ್ಕ ಕುದುರೆಗಳ ಹಿಂಗಾಲಿನ ನರಗಳನ್ನು
ಕೊಯ್ದುಬಿಟ್ಟನು. 5ದಮಸ್ಕದ ಸಿರಿಯಾದವರು ಚೋಬದ ಅರಸನಾದ ಹದದೆಜೆರನಿಗೆ ನೆರವಾಗಲು
ಬಂದಾಗ ದಾವೀದನು ಅವರನ್ನೂ ಸೋಲಿಸಿ ಅವರಲ್ಲಿ ಇಪ್ಪತ್ತೆರಡು ಸಾವಿರ ಜನರನ್ನು ಸದೆಬಡಿದನು;
6ಇದಲ್ಲದೆ ಅವನು ದಮಸ್ಕದ ಸಿರಿಯಾ ದೇಶದಲ್ಲಿ ಕಾವಲುದಂಡನ್ನಿರಿಸಿದನು. ಹೀಗೆ ಸಿರಿಯಾದವರು
ಅವನಿಗೆ ಅಧೀನರಾಗಿ ಕಪ್ಪ ಕೊಡತೊಡಗಿದರು. ಸರ್ವೇಶ್ವರನ ಅನುಗ್ರಹದಿಂದ ದಾವೀದನಿಗೆ ಎಲ್ಲಿ
ಹೋದರೂ ಜಯ ದೊರಕುತ್ತಿತ್ತು.

7 ದಾವೀದನು ಹದರೆಜೆರನ ಸೇವಕರಿಗಿದ್ದ ಬಂಗಾರದ ಗುರಾಣಿಗಳನ್ನು ಕಿತ್ತುಕೊಂಡು
ಯೆರುಸಲೇಮಿಗೆ ಒಯ್ದನು. 8ಇದಲ್ಲದೆ, ಹದರೆಜೆರನ ಪಟ್ಟಣಗಳಾದ ಟಿಭತಿನಿಂದಲೂ ಕೂನಿಂದಲೂ
ಹೇರಳ ತಾಮ್ರವನ್ನು ತೆಗೆದುಕೊಂಡು ಬಂದನು. ಸೊಲೊಮೋನನು 'ಕಂಚಿನ ಕಡಲೆಂಬ ಪಾತ್ರೆ'ಯನ್ನೂ
ಕಂಬಗಳನ್ನೂ ಇನ್ನಿತರ ಸಾಮಾನುಗಳನ್ನೂ ಮಾಡಿಸಿದ್ದು ಆ ತಾಮ್ರದಿಂದಲೇ.

9 ದಾವೀದನು ಚೋಬನ ಅರಸನಾದ ಹದರೆಜೆರನ ಸೈನ್ಯವನ್ನು ಸೋಲಿಸಿದನೆಂಬ ವರ್ತಮಾನ
ಹಮಾತಿನ ಅರಸನಾದ ತೋವಿಗೆ ಮುಟ್ಟಿತು. 10(ತೋವಿಗೂ ಹದರೆಜೆರನಿಗೂ ವಿರೋಧವಿತ್ತು).
ದಾವೀದನು ಹದರೆಜೆರನ ಮೇಲೆ ದಾಳಿಮಾಡಿ ಅವನನ್ನು ಸೋಲಿಸಿದ್ದರಿಂದ ತೋವು ದಾವೀದನನ್ನು

ಅಭಿನಂದಿಸುವುದಕ್ಕಾಗಿ ಹಾಗು ಹರಸುವುದಕ್ಕಾಗಿ ತನ್ನ ಮಗ ಹದೋರಾಮನನ್ನು ಕಳುಹಿಸಿದನು. ಇವನು
ಬರುವಾಗ ದಾವೀದನಿಗೆ ವಿಧವಿಧವಾದ ತಾಮ್ರ, ಬೆಳ್ಳಿ ಹಾಗು ಬಂಗಾರದ ಪಾತ್ರೆಗಳನ್ನು ತಂದನು. 11ಅರಸ
ದಾವೀದನು ಕಾಣಿಕೆಗಳನ್ನು ಮಾತ್ರವಲ್ಲದೆ ಎದೋಮ್ಯರು, ಮೋವಾಬ್ಯರು, ಅಮ್ಮೋನಿಯರು, ಫಿಲಿಷ್ಟಿಯರು
ಹಾಗು ಅಮಾಲೇಕ್ಯರು ಎಂಬ ಸುತ್ತಮುತ್ತಿನ ಜನಾಂಗಗಳಿಂದ ಕಿತ್ತುಕೊಂಡ ಬೆಳ್ಳಿಬಂಗಾರವನ್ನೂ
ಸರ್ವೇಶ್ವರನಿಗೆ ಪ್ರತಿಷ್ಠಾಪಿಸಿದನು.

12 ಇದಲ್ಲದೆ ಚೆರೂಯಳ ಮಗ ಅಬ್ಷೈಯು ಉಪ್ಪಿನ ತಗ್ಗಿನಲ್ಲಿ ಎದೋಮ್ಯರ ಹದಿನೆಂಟು ಸಾವಿರ
ಮಂದಿ ಸೈನಿಕರನ್ನು ಸೋಲಿಸಿದನು. 13ದಾವೀದನು ಎದೋಮಿನಲ್ಲಿ ಕಾವಲುದಂಡು ಗಳನ್ನಿರಿಸಿದ್ದನು. ಹೀಗೆ
ಎದೋಮ್ಯರೆಲ್ಲರೂ ದಾವೀದನ ಅಡಿಯಾಳುಗಳಾದರು. ಸರ್ವೇಶ್ವರನ ಅನುಗ್ರಹದಿಂದ ದಾವೀದನಿಗೆ ಎಲ್ಲಿ
ಹೋದರೂ ಜಯವುಂಟಾಯಿತು.

14 ದಾವೀದನು ಇಸ್ರಯೇಲರ ಅರಸನಾಗಿ ಪ್ರಜೆಗಳೆಲ್ಲರನ್ನು ಧರ್ಮಾನುಸಾರ, ನ್ಯಾಯಯುತವಾಗಿ
ನಡೆಸುತ್ತಿದ್ದನು. 15ಚೆರೂಯಳ ಮಗ ಯೋವಾಬನು ಅವನ ಸೇನಾಪತಿಯಾಗಿದ್ದನು. ಅಹೀಲೂದನ ಮಗ
ಯೆಹೋಷಾಫಾಟನು ಅವನ ಮಂತ್ರಿಯಾಗಿದ್ದನು. 10ಅಹೀಟೂಬನ ಮಗ ಚಾದೋಕನೂ ಹಾಗು
ಅಬೀಮೆಲೆಕನ ಮಗನಾದ ಎಬ್ಯಾತಾರನೂ ಅವರ ಯಾಜಕರಾಗಿದ್ದರು; ಶವ್ಷನು ಅವನಿಗೆ ಲೇಖಕನಾಗಿದ್ದನು.
17ಯೆಹೋಯಾದಾವನ ಮಗ ಬೆನಾಯನು ‘ಕೆರೇತ್ಯ’, ‘ಪೆಲೇತ್ಯ’ ಎಂಬ ಕಾವಲು ದಂಡುಗಳ
ಮುಖ್ಯಸ್ಥನಾಗಿದ್ದನು. ದಾವೀದನ ಮಕ್ಕಳು ಅರಸನ ಒಡ್ಡೋಲಗದಲ್ಲಿ ಪ್ರಧಾನರಾಗಿದ್ದರು.

## ಅಮ್ಮೋನಿಯರ ಮತ್ತು ಸಿರಿಯಾದವರ ವಿರುದ್ಧ ದಾವೀದನ ಯುದ್ಧ

(2 ಸಮು. 10.1–19)

**19** ಇದಾದನಂತರ ಅಮ್ಮೋನಿಯರ ಅರಸ ನಾಹಾಷನು ಸತ್ತನು. ಅವನಿಗೆ ಬದಲಾಗಿ ಅವನ ಮಗ
ಅರಸನಾದನು. 2ದಾವೀದನು, “ನಾಹಾಷನು ನನಗೆ ಸ್ನೇಹ ತೋರಿಸಿದ್ದರಿಂದ ನಾನೂ ಅವನ ಮಗ
ಹಾನೂನನಿಗೆ ಸ್ನೇಹ ತೋರಿಸುವೆನು,” ಎಂದುಕೊಂಡು ಪಿತೃ ಶೋಕದಲ್ಲಿದ್ದ ಹಾನೂನನನ್ನು
ಸಂತೈಸುವುದಕ್ಕಾಗಿ ತನ್ನ ದೂತರನ್ನು ಕಳುಹಿಸಿದನು. ಅವರು ಹಾನೂನನನ್ನು ಸಂತೈಸುವುದಕ್ಕಾಗಿ
ಅಮ್ಮೋನಿಯರ ದೇಶಕ್ಕೆ ಬಂದರು. 3ಅಲ್ಲಿನ ನಾಯಕರು ಹಾನೂನನಿಗೆ, “ದಾವೀದನು ನಿಮ್ಮ ಬಳಿಗೆ
ಸಂತೈಸುವವರನ್ನು ಕಳುಹಿಸಿದ್ದಾನೆ. ಇದರಿಂದ ಅವನು ನಿಮ್ಮ ತಂದೆಯನ್ನು ಸನ್ಮಾನಿಸುತ್ತಾನೆ ಎಂದು
ತಿಳಿಯುತ್ತೀರೋ? ಇಲ್ಲ, ಅವನ ಆಳುಗಳು ದೇಶವನ್ನು ಸಂಚರಿಸಿ ನೋಡಿ ಅದನ್ನು ಸ್ವಾಧೀನ
ಮಾಡಿಕೊಳ್ಳಬೇಕೆಂದು ಬಂದಿದ್ದಾರೆ,” ಎಂದು ದೂರಿತ್ತರು. 4ಆದುದರಿಂದ ಹಾನೂನನು ದಾವೀದನ
ಸೇವಕರನ್ನು ಬಂಧಿಸಿದನು. ಗಡ್ಡದ ಅರ್ಧ ಭಾಗವನ್ನು ಬೋಳಿಸಿ ಅವರ ಸೊಂಟದ ಕೆಳಭಾಗದ
ನಿಲುವಂಗಿಗಳನ್ನು ಕತ್ತರಿಸಿ ಕಳುಹಿಸಿ ಬಿಟ್ಟನು. 5ಅವರು ಹೋಗಿ ಈ ವರ್ತಮಾನವನ್ನು ದಾವೀದನಿಗೆ
ಹೇಳಿಕಳುಹಿಸಿದರು. ಬಹಳವಾಗಿ ಅಪಮಾನಹೊಂದಿದ ಅವರಿಗೆ ಆಗ ದಾವೀದನು ಆಳುಗಳ ಮುಖಾಂತರ,
“ನಿಮ್ಮ ಗಡ್ಡ ಬೆಳೆಯುವವರೆಗೆ ನೀವು ಜೆರಿಕೋವಿನಲ್ಲಿದ್ದು ಅನಂತರ ಬನ್ನಿ,” ಎಂದು ಹೇಳಿಸಿದನು.

6 ತಾವು ದಾವೀದನಿಗೆ ವೈರಿಗಳಾದೆವು ಎಂದು ಹಾನೂನನಿಗೂ ಅಮ್ಮೋನಿಯರಿಗೂ ತಿಳಿಯಿತು.
ಆದುದರಿಂದ ಅವರು ಎರಡು ನದಿಗಳ ಮಧ್ಯದಲ್ಲಿರುವ ಸಿರಿಯಾಸೀಮೆಯಿಂದಲೂ ಸಿರಿಯಾದ
ಮಾಕದಿಂದಲೂ ಚೊಬಾ ರಾಜ್ಯದಿಂದಲೂ ರಥಗಳನ್ನೂ ರಾಹುತರನ್ನೂ ತರಿಸುವುದಕ್ಕಾಗಿ ಮೂವತ್ತನಾಲ್ಕು
ಸಾವಿರ ಕಿಲೋಗ್ರಾಂ ಬೆಳ್ಳಿಯನ್ನು ಕಳುಹಿಸಿದರು. 7ಆಗ ಮೂವತ್ತೆರಡು ಸಾವಿರ ಮಂದಿ ರಥಬಲದವರೂ
ಮಾಕದ ಅರಸನೂ ಅವನ ದಂಡಾಳುಗಳೂ ಅವರ ಸಹಾಯಕ್ಕಾಗಿ ಮೆದಬ ಊರಿನ ಮುಂದೆ ಪಾಳೆಯ
ಮಾಡಿಕೊಂಡರು. 8ಈ ಸುದ್ದಿ ದಾವೀದನಿಗೆ ಮುಟ್ಟಿತು. ಅವನು ಯೋವಾಬನನ್ನೂ ಎಲ್ಲಾ
ಶೂರಸೈನಿಕರನ್ನೂ ಕಳುಹಿಸಿದನು. 9ಕೂಡಲೆ ಅಮ್ಮೋನಿಯರು ಹೊರಗೆ ಬಂದು ಊರುಬಾಗಿಲಿನ
ಬಳಿಯಲ್ಲಿ ವ್ಯೂಹಕಟ್ಟಿದರು. ಅವರ ಸಹಾಯಕ್ಕಾಗಿ ಬಂದ ಅರಸರು ಪ್ರತ್ಯೇಕವಾಗಿ ಮೈದಾನದಲ್ಲಿ

ಇಳಿದುಕೊಂಡಿದ್ದರು. 10ಯೋವಾಬನು ತನ್ನ ಮುಂದೆಯೂ ಹಿಂದೆಯೂ ಯುದ್ಧ ಪ್ರಾರಂಭವಾದದ್ದನ್ನು
ಕಂಡು ಇಸ್ರಯೇಲರಲ್ಲಿ ಶ್ರೇಷ್ಠರಾದ ಎಲ್ಲಾ ಸೈನಿಕರನ್ನು ಆರಿಸಿಕೊಂಡು ಅವರನ್ನು ಸಿರಿಯಾದವರಿಗೆ
ಇದಿರಾಗಿ ನಿಲ್ಲಿಸಿದನು. 11ಉಳಿದ ಜನರನ್ನು ತನ್ನ ತಮ್ಮನಾದ ಅಬೀಷೈಯ ವಶಕ್ಕೆ ಕೊಟ್ಟು,
12“ಸಿರಿಯಾದವರು ನನ್ನನ್ನು ಸೋಲಿಸುವಂತೆ ಕಂಡರೆ ನೀನು ನನ್ನ ಸಹಾಯಕ್ಕೆ ಬಾ; ಅಮ್ಮೋನಿಯರು
ನಿನ್ನನ್ನು ಸೋಲಿಸುವಂತೆ ಕಂಡರೆ ನಾನು ನಿನ್ನ ಸಹಾಯಕ್ಕೆ ಬರುತ್ತೇನೆ. 13ಧೈರ್ಯದಿಂದಿರು, ನಮ್ಮ
ಜನರಿಗಾಗಿ ಹಾಗು ನಮ್ಮ ದೇವರ ಪಟ್ಟಣಗಳಿಗಾಗಿ ನಮ್ಮ ಪೌರುಷವನ್ನು ತೋರಿಸೋಣ; ಸರ್ವೇಶ್ವರ
ತಮಗೆ ಸರಿಕಾಣುವಂಥದನ್ನು ಮಾಡಲಿ,” ಎಂದು ಹೇಳಿ ಅವನನ್ನು ಅಮ್ಮೋನಿಯರಿಗೆ ವಿರೋಧವಾಗಿ
ಕಳುಹಿಸಿದನು. 14ಯೋವಾಬನೂ ಅವನ ಜನರೂ ಸಿರಿಯಾದವರಿಗೆ ವಿರೋಧವಾಗಿ ಯುದ್ಧ
ಪ್ರಾರಂಭಿಸಿದಾಗ ಸಿರಿಯಾದವರು ಓಡಿಹೋದರು. 15ಇವರು ಓಡಿಹೋಗುವುದನ್ನು ಅಮ್ಮೋನಿಯರು
ಕಂಡು ಅವರೂ ಅವನ ತಮ್ಮ ಅಬೀಷೈಯ ಎದುರಿನಿಂದ ಓಡಿಹೋಗಿ ಪಟ್ಟಣವನ್ನು ಹೊಕ್ಕರು.
ಯೋವಾಬನು ಜೆರುಸಲೇಮಿಗೆ ಹೋದನು.

16 ಸಿರಿಯಾದವರಿಗೆ ತಮ್ಮ ಸೈನ್ಯ ಇಸ್ರಯೇಲರಿಂದ ಪರಾಭವಗೊಂಡಿತೆಂದು ಗೊತ್ತಾಯಿತು.
ಎಂದೇ ಯೂಫ್ರೆಟಿಸ್ ನದಿಯ ಆಚೆಯಲ್ಲಿದ್ದ ಸಿರಿಯಾದವರನ್ನು ಕರೇ ಕಳುಹಿಸಿದರು. ಹದರೆಜೆರನ
ಸೇನಾಪತಿಯಾದ ಶೋಫಕನು ಅವರ ನಾಯಕನಾದನು. 17ಈ ಸುದ್ದಿ ದಾವೀದನಿಗೆ ಮುಟ್ಟಿದಾಗ ಅವನು
ಇಸ್ರಯೇಲರೆಲ್ಲರನ್ನೂ ಕೂಡಿಸಿಕೊಂಡು ಜೋರ್ಡನ್ ನದಿಯನ್ನು ದಾಟಿ, ಸಿರಿಯಾದವರ ಸಮೀಪಕ್ಕೆ
ಬಂದು, ಅವರೊಡನೆ ಕಾಳಗ ನಡೆಸಲು ವ್ಯೂಹ ಕಟ್ಟಿದನು. 18ಸಿರಿಯಾದವರು ಯುದ್ಧಕ್ಕೆ ನಿಂತಾಗ
ಇಸ್ರಯೇಲರ ಮುಂದೆ ಸೋತು ಓಡಿಹೋದರು; ದಾವೀದನು ಸಿರಿಯಾದವರ ಏಳುಸಾವಿರ ರಥಗಳನ್ನು
ಹಾಳುಮಾಡಿದನು, ನಲವತ್ತು ಸಾವಿರ ಮಂದಿ ಕಾಲಾಳುಗಳನ್ನು ಸದೆಬಡಿದನು. ಸೇನಾಪತಿಯಾದ
ಶೋಫಕನನ್ನೂ ಕೊಂದುಬಿಟ್ಟನು. 19ಹದರೆಜೆರನಿಗೆ ದಾಸರಾಗಿ ಇದ್ದವರು, ಇಸ್ರಯೇಲರ ಮುಂದೆ ತಮ್ಮ
ಕೈಸಾಗದೆಂದು ತಿಳಿದು, ದಾವೀದನೊಡನೆ ಸಂಧಾನಮಾಡಿಕೊಂಡು ಅವನಿಗೆ ಅಧೀನರಾದರು. ಅಂದಿನಿಂದ
ಸಿರಿಯಾದವರು ಅಮ್ಮೋನಿಯರಿಗೆ ಸಹಾಯಮಾಡಲು ಸಮ್ಮತಿಸಲಿಲ್ಲ.

## ದಾವೀದನ ಕೈವಶವಾದ ರಬ್ಬ ಪಟ್ಟಣ

(2 ಸಮು. 12.26-31)

**20** ಮರುವರ್ಷ, ಅರಸರು ಯುದ್ಧಕ್ಕೆ ಹೊರಡುವ ಕಾಲದಲ್ಲಿ ಯೋವಾಬನು ಅಮ್ಮೋನಿಯರ
ಪ್ರಾಂತ್ಯಗಳನ್ನು ಹಾಳು ಮಾಡಿ ರಬ್ಬಕ್ಕೆ ಮುತ್ತಿಗೆ ಹಾಕಿದನು. ಅವನೊಡನೆ ಬಲವಾದ ಸೈನ್ಯವಿತ್ತು. ದಾವೀದನು
ಜೆರುಸಲೇಮಿನಲ್ಲೇ ಇದ್ದನು. ಯೋವಾಬನು ರಬ್ಬ ಪಟ್ಟಣವನ್ನು ಸ್ವಾಧೀನಮಾಡಿಕೊಂಡು ಅದನ್ನು ಹಾಳು
ಮಾಡಿಬಿಟ್ಟನು. 2ದಾವೀದನು ಮಲ್ಕಾಮ ಮೂರ್ತಿಯ ತಲೆಯ ಮೇಲಿದ್ದ ಬಂಗಾರದ ಕಿರೀಟವನ್ನು
ತೆಗೆದುಕೊಂಡನು; ಅದು ಸುಮಾರು ಮೂವತ್ತೈದು ಕಿಲೋಗ್ರಾಂ ತೂಕದ್ದು. ಅದರಲ್ಲಿ ಇದ್ದ ರತ್ನವನ್ನು
ದಾವೀದನು ತನ್ನ ಶಿರಸ್ಸಿನಲ್ಲಿ ಧರಿಸಿಕೊಂಡನು. ಆ ಪಟ್ಟಣದಿಂದ ಅವನು ದೊಡ್ಡ ಕೊಳ್ಳೆಯನ್ನೇ ಕೊಂಡು
ಹೊಯ್ದನು. 3ಊರಿನ ನಿವಾಸಿಗಳನ್ನು ಹಿಡಿದು ಗರಗಸ, ಗುದ್ದಲಿ, ಕೊಡಲಿಗಳಿಂದ ಕೆಲಸ ಮಾಡುವುದಕ್ಕೆ
ಹಚ್ಚಿದನು. ಅಮ್ಮೋನಿಯರ ಉಳಿದೆಲ್ಲ ಪಟ್ಟಣದವರೆಗೂ ಇದೇ ಗತಿಯಾಯಿತು. ಅನಂತರ ದಾವೀದನು
ಎಲ್ಲಾ ಸೈನಿಕರೊಡನೆ ಜೆರುಸಲೇಮಿಗೆ ಮರಳಿದನು.

4 ಬಳಿಕ ಫಿಲಿಷ್ಟಿಯರ ವಿರುದ್ಧ ಗೆಜೆರಿನಲ್ಲಿ ಯುದ್ಧ ನಡೆಯಿತು. ಆಗ ಹುಷಾ ಊರಿನವನಾದ
ಸಿಬ್ಬೆಕ್ಕೆ ಎಂಬವನು ರೆಫಾಯನಾದ ಸಿಪ್ಪೈ ಎಂಬವನನ್ನು ಕೊಂದನು. ಫಿಲಿಷ್ಟಿಯರು ಇದರಿಂದ
ಕುಗ್ಗಿಹೋದರು. 5ಫಿಲಿಷ್ಟಿಯರೊಡನೆ ಇನ್ನೊಮ್ಮೆ ಯುದ್ಧ ನಡೆದಾಗ ಯಾಯೀರನ ಮಗ ಎಲ್ಹಾನಾನನು
ಗಿತ್ತೀಯನಾದ ಗೊಲ್ಯಾತನ ತಮ್ಮ ಲಹ್ಮೀಯನನ್ನು ಕೊಂದನು. ಈ ಲಹ್ಮೀಯನ ಬರ್ಜಿಯ ಹಿಡಿಕೆ ನೇಕಾರರ
ಕುಂಟೆಯಷ್ಟು ದೊಡ್ಡದಾಗಿತ್ತು.

6 ಮತ್ತೊಂದು ಸಾರಿ ಗತ್ ಊರಿನಲ್ಲಿ ಯುದ್ಧ ನಡೆಯಿತು. ಅಲ್ಲಿ ಒಬ್ಬ ಎತ್ತರದ ಪುರುಷ ಇದ್ದನು. ಅವನ ಕೈಕಾಲುಗಳಿಗೆ ಆರಾರು ಬೆರಳುಗಳಂತೆ, ಒಟ್ಟಿಗೆ ಇಪ್ಪತ್ತನಾಲ್ಕು ಬೆರಳುಗಳು ಇದ್ದವು. ಅವನೂ ರೆಫಾಯನು. 7ಅವನು ಇಸ್ರಯೇಲರನ್ನು ನಿಂದಿಸಿದಾಗ ದಾವೀದನ ಅಣ್ಣನಾದ ಶಿಮ್ಮನ ಮಗ ಯೋನಾತಾನನು ಅವನನ್ನು ಕೊಂದುಹಾಕಿದನು.

8 ಗತ್ ಊರಿನವರಾದ ಈ ರೆಫಾಯರು ದಾವೀದನಿಂದಲೂ ಅವನ ಸೇವಕನಿಂದಲೂ ಹತರಾದರು.

## ದಾವೀದನು ಮಾಡಿಸಿದ ಜನಗಣತಿ

(2 ಸಮು. 24.1–25)

**21** ಸೈತಾನನು ಇಸ್ರಯೇಲರಿಗೆ ವಿರೋಧವಾಗಿ ಎದ್ದು ಇಸ್ರಯೇಲರ ಜನಗಣತಿ ಮಾಡುವುದಕ್ಕೆ ದಾವೀದನನ್ನು ಪ್ರೇರಿಸಿದನು.

2 ದಾವೀದನು ಯೋವಾಬನನ್ನೂ ಜನಾಧಿಪತಿಗಳನ್ನೂ ಕರೆದು, “ನನಗೆ ಜನರ ಲೆಕ್ಕ ಗೊತ್ತಾಗುವ ಹಾಗೆ ನೀವು ಬೇರ್ಷೆಬದಿಂದ ದಾನ್ ಊರಿನವರೆಗೂ ಸಂಚರಿಸಿ ಇಸ್ರಯೇಲರನ್ನು ಲೆಕ್ಕಮಾಡಿಕೊಂಡು ಬನ್ನಿ,” ಎಂದು ಆಜ್ಞಾಪಿಸಿದನು. 3ಆಗ ಯೋವಾಬನು, “ನನ್ನ ಒಡೆಯರಾದ ಅರಸರೇ, ಸರ್ವೇಶ್ವರ ತಮ್ಮ ಪ್ರಜೆಗಳನ್ನು ನೂರರಷ್ಟು ಹೆಚ್ಚಿಸಲಿ; ಅವರೆಲ್ಲರೂ ನನ್ನ ಒಡೆಯರ ಸೇವಕರಷ್ಟೇ. ಆದರೆ ಒಡೆಯರು ಇಂಥದನ್ನು ಅಪೇಕ್ಷಿಸಿದ್ದೇಕೆ? ಇಸ್ರಯೇಲರನ್ನು ಅಪರಾಧಕ್ಕೆ ಗುರಿಮಾಡುವದೇಕೆ?” ಎಂದನು. 4ಆದರೆ ಅರಸನು ಯೋವಾಬನಿಗೆ ಕಿವಿಗೊಡದೆ ತನ್ನ ಮಾತನ್ನೇ ಸಾಧಿಸಿದ್ದರಿಂದ, ಅವನು ಹೊರಟುಹೋಗಿ ಇಸ್ರಯೇಲರ ಪ್ರಾಂತ್ಯಗಳಲ್ಲೆಲ್ಲಾ ಸಂಚರಿಸಿ ಜೆರುಸಲೇಮಿಗೆ ಹಿಂದಿರುಗಿದನು. 5ಯೋವಾಬನು ದಾವೀದನಿಗೆ ಒಪ್ಪಿಸಿದ ಜನಗಣತಿಯ ಅಂಕೆಸಂಖ್ಯೆಗಳು ಇವು: ಇಸ್ರಯೇಲರಲ್ಲಿ ಯುದ್ಧಕ್ಕೆ ಹೋಗತಕ್ಕ ಸೈನಿಕರು ಹನ್ನೊಂದು ಲಕ್ಷ; ಯೆಹೂದ್ಯರಲ್ಲಿ ನಾಲ್ಕು ಲಕ್ಷದ ಎಪ್ಪತ್ತು ಸಾವಿರ. 6ಅರಸನ ಆಜ್ಞೆ ಯೋವಾಬನಿಗೆ ಹಿಡಿಸಲಿಲ್ಲ ವಾದ್ದರಿಂದ, ಅವನು ಲೇವಿ, ಬೆನ್ಯಾಮೀನ್ ಕುಲಗಳವರ ಜನಗಣತಿಯನ್ನು ಮಾಡಲಿಲ್ಲ.

7 ಜನಗಣತಿ ಮಾಡಿದ್ದು ದೇವರಿಗೆ ಕೆಟ್ಟದ್ದು ಎಂದು ಕಂಡಿತು. ಆದ್ದರಿಂದ ಅವರು ಇಸ್ರಯೇಲರನ್ನು ಶಿಕ್ಷಿಸಿದರು. 8ಆಗ ದಾವೀದನು, “ನಾನು ಬುದ್ಧಿಹೀನ ಕಾರ್ಯವನ್ನು ಮಾಡಿ ಪಾಪಿಯಾದೆ; ದಯವಿಟ್ಟು ನಿಮ್ಮ ದಾಸನ ಅಪರಾಧವನ್ನು ಕ್ಷಮಿಸಿ,” ಎಂದು ದೇವರನ್ನು ಪ್ರಾರ್ಥಿಸಿದನು. 9ದೇವರು ದಾವೀದನ ದರ್ಶಿಯಾದ ಗಾದನಿಗೆ, 10“ನೀನು ದಾವೀದನ ಹತ್ತಿರಕ್ಕೆ ಹೋಗಿ ಅವನಿಗೆ, ‘ನಾನು ಮೂರು ವಿಧವಾದ ಶಿಕ್ಷೆಯನ್ನು ನಿನ್ನ ಮುಂದಿಡುತ್ತೇನೆ. ಅವುಗಳಲ್ಲಿ ಯಾವುದನ್ನು ನಿನ್ನ ಮೇಲೆ ಬರಮಾಡಬೇಕೋ ಆರಿಸಿಕೋ ಎಂದು ಸರ್ವೇಶ್ವರ ಹೇಳುತ್ತಾರೆ’ ಎಂಬುದಾಗಿ ತಿಳಿಸು,” ಎಂದರು. 11ಆಗ ಗಾದನು ದಾವೀದನ ಬಳಿಗೆ ಬಂದು, “ಸರ್ವೇಶ್ವರ ಹೇಳುವುದನ್ನು ಕೇಳು: 12‘ಮೂರು ವರ್ಷಗಳ ಕಾಲ ಕ್ಷಾಮ ಉಂಟಾಗಬೇಕೋ? ಇಲ್ಲವೆ ಮೂರು ತಿಂಗಳುಗಳವರೆಗೆ ನಿನ್ನ ಶತ್ರುಗಳ ಚಿತ್ರಹಿಂಸೆಗೆ ಬಲಿಯಾಗುವುದು ಬೇಕೋ? ಇಲ್ಲವೆ ಇಸ್ರಯೇಲರ ಸಮಸ್ತ ಪ್ರಾಂತ್ಯಗಳಿಗೆ ಸರ್ವೇಶ್ವರ ಕಳುಹಿಸುವ ಸಂಹಾರಕ ದೂತನಿಂದ ಉಂಟಾಗುವ ಮೂರು ದಿನಗಳ ಘೋರ ವ್ಯಾಧಿರೂಪವಾದ ಸರ್ವೇಶ್ವರನ ಶಿಕ್ಷೆ ಬೇಕೋ? ಈ ಮೂರರಲ್ಲಿ ಒಂದನ್ನು ಆರಿಸಿಕೋ’ ನನ್ನನ್ನು ಕಳುಹಿಸಿದವರಿಗೆ ಯಾವ ಉತ್ತರವನ್ನು ತೆಗೆದುಕೊಂಡು ಹೋಗಬೇಕು, ಆಲೋಚಿಸಿ ಹೇಳು,” ಎಂದು ಹೇಳಿದನು. 13ಅದಕ್ಕೆ ದಾವೀದನು, “ನಾನು ಬಹಳ ಇಕ್ಕಟ್ಟಿಗೆ ಸಿಕ್ಕಿ ಕೊಂಡಿದ್ದೇನೆ. ಸರ್ವೇಶ್ವರನ ಕೈಯಲ್ಲೇ ಬೀಳುತ್ತೇನೆ; ಅವರು ಕೃಪಾಪೂರ್ಣರು. ಮನುಷ್ಯರ ಕೈಯಲ್ಲಿ ಬೀಳಲೊಲ್ಲೆ,” ಎಂದು ಹೇಳಿದನು.

14 ಆಗ ಸರ್ವೇಶ್ವರ ಇಸ್ರಯೇಲರ ಮೇಲೆ ವ್ಯಾಧಿಯನ್ನು ಬರಮಾಡಿದರು; ಅವರಲ್ಲಿ ಇಪ್ಪತ್ತು ಸಾವಿರ ಜನರು ಸತ್ತರು. 15ದೇವರು ಜೆರುಸಲೇಮನ್ನು ಸಹ ಸಂಹರಿಸಬೇಕೆಂದು ದೂತನನ್ನು ಕಳುಹಿಸಿದರು. ಆದರೆ ಆ ದೂತನು ಸಂಹರಿಸುವುದಕ್ಕಿದ್ದಾಗ ಸರ್ವೇಶ್ವರ ಅದನ್ನು ಕಂಡು, ಆ ಕೇಡಿನ ವಿಷಯದಲ್ಲಿ ದುಃಖಪಟ್ಟರು. ಸಂಹಾರಕ ದೂತನಿಗೆ, “ಸಾಕು, ನಿನ್ನ ಕೈಯನ್ನು ಹಿಂದೆಗೆ,” ಎಂದು ಆಜ್ಞಾಪಿಸಿದರು. ಆಗ ಸರ್ವೇಶ್ವರನ

ದೂತನು ಯೆಬೂಸಿಯನಾದ ಒರ್ನಾನನ ಕಣದಲ್ಲಿ ನಿಂತನು. 16ದಾವೀದನು ಕಣ್ಣೆತ್ತಿ ನೋಡಿ ಸರ್ವೇಶ್ವರನ
ದೂತನು ಭೂಮ್ಯಾಕಾಶಗಳ ನಡುವೆ ನಿಂತಿರುವುದನ್ನೂ ಚಾಚಿದ ಕೈಯಲ್ಲಿ ಜೆರುಸಲೇಮಿಗೆ ವಿರೋಧವಾಗಿ
ಹಿರಿದ ಕತ್ತಿ ಇರುವುದನ್ನೂ ಕಂಡನು. ಆಗ ಅವನೂ ಹಿರಿಯರೂ ಗೋಣಿತಟ್ಟನ್ನು ಉಟ್ಟುಕೊಂಡು
ಬೋರಲಾಗಿ ಬಿದ್ದರು. 17ದಾವೀದನು ದೇವರಿಗೆ, "ಜನರನ್ನು ಲೆಕ್ಕಿಸಬೇಕೆಂದು ಆಜ್ಞಾಪಿಸಿದವನು ನಾನಲ್ಲವೇ;
ಮಹಾಪಾಪ ಮಾಡಿದವನು ನಾನೇ; ಕುರಿಗಳಂತಿರುವ ಈ ಜನರು ಏನು ಮಾಡಿದ್ದಾರೆ? ಸರ್ವೇಶ್ವರಾ, ನನ್ನ
ದೇವರೇ, ನಿಮ್ಮ ಕತ್ತಿ ನಿಮ್ಮ ಜನರನ್ನು ಬಾಧಿಸದೆ, ಅವರಿಗೆ ವಿರೋಧವಾಗಿ ಇರದೆ, ನನಗೂ ನನ್ನ
ಮನೆಯವರಿಗೂ ವಿರೋಧ ಆಗಿರಲಿ," ಎಂದು ಬೇಡಿಕೊಂಡನು.

18 ಆಗ ಸರ್ವೇಶ್ವರನ ದೂತನು ಗಾದನಿಗೆ "ಯೆಬೂಸಿಯನಾದ ಒರ್ನಾನನ ಕಣದಲ್ಲಿ
ಸರ್ವೇಶ್ವರನಿಗಾಗಿ ಒಂದು ಬಲಿಪೀಠವನ್ನು ಕಟ್ಟಿಸುವುದಕ್ಕೆ ಹೋಗಬೇಕೆಂದು ದಾವೀದನಿಗೆ ಹೇಳು," ಎಂದು
ಆಜ್ಞಾಪಿಸಿದನು. 19ದಾವೀದನು ಗಾದನ ಮುಖಾಂತರ ತನಗಾದ ಸರ್ವೇಶ್ವರನ ಅಪ್ಪಣೆಯಂತೆ ಹೊರಟನು.
20ಅಷ್ಟರಲ್ಲಿ ಗೋದಿಯನ್ನು ತುಳಿಸುತ್ತಿದ್ದ ಒರ್ನಾನನು ದೂತನನ್ನು ನೋಡಿದ್ದನು. ಅವನೊಡನಿದ್ದ ಅವನ
ನಾಲ್ಕು ಮಂದಿ ಮಕ್ಕಳು ಅಡಗಿಕೊಂಡಿದ್ದರು. 21ದಾವೀದನು ತನ್ನ ಬಳಿಗೆ ಬರುವುದನ್ನು ಒರ್ನಾನನು
ಕಂಡು, ಕಣವನ್ನು ಬಿಟ್ಟುಹೋಗಿ, ಅವನಿಗೆ ಅಡ್ಡಬಿದ್ದನು. 22ದಾವೀದನು ಅವನಿಗೆ, "ನಿನ್ನ ಕಣವನ್ನೂ
ಭೂಮಿಯನ್ನೂ ನನಗೆ ಕೊಡು; ವ್ಯಾಧಿಯು ಜನರನ್ನು ಬಿಟ್ಟುಹೋಗುವಂತೆ ನಾನು ಅದರಲ್ಲಿ
ಸರ್ವೇಶ್ವರನಿಗಾಗಿ ಒಂದು ಬಲಿಪೀಠವನ್ನು ಕಟ್ಟಿಸುತ್ತೇನೆ; ಪೂರ್ಣಕ್ರಯ ತೆಗೆದುಕೊಂಡು ಅದನ್ನು ಕೊಡು,"
ಎಂದು ಹೇಳಿದನು. 23ಆಗ ಒರ್ನಾನನು ದಾವೀದನಿಗೆ, "ನನ್ನ ಒಡೆಯರಾದ ಅರಸರು ತಮಗೆ
ಇಷ್ಟವಾದದ್ದನ್ನು ತೆಗೆದುಕೊಂಡು ಬಲಿ ಅರ್ಪಿಸಬಹುದು. ಬಲಿದಾನಕ್ಕೆ ಇಲ್ಲಿ ಹೋರಿಗಳೂ ಸೌದೆಗೆ
ಹಂತೀಕುಂಟೆಗಳೂ ನೈವೇದ್ಯಕ್ಕೆ ಗೋದಿಯೂ ಇರುತ್ತವೆ; ಇವೆಲ್ಲವನ್ನೂ ಕೊಡುತ್ತೇನೆ," ಎಂದು ಹೇಳಿದನು.
24ಅರಸ ದಾವೀದನು ಒರ್ನಾನನಿಗೆ, "ಹಾಗಲ್ಲ, ನಾನು ನಿನ್ನಿಂದ ಪೂರ್ಣಕ್ರಯಕ್ಕೆ ತೆಗೆದುಕೊಳ್ಳುತ್ತೇನೆ.
ನಿನ್ನದನ್ನು ಕ್ರಯವಿಲ್ಲದೆ ತೆಗೆದುಕೊಂಡು ಸರ್ವೇಶ್ವರನಿಗೆ ಬಲಿಯಾಗಿ ಅರ್ಪಿಸಲು ನನಗೆ ಇಷ್ಟವಿಲ್ಲ," ಎಂದು
ಹೇಳಿದನು. 25ಅಂತೆಯೇ ಆ ಭೂಮಿಗಾಗಿ ಅವನಿಗೆ ಆರುನೂರು ಬಂಗಾರದ ನಾಣ್ಯಗಳನ್ನು ಕೊಟ್ಟು,
26ಅಲ್ಲಿ ಸರ್ವೇಶ್ವರ ಸ್ವಾಮಿಗಾಗಿ ಬಲಿಪೀಠವನ್ನು ಕಟ್ಟಿಸಿದನು. ಅದರ ಮೇಲೆ ದಹನಬಲಿಗಳನ್ನೂ ಶಾಂತಿ
ಸಮಾಧಾನ ಬಲಿಗಳನ್ನೂ ಅರ್ಪಿಸಿ ಸರ್ವೇಶ್ವರನನ್ನು ಪ್ರಾರ್ಥಿಸಿದನು. ಸರ್ವೇಶ್ವರ ಅವನ ಮೊರೆಯನ್ನು
ಆಲಿಸಿ, ಆಕಾಶದಿಂದ ಬಲಿಪೀಠದ ಮೇಲೆ ಬೆಂಕಿಯನ್ನು ಬರಮಾಡಿ, 27ಆ ಕತ್ತಿಯನ್ನು ಒರೆಯಲ್ಲಿ
ಹಾಕಬೇಕೆಂದು ದೂತನಿಗೆ ಆಜ್ಞಾಪಿಸಿದರು. ಅವನು ಹಾಗೆಯೇ ಮಾಡಿದನು.

28 ಮೋಶೆ ಮರುಭೂಮಿಯಲ್ಲಿ ಮಾಡಿಸಿದ್ದ ಸರ್ವೇಶ್ವರನ ಗುಡಾರವೂ ಬಲಿಪೀಠವೂ ಆ
ಕಾಲದಲ್ಲಿ ಗಿಬ್ಯೋನಿನ ಪೂಜಾಸ್ಥಳದಲ್ಲೇ ಇದ್ದವು. 29ಆದರೂ ದಾವೀದನು ಸರ್ವೇಶ್ವರನ ದೂತ ಹಿಡಿದಿದ್ದ
ಕತ್ತಿಗೆ ಹೆದರಿ, ದೇವದರ್ಶನಕ್ಕಾಗಿ ಅಲ್ಲಿಗೆ ಹೋಗಲಾರದೆ, ಯೆಬೂಸಿಯನಾದ ಒರ್ನಾನನ ಕಣದಲ್ಲಿಯೇ
ಬಲಿಯರ್ಪಿಸಿದನು. 30ಆ ಕಾಲದಲ್ಲಿ ದಾವೀದನಿಗೆ ಸರ್ವೇಶ್ವರನಿಂದ ಸದುತ್ತರ ದೊರಕಿದ್ದರಿಂದ ಅವನು,
**22** "ಇದೇ ದೇವರಾದ ಸರ್ವೇಶ್ವರನ ಆಲಯ; ಇದೇ ಇಸ್ರಯೇಲರು ಬಲಿ ಅರ್ಪಿಸತಕ್ಕ ಪೀಠ," ಎಂದು
ಹೇಳಿದನು.

### ದೇವಾಲಯ ಕಟ್ಟಲು ಸಿದ್ಧತೆ

2 ಅನಂತರ ದಾವೀದನು ಇಸ್ರಯೇಲ್ ನಾಡಿನಲ್ಲಿದ್ದ ಅನ್ಯಜನಗಳನ್ನು ಕೂಡಿಸುವುದಕ್ಕೆ
ಆಜ್ಞಾಪಿಸಿದನು. ಅವರಲ್ಲಿದ್ದ ಕಲ್ಲುಕುಟಿಗರನ್ನು ದೇವಾಲಯದ ಕಟ್ಟಡಕ್ಕಾಗಿ ಕಲ್ಲುಗಳನ್ನು ಕೆತ್ತುವುದಕ್ಕೆ
ನೇಮಿಸಿದನು. 3ಇದಲ್ಲದೆ, ಬಾಗಿಲುಗಳ ಕದಗಳಿಗೆ ಬೇಕಾದ ಮೊಳೆಗಳನ್ನು ಹಾಗು ಪಟ್ಟಿಗಳನ್ನು
ಮಾಡುವುದಕ್ಕೆ ಬಹಳ ಕಬ್ಬಿಣವನ್ನೂ ತೂಕಮಾಡಲಾಗದಷ್ಟು ತಾಮ್ರವನ್ನೂ 4ಎಣಿಸಲಾಗದಷ್ಟು ದೇವದಾರು
ಮರಗಳನ್ನೂ ಸಿದ್ಧಪಡಿಸಿದನು; ಸಿದೋನ್ ಹಾಗು ಟೈರಿನ ಜನರು ಅವನಿಗೆ ದೇವದಾರು ಮರಗಳನ್ನು
ಒದಗಿಸಿದರು. 5ದಾವೀದನು ತನ್ನಲ್ಲೇ "ನನ್ನ ಮಗ ಸೊಲೊಮೋನನು ಎಳೇ ಪ್ರಾಯದವನು.

ಸರ್ವೇಶ್ವರನಿಗೆ ಕಟ್ಟಿಸತಕ್ಕ ದೇವಾಲಯವು, ಜಗತ್ತಿನಲ್ಲೆಲ್ಲಾ ಸುಪ್ರಸಿದ್ಧವಾಗಿರಬೇಕು; ಅದು ಅತಿ ಅದ್ಭುತಕರವಾಗಿರಬೇಕು; ಆದುದರಿಂದ ಅದಕ್ಕೆ ಬೇಕಾಗುವುದನ್ನೆಲ್ಲಾ ಸಿದ್ಧಪಡಿಸುವೆನು," ಎಂದುಕೊಂಡನು. ಸಾಯುವುದಕ್ಕೆ ಮೊದಲೇ ಹಲವಾರು ಸಲಕರಣೆಗಳನ್ನು ದೊಡ್ಡ ಸಂಖ್ಯೆಯಲ್ಲಿ ಸಜ್ಜು ಮಾಡಿದನು.

6 ಆಮೇಲೆ ದಾವೀದನು ತನ್ನ ಮಗ ಸೊಲೊಮೋನನನ್ನು ಕರೆಯಿಸಿದನು. ಇಸ್ರಯೇಲ್ ದೇವರಾದ
ಸರ್ವೇಶ್ವರನ ಹೆಸರಿನಲ್ಲಿ ದೇವಾಲಯವನ್ನು ಕಟ್ಟಬೇಕೆಂದು ಅವನಿಗೆ ಆಜ್ಞಾಪಿಸಿದನು: 7ನಾನು ನನ್ನ
ದೇವರಾದ ಸರ್ವೇಶ್ವರನ ಹೆಸರಿನಲ್ಲಿ ದೇವಾಲಯವನ್ನು ಕಟ್ಟಬೇಕೆಂದು ಮನಸ್ಸುಮಾಡಿದೆ. 8ಆದರೆ
ಸರ್ವೇಶ್ವರ ನನಗೆ, "ನೀನು ಬಹಳ ರಕ್ತವನ್ನು ಸುರಿಸಿದವನು; ಮಹಾಯುದ್ಧಗಳನ್ನು ನಡೆಸಿದವನು. ನೀನು
ನನ್ನೆದುರಿನಲ್ಲಿ ಬಹಳ ರಕ್ತವನ್ನು ಸುರಿಸಿದ್ದರಿಂದ, ನನ್ನ ಹೆಸರಿಗಾಗಿ ಆಲಯವನ್ನು ಕಟ್ಟಬಾರದು. 9ನಿನಗೆ
ಒಬ್ಬ ಮಗ ಹುಟ್ಟುವನು; ಅವನು ಸಮಾಧಾನ ಪುರುಷನಾಗಿರುವನು. ನಾನು ಅವನ ಸುತ್ತಣ ಎಲ್ಲ
ವಿರೋಧಿಗಳನ್ನು ಅಡಗಿಸಿ ಅವನಿಗೆ ಶಾಂತಿ ಸಮಾಧಾನವನ್ನು ಅನುಗ್ರಹಿಸುವೆನು. ಅವನಿಗೆ ಸೊಲೊಮೋನ
ಎಂಬ ಹೆಸರಿರುವುದು. ಅವನ ಕಾಲದಲ್ಲಿ ಇಸ್ರಯೇಲರಿಗೆ ಶಾಂತಿ ಸಮಾಧಾನವನ್ನೂ ಸೌಭಾಗ್ಯವನ್ನೂ
ದಯಪಾಲಿಸುವೆನು. 10ಅವನೇ ನನ್ನ ಹೆಸರಿಗೆ ಒಂದು ಆಲಯವನ್ನು ಕಟ್ಟುವನು. ಅವನು ನನಗೆ
ಮಗನಾಗಿರುವನು, ನಾನು ಅವನಿಗೆ ತಂದೆಯಾಗಿರುವೆನು; ಇಸ್ರಯೇಲರಲ್ಲಿ ಅವನ ರಾಜ್ಯಸಿಂಹಾಸನವನ್ನು
ನಿರಂತರವಾಗಿ ಸ್ಥಿರಪಡಿಸುವೆನು," ಎಂಬುದಾಗಿ ಹೇಳಿದರು. 11"ನನ್ನ ಮಗನೇ, ನೀನು ಕೃತಾರ್ಥನಾಗಬೇಕು;
ನಿನ್ನ ದೇವರಾದ ಸರ್ವೇಶ್ವರ ನನ್ನ ವಿಷಯದಲ್ಲಿ ಮಾಡಿದ ವಾಗ್ದಾನದ ಪ್ರಕಾರ ನೀನು ದೇವಾಲಯವನ್ನು
ಕಟ್ಟಬೇಕು. ಆ ಸರ್ವೇಶ್ವರ ನಿನ್ನೊಂದಿಗಿರಲಿ! 12ನೀನು ನಿನ್ನ ದೇವರಾದ ಸರ್ವೇಶ್ವರನ ಧರ್ಮಶಾಸ್ತ್ರವನ್ನು
ಕೈಗೊಳ್ಳುವಂತೆ ಅವರು ನಿನಗೆ ಜ್ಞಾನವಿವೇಕಗಳನ್ನು ದಯಪಾಲಿಸಲಿ! ಇಸ್ರಯೇಲರನ್ನು ಆಳುವುದಕ್ಕೆ ನಿನ್ನನ್ನು
ನೇಮಿಸಲಿ! 13ಮೋಶೆಯ ಮುಖಾಂತರ ಸರ್ವೇಶ್ವರ ಇಸ್ರಯೇಲರಿಗೆ ಕೊಟ್ಟ ನ್ಯಾಯವಿಧಿಗಳನ್ನು ನೀನು
ಕೈಗೊಳ್ಳುವುದಾದರೆ ಸಫಲನಾಗುವೆ. ಸ್ಥಿರಚಿತ್ತನಾಗಿರು, ಧೈರ್ಯದಿಂದ ಇರು; ಅಂಜಬೇಡ,
ಕಳವಳಗೊಳ್ಳಬೇಡ. 14ಇಗೋ, ನಾನು ಬಹಳ ಪ್ರಯಾಸಪಟ್ಟು ಸರ್ವೇಶ್ವರನ ಆಲಯಕ್ಕಾಗಿ 3,400 ಮೆಟ್ರಿಕ್
ಟನ್ ಬಂಗಾರವನ್ನು 34,000 ಮೆಟ್ರಿಕ್ ಟನ್ ಬೆಳ್ಳಿಯನ್ನು ಹಾಗು ಲೆಕ್ಕವಿಲ್ಲದಷ್ಟು ತಾಮ್ರ, ಕಬ್ಬಿಣ,
ಕಲ್ಲುಮರಗಳನ್ನೂ ಕೂಡಿಸಿದ್ದೇನೆ. 15ನೀನು ಇನ್ನೂ ಹೆಚ್ಚು ಕೂಡಿಸುವೆ. ಇದಲ್ಲದೆ, ಕಟ್ಟುವ ಕೆಲಸಕ್ಕಾಗಿ
ಬೇಕಾದಷ್ಟು ಮಂದಿ ಕಲ್ಲುಕುಟಿಗರು, ಶಿಲ್ಪಿಗಳು, ಬಡಗಿಯವರು ಹಾಗು ಬಂಗಾರ, ಬೆಳ್ಳಿ, ತಾಮ್ರ, ಕಬ್ಬಿಣ
ಈ ಮುಂತಾದ ಕೆಲಸವನ್ನು ಮಾಡುವ ನಿಪುಣರು ನಿನಗಿರುತ್ತಾರೆ; ಅವರನ್ನು ಲೆಕ್ಕಿಸುವುದಕ್ಕಾಗುವುದಿಲ್ಲ.
16ಏಳು, ಕೆಲಸಕ್ಕೆ ಕೈಹಾಕು; ಸರ್ವೇಶ್ವರ ನಿನ್ನೊಂದಿಗಿರಲಿ!" ಎಂದು ಹೇಳಿದನು.

17 ತನ್ನ ಮಗ ಸೊಲೊಮೋನನಿಗೆ ನೆರವಾಗಬೇಕೆಂದು ಇಸ್ರಯೇಲರ ಎಲ್ಲ ಅಧಿಪತಿಗಳಿಗೆ
ದಾವೀದನು ಆಜ್ಞಾಪಿಸಿದನು. 18"ನಿಮ್ಮ ದೇವರಾದ ಸರ್ವೇಶ್ವರ ನಿಮ್ಮ ಸಂಗಡ ಇದ್ದು ಎಲ್ಲಾ ಕಡೆಗಳಲ್ಲೂ
ನಿಮಗೆ ನೆಮ್ಮದಿಯನ್ನು ಅನುಗ್ರಹಿಸಿದ್ದಾರೆ. ನಾಡಿನ ಮೂಲನಿವಾಸಿಗಳನ್ನು ನನ್ನ ಕೈಗೊಪ್ಪಿಸಿದ್ದಾರೆ. ನೀವೆ
ನೋಡುವ ಹಾಗೆ ನಾಡು ಸರ್ವೇಶ್ವರನಿಗೂ ಅವರ ಪ್ರಜೆಗಳಿಗೂ ಸ್ವಾಧೀನವಾಗಿದೆ. 19ಆದುದರಿಂದ ನೀವು
ಪೂರ್ಣಮನಸ್ಸಿನಿಂದ, ಪೂರ್ಣಪ್ರಾಣದಿಂದ ನಿಮ್ಮ ದೇವರಾದ ಸರ್ವೇಶ್ವರನ ದರ್ಶನವನ್ನು ಬಯಸಿರಿ.
ಏಳಿ, ನಿಮ್ಮ ದೇವರಾದ ಸರ್ವೇಶ್ವರನ ಪವಿತ್ರಾಲಯವನ್ನು ಕಟ್ಟಿರಿ. ಸರ್ವೇಶ್ವರನ ನಿಬಂಧನ
ಮಂಜೂಷವನ್ನೂ ದೇವಾರಾಧನೆಗೆ ಬೇಕಾದ ಸಾಮಗ್ರಿಗಳನ್ನೂ ಸರ್ವೇಶ್ವರನ ಹೆಸರಿಗಾಗಿ ಕಟ್ಟಲಾಗುವ
ಮಂದಿರದಲ್ಲಿ ಇಡಿ," ಎಂದು ಹೇಳಿದನು.

### ಲೇವಿಯರ ಕರ್ತವ್ಯಗಳು

**23** ದಾವೀದನು ಹಣ್ಣುಹಣ್ಣು ಮುದುಕನಾದಾಗ ತನ್ನ ಮಗ ಸೊಲೊಮೋನನನ್ನು ಇಸ್ರಯೇಲರ
ಅರಸನನ್ನಾಗಿ ಮಾಡಿದನು. 2ಆಗ ಇಸ್ರಯೇಲರ ಎಲ್ಲಾ ಅಧಿಪತಿಗಳನ್ನು, ಯಾಜಕರನ್ನು ಹಾಗು
ಲೇವಿಯರನ್ನು ತನ್ನ ಬಳಿಯಲ್ಲಿ ಸಭೆ ಸೇರಿಸಿದನು.

3 ಮೂವತ್ತು ವರ್ಷ ಮೊದಲ್ಗೊಂಡು ಹೆಚ್ಚಾದ ವಯಸ್ಸುಳ್ಳ ಲೇವಿಯರನ್ನು ಲೆಕ್ಕಿಸಿದಾಗ ಗಂಡಸರ ಸಂಖ್ಯೆ ಮೂವತ್ತೆಂಟು ಸಾವಿರವಿತ್ತು. 4ಇವರಲ್ಲಿ ಸರ್ವೇಶ್ವರನ ಆಲಯವನ್ನು ಕಟ್ಟುವವರ ಮೇಲ್ವಿಚಾರಣೆಗಾಗಿ ಇಪ್ಪತ್ತನಾಲ್ಕು ಸಾವಿರ, ನ್ಯಾಯಾಧಿಪತಿಗಳನ್ನಾಗಿ ಮತ್ತು ಅಧಿಕಾರಿಗಳನ್ನಾಗಿ ಆರು ಸಾವಿರ, 5ದ್ವಾರಪಾಲಕರನ್ನಾಗಿ ನಾಲ್ಕು ಸಾವಿರ ಹಾಗು ತಾನು ಒದಗಿಸಿದ್ದ ವಾದ್ಯಗಳಿಂದ ಸರ್ವೇಶ್ವರನನ್ನು ಭಜಿಸುವುದಕ್ಕಾಗಿ ನಾಲ್ಕು ಸಾವಿರ ಜನರನ್ನು ದಾವೀದನು ನೇಮಿಸಿದನು.

6 ಇದಲ್ಲದೆ, ಆ ಲೇವಿಯರನ್ನು ಗೇರ್ಷೋನ್ಯರು, ಕೆಹಾತ್ಯರು, ಮೆರಾರೀಯರು ಎಂಬ ಮೂರು ವರ್ಗಗಳಾಗಿ ವಿಂಗಡಿಸಿದನು.

7 ಗೇರ್ಷೋನ್ಯರ ಮೂಲಪುರುಷರು ಲದ್ದಾನ್ ಹಾಗೂ ಶಿಮ್ಮೀ ಎಂಬವರು. 8ಲದ್ದಾನನ ಮಕ್ಕಳಾದ ಯೆಹೀಯೇಲ್, ಜೇತಾಮ್, ಯೋವೇಲ್ ಎಂಬ ಮೂರು ಮಂದಿ ಮುಖ್ಯಸ್ಥರಾಗಿದ್ದರು. 9ಶಿಮ್ಮೀಯ ಮಕ್ಕಳು ಶೆಲೋಮೋತ್, ಹಜೀಯೇಲ್, ಹಾರಾನ್ ಎಂಬ ಮೂರು ಮಂದಿ. ಇವರು ಲದ್ದಾನ್ಯರ ಗೋತ್ರ ಪ್ರಧಾನರು. 10ಶಿಮ್ಮೀಗೆ ಯಹತ್, ಜೀನ, ಯೆಯೂಷ್, ಬೆರೀಯ ಎಂಬ ನಾಲ್ಕು ಮಂದಿ ಮಕ್ಕಳಿದ್ದರು. 11ಇವರಲ್ಲಿ ಯಹತನು ಮುಖ್ಯಸ್ಥನು. ಜೀಜನು ಎರಡನೆಯವನು. ಯೆಯೂಷ್, ಬೆರೀಯರಿಗೆ ಬಹಳ ಮಂದಿ ಮಕ್ಕಳು ಇರಲಿಲ್ಲವಾದ್ದರಿಂದ ಅವರಿಬ್ಬರೂ ಒಂದೇ ಕುಟುಂಬ ಹಾಗೂ ವರ್ಗವಾಗಿ ಎಣಿಕೆಯಾಗಿದ್ದರು.

12 ಕೆಹಾತನಿಗೆ ಅಮ್ರಾಮ್, ಇಚ್ಹಾರ್, ಹೆಬ್ರೋನ್, ಉಜ್ಜೀಯೇಲ್ ಎಂಬ ನಾಲ್ಕು ಮಂದಿ ಮಕ್ಕಳಿದ್ದರು. 13ಅಮ್ರಾಮನ ಮಕ್ಕಳು ಆರೋನ್, ಮೋಶೆ ಎಂಬವರು. ಆರೋನನೂ ಅವನ ಸಂತಾನದವರೂ ಮಹಾಪರಿಶುದ್ಧ ವಸ್ತುಗಳನ್ನು ಪ್ರತಿಷ್ಠಿಸುವುದಕ್ಕೆ ಪ್ರತ್ಯೇಕಿಸಲ್ಪಟ್ಟಿದ್ದರು. ಇವರು ಸರ್ವೇಶ್ವರನ ಸನ್ನಿಧಿಯಲ್ಲಿ ಸದಾ ಧೂಪಾರತಿ ಎತ್ತುವವರೂ ಸೇವೆ ಮಾಡುವವರೂ ಸರ್ವೇಶ್ವರನ ಹೆಸರಿನಿಂದ ಜನರನ್ನು ಆಶೀರ್ವದಿಸುವವರೂ ಆಗಿರಬೇಕಿತ್ತು. 14ದೈವಪುರುಷನಾದ ಮೋಶೆಯ ಸಂತಾನದವರು ಸಾಧಾರಣ ಲೇವಿಯರೊಳಗೆ ಲೆಕ್ಕಿತರಾಗಿದ್ದರು. 15ಮೋಶೆಯ ಮಕ್ಕಳು ಗೇರ್ಷೋಮ್ ಹಾಗೂ ಎಲೀಯೆಜೆರ್ ಎಂಬವರು. 16ಮುಖ್ಯಸ್ಥನಾದ ಶೆಬೂವೇಲನು ಗೇರ್ಷೋಮನ ಮಗ. 17ಮುಖ್ಯಸ್ಥನಾದ ರೆಹಬ್ಯ ಎಲೀಯೆಜೆರನ ಮಗ. ಎಲೀಯೆಜೆರನಿಗೆ ಬೇರೆ ಮಕ್ಕಳಿರಲಿಲ್ಲ. ಆದರೆ ರೆಹಬ್ಯನಿಗೆ ಅನೇಕ ಮಂದಿ ಮಕ್ಕಳಿದ್ದರು. 18ಮುಖ್ಯಸ್ಥ ಶೆಲೋಮೋತನು ಇಚ್ಹಾರನ ಮಗ. 19ಹೆಬ್ರೋನನ ಮಕ್ಕಳಲ್ಲಿ ಯೆರೀಯ ಮುಖ್ಯಸ್ಥ; ಅಮರ್ಯ ಎರಡನೆಯವನು, ಯಹಜೀಯೇಲ್ ಮೂರನೆಯವನು, ಯೆಕಮ್ಮಾಮ್ ನಾಲ್ಕನೆಯವನು. 20ಉಜ್ಜೀಯೇಲನ ಮಕ್ಕಳಲ್ಲಿ ಮೀಕನೂ ಮುಖ್ಯಸ್ಥ; ಇಷೀಯನು ಎರಡನೆಯವನು.

21 ಮೆರಾರೀಯ ಮಕ್ಕಳು ಮಹ್ಲೀ ಹಾಗೂ ಮೂಷೀ ಎಂಬವರು. ಮಹ್ಲೀಯ ಮಕ್ಕಳು ಎಲ್ಲಾಜಾರ್ ಹಾಗೂ ಕೀಷ್ ಇವರು. 22ಎಲ್ಲಾಜಾರನು ಗಂಡುಮಕ್ಕಳಿಲ್ಲದೆ ಸತ್ತನು. ಅವನಿಗೆ ಹೆಣ್ಣುಮಕ್ಕಳು ಮಾತ್ರ ಇದ್ದರು; ಇವರು ತಮ್ಮ ಬಂಧುಗಳಾದ ಕೀಷನ ಮಕ್ಕಳನ್ನು ಮದುವೆಮಾಡಿದರು. 23ಮೂಷಿಗೆ ಮೆಹ್ಲೀ, ಏದೆರ್, ಯೆರೇಮೋತ್ ಎಂಬ ಮೂರು ಮಂದಿ ಮಕ್ಕಳಿದ್ದರು.

24 ಲೇವಿಯರ ಪಟ್ಟಿಯಲ್ಲಿ ಬರೆದಿರುವ ಹೆಸರುಗಳ ಪ್ರಕಾರ ಇವರೇ ಆಯಾ ಲೇವಿ ವರ್ಗಗಳ ಕುಟುಂಬದ ಮುಖ್ಯಸ್ಥರು. ಇವರಲ್ಲಿ ಇಪ್ಪತ್ತು ವರ್ಷ ಮೊದಲ್ಗೊಂಡು ಹೆಚ್ಚು ವಯಸ್ಸುಳ್ಳವರು ಸರ್ವೇಶ್ವರನ ಆಲಯದಲ್ಲಿ ಸೇವೆಮಾಡಲು ಅರ್ಹರಾಗಿದ್ದರು.

25 ಇಸ್ರಯೇಲ್ ದೇವರಾದ ಸರ್ವೇಶ್ವರ, ತಮ್ಮ ಪ್ರಜೆಗೆ ನೆಮ್ಮದಿಯನ್ನು ಅನುಗ್ರಹಿಸಿ, ಸದಾ ಜೆರುಸಲೇಮಿನಲ್ಲಿ ವಾಸಿಸುವವರಾದ ಕಾರಣ, 26ಲೇವಿಯರು ಇನ್ನು ಮುಂದೆ ಅವರ ಗುಡಾರವನ್ನೂ ಆರಾಧನಾ ಸಾಮಗ್ರಿಗಳನ್ನೂ ಹೊರುವುದು ಅವಶ್ಯವಿಲ್ಲವೆಂದುಕೊಂಡು, ದಾವೀದನು ಈ ಪ್ರಕಾರ ವಿಧಿಸಿದನು: 27ದಾವೀದನ ಈ ಕಡೇ ಆಜ್ಞೆಯ ಮೇರೆಗೆ ಲೇವಿಯರಲ್ಲಿ ಇಪ್ಪತ್ತು ವರ್ಷ ಮೊದಲ್ಗೊಂಡು ಹೆಚ್ಚು ವಯಸ್ಸುಳ್ಳವರೆಲ್ಲರೂ ಲೆಕ್ಕಿಸಲ್ಪಟ್ಟರು. 28ಅವರು ಆರೋನ್ಯರ ಕೈಕೆಳಗಿದ್ದುಕೊಂಡು ಸರ್ವೇಶ್ವರನ ಆಲಯದ ಪರಿಚರ್ಯೆಯನ್ನು ನಡೆಸಬೇಕಾಗಿತ್ತು. ಅವರ ಕೆಲಸ ಕಾರ್ಯ ಇವು: ಅಂಗಳವನ್ನೂ ಅಲ್ಲಿಯ ಕೋಣೆಗಳನ್ನೂ ನೋಡಿಕೊಳ್ಳುವುದು, ದೇವಾಲಯಕ್ಕೆ ಸಂಬಂಧಪಟ್ಟವುಗಳನ್ನೆಲ್ಲಾ ಶುದ್ಧಮಾಡುವುದು, ದೇವಾಲಯದಲ್ಲಿ ಸೇವೆಮಾಡುವುದು; 29ನೈವೇದ್ಯದ ಮೀಸಲು ರೊಟ್ಟಿ, ನೈವೇದ್ಯಕ್ಕೆ ಬೇಕಾದ ಗೋದಿ

ಹಿಟ್ಟು, ಹುಳಿಯಿಲ್ಲದ ರೊಟ್ಟಿ, ಕಬ್ಬಿಣದ ಹಂಚಿನಲ್ಲಿ ಸುಟ್ಟ ರೊಟ್ಟಿ, ಎಣ್ಣೆಯಿಂದ ನೆನೆದ ಭಕ್ಷ್ಯ ಇವುಗಳನ್ನು ಒದಗಿಸುವುದು; ಸೇರು, ಅಳತೆಗೋಲು ಇವುಗಳನ್ನು ಪರೀಕ್ಷಿಸುವುದು; 30–31ಪ್ರತಿದಿನ ಬೆಳಿಗ್ಗೆ, ಸಂಜೆ ಮತ್ತು ನಿಯಮಿತ ಸಂಖ್ಯೆಗೆ ಸರಿಯಾಗಿ ಸಬ್ಬತ್ ದಿನ, ಅಮಾವಾಸ್ಯೆ, ಜಾತ್ರೆ ಇವುಗಳಲ್ಲಿ ಸರ್ವೇಶ್ವರನ ಮುಂದೆ ತಪ್ಪದೆ ನಡೆಯುವ ದಹನಬಲಿ ಸಮರ್ಪಣೆಯ ಹೊತ್ತಿನಲ್ಲಿ, ಸರ್ವೇಶ್ರನಿಗೆ ಕೃತಜ್ಞತಾಸ್ತುತಿಯನ್ನು ಸಲ್ಲಿಸುವುದು. 32ಹೀಗೆ ಅವರು ತಮ್ಮ ಸಹೋದರರಾದ ಆರೋನ್ಯರ ಸಹಾಯಕರಾಗಿದ್ದು, ದೇವದರ್ಶನದ ಗುಡಾರವನ್ನೂ ಪರಿಶುದ್ಧವಾದ ಎಲ್ಲಾ ಸಾಮಾನುಗಳನ್ನೂ ನೋಡಿಕೊಳ್ಳುವುದೇ ಸರ್ವೇಶ್ವರನ ಆಲಯದಲ್ಲಿ ಅವರು ಮಾಡಬೇಕಾಗಿದ್ದ ಪರಿಚರ್ಯೆ.

### ಯಾಜಕವರ್ಗಗಳಿಗೆ ವಿಧಿಸಲಾದ ಕರ್ತವ್ಯಗಳು

**24** ಆರೋನನ ಸಂತಾನದವರನ್ನು ವರ್ಗಗಳಾಗಿ ವಿಂಗಡಿಸಲಾಗಿತ್ತು. ಆರೋನನಿಗೆ ನಾದಾಬ್, ಅಬೀಹೂ, ಎಲ್ಲಾಜಾರ್, ಈತಾಮಾರ್ ಎಂಬ ನಾಲ್ವರು ಮಕ್ಕಳಿದ್ದರು. 2ನಾದಾಬ್, ಅಬೀಹೂ ಎಂಬವರು ಮಕ್ಕಳಿಲ್ಲದೆ ತಮ್ಮ ತಂದೆಗಿಂತ ಮೊದಲೇ ಸತ್ತುಹೋದುದರಿಂದ ಎಲ್ಲಾಜಾರ್ ಈತಾಮಾರರು ಯಾಜಕ ಉದ್ಯೋಗವನ್ನು ನಡೆಸುತ್ತಿದ್ದರು. 3ದಾವೀದನೂ ಎಲ್ಲಾಜಾರನ ಸಂತಾನದವನಾದ ಚಾದೋಕನೂ ಈತಾಮಾರನ ಸಂತಾನದವನಾದ ಅಹೀಮೆಲೆಕನೂ ಯಾಜಕರನ್ನು ಸರದಿಯ ಮೇಲೆ ಸೇವೆ ಸಲ್ಲಿಸತಕ್ಕ ವರ್ಗಗಳನ್ನಾಗಿ ವಿಭಾಗಿಸಿದ್ದರು. 4ಎಲ್ಲಾಜಾರನ ಸಂತಾನದಲ್ಲಿ ಕುಟುಂಬ ಕಂಡುಬಂದುದರಿಂದ, ಎಲ್ಲಾಜಾರ್ಯರ ಕುಟುಂಬಗಳನ್ನು ಮುಖ್ಯಸ್ಥರ ಲೆಕ್ಕದ ಪ್ರಕಾರ ಹದಿನಾರು ವರ್ಗಗಳನ್ನಾಗಿಯೂ ಈತಾಮಾರ್ಯರ ಕುಟುಂಬಗಳನ್ನು ಎಂಟು ವರ್ಗಗಳನ್ನಾಗಿಯೂ ಮಾಡಿ, 5ಈ ವರ್ಗಗಳ ವಿಷಯವಾಗಿ ಚೀಟುಹಾಕಿ ಕೆಲಸವನ್ನು ವಹಿಸುತ್ತಿದ್ದರು. ಎಲ್ಲಾಜಾರನ ಸಂತಾನದವರಲ್ಲಿ ಹೇಗೋ ಹಾಗೆಯೇ ಈತಾಮಾರನ ಸಂತಾನದವರಲ್ಲಿಯೂ ಪವಿತ್ರಾಲಯದ ಅಧಿಪತಿಗಳೂ ದೈವಿಕ ಕಾರ್ಯಗಳ ಅಧ್ಯಕ್ಷರೂ ಇದ್ದುದರಿಂದ ಉಭಯ ಸಂತಾನಗಳವರು ಸಮಾನ ಸ್ಥಾನದವರಾಗಿದ್ದರು. 6ನೆತನೇಲನ ಮಗ ಶೆಮಾಯನೆಂಬ ಲೇವಿಯ ಲೇಖಕನು, ಅರಸನ ಮುಂದೆ, ಅಧಿಪತಿಗಳ ಮುಂದೆ ಹಾಗೂ ಯಾಜಕನಾದ ಚಾದೋಕ್, ಎಬ್ಯಾತಾರನ ಮಗ ಅಹೀಮೆಲೆಕ್, ಯಾಜಕರ ಮತ್ತು ಲೇವಿಯರ ಕುಟುಂಬಗಳ ಮುಖ್ಯಸ್ಥರ ಮುಂದೆ, ಆ ವರ್ಗಗಳ ಪಟ್ಟಿಯನ್ನು ಬರೆಯುತ್ತಿದ್ದನು. ಎಲ್ಲಾಜಾರ್ಯರ ಒಂದು ವರ್ಗದವರ ಸರದಿ ಆದ ನಂತರ ಈತಾಮಾರ್ಯರ ಒಂದು ವರ್ಗದವರು ಸೇವೆಸಲ್ಲಿಸಬೇಕೆಂದು ನೇಮಿಸಿ, ಎಲ್ಲಾ ವರ್ಗಗಳ ಸರದಿಯನ್ನು ಚೀಟಿನಿಂದಲೇ ಗೊತ್ತು ಮಾಡುತ್ತಿದ್ದರು.

7 ಮೊದಲನೆಯ ಚೀಟು ಯೆಹೋಯಾರೀಬನಿಗೆ ಬಿದ್ದಿತು; 8ಎರಡನೆಯದು ಯೆದಾಯನಿಗೆ; ಮೂರನೆಯದು ಹಾರೀಮನಿಗೆ; 9ನಾಲ್ಕನೆಯದು ಸೆಯೋರೀಮನಿಗೆ; ಐದನೆಯದು ಮಲ್ಕೀಯನಿಗೆ; ಆರನೆಯದು ಮಿಯ್ಯಾಮೀನನಿಗೆ; 10ಏಳನೆಯದು ಹಕ್ಕೋಚನಿಗೆ; ಎಂಟನೆಯದು ಅಬೀಯನಿಗೆ; 11ಒಂಬತ್ತನೆಯದು ಯೆಷೂವನಿಗೆ; 12ಹತ್ತನೆಯದು ಶೆಕನ್ಯನಿಗೆ; ಹನ್ನೊಂದನೆಯದು ಎಲ್ಯಾಷೀಬನಿಗೆ; 13ಹನ್ನೆರಡನೆಯದು ಯಾಕೀಮನಿಗೆ; ಹದಿಮೂರನೆಯದು ಹುಪ್ಪನಿಗೆ; ಹದಿನಾಲ್ಕನೆಯದು ಎಫೆಬಾಬನಿಗೆ; 14ಹದಿನೈದನೆಯದು ಬಿಲ್ಗನಿಗೆ; ಹದಿನಾರನೆಯದು ಇಮ್ಮೇರನಿಗೆ; 15ಹದಿನೇಳನೆಯದು ಹೇಜೀರನಿಗೆ; 16ಹದಿನೆಂಟನೆಯದು ಹಪ್ಪಿಚ್ಚೇಚನಿಗೆ; ಹತ್ತೊಂಬತ್ತನೆಯದು ಪೆತಹ್ಯನಿಗೆ; ಇಪ್ಪತ್ತನೆಯದು ಯೆಹೆಜ್ಕೇಲನಿಗೆ; 17ಇಪ್ಪತ್ತೊಂದನೆಯದು ಯಾಕೀನನಿಗೆ; ಇಪ್ಪತ್ತೆರಡನೆಯದು ಗಾಮೂಲನಿಗೆ; 18ಇಪ್ಪತ್ತಮೂರನೆಯದು ದೆಲಾಯನಿಗೆ; ಇಪ್ಪತ್ತನಾಲ್ಕನೆಯದು ಮಾಜ್ಯನಿಗೆ. 19ಆರೋನ್ಯರು ಈ ವರ್ಗಕ್ರಮದಲ್ಲಿ ಸರ್ವೇಶ್ವರನ ಆಲಯಕ್ಕೆ ಬಂದು, ಲೇವಿಯರ ಮೂಲ ಪುರುಷನಾದ ಆರೋನನ ಮುಖಾಂತರ ಇಸ್ರಯೇಲ್ ದೇವರಾದ ಸರ್ವೇಶ್ವರ ನಿಯಮಿಸಿದ ಸೇವೆಯನ್ನು ನಡೆಸಬೇಕಾಗಿತ್ತು.

20 ಉಳಿದ ಲೇವಿಯರ ಪಟ್ಟಿ: ಅಮ್ರಾಮನ ಸಂತಾನದವನಾದ ಶೂಬಾಯೇಲನ ಕುಟುಂಬದವರಲ್ಲಿ ಯೆಹ್ದೆಯಾಹನು, 21ರೆಹಬ್ಯನ ಸಂತಾನದವರಲ್ಲಿ ಇಷ್ಷೀಯನು, 22ಹಾಗೂ ಇಚ್ಹಾರನ ಸಂತಾನದವನಾದ ಶೆಲೋಮೋತನ ಕುಟುಂಬದವರಲ್ಲಿ ಯಹತನು ಮುಖ್ಯಸ್ಥರು. 23ಹೆಬ್ರೋನನ ಸಂತಾನದವರಲ್ಲಿ

ಯೆರೀಯನು ಮುಖ್ಯಸ್ಥನು, ಅಮರ್ಯನು ಎರಡನೆಯವನು, ಯಹಜೀಯೇಲನು ಮೂರನೆಯವನು,
ಯೆಕಮ್ಮಾಮನು ನಾಲ್ಕನೆಯವನು. 24ಉಜ್ಜಿಯೇಲನ ಮಗ ಮೀಕನ ಸಂತಾನದವರಲ್ಲಿ ಶಾಮೀರನು
25ಹಾಗೂ ಮೀಕನ ತಮ್ಮನಾದ ಇಷ್ಷೀಯನ ಸಂತಾನದವರಲ್ಲಿ ಜೆಕರ್ಯನು ಮುಖ್ಯಸ್ಥರು. 26ಮೆರಾರೀಯ
ಮಕ್ಕಳು ಮಹ್ಲೀ ಮತ್ತು ಮೂಷೀ ಎಂಬವರು ಹಾಗೂ ಅವನ ಮತ್ತೊಬ್ಬ ಮಗ ಯಾಜ್ಯನ ವಂಶದವರು.
27ಮೆರಾರೀಯ ಸಂತಾನದವರಲ್ಲಿ ಯಾಜ್ಯನಿಂದ ಹುಟ್ಟಿದವರು ಬೆನೋ, ಶೋಹಮ್, ಜಕ್ಕೂರ್, ಇಬ್ರೀ
ಇವರು. 28ಮಹ್ಲೀಯಿಂದ ಹುಟ್ಟಿದವರು: ಮಕ್ಕಳಿಲ್ಲದೆ ಸತ್ತ ಎಲ್ಲಾಜಾರನು ಹಾಗು ಕೀಷನು. 29ಕೀಷನಿಂದ
ಯೆರಹ್ಮೇಲನು ಹುಟ್ಟಿದನು. 30ಮೂಷೀಯ ಮಕ್ಕಳು: ಮಹ್ಲೀ, ಏದೆರ್, ಯೆರೀಮೋತ್ ಎಂಬವರು.
31 ಇವರೆಲ್ಲಾ ಲೇವಿಸಂತಾನದವರು. ಇವರ ಕುಟುಂಬಗಳಲ್ಲಿ ಎಲ್ಲಾ ಹಿರಿಯರೂ ಕಿರಿಯರೂ,
ತಮ್ಮ ಕುಲಬಂಧುಗಳಾದ ಆರೋನ್ಯರಂತೆ, ಅರಸನಾದ ದಾವೀದ್, ಚಾದೋಕ್, ಅಹೀಮೆಲೆಕ್ ಇವರ
ಮುಂದೆ ಹಾಗೂ ಯಾಜಕರ ಮತ್ತು ಲೇವಿಯರ ಕುಟುಂಬ ಮುಖ್ಯಸ್ಥರ ಮುಂದೆ, ಚೀಟಿನಿಂದ ತಮ್ಮಲ್ಲಿ
ಸರದಿಗಳನ್ನು ನೇಮಿಸಿಕೊಂಡರು.

### ದೇವಾಲಯದ ಸಂಗೀತ ಮಂಡಳಿ

**25** ದಾವೀದನು ಹಾಗೂ ಆರಾಧಕ ಮಂಡಲಿಯ ಮುಖ್ಯಸ್ಥರು ಕಿನ್ನರಿ, ಸ್ವರಮಂಡಲ, ತಾಳ ಇವುಗಳನ್ನು
ಬಾರಿಸುತ್ತಾ, ಪರವಶರಾಗಿ ಗಾಯನಸೇವೆ ಮಾಡುವುದಕ್ಕಾಗಿ ಆಸಾಫ್ಯರನ್ನೂ ಹೇಮಾನ್ಯರನ್ನೂ
ಯೆದುತೂನ್ಯರನ್ನೂ ಆರಿಸಿದರು. ಈ ಸೇವೆಯನ್ನು ಮಾಡಬೇಕಾಗಿದ್ದ ಪುರುಷರ ಪಟ್ಟಿ: 2ಆಸಾಫ್ಯರಲ್ಲಿ
ಜಕ್ಕೂರ್, ಜೋಸೆಫ್, ನೆತನ್ಯ, ಅಶರೇಲ ಎಂಬವರು. ಇವರು ಆಸ್ಥಾನದ ಗಾಯಕ ಆಸಾಫನ ಸಹಾಯಕರು.
3ಯೆದುತೂನ್ಯರಲ್ಲಿ ಗೆದಲ್ಯ, ಚೆರೀ, ಯೆಶಾಯ, ಶಿಮ್ಮೀ, ಹಷಬ್ಯ, ಮತ್ತಿತ್ಯ. ಇವರು ಕಿನ್ನರಿಯನ್ನು ಬಾರಿಸುತ್ತಾ
ಪರವಶರಾಗಿ, ಸರ್ವೇಶ್ವರನ ಕೀರ್ತನೆ ಮಾಡುವ ತಮ್ಮ ತಂದೆಯಾದ ಯೆದುತೂನನಿಗೆ ಈ ಆರು ಮಂದಿ
ಸಹಾಯಕರು. 4ಹೇಮಾನ್ಯರಲ್ಲಿ ಬುಕ್ಕೀಯ, ಮತ್ತನ್ಯ, ಉಜ್ಜೀಯೇಲ್, ಶೆಬೂವೇಲ್, ಯೆರೀಮೋತ್,
ಹನನ್ಯ, ಹನಾನೀ, ಎಲೀಯಾತ, ಗಿದ್ದಲ್ತಿ, ರೋಮಮ್ತಿಯೆಜೆರ್, ಯೊಷ್ಬೆಕಾಷ, ಮಲ್ಲೋತೀ, ಹೋತೀರ್,
ಮಹಜೀಯೋತ್. 5ಇವರೆಲ್ಲರೂ ಅರಸನ ದರ್ಶಿಯಾದ ಹೇಮಾನನ ಮಕ್ಕಳು. ದೇವರು ಅವನಿಗೆ, "ನೀನು
ಅಭಿವೃದ್ಧಿಯಾಗುವ ಹಾಗೆ ಮಾಡುವೆನು," ಎಂಬುದಾಗಿ ವಾಗ್ದಾನ ಮಾಡಿದ್ದರು. ಅದರಂತೆಯೇ ಅವನಿಗೆ
ಹದಿನಾಲ್ಕು ಮಂದಿ ಗಂಡುಮಕ್ಕಳನ್ನೂ ಮೂರು ಮಂದಿ ಹೆಣ್ಣುಮಕ್ಕಳನ್ನೂ ದಯಪಾಲಿಸಿದರು.
6ದೇವರಾದ ಸರ್ವೇಶ್ವರನ ಆಲಯದಲ್ಲಿ ಆರಾಧನೆ ನಡೆಯುತ್ತಿರುವಾಗ ಇವರೆಲ್ಲರೂ ತಮ್ಮ ತಂದೆಯ
ನೇತೃತ್ವದಲ್ಲಿ ತಾಳ, ಸ್ವರ ಮಂಡಲ, ಕಿನ್ನರಿ ಇವುಗಳಿಂದ ಗಾಯನ ಮಾಡುತ್ತಿದ್ದರು. ಆಸಾಫ್, ಯೆದುತೂನ್,
ಹೇಮಾನರು ಅರಸನ ಸೇವೆಯಲ್ಲಿದ್ದರು. 7ಇವರೂ ಸರ್ವೇಶ್ವರನ ಕೀರ್ತನೆಗಳನ್ನು ಕಲಿತ ಇವರ
ಸಹೋದರರೂ ಒಟ್ಟು ಇನ್నೂರ ಎಂಬತ್ತೆಂಟು ಮಂದಿ ಗಾಯನಪ್ರವೀಣರು ಇದ್ದರು.
8 ಇವರಲ್ಲಿ ಹಿರಿಕಿರಿಯರೂ ಗುರುಶಿಷ್ಯರೂ ಕೂಡಿಕೊಂಡು ಚೀಟಿನಿಂದ ತಮ್ಮ ಸೇವಾಕ್ರಮವನ್ನು
ಗೊತ್ತುಮಾಡಿಕೊಳ್ಳುತ್ತಿದ್ದರು. ಈ ಚೀಟಿನ ಪ್ರಕಾರ ಇನ್ನೂರ ಎಂಬತ್ತೆಂಟು ಮಂದಿ ಸದಸ್ಯರು ಇಪ್ಪತ್ತನಾಲ್ಕು
ಗುಂಪುಗಳಾಗಿ ವಿಂಗಡಿಸಲಾಗಿದ್ದರು. ಪ್ರತಿಯೊಂದು ಗುಂಪಿಗೆ ಒಬ್ಬ ನಾಯಕನು, ಅವನ ಸಹೋದರರು
ಹಾಗೂ ಮಕ್ಕಳು ಕೂಡಿ ಹನ್ನೆರಡು ಮಂದಿ ಸದಸ್ಯರು ಇದ್ದರು. ಕ್ರಮಾನುಸಾರ ಇಪ್ಪತ್ತನಾಲ್ಕು ನಾಯಕರ
ಹೆಸರುಗಳು ಇವು:

9 ಮೊದಲನೆಯವನು ಆಸಾಫ್ಯನಾದ ಜೋಸೆಫನು; ಎರಡನೆಯವನು ಗೆದಲ್ಯ
10 ಮೂರನೆಯವನು ಜಕ್ಕೂರ್
11 ನಾಲ್ಕನೆಯವನು ಇಚ್ರೀ
12 ಐದನೆಯವನು ನೆತನ್ಯ
13 ಆರನೆಯವನು ಬುಕ್ಕೀಯ
14 ಏಳನೆಯವನು ಯೆಸರೇಲ

15 ಎಂಟನೆಯವನು ಯೆಶಾಯ
16 ಒಂಬತ್ತನೆಯವನು ಮತ್ತನ್ಯ
17 ಹತ್ತನೆಯವನು ಶಿಮ್ಮೀ
18 ಹನ್ನೊಂದನೆಯವನು ಅಜರೇಲ್
19 ಹನ್ನೆರಡನೆಯವನು ಹಷಬ್ಯ
20 ಹದಿಮೂರನೆಯವನು ಶೂಬಾಯೇಲ್
21 ಹದಿನಾಲ್ಕನೆಯವನು ಮತ್ತಿತ್ಯ
22 ಹದಿನೈದನೆಯವನು ಯೆರೆಮೋತ್
23 ಹದಿನಾರನೆಯವನು ಹನನ್ಯ
24 ಹದಿನೇಳನೆಯವನು ಯೊಷ್ಬೆಕಾಷ
25 ಹದಿನೆಂಟನೆಯವನು ಹನಾನೀ
26 ಹತ್ತೊಂಬತ್ತನೆಯವನು ಮಲ್ಲೋತಿ
27 ಇಪ್ಪತ್ತನೆಯವನು ಎಲೀಯಾತ
28 ಇಪ್ಪತ್ತೊಂದನೆಯವನು ಹೋತೀರ್
29 ಇಪ್ಪತ್ತೆರಡನೆಯವನು ಗಿದ್ದಲ್ತಿ
30 ಇಪ್ಪತ್ತಮೂರನೆಯವನು ಮಹಜೀಯೋತ್
31 ಇಪ್ಪತ್ತನಾಲ್ಕನೆಯವನು ರೋಮಮ್ತಿಯೆಜೆರ್.

### ದೇವಾಲಯದ ಕಾವಲುಗಾರರು

**26** ದೇವಾಲಯದ ಕಾವಲುಗಾರರಾಗಿ ಸೇವೆಮಾಡಲು ನೇಮಕಗೊಂಡ ಲೇವಿಯರ ಹೆಸರುಗಳು:
ಕೋರಹೀಯನಾದ ಮೆಷೆಲೆಮ್ಯ; ಇವನು ಕೊರೇಯನ ಮಗ ಹಾಗೂ ಆಸಾಫನ ಮೊಮ್ಮಗ; 2ಮೆಷಲೆಮ್ಯನ
ಮಕ್ಕಳಲ್ಲಿ ಜೆಕರ್ಯನು ಚೊಚ್ಚಲನು; ಎದೀಯಯೇಲನು ಮರಚಲನು; ಜೆಬದ್ಯನು ಮೂರನೆಯವನು;
ಯೆತ್ನಿಯೇಲನು ನಾಲ್ಕನೆಯವನು. 3ಏಲಾಮನು ಐದನೆಯವನು. ಯೆಹೋಹಾನಾನನು ಆರನೆಯವನು;
ಎಲ್ಯೆಹೋಯೇನೈ ಏಳನೆಯವನು.

4 ಓಬೇದೆದೋಮನ ಮಕ್ಕಳಲ್ಲಿ ಶೆಮಾಯನು ಚೊಚ್ಚಲನು; ಯೆಹೋಜಾಬಾದನು ಮರಚಲನು;
ಯೋವಾಹನು ಮೂರನೆಯವನು; ಸಾಕಾರನು ನಾಲ್ಕನೆಯವನು; ನೆತನೇಲನು ಐದನೆಯವನು;
5ಅಮ್ಮೀಯೇಲನು ಆರನೆಯವನು; ಇಸ್ಸಾಕಾರನು ಏಳನೆಯವನು; ಪೆಯುಲ್ಲಿತೈಯು ಎಂಟನೆಯವನು.
ಓಬೇದೆದೋಮನು ದೇವರ ಆಶೀರ್ವಾದಕ್ಕೆ ಪಾತ್ರನಾಗಿದ್ದನು. 6ಅವನ ಮಗ ಶೆಮಾಯನ ಮಕ್ಕಳು ಗೋತ್ರ
ಪ್ರಧಾನರೂ ಮಹಾ ಸಮರ್ಥರೂ ಆಗಿದ್ದರು. 7ಇವರು ಯಾರೆಂದರೆ, ಒತ್ನೀ, ರೆಫೇಯೇಲ್, ಓಬೇದ್,
ಎಲ್ಜಾಬಾದ್ ಇವರು ಹಾಗೂ ಬಹು ಸಮರ್ಥರಾದ, ಎಲೀಹು, ಸೆಮಕ್ಯ ಎಂಬ ಇವರ ಸಹೋದರರು.
8ಇವರೆಲ್ಲರೂ ಓಬೇದೆದೋಮನ ಸಂತಾನದವರು. ಸಮರ್ಥರೂ ಸೇವೆಯಲ್ಲಿ ಗಟ್ಟಿಗರೂ ಆಗಿದ್ದ ಇವರೂ
ಇವರ ಮಕ್ಕಳೂ ಸಹೋದರರೂ ಕೂಡಿ ಅರವತ್ತೆರಡು ಮಂದಿ ಇದ್ದರು. 9ಮೆಷೆಲಿಮ್ಯನ ಮಕ್ಕಳೂ
ಸಹೋದರರೂ ಹದಿನೆಂಟು ಮಂದಿ; ಇವರೂ ಸಮರ್ಥರಾಗಿದ್ದರು.

10 ಮೆರಾರೀಯನಾದ ಹೋಸನಿಗೂ ಮಕ್ಕಳಿದ್ದರು; ಅವರಲ್ಲಿ ಶಿಮ್ರಿ ಎಂಬವನು
ಮುಖ್ಯಸ್ಥನಾಗಿದ್ದನು. ಇವನು ಚೊಚ್ಚಲನಲ್ಲದಿದ್ದರೂ ತಂದೆ ಅವನನ್ನೇ ಮುಖ್ಯಸ್ಥನನ್ನಾಗಿ ನೇಮಿಸಿದನು.
11ಹಿಲ್ಕೀಯನು ಎರಡನೆಯವನು; ಟೋಬಲ್ಯನು ಮೂರನೆಯವನು; ಜೆಕರ್ಯನು ನಾಲ್ಕನೆಯವನು.
ಹೋಸನ ಮಕ್ಕಳೂ ಸಹೋದರರೂ ಒಟ್ಟಿಗೆ ಹದಿಮೂರು ಮಂದಿ.

12 ಈ ದ್ವಾರಪಾಲಕ ವರ್ಗಗಳ ಪ್ರಧಾನ ಪುರುಷರು ತಮ್ಮ ಕುಲಬಂಧುಗಳಂತೆ ಸರ್ವೇಶ್ವರನ
ಆಲಯದಲ್ಲಿ ಸೇವೆಮಾಡುತ್ತಿದ್ದರು. 13ಅವರು, ಕನಿಷ್ಠ ಕುಟುಂಬವೆಂದಾಗಲಿ ಶ್ರೇಷ್ಠ ಕುಟುಂಬವೆಂದಾಗಲಿ

ವ್ಯತ್ಯಾಸಮಾಡದೆ, ತಮ್ಮಲ್ಲಿ ಪ್ರತಿಯೊಬ್ಬನು ಕಾಯತಕ್ಕ ಹೆಬ್ಬಾಗಿಲುಗಳನ್ನು ಚೀಟಿನಿಂದಲೇ ಗೊತ್ತುಮಾಡಿಕೊಳ್ಳುತ್ತಿದ್ದರು. 14ಪೂರ್ವದಿಕ್ಕಿನ ಚೀಟು ಶೆಲೆಮ್ಯನ ಹೆಸರಿಗೆ ಬಿದ್ದಿತ್ತು. ಬಹುವಿವೇಕವುಳ್ಳ ಪಂಚಾಯತಗಾರನಾಗಿರುವ ಅವನ ಮಗ ಜೆಕರ್ಯನ ಹೆಸರಿಗೆ ಉತ್ತರ ದಿಕ್ಕಿನ ಚೀಟು ಬಿದ್ದಿತ್ತು. 15ಓಬೇದೆದೋಮನಿಗೆ ದಕ್ಷಿಣ ಬಾಗಿಲೂ ಅವನ ಮಕ್ಕಳಿಗೆ ಉಗ್ರಾಣ ಮಂದಿರವೂ 16ಶುಪ್ಪೀಮ್, ಹೋಸ ಎಂಬವರಿಗೆ ಪಶ್ಚಿಮ ಬಾಗಿಲೂ ಅದರ ಸಮೀಪದಲ್ಲಿರುವ ಶೆಲ್ಲೆಕೆತೆಂಬ ಬಾಗಿಲೂ ಪಟ್ಟಣದಿಂದ ದೇವಾಲಯಕ್ಕೆ ಏರಿಹೋಗುವ ದಾರಿಯಲ್ಲಿದೆ. 17ಲೇವಿಯರಲ್ಲಿ ಪ್ರತಿದಿನವೂ ಪೂರ್ವಬಾಗಿಲನ್ನು ಆರು ಮಂದಿ, ಪಶ್ಚಿಮ ಬಾಗಿಲನ್ನು ನಾಲ್ಕು ಮಂದಿ, ದಕ್ಷಿಣ ಬಾಗಿಲನ್ನು ನಾಲ್ಕು ಮಂದಿ, ಉಗ್ರಾಣ ಮಂದಿರದ ಎರಡು ಬಾಗಿಲುಗಳನ್ನು ಇಬ್ಬಿಬ್ಬರು, 18ಪರ್ಬರೆಂಬ ಕಟ್ಟಡವಿರುವ ಪಶ್ಚಿಮ ದಿಕ್ಕಿನ ದಾರಿಯ ಬಾಗಿಲನ್ನು ನಾಲ್ಕು ಮಂದಿ, ಪರ್ಬರನ್ನು ಇಬ್ಬರು ಕಾಯುತ್ತಿದ್ದರು. 19ಕೋರಹೀಯರ ಮತ್ತು ಮೆರಾರೀಯರ ದ್ವಾರಪಾಲಕ ವರ್ಗಗಳು ಇವೇ.

### ದೇವಾಲಯದ ಇತರ ಕೆಲಸಕಾರ್ಯಗಳು

20 ಮೇಲೆ ಕಂಡವರ ಕುಲಬಂಧುಗಳೂ ಹಾಗೂ ದೇವಾಲಯದ ಭಂಡಾರ, ಪರಿಶುದ್ಧ ವಸ್ತುಗಳ ಭಂಡಾರ ಇವುಗಳನ್ನು ಕಾಯುವ ಲೇವಿಯರ ಪಟ್ಟಿ:

21 ಗೇರ್ಷೋಮನಿಗೆ ಹುಟ್ಟಿದ ಲದ್ದಾನ ಸಂತಾನದವರಾದ ಲದ್ದಾನ್ಯ ಕುಟುಂಬಗಳ ಮುಖ್ಯಸ್ಥರಲ್ಲಿ ಯೆಹೀಯೇಲೀ; 22ಮತ್ತು ಯೆಹೀಯೇಲ್ಯರಾದ ಜೇತಾಮನು ಹಾಗೂ ಯೋವೇಲನೆಂಬ ಅವನ ತಮ್ಮನು ಸರ್ವೇಶ್ವರನ ಆಲಯದ ಭಂಡಾರಗಳನ್ನು ಕಾಯುತ್ತಿದ್ದರು.

23 ಅಮ್ರಾಮ್, ಇಚ್ಹಾರ್, ಹೆಬ್ರೋನ್, ಉಜ್ಜೀಯೇಲ್ 24ಇವರ ಸಂತಾನದವರಲ್ಲಿ ಗೇರ್ಷೋಮನ ಮಗನೂ ಮೋಶೆಯ ಮೊಮ್ಮಗನೂ ಆಗಿರುವ ಶೆಬೂವೇಲನು ಭಂಡಾರಗಳನ್ನು ಕಾಯುವವರ ಮುಖ್ಯಸ್ಥನು. 25ಎಲೀಯೆಜೆರನ ಮಗ ರೆಹಬ್ಯನಿಗೆ ಹುಟ್ಟಿದ ಯೆಶಾಯನ ಮರಿಮಗನೂ ಯೋರಾಮನ ಮೊಮ್ಮಗನೂ 26ಜಿಕ್ರೀಯ ಮಗನೂ ಆಗಿರುವ ಶೆಕೋಮೋತನೂ ಅವನ ಸಹೋದರರೂ ಪ್ರತಿಷ್ಠಿತ ವಸ್ತುಗಳ ಭಂಡಾರವನ್ನು ಕಾಯುವವರು; ಇವರು ಶೆಬೂವೇಲಿನ ಗೋತ್ರ ಬಂಧುಗಳು. 27ಅರಸನಾದ ದಾವೀದನೂ ಗೋತ್ರ ಪ್ರಧಾನರೂ ಸಹಸ್ರ ಅಧಿಪತಿಗಳೂ ಶತಾಧಿಪತಿಗಳ ಸೇನಾನಾಯಕರೂ ಸರ್ವೇಶ್ವರನ ಆಲಯದ ವೃದ್ಧಿಗಾಗಿ ತಮಗೆ ಯುದ್ಧದಲ್ಲಿ ಸಿಕ್ಕಿದ ಕೊಳ್ಳೆಯ ಒಂದು ಭಾಗವನ್ನು ಸರ್ವೇಶ್ವರನಿಗೆಂದು ಮುಡಿಪಾಗಿಟ್ಟರು. 28ಇವರಲ್ಲದೆ ದರ್ಶಿಯಾದ ಸಮುವೇಲನೂ ಕೀಷನ ಮಗ ಸೌಲನೂ ನೇರನ ಮಗ ಅಬ್ನೇರನೂ ಜೆರೂಯಳ ಮಗ ಯೋವಾಬನೂ ಹಾಗೆಯೇ ಮಾಡಿದ್ದರು. ಈ ಪ್ರಕಾರ ಪ್ರತಿಷ್ಠಿತವಾದದ್ದೆಲ್ಲವೂ ಶೆಲೋಮೋತನ ಮತ್ತು ಅವನ ಸಹೋದರರ ವಶದಲ್ಲಿತ್ತು.

### ಲೇವಿಯರ ಇತರ ಕರ್ತವ್ಯಗಳು

29 ಇಚ್ಹಾರ್ಯರಲ್ಲಿ ಕೆನನ್ಯನೂ ಅವನ ಮಕ್ಕಳೂ ಲೌಕಿಕೋದ್ಯೋಗದಲ್ಲಿದ್ದರು. ಅವರು ಇಸ್ರಯೇಲರ ಅಧಿಕಾರಿಗಳೂ ನ್ಯಾಯಾಧಿಪತಿಗಳೂ ಆಗಿದ್ದರು.

30 ಹೆಬ್ರೋನ್ಯರಲ್ಲಿ ಹಷಬ್ಯನೂ ಅವನ ಸಹೋದರರೂ ಜೋರ್ಡನ್ ನದಿಯ ಪಶ್ಚಿಮ ಪ್ರಾಂತ್ಯಗಳಲ್ಲಿದ್ದ ಇಸ್ರಯೇಲರೊಳಗೆ ಸರ್ವೇಶ್ವರನ ಸೇವಾಕಾರ್ಯಗಳನ್ನೂ ರಾಜಕೀಯ ಕಾರ್ಯಗಳನ್ನೂ ನಡೆಸುತ್ತಿದ್ದರು. ಸಮರ್ಥರಾದ ಅವರು ಸಾವಿರದ ಏಳು ನೂರು ಮಂದಿ ಇದ್ದರು. 31ದಾವೀದನ ಆಳ್ವಿಕೆಯ ನಲವತ್ತನೆಯ ವರ್ಷದಲ್ಲಿ ಹೆಬ್ರೋನ್ಯರಿಗೆ ಸೇರಿದವರು ಯಾರಾರೆಂದು ವಿಚಾರಣೆ ನಡೆದಾಗ ಗಿಲ್ಯಾದಿನ ಯಾಜೇರಿನ ಶ್ರೀಮಂತರಲ್ಲಿ ಅನೇಕರು ಅವರ ಗೋತ್ರದವರು ಯಾರೆಂದು ಗೊತ್ತಾಯಿತು. ಈ ಹೆಬ್ರೋನ್ಯರಲ್ಲಿ ಯೇರೀಯನು ಮುಖ್ಯಸ್ಥನು; 32ಶ್ರೀಮಂತರೂ ಕುಟುಂಬ ಪ್ರಧಾನರೂ ಆದ ಅವನ ಗೋತ್ರ ಬಂಧುಗಳು ಎರಡು ಸಾವಿರದ ಏಳು ನೂರು ಮಂದಿ ಇದ್ದರು. ಅರಸ ದಾವೀದನು ರೂಬೇನ್, ಗಾದ್, ಅರ್ಧಮನಸ್ಸೆ ಕುಲಗಳವರ ಮೇಲೆ ಇವರನ್ನೇ ದೈವಿಕ ಕಾರ್ಯಗಳಲ್ಲೂ ರಾಜಕೀಯ ಕಾರ್ಯಗಳಲ್ಲೂ ಅಧಿಕಾರಿಗಳನ್ನಾಗಿ ನೇಮಿಸಿದನು.

## ಸೈನಿಕ ಹಾಗೂ ನಾಗರಿಕ ವ್ಯವಸ್ಥೆಗಳು

**27** ಇಸ್ರಯೇಲರ ಕುಲಪ್ರಧಾನರು, ಸಹಸ್ರಾಧಿಪತಿಗಳು, ಶತಾಧಿಪತಿಗಳು, ಅರಸನ ವಿವಿಧ ಸೇವೆಯನ್ನು ಮಾಡಬೇಕಾಗಿದ್ದ ವರ್ಗಗಳ ಅಧಿಪತಿಗಳು ಹಾಗು ಇವರ ಕಾರ್ಯಕ್ರಮಗಳ ಪಟ್ಟಿ:

ವರ್ಷದ ಎಲ್ಲಾ ತಿಂಗಳುಗಳಲ್ಲಿ, ತಿಂಗಳಿಗೆ ಒಂದು ವರ್ಗದಂತೆ, ಸರದಿಯ ಮೇಲೆ ಕೆಲಸಕ್ಕಾಗಿ ಬರುತ್ತಿದ್ದ ಪ್ರತಿಯೊಂದು ವರ್ಗದಲ್ಲಿ ಇಪ್ಪತ್ತನಾಲ್ಕು ಸಾವಿರ ಮಂದಿ ಇದ್ದರು.

2 ಪೆರೆಚನ ಸಂತಾನದವನೂ ಜಬ್ದೀಯೇಲನ ಮಗನೂ ಆದ ಯಾಷೊಬ್ಬಾಮನು ಮೊದಲನೆಯ ವರ್ಗದ ನಾಯಕ. 3ಇವನು ಮೊದಲನೆಯ ತಿಂಗಳಿನ ಸೇನಾಪತಿಗಳ ಮುಖ್ಯಸ್ಥ. ಮೊದಲನೆಯ ತಿಂಗಳಿನಲ್ಲಿ ಸೇವೆ ಸಲ್ಲಿಸತಕ್ಕ ಅವನ ವರ್ಗದವರ ಸಂಖ್ಯೆ ಇಪ್ಪತ್ತನಾಲ್ಕು ಸಾವಿರ.

4 ಅಹೋಹಿಯನಾದ ದೋದೈಯು ಎರಡನೆಯ ತಿಂಗಳಿನ ವರ್ಗದ ನಾಯಕ; ಆ ವರ್ಗದಲ್ಲಿ ಮಿಕ್ಲೋತನೆಂಬವನೂ ನಾಯಕನು. ಅವನ ವರ್ಗದವರ ಸಂಖ್ಯೆ ಇಪ್ಪತ್ತನಾಲ್ಕು ಸಾವಿರ.

5 ಯಾಜಕನಾದ ಯೆಹೋಯಾದನ ಮಗನೂ ಪ್ರಧಾನನೂ ಆದ ಬೆನಾಯನು ಮೂರನೆಯ ವರ್ಗದ ನಾಯಕ. ಮೂರನೆಯ ತಿಂಗಳಲ್ಲಿ ಸೇವಿಸತಕ್ಕ ಅವನ ವರ್ಗದವರ ಸಂಖ್ಯೆ ಇಪ್ಪತ್ತನಾಲ್ಕು ಸಾವಿರ.

6 ಈ ಬೆನಾಯನು ಮೂವತ್ತು ಮಂದಿಯಲ್ಲಿ ಪ್ರಸಿದ್ಧ ರಣವೀರನೂ ಅವರ ಮುಖ್ಯಸ್ಥನೂ ಆಗಿದ್ದನು. ಅವನ ವರ್ಗದಲ್ಲಿ ಅವನ ಮಗನಾದ ಅಮ್ಮೀಜಾಬಾದನೂ ಇದ್ದನು. 7ಯೋವಾಬನ ತಮ್ಮನಾದ ಅಸಾಹೇಲನೂ ಅವನು ಸತ್ತನಂತರ ಅವನ ಮಗ ಜೆಬದ್ಯನೂ ನಾಲ್ಕನೆಯ ವರ್ಗದ ನಾಯಕರು; ನಾಲ್ಕನೆಯ ತಿಂಗಳಿನಲ್ಲಿ ಸೇವಿಸತಕ್ಕ ಅವರ ವರ್ಗದವರ ಸಂಖ್ಯೆ ಇಪ್ಪತ್ತನಾಲ್ಕು ಸಾವಿರ.

8 ಇಜ್ರಾಹ್ಯನಾದ ಶಮ್ಹೂತನು ಐದನೆಯ ವರ್ಗದ ನಾಯಕ. ಐದನೆಯ ತಿಂಗಳಿನಲ್ಲಿ ಸೇವಿಸತಕ್ಕ ಅವನ ವರ್ಗದವರ ಸಂಖ್ಯೆ ಇಪ್ಪತ್ತನಾಲ್ಕು ಸಾವಿರ.

9 ತೆಕೋವಿನ ಇಕ್ಕೇಷನ ಮಗ ಈರ ಎಂಬವನು ಆರನೆಯ ವರ್ಗದ ನಾಯಕ. ಆರನೆಯ ತಿಂಗಳಿನಲ್ಲಿ ಸೇವಿಸತಕ್ಕ ಅವನ ವರ್ಗದವರ ಸಂಖ್ಯೆ ಇಪ್ಪತ್ತನಾಲ್ಕು ಸಾವಿರ.

10 ಎಫ್ರಯಿಮ್ ಕುಲದ ಪೆಲೋನ್ಯನಾದ ಹೆಲೆಚನು ಏಳನೆಯ ವರ್ಗದ ನಾಯಕ; ಏಳನೆಯ ತಿಂಗಳಿನಲ್ಲಿ ಸೇವಿಸತಕ್ಕ ಅವನ ವರ್ಗದವರ ಸಂಖ್ಯೆ ಇಪ್ಪತ್ತನಾಲ್ಕು ಸಾವಿರ.

11 ಹುಷ ಊರಿನ ಜೆರಹೀಯನಾದ ಸಿಬ್ಬೆಕ್ಕೆಯು ಎಂಟನೆಯ ವರ್ಗದ ನಾಯಕ. ಎಂಟನೆಯ ತಿಂಗಳಿನಲ್ಲಿ ಸೇವಿಸತಕ್ಕ ಅವನ ವರ್ಗದವರ ಸಂಖ್ಯೆ ಇಪ್ಪತ್ತನಾಲ್ಕು ಸಾವಿರ.

12 ಬೆನ್ಯಾಮೀನ್ ಕುಲದ ಅನತೋತ್ ಊರಿನವನಾದ ಅಬೀಯೆಜೆರನು ಒಂಬತ್ತನೆಯ ವರ್ಗದ ನಾಯಕ. ಒಂಬತ್ತನೆಯ ತಿಂಗಳಿನಲ್ಲಿ ಸೇವಿಸತಕ್ಕ ಅವನ ವರ್ಗದ ಸಂಖ್ಯೆ ಇಪ್ಪತ್ತನಾಲ್ಕು ಸಾವಿರ.

13 ನೆಟೋಫ ಊರಿನ ಜಿರಹೀಯನಾದ ಮಹರೈಯು ಹತ್ತನೆಯ ವರ್ಗದ ನಾಯಕ; ಹತ್ತನೆಯ ತಿಂಗಳಿನಲ್ಲಿ ಸೇವಿಸತಕ್ಕ ಅವನ ವರ್ಗದವರ ಸಂಖ್ಯೆ ಇಪ್ಪತ್ತನಾಲ್ಕು ಸಾವಿರ.

14 ಎಫ್ರಯಿಮ್ ಕುಲದ ಪಿರ್ರಾತೋನ್ಯನಾದ ಬೆನಾಯನು ಹನ್ನೊಂದನೆಯ ವರ್ಗದ ನಾಯಕ. ಹನ್ನೊಂದನೆಯ ತಿಂಗಳಿನಲ್ಲಿ ಸೇವಿಸತಕ್ಕ ಅವನ ವರ್ಗದವರ ಸಂಖ್ಯೆ ಇಪ್ಪತ್ತನಾಲ್ಕು ಸಾವಿರ.

15 ನೆಟೋಫ ಊರಿನವನೂ ಒತ್ನೀಯೇಲನ ಸಂತಾನದವನೂ ಆದ ಹೆಲ್ದೈಯು ಹನ್ನೆರಡನೆಯ ವರ್ಗದ ನಾಯಕ; ಹನ್ನೆರಡನೆಯ ತಿಂಗಳಿನಲ್ಲಿ ಸೇವಿಸತಕ್ಕ ಅವನ ವರ್ಗದವರ ಸಂಖ್ಯೆ ಇಪ್ಪತ್ತನಾಲ್ಕು ಸಾವಿರ.

16 ಇಸ್ರಯೇಲ್ ಕುಲಗಳ ಅಧ್ಯಕ್ಷರುಗಳು:

| **ಕುಲ** | | **ಅಧ್ಯಕ್ಷ** |
|---|---|---|
| ರೂಬೇನ್ | : | ಜಿಕ್ರಿಯ ಮಗ ಎಲೀಯೆಜೆರ್ |
| ಸಿಮೆಯೋನ | : | ಮಾಕನ ಮಗ ಶೆಫಟ್ಯ |
| 17 ಲೇವಿ | : | ಕೆಮುವೇಲನ ಮಗ ಹಷಬ್ಯ |
| 18 ಆರೋನ | : | ಚಾದೋಕ್ |

| | | |
|---|---|---|
| ಯೂದ | : | ಎಲೀಹು, ಅರಸ ದಾವೀದನ ಸಹೋದರರಲ್ಲಿ ಒಬ್ಬ |
| ಇಸ್ಸಾಕಾರ | : | ಮೀಕಾಯೇಲನ ಮಗ ಒಮ್ರಿ |
| 19 ಜೆಬೂಲೂನ | : | ಓಬದ್ಯನ ಮಗ ಇಷ್ಮಾಯ |
| ನಫ್ತಾಲಿ | : | ಅಜ್ರೀಯೇಲನ ಮಗ ಯೆರೀಮೋತ್ |
| 20 ಎಫ್ರಯಿಮ | : | ಅಜಜ್ಯನ ಮಗ ಹೊಷೇಯ |
| ಪಶ್ಚಿಮ ಮನಸ್ಸೆ | : | ಪೆದಾಯನ ಮಗ ಯೋವೇಲ್ |
| 21 ಪೂರ್ವ ಮನಸ್ಸೆ | : | ಜೆಕರ್ಯನ ಮಗ ಇದ್ದೋ |
| ಬೆನ್ಯಾಮೀನ | : | ಅಬ್ನೇರನ ಮಗ ಯಗಸೀಯೇಲ್ |
| 22 ದಾನ | : | ಯೆರೋಹಾಮನ ಮಗ ಅಜರೇಲ್ |

23 ಇಸ್ರಯೇಲರನ್ನು ಆಕಾಶದ ನಕ್ಷತ್ರಗಳಂತೆ ಅಸಂಖ್ಯವಾಗಿ ಮಾಡುವೆನೆಂದು ಸರ್ವೇಶ್ವರ ಕೊಟ್ಟ ಮಾತನ್ನು ದಾವೀದನು ನಂಬಿ ಇಪ್ಪತ್ತು ವರ್ಷಕ್ಕಿಂತ ಕಡಿಮೆಯಾದ ವಯಸ್ಸುಳ್ಳವರನ್ನು ಲೆಕ್ಕಿಸಲಿಲ್ಲ.
24ಚೆರೂಯಳ ಮಗ ಯೋವಾಬನು ಅವರನ್ನು ಲೆಕ್ಕಿಸಲಾರಂಭಿಸಿದರೂ, ಇದರ ನಿಮಿತ್ತ ಇಸ್ರಯೇಲರ ಮೇಲೆ ದೇವರ ಕೋಪವುಂಟಾಗಿ, ಅದನ್ನು ಪೂರ್ತಿಗೊಳಿಸಲಿಲ್ಲ. ಈ ಜನಗಣತಿ ದಾವೀದನ ರಾಜ್ಯದ ಇತಿಹಾಸದಲ್ಲಿ ಲಿಖಿತವಾಗಲಿಲ್ಲ.

### ಅರಸನ ಆಸ್ತಿಯ ಮೇಲ್ವಿಚಾರಕರು

25 ಅರಸ ದಾವೀದನ ಸೊತ್ತಿನ ಮೇಲ್ವಿಚಾರಕರಾಗಿ ನೇಮಕಗೊಂಡವರು ಯಾರೆಂದರೆ: ಅರಸನ ಭಂಡಾರಗಳ ಮೇಲೆ ಅದೀಯೇಲನ ಮಗ ಅಜ್ಮಾವೆತ್; ಹೊಲದಲ್ಲು, ಪಟ್ಟಣಗಳಲ್ಲು, ಹಳ್ಳಿಗಳಲ್ಲು ಹಾಗೂ ಬುರುಜುಗಳ ಮೇಲೂ ಇದ್ದ ಉಗ್ರಾಣಗಳ ಮೇಲೆ ಉಜ್ಜೀಯನ ಮಗ ಯೋನಾತಾನ್;
26ಹೊಲಗಳನ್ನು ವ್ಯವಸಾಯ ಮಾಡುವ ಆಳುಗಳ ಮೇಲೆ ಕೆಲೂಬನ ಮಗನಾದ ಎಜ್ರೀ;
27ದ್ರಾಕ್ಷಿತೋಟಗಳ ಮೇಲೆ ರಾಮಾ ಊರಿನ ಶಿಮ್ಮೀ; ದ್ರಾಕ್ಷಿತೋಟಗಳಲ್ಲಿರುವ ದ್ರಾಕ್ಷಾರಸದ ಉಗ್ರಾಣಗಳ ಮೇಲೆ ಶಿಫ್ಮೀಯನಾದ ಜಬ್ದೀ;
28ಎಣ್ಣೇಮರದ ತೋಪುಗಳ ಮೇಲೆ ಹಾಗೂ ಇಳುಕಲಿನ ಪ್ರದೇಶದಲ್ಲಿರುವ ಅತ್ತಿಮರಗಳ ತೋಪುಗಳ ಮೇಲೆ ಗೆದೆರೂರಿನವನಾದ ಬಾಳ್ಹಾನಾನ್; ಎಣ್ಣೆಯ ಉಗ್ರಾಣಗಳ ಮೇಲೆ ಯೋವಾಷ್;
29ಶಾರೋನಿನಲ್ಲಿ ಮೇಯುವ ದನಗಳ ಮೇಲೆ ಶಾರೋನ್ಯನಾದ ಶಿಟ್ರೈ; ಕಣಿವೆಗಳಲ್ಲಿ ಮೇಯುವ ದನಗಲ ಮೇಲೆ ಅದ್ಲೈಯ ಮಗನಾದ ಶಾಫಾಟ್;
30ಒಂಟೆಗಳ ಮೇಳೆ ಇಷ್ಮಾಯೇಲ್ಯನಾದ ಓಬೀಲ್; ಹೆಣ್ಣು ಕತ್ತೆಗಳ ಮೇಲೆ ಮೇರೊನೋತ್ಯನಾದ ಯೆಹ್ದೆಯ;
31ಆಡುಕುರಿಗಳ ಮೇಲೆ ಹಗ್ರೀಯನಾದ ಯಾಜೀಜ್.

32 ವಿವೇಕಿಯೂ ಶಾಸ್ತ್ರಜ್ಞನೂ ಆದ ಯೋನಾತಾನನೆಂಬ ದಾವೀದನ ಚಿಕ್ಕಪ್ಪನು ಮಂತ್ರಿಯಾಗಿದ್ದನು; ಹಕ್ಮೋನಿಯ ಮಗ ಯೆಹೀಯೇಲನು ರಾಜಪುತ್ರ ಪಾಲಕನಾಗಿದ್ದನು.
33ಅಹೀತೋಫೆಲನು ಅರಸನ ಮಂತ್ರಿ; ಅಕೀರ್ಯನಾದ ಹೂಷೈಯು ಅವನ ಮಿತ್ರ;
34ಬೆನಾಯನ ಮಗ ಯೆಹೋಯಾದಾವನೂ ಎಬ್ಯಾತಾರನೂ ಅಹೀತೋಫೆಲನ ಉತ್ತರಾಧಿಕಾರಿಗಳು; ಯೋವಾಬನು ಅರಸನ ಸೈನ್ಯಾಧಿಪತಿ.

### ದೇವಾಲಯ ನಿರ್ಮಾಣಕ್ಕೆ ದಾವೀದನ ಯೋಜನೆ

**28** ದಾವೀದನು ಇಸ್ರಯೇಲರ ಎಲ್ಲ ಪದಾಧಿಕಾರಿಗಳನ್ನು ಅಂದರೆ, ಕುಲ ಅಧ್ಯಕ್ಷರುಗಳು, ಅರಸನ ಸೇವೆಮಾಡುತ್ತಿದ್ದ ವರ್ಗನಾಯಕರು, ಸಹಸ್ರಾಧಿಪತಿಗಳು, ಶತಾಧಿಪತಿಗಳು, ಅರಸನ ದನಕುರಿ ಮೊದಲಾದ ಸೊತ್ತಿನ ಮೇಲ್ವಿಚಾರಕರು, ರಾಜಪುತ್ರ ಪಾಲಕರು, ಕಂಚುಕಿಗಳು, ರಣವೀರರು ಹೀಗೆ ಎಲ್ಲ ಅಧಿಕಾರಿಗಳನ್ನು ಜೆರುಸಲೇಮಿಗೆ ಕರೆಸಿದನು.

2 ಅವರು ಕೂಡಿ ಬಂದಾಗ ಅರಸ ದಾವೀದನು ಎದ್ದು ನಿಂತು ಅವರಿಗೆ, "ನನ್ನ ಸಹೋದರರೇ, ಪ್ರಜೆಗಳೇ, ಕೇಳಿ; ಸರ್ವೇಶ್ವರನ ನಿಬಂಧನ ಮಂಜೂಷಕ್ಕಾಗಿ ಹಾಗೂ ನಮ್ಮ ದೇವರ ಪಾದಪೀಠಕ್ಕಾಗಿ

ಆಲಯವನ್ನು ಕಟ್ಟಿಸಬೇಕೆಂದು ಮನಸ್ಸುಮಾಡಿ ಎಲ್ಲವನ್ನೂ ಸಿದ್ಧಪಡಿಸಿದೆ. 3ಆಗ ದೇವರು ನನಗೆ, 'ನೀನು ಮಹಾಯುದ್ಧಗಳನ್ನು ನಡೆಸಿ, ಬಹಳ ರಕ್ತವನ್ನು ಸುರಿಸಿದವನು; ನನ್ನ ಹೆಸರಿಗೆ ನೀನು ಆಲಯವನ್ನು ಕಟ್ಟಿಸಬಾರದು,' ಎಂದು ಹೇಳಿದರು.

4 "ಇಸ್ರಯೇಲ್ ದೇವರಾದ ಸರ್ವೇಶ್ವರ ನನ್ನ ತಂದೆಯ ಮನೆಯವರೆಲ್ಲರಲ್ಲಿ ನನ್ನನ್ನೇ ಸದಾ ಇಸ್ರಯೇಲರ ಅರಸನಾಗಿರುವುದಕ್ಕೆ ಆರಿಸಿಕೊಂಡರು; ಯೆಹೂದಕುಲ ರಾಜಕುಲವಾಗಬೇಕೆಂದು ನೇಮಿಸಿ ಆ ಕುಲದಲ್ಲಿ ನನ್ನ ತಂದೆಯ ಕುಟುಂಬವನ್ನು ಆರಿಸಿಕೊಂಡರು. ನನ್ನ ತಂದೆಯ ಎಲ್ಲ ಮಕ್ಕಳಲ್ಲಿ ನನ್ನನ್ನೇ ಮೆಚ್ಚಿ, ಇಸ್ರಯೇಲರೆಲ್ಲರ ಅರಸನನ್ನಾಗಿ ಮಾಡಿದರು. 5ನನಗೆ ದಯಪಾಲಿಸಿದ ಅನೇಕ ಮಕ್ಕಳಲ್ಲಿ ನನ್ನ ಮಗ ಸೊಲೊಮೋನನನ್ನು ಸರ್ವೇಶ್ವರನ ರಾಜ್ಯಸಿಂಹಾಸನವಾಗಿರುವ ಇಸ್ರಯೇಲ್ ಸಿಂಹಾಸನದ ಮೇಲೆ ಕುಳ್ಳಿರಿಸುವುದಕ್ಕೆ ಆರಿಸಿಕೊಂಡರು. 6'ನಿನ್ನ ಮಗ ಸೊಲೊಮೋನನೇ ನಿನ್ನ ಆಲಯವನ್ನೂ ಅದರ ಪ್ರಾಕಾರಗಳನ್ನೂ ಕಟ್ಟಿಸುವನು. ಅವನು ನನಗೆ ಮಗನಾಗಿ ಇರಬೇಕೆಂದು ಅವನನ್ನು ಆರಿಸಿಕೊಂಡಿದ್ದೇನೆ; ನಾನು ಅವನಿಗೆ ತಂದೆಯಾಗಿ ಇರುವೆನು. 7ಅವನು ಈಗಿನಂತೆ ಯಾವಾಗಲೂ ನನ್ನ ಆಜ್ಞಾವಿಧಿಗಳನ್ನು ಕೈಗೊಂಡು ನಡೆಯುವುದಾದರೆ ಅವನ ರಾಜ್ಯವನ್ನು ಸದಾಕಾಲವೂ ಸ್ಥಿರಪಡಿಸುವೆನು' ಎಂದು ಅವರು ನನಗೆ ಹೇಳಿದ್ದಾರೆ.

8 "ನಿಮ್ಮ ದೇವರಾದ ಸರ್ವೇಶ್ವರನ ಎಲ್ಲ ಆಜ್ಞೆಗಳನ್ನು ಧ್ಯಾನಿಸಿ ಕೈಗೊಳ್ಳಬೇಕೆಂದು ಸರ್ವೇಶ್ವರನ ಸಮಾಜವಾದ ಸಮಸ್ತ ಇಸ್ರಯೇಲರ ಮುಂದೆ, ನಮ್ಮ ದೇವರಿಗೆ ಕೇಳಿಸುವಂತೆ, ನಿಮ್ಮನ್ನು ಎಚ್ಚರಿಸುತ್ತೇನೆ. ಹಾಗೆ ಮಾಡಿದರೆ ಈ ಒಳ್ಳೆಯ ನಾಡು ಸದಾಕಾಲ ನಿಮ್ಮ ಮತ್ತು ನಿಮ್ಮ ಸಂತಾನದವರ ಸೊತ್ತಾಗಿರುವುದು.

9 "ನನ್ನ ಮಗ ಸೊಲೊಮೋನನೇ, ನೀನಂತೂ ನಿನ್ನ ತಂದೆಯ ದೇವರನ್ನು ಅರಿತುಕೊಂಡು ಪೂರ್ಣ ಹೃದಯದಿಂದ ಹಾಗೂ ಮನಸ್ಸಂತೋಷದಿಂದ ಅವರೊಬ್ಬರಿಗೇ ಸೇವೆ ಸಲ್ಲಿಸು. ಸರ್ವೇಶ್ವರನು ಎಲ್ಲಾ ಹೃದಯಗಳನ್ನು ಶೋಧಿಸುವವರೂ ಎಲ್ಲಾ ಮನಸ್ಸಂಕಲ್ಪಗಳನ್ನು ಬಲ್ಲವರೂ ಆಗಿದ್ದಾರೆ. ನೀನು ಅವರನ್ನು ಅರಸಿದರೆ ಅವರು ನಿನಗೆ ಸಿಗುವರು; ಅವರನ್ನು ಬಿಟ್ಟರೆ ನಿನ್ನನ್ನು ಶಾಶ್ವತವಾಗಿ ತಳ್ಳಿಬಿಡುವರು. 10ಆದುದರಿಂದ ಎಚ್ಚರಿಕೆ! ಸರ್ವೇಶ್ವರ ತನಗೋಸ್ಕರ ಪವಿತ್ರಾಲಯವನ್ನು ಕಟ್ಟಬೇಕೆಂದು ನಿನ್ನನ್ನು ಆರಿಸಿಕೊಂಡಿದ್ದಾರೆ; ಧೈರ್ಯದಿಂದ ಕೆಲಸಕ್ಕೆ ಕೈಹಚ್ಚು," ಎಂದನು.

11 ತರುವಾಯ ದಾವೀದನು ತನ್ನ ಮಗ ಸೊಲೊಮೋನನಿಗೆ ದೇವಾಲಯದ ಮಂಟಪ, ಉಗ್ರಾಣಗಳು, ಭಂಡಾರಗಳು, ಮೇಲುಪ್ಪರಿಗೆಗಳು, ಒಳಗಣ ಕೋಣೆಗಳು, ಕೃಪಾಸನಮಂದಿರ, ಇವುಗಳ ನಕ್ಷೆಯನ್ನು ಕೊಟ್ಟನು. ಸರ್ವೇಶ್ವರನ ಆಲಯದ ಅಂಗಳಗಳು, 12ಸುತ್ತಣ ಕೋಣೆಗಳು, ದೇವಾಲಯದ ಭಂಡಾರಗಳು, ಪ್ರತಿಷ್ಠಿತ ವಸ್ತುಗಳ ಭಂಡಾರಗಳು ಇವುಗಳ ವಿಷಯವಾಗಿ ವಿವರಿಸಿದನು. 13ಯಾಜಕರ ಮತ್ತು ಲೇವಿಯರ ವರ್ಗಗಳು, ಸರ್ವೇಶ್ವರನ ಆಲಯದಲ್ಲಿ ನಡೆಯತಕ್ಕ ಎಲ್ಲಾ ಆರಾಧನೆ, 14ಆರಾಧನೆಯ ಎಲ್ಲಾ ಸಾಮಗ್ರಿಗಳು, ಇವುಗಳ ಬಗ್ಗೆ ತಾವು ನಿರ್ಣಯಿಸಿ ಕೊಂಡದ್ದೆಲ್ಲವನ್ನೂ ವಿವರವಾಗಿ ತಿಳಿಸಿದನು. 15ಇದಲ್ಲದೆ, ಆರಾಧನೆಯ ಆಯಾ ಆಚಾರಗಳಲ್ಲಿ ಉಪಯೋಗವಾಗಬೇಕಾದ ಎಲ್ಲ ಸಾಮಾನುಗಳ ಬೆಳ್ಳಿ, ಬಂಗಾರದ ತೂಕ ಅಂದರೆ, ಬಂಗಾರದ ಹಣತೆಗಳಿರುವ ಬಂಗಾರದ ಪ್ರತಿಯೊಂದು ದೀಪಸ್ತಂಭದ ತೂಕ, ಬೇರೆ ಬೇರೆ ಕೆಲಸಗಳಿಗೆ ಉಪಯೋಗವಾಗುವ ಪ್ರತಿಯೊಂದು ಬೆಳ್ಳಿಯ ದಿಪಸ್ತಂಭದ ಮತ್ತು ಅದರ ಹಣತೆಗಳ ತೂಕ, 16ಮೀಸಲು ರೊಟ್ಟಿಗಳನ್ನಿಡುವ ಪ್ರತಿಯೊಂದು ಮೇಜಿಗೆ ಉಪಯೋಗಿಸಬೇಕಾದ ಬಂಗಾರದ ತೂಕ, ಬೆಳ್ಳಿಯ ಮೇಜುಗಳ ಬೆಳ್ಳಿಯ ತೂಕ, 17ಚೊಕ್ಕ ಬಂಗಾರದ ಮುಳ್ಳು, ಬೋಗುಣಿ, ಹೂಜಿಗಳ ಮತ್ತು ಬೆಳ್ಳಿಬಂಗಾರದ ಆಯಾಪಾತ್ರೆಗಳ ತೂಕ, 18ಧೂಪವೇದಿಗೆ ಉಪಯೋಗಿಸಬೇಕಾದ ಚೊಕ್ಕಬಂಗಾರದ ತೂಕ ಎಷ್ಟೆಷ್ಟು ಇರಬೇಕೆಂಬುದನ್ನು ವಿವರಿಸಿದನು. ಹರಡಿದ ರೆಕ್ಕೆಗಳಿಂದ ಸರ್ವೇಶ್ವರನ ನಿಬಂಧನ ಮಂಜೂಷವನ್ನು ಮರೆಮಾಡುವ ಬಂಗಾರದ ಕೆರೂಬಿ ವಾಹನದ ನಕ್ಷೆಯನ್ನು ಕೊಟ್ಟನು. 19ಆ ನಕ್ಷೆಗಳಲ್ಲಿ ಸೂಚಿಸಿದ ಎಲ್ಲಾ ಕೆಲಸಗಳ ಕುರಿತ ಜ್ಞಾನ ತನಗೆ ಸರ್ವೇಶ್ವರನ ಲೇಖನದಿಂದಲೇ ಪ್ರಾಪ್ತವಾಯಿತೆಂದು ಹೇಳಿದನು.

20 ಆಮೇಲೆ ದಾವೀದನು ತನ್ನ ಮಗ ಸೊಲೊಮೋನನಿಗೆ, "ಸ್ಥಿರಚಿತ್ತನಾಗಿರು, ಧೈರ್ಯದಿಂದಿರು, ಕೆಲಸಕ್ಕೆ ಕೈಹಾಕು; ಅಂಜಬೇಡ, ಕಳವಳಗೊಳ್ಳಬೇಡ. ನನ್ನ ದೇವರಾಗಿರುವ ಸರ್ವೇಶ್ವರಸ್ವಾಮಿ ನಿನ್ನೊಂದಿಗೆ

ಇರುತ್ತಾರೆ; ಅವರು ತಮ್ಮ ಆಲಯದ ಎಲ್ಲಾ ಕೆಲಸ ತೀರುವವರೆಗೂ ನಿನ್ನನ್ನು ಕೈಬಿಡುವುದಿಲ್ಲ, ತೊರೆಯುವುದಿಲ್ಲ. 21ಇಗೋ, ಯಾಜಕರ ಮತ್ತು ಲೇವಿಯರ ವರ್ಗಗಳವರು ಅಗತ್ಯವಾದ ಎಲ್ಲ ದೇವಾಲಯ ಸಂಬಂಧ ಕೆಲಸವನ್ನು ಮಾಡುವುದಕ್ಕೆ ಸಿದ್ಧರಾಗಿದ್ದಾರೆ. ಯಾವ ಕೆಲಸವಿದ್ದರೂ ಎಲ್ಲವನ್ನೂ ಜಾಣತನದಿಂದ ಮಾಡುವುದಕ್ಕೆ ಸಿದ್ಧಮನಸ್ಸುಳ್ಳವರು ನಿನ್ನ ಹತ್ತಿರ ಇದ್ದಾರೆ. ಅಧಿಪತಿಗಳೂ ಎಲ್ಲಾ ಪ್ರಜೆಗಳೂ ನಿನ್ನ ಆಜ್ಞೆಗೆ ವಿಧೇಯರಾಗಿರುವರು," ಎಂದು ಹೇಳಿದನು.

**ದೇವಾಲಯ ಕಟ್ಟಲು ಕಾಣಿಕೆಗಳು**

**29** ತರುವಾಯ ಅರಸ ದಾವೀದನು, "ದೇವರು ನನ್ನ ಮಗ ಸೊಲೊಮೋನನನ್ನೇ ಆರಿಸಿಕೊಂಡಿದ್ದಾರೆ. ಆದರೆ ಅವನು ಇನ್ನೂ ಚಿಕ್ಕವನು. ಮಾಡತಕ್ಕ ಕೆಲಸವೋ ವಿಶೇಷವಾದದ್ದು. ಕಟ್ಟತಕ್ಕ ಮಂದಿರ ದೇವರಾದ ಸರ್ವೇಶ್ವರನಿಗಾಗಿ!
2ನಾನು ನನ್ನಿಂದಾಗುವಷ್ಟು ಪ್ರಯಾಸಪಟ್ಟು ಬಂಗಾರದ ಕೆಲಸಕ್ಕಾಗಿ ಬೇಕಾಗುವ ಬಂಗಾರ, ಬೆಳ್ಳಿಯ ಕೆಲಸಕ್ಕಾಗಿ ಬೇಕಾಗುವ ಬೆಳ್ಳಿ, ತಾಮ್ರದ ಕೆಲಸಕ್ಕಾಗಿ ಬೇಕಾಗುವ ತಾಮ್ರ, ಕಬ್ಬಿಣದ ಕೆಲಸಕ್ಕಾಗಿ ಬೇಕಾಗುವ ಕಬ್ಬಿಣ, ಮರದ ಕೆಲಸಕ್ಕಾಗಿ ಬೇಕಾಗುವ ಮರ, ಇವುಗಳನ್ನೂ ಗೋಮೇಧಕ ರತ್ನ ಕೆತ್ತುವುದಕ್ಕೆ ಬೇಕಾಗುವ ರತ್ನ, ಕೆಂಪುಹರಳು, ವಿವಿಧ ವರ್ಣದ ಕಲ್ಲು, ತರತರದ ಮಣಿ, ಚಂದ್ರಕಾಂತ ಇವುಗಳನ್ನೂ ನನ್ನ ದೇವರ ಮಂದಿರಕ್ಕಾಗಿ ರಾಶಿರಾಶಿಯಾಗಿ ಸಂಗ್ರಹಿಸಿದ್ದೇನೆ.
3ಪವಿತ್ರಾಲಯಕ್ಕೆ ಇವುಗಳನ್ನೆಲ್ಲಾ ಸಂಗ್ರಹಿಸಿದ್ದಲ್ಲದೆ, ನನ್ನ ದೇವರಾಲಯದ ಮೇಲಣ ಅಭಿಮಾನದಿಂದ ಅದಕ್ಕಾಗಿ ನನ್ನ ಸ್ವಂತ ಸೊತ್ತಿನಿಂದ
4ನೂರು ಮೆಟ್ರಿಕ್ ಟನ್ ಒಫೀರ್ ದೇಶದ ಬಂಗಾರವನ್ನೂ ಸುಮಾರು ಇನ್ನೂರ ನಲವತ್ತು ಮೆಟ್ರಿಕ್ ಟನ್ ಚೊಕ್ಕ ಬೆಳ್ಳಿಯನ್ನೂ ಕೊಡುತ್ತೇನೆ.
5ಈ ಬೆಳ್ಳಿಬಂಗಾರಗಳಿಂದ ಆಲಯದ ಗೋಡೆಗಳನ್ನು ಹೊದಿಸಬೇಕು, ಅಕ್ಕಸಾಲಿಗ್ಗರು ಮಾಡಬಹುದಾದ ಎಲ್ಲಾ ತರದ ಬೆಳ್ಳಿಬಂಗಾರದ ಸಾಮಾನುಗಳನ್ನು ಮಾಡಿಸಬೇಕು. ಈ ದಿನ ಉದಾರಹಸ್ತದಿಂದ ಸರ್ವೇಶ್ವರನಿಗಾಗಿ ಕಾಣಿಕೆಯನ್ನರ್ಪಿಸುವುದಕ್ಕೆ ಯಾರಿಗೆ ಮನಸ್ಸಿದೆ?" ಎಂದು ನೆರೆದ ಸಭೆಯನ್ನು ಕೇಳಿದನು.
6ಇಸ್ರಯೇಲ್ ಗೋತ್ರ ಕುಟುಂಬಗಳ ಅಧ್ಯಕ್ಷರುಗಳು, ಸಹಸ್ರಾಧಿಪತಿಗಳು, ಶತಾಧಿಪತಿಗಳು, ಹಾಗೂ ಅರಸನ ಕೆಲಸದವರ ಮುಖ್ಯಸ್ಥರು ದೇವಾಲಯದ ಕೆಲಸಕ್ಕಾಗಿ ಸ್ವೇಚ್ಛೆಯಿಂದ
7 170 ಮೆಟ್ರಿಕ್ ಟನ್ ಬಂಗಾರವನ್ನೂ 340 ಮೆಟ್ರಿಕ್ ಟನ್ ಬೆಳ್ಳಿಯನ್ನೂ 3400 ಮೆಟ್ರಿಕ್ ಟನ್ ತಾಮ್ರವನ್ನೂ 3400 ಮೆಟ್ರಿಕ್ ಟನ್ ಕಬ್ಬಿಣವನ್ನೂ ಕೊಟ್ಟರು.
8ರತ್ನಗಳಿದ್ದವರು ಅವುಗಳನ್ನು ಸರ್ವೇಶ್ವರನ ಆಲಯದ ಭಂಡಾರಕ್ಕಾಗಿ ಗೇರ್ಷೋನ್ಯನಾದ ಯೆಹೀಯೇಲನ ವಶಕ್ಕೆ ಕೊಟ್ಟರು.
9ಅವರು ಪೂರ್ಣ ಮನಸ್ಸಿನಿಂದ ಹಾಗೂ ಸ್ವೇಚ್ಛೆಯಿಂದ ಸರ್ವೇಶ್ವರನಿಗೆ ಕಾಣಿಕೆ ಕೊಟ್ಟಿದ್ದಕ್ಕಾಗಿ ಜನರೆಲ್ಲರೂ ಸಂತೋಷಪಟ್ಟರು. ಅರಸನಾದ ದಾವೀದನಿಗೂ ಬಹಳ ಸಂತೋಷ ಆಯಿತು.

10 ಅನಂತರ ದಾವೀದನು ನೆರೆದ ಸಭೆಯ ಮುಂದೆ ಸರ್ವೇಶ್ವರನನ್ನು ಹೀಗೆ ಸ್ತುತಿಸಿದನು:

11 "ಹೇ ಸರ್ವೇಶ್ವರಾ, ನಮ್ಮ ಪಿತೃ
ಯಕೋಬನ ದೇವರೇ,
ಸದಾಕಾಲಕ್ಕೂ ಸ್ತುತಿಸ್ತೋತ್ರ ಸಲ್ಲಲಿ
ನಿಮಗೆ !
ಹೇ ಸರ್ವೇಶ್ವರಾ, ಮಹಿಮೆ, ಪ್ರತಾಪ,
ವೈಭವ, ಪರಾಕ್ರಮ, ಪ್ರತಿಭೆ, ನಿಮ್ಮವೇ.
ಭೂಮ್ಯಾಕಾಶಗಳಲ್ಲಿರುವ ಸಮಸ್ತವೂ
ನಿಮ್ಮದೇ.
ಸರ್ವೇಶ್ವರಾ, ರಾಜ್ಯಭಾರವೂ
ನಿಮ್ಮದೇ.
ಸರ್ವವನು ಮಹೋನ್ನತರಾಗಿ
ಆಳುವವರೂ ನೀವೇ.

12 ಆಸ್ತಿ-ಪಾಸ್ತಿ, ಐಶ್ವರ್ಯ ಬರುವುದು
ನಿಮ್ಮಿಂದಲೇ
ಸರ್ವಾಧಿಕಾರ, ಬಲಪರಾಕ್ರಮ
ಇರುವುದು ನಿಮ್ಮ ಕೈಯಲ್ಲೇ.
ಪಟ್ಟ ಪದವಿಗೆ, ಸರ್ವಶಕ್ತಿ ಸಾಹಸಕ್ಕೆ
ಮೂಲ ನೀವೇ.
13 ಹೇ, ದೇವಾ,
ಸಲ್ಲಿಸುವೆವು ಕೃತಜ್ಞತೆ ನಿಮಗೆ
ಹಾಡುವೆವು ಕೀರ್ತನೆ ನಿಮ್ಮ ನಾಮ
ಪ್ರತಿಭೆಗೆ !

14 "ಈ ಪರಿ ಸ್ವೇಚ್ಛೆಯಿಂದ ಕಾಣಿಕೆ ಸಮರ್ಪಿಸಲು ನಾನಾಗಲಿ ನನ್ನ ಪ್ರಜೆಗಳಾಗಲಿ ಸಮರ್ಥರಲ್ಲ.
ಸಮಸ್ತವು ನಿಮ್ಮಿಂದಲೇ; ನೀವು ಕೊಟ್ಟಿದ್ದನ್ನೇ ನಿಮಗೆ ಕೊಟ್ಟೆವು. 15ನಾವು ನಿಮ್ಮ ದೃಷ್ಟಿಯಲ್ಲಿ ಪರದೇಶಿಗಳು;
ನಮ್ಮ ಪೂರ್ವಜರಂತೆ ಪ್ರವಾಸಿಗಳು. ನಮ್ಮ ಆಯುಷ್ಕಾಲ ನೆರಳಿನಂತೆ; ನಮಗಿಲ್ಲ ಯಾವ ನಿರೀಕ್ಷೆ. 16ನಮ್ಮ
ದೇವರಾದ ಸರ್ವೇಶ್ವರಾ, ನಿಮ್ಮ ಶ್ರೀನಾಮಕ್ಕೆ ಒಂದು ನಿಲಯ ನಿರ್ಮಿಸಲು ನಾವು ಸಂಗ್ರಹಿಸಿರುವ ಈ
ಎಲ್ಲಾ ವಸ್ತುಗಳು ನಮಗೆ ದೊರಕಿರುವುದು ನಿಮ್ಮಿಂದಲೇ ಇವೆಲ್ಲವೂ ನಿಮ್ಮವೇ. 17ನನ್ನ ದೇವರೇ, ನೀವು
ಹೃದಯವನ್ನು ಪರೀಕ್ಷಿಸುವವರು ಹಾಗೂ ಯಥಾರ್ಥ ಚಿತ್ತರನ್ನು ಮೆಚ್ಚುವವರು ಎಂಬುವುದನ್ನು ನಾನು
ಬಲ್ಲೆ. ನಾನಿದನ್ನೆಲ್ಲಾ ಅರ್ಪಿಸಿರುವುದು ಶುದ್ಧ ಮನಸ್ಸಿನಿಂದಲೇ, ಸ್ವಂತ ಇಷ್ಟದಿಂದಲೇ. ಇಲ್ಲಿ ಕೂಡಿರುವ
ನಿಮ್ಮ ಪ್ರಜೆಗಳೂ ಸ್ವಂತ ಇಷ್ಟದಿಂದಲೇ ನಿಮಗೆ ಕಾಣಿಕೆಗಳನ್ನು ಅರ್ಪಿಸಿದ್ದಾರೆ ಎಂದು ನೋಡಿ
ಸಂತೋಷಿಸುತ್ತೇನೆ. 18ನಮ್ಮ ಪಿತೃಗಳಾದ ಅಬ್ರಹಾಮ್, ಇಸಾಕ್, ಯಕೋಬರ ದೇವರೇ, ಸರ್ವೇಶ್ವರಾ,
ನಿಮ್ಮ ಪ್ರಜೆಗಳಲ್ಲಿ ಇಂಥ ಮನೋಭಾವ ಸದಾ ಇರುವಂತೆ ಮಾಡಿರಿ; ನಿಮ್ಮಲ್ಲಿ ಭಯಭಕ್ತಿಯುಳ್ಳವರಾಗಿ
ಇರಲು ಅವರಿಗೆ ಸ್ಥಿರಚಿತ್ತವನ್ನು ಅನುಗ್ರಹಿಸಿರಿ. 19ನನ್ನ ಮಗ ಸೊಲೊಮೋನನು ನಿಮ್ಮ ಆಜ್ಞಾವಿಧಿ
ನಿಯಮಗಳನ್ನು ಅನುಸರಿಸುವಂತೆ ಮಾಡಿರಿ; ನಾನು ಯಾವ ಮಂದಿರ ನಿರ್ಮಾಣಕ್ಕಾಗಿ ಇದನ್ನೆಲ್ಲಾ
ಸಂಗ್ರಹಿಸಿದ್ದೇನೋ ಆ ನಿಮ್ಮ ಮಂದಿರವನ್ನು ಇವನು ನಿಷ್ಠೆಯಿಂದ ಕಟ್ಟಿಸಿ ಮುಗಿಸುವಂತೆ ಅನುಗ್ರಹಿಸಿರಿ."

20 ತರುವಾಯ ದಾವೀದನು ನೆರೆದ ಸಭೆಯವರಿಗೆ, "ನಿಮ್ಮ ದೇವರಾದ ಸರ್ವೇಶ್ವರನನ್ನು
ಸ್ತುತಿಸಿರಿ," ಎಂದು ಹೇಳಿದನು. ಸಭೆಯವರೆಲ್ಲರೂ ತಮ್ಮ ಪಿತೃಗಳ ದೇವರಾದ ಸರ್ವೇಶ್ವರನನ್ನು ಸ್ತುತಿಸುತ್ತಾ
ತಲೆಬಾಗಿ ಅವರನ್ನೂ ಅರಸನನ್ನೂ ನಮಸ್ಕರಿಸಿದರು.

21 ಮರುದಿನ ಅವರು ಸರ್ವೇಶ್ವರನಿಗೆ ಬಲಿಗಳನ್ನೂ ದಹನಬಲಿದಾನಗಳನ್ನೂ ಸಮರ್ಪಿಸಿದರು.
ಆ ದಿನ ಬಲಿದಾನಕ್ಕಾಗಿ ಸಾವಿರ ಹೋರಿಗಳನ್ನೂ ಸಾವಿರ ಟಗರುಗಳನ್ನೂ ಸಾವಿರ ಕುರಿಮರಿಗಳನ್ನೂ
ವಧಿಸಿದರು. ಇವುಗಳೊಡನೆ ಅರ್ಪಿಸತಕ್ಕ ಪಾನದ್ರವ್ಯಗಳನ್ನೂ ಇಸ್ರಯೇಲರೆಲ್ಲರಿಗೆ ಸಾಕಾಗುವಷ್ಟು
ಸಮಾಧಾನ ಬಲಿಗಳನ್ನೂ ಸಮರ್ಪಿಸಿ 22ಸರ್ವೇಶ್ವರನ ಸನ್ನಿಧಿಯಲ್ಲಿ ಮಹಾ ಸಂತೋಷದಿಂದ ಅನ್ನ
ಪಾನಗಳನ್ನು ತೆಗೆದುಕೊಂಡರು. ದಾವೀದನ ಮಗ ಸೊಲೊಮೋನನನ್ನು ಮತ್ತೆ ಅರಸನನ್ನಾಗಿ
ಆರಿಸಿಕೊಂಡು, ಅವನು ರಾಜನಾಗುವುದಕ್ಕೂ ಚಾದೋಕನು ಯಾಜಕನಾಗುವುದಕ್ಕೂ ಅಭಿಷೇಕಿಸಿ,
ಸರ್ವೇಶ್ವರನಿಗೆ ಪ್ರತಿಷ್ಠಿಸಿದರು. 23ಅಂದಿನಿಂದ ಸೊಲೊಮೋನನು ತನ್ನ ತಂದೆ ದಾವೀದನ ಸ್ಥಾನದಲ್ಲಿ
ಅರಸನಾಗಿ, ಸರ್ವೇಶ್ವರನ ಸಿಂಹಾಸನದಲ್ಲಿ ಕುಳಿತುಕೊಂಡು, ವೃದ್ಧಿಯಾಗುತ್ತಾ ಬಂದನು. ಅರಸ
ಸೊಲೊಮೋನನಿಗೆ ಇಸ್ರಯೇಲರೆಲ್ಲರೂ ವಿಧೇಯರಾಗಿ ನಡೆದರು. 24ಎಲ್ಲಾ ಅಧಿಪತಿಗಳು, ದಂಡಿನವರು,
ಹಾಗೂ ಅರಸ ದಾವೀದನ ಎಲ್ಲಾ ಮಕ್ಕಳು ಅವನಿಗೆ ಅಧೀನರಾದರು. 25ಸರ್ವೇಶ್ವರ ಇಸ್ರಯೇಲರೆಲ್ಲರಿಗೆ
ಗೊತ್ತಾಗುವಂತೆ ಸೊಲೊಮೋನನನ್ನು ಅಭಿವೃದ್ಧಿಪಡಿಸಿದರು; ಅವನಿಗಿಂತ ಮೊದಲು ಇಸ್ರಯೇಲರನ್ನಾಳಿದ
ಎಲ್ಲಾ ಅರಸರ ವೈಭವಕ್ಕಿಂತಲೂ ಹೆಚ್ಚಿನ ವೈಭವವನ್ನು ಅವನಿಗೆ ಅನುಗ್ರಹಿಸಿದರು.

**ದಾವೀದನ ಆಳ್ವಿಕೆಯ ಸಾರಾಂಶ**

26–27ಜೆಸ್ಸೆಯನ ಮಗ ದಾವೀದನು ಇಸ್ರಯೇಲರೆಲ್ಲರ ಅರಸನಾಗಿ ಹೆಬ್ರೋನಿನಲ್ಲಿ ಏಳು ವರ್ಷ ಹಾಗೂ ಜೆರುಸಲೇಮಿನಲ್ಲಿ ಮೂವತ್ತಮೂರು ವರ್ಷ, ಹೀಗೆ ಒಟ್ಟಿಗೆ ನಲವತ್ತು ವರ್ಷ ಆಳಿದನು. 28ಸಿರಿಸಂಪತ್ತು, ಘನತೆ, ಗೌರವ ಹಾಗೂ ದೀರ್ಘಾಯುಷ್ಯ ಇವುಗಳನ್ನು ಅನುಭವಿಸಿದ ನಂತರ ದಾವೀದನು ಹಣ್ಣು ಮುದುಕನಾಗಿ ಮರಣ ಹೊಂದಿದನು. ಅವನ ಉತ್ತರಾಧಿಕಾರಿಯಾಗಿ ಅವನ ಮಗ ಸೊಲೊಮೋನನು ಅರಸನಾದನು.

29 ದಾವೀದನ ಪೂರ್ವೋತ್ತರ ಚರಿತ್ರೆ, ಅವನ ಆಳ್ವಿಕೆ, ಪರಾಕ್ರಮ ಹಾಗೂ ಅವನಿಗೂ ಇಸ್ರಯೇಲರಿಗೂ ಸುತ್ತಣ ರಾಜ್ಯಗಳಿಗೂ ಸಂಭವಿಸಿದ ಸುಖ–ದುಃಖ, ಇವುಗಳ ವರದಿಯು 30ದರ್ಶಿ ಸಮುವೇಲ, ಪ್ರವಾದಿ ನಾತಾನ ಹಾಗೂ ದರ್ಶಿ ಗಾದ, ಇವರ ಚರಿತ್ರೆಗಳಲ್ಲಿ ಲಿಖಿತವಾಗಿವೆ.